ಸಂಪುಟ: 05 ಸಂಚಿಕೆ: 140 ಪುಟಗಳು: 08 ಶನಿವಾರ 02 ಆಗಸ್ಟ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**
ಒಂದೊಮ್ಮೆ ನೀವು ಸೋತರೆ ಎದೆಗುಂದಬೇಡಿ. ಫೇಲ್ ಎಂದರೆ 'ಕಲಿಕೆಯ ಮೊದಲ ಪ್ರಯತ್ನ'. ಕೊನೆ ಎಂದಿಗೂ ಕೊನೆಯಲ್ಲ

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ನಾವು ಬೀದಿಗಿಳಿದರೆ ನಿಮ್ಮನ್ನು ಮನೆಗೆ ಕಳುಹಿಸುತ್ತೇವೆ!

• ಉದಯವಾಹಿನಿ, ಬೆಂಗಳೂರು

ಕೂಡಲೇ ಒಳಮೀಸಲಾತಿ ಜಾರಿ ಮಾಡದೆ ಇದ್ದಲ್ಲಿ ರಾಜ್ಯ ಸರಕಾರದ ವಿರುದ್ಧ ಮಾದಿಗರಿಂದ ಅಸಹಕಾರ ಚಳವಳಿ ನಡೆಸಲಿದ್ದೇವೆ ಎಂದು ಕೇಂದ್ರದ ಮಾಜಿ ಸಚಿವ ಎ.ನಾರಾಯಣಸ್ವಾಮಿ ಅವರು ಎಚ್ಚರಿಸಿದ್ದಾರೆ. ಒಳಮೀಸಲಾತಿಯನ್ನು ಜಾರಿ ಮಾಡಲು ಆಗ್ರಹಿಸಿ ಕರ್ನಾಟಕ ಮಾದಿಗ ಸಂಘಟನೆಗಳ ಒಕ್ಕೂಟದ ವತಿಯಿಂದ ಫ್ರೀಡಂ ಪಾರ್ಕ್ ನಲ್ಲಿ ಇಂದು ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಾದಿಗರು ಇನ್ನು ಕಾಯುವುದಿಲ್ಲ ಓಲೈಕೆಗೆ ಬಗ್ಗುವುದಿಲ್ಲ ಎಂದು ನುಡಿದರು. ಮುಂದಿನ ಚುನಾವಣೆವರೆಗೆ ಕಾಯುವುದಿಲ್ಲ ಎಂದು ತಿಳಿಸಿದರು.

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಇಂದು ಹೋರಾಟ ನಡೆಯುತ್ತಿದೆ. ಪಕ್ಷಭೇದ ಮರೆತು ಹೋರಾಟ ನಡೆಯುತ್ತಿದೆ ಎಂದು ವಿವರಿಸಿದರು. ಇದು ಬಿಜೆಪಿ ಹೋರಾಟವಲ್ಲ ಎಂದು ತಿಳಿಸಿದರು. ಕರ್ನಾಟಕ ಸರಕಾರಕ್ಕೆ ಕುರ್ಚಿ ಪ್ರಮುಖವೇ ಅಥವಾ ಸಮಸ್ಯೆಗಳು ಮುಖ್ಯವೇ ಎಂದು ಅವರು ಕೇಳಿದರು. ರಾಜ್ಯ ಸರಕಾರಕ್ಕೆ ಅಭಿವೃದ್ಧಿ ಮುಖ್ಯವೇ ಅಥವಾ ಕುರ್ಚಿ ಮುಖ್ಯವೇ ಎಂದು ಪ್ರಶ್ನೆ ಮಾಡಿದರು.



**ರಾಜ್ಯ ಸರ್ಕಾರಕ್ಕೆ ನಾರಾಯಣಸ್ವಾಮಿ ಎಚ್ಚರಿಕೆ**

**ಮಾದಿಗರಿಗೆ ನ್ಯಾಯ ಲಭಿಸಿಲ್ಲ;** ನಮ್ಮ ಸಹನೆಯ ಕಟ್ಟೆ ಒಡೆದಿದೆ. ಇನ್ನು ಕಾಯಲಾಗದು. ನಾವು ಬೀದಿಗಿಳಿದರೆ ನಿಮ್ಮನ್ನು ಮನೆಗೆ ಕಳುಹಿಸಲು ನಮಗೆ ಗೊತ್ತಿದೆ ಎಂದ ಅವರು, 1976ರಿಂದ ಮಾದಿಗರಿಗೆ ಆದ ಅನ್ಯಾಯದ ವರದಿ ಕೊಡಿ ಎಂದರೆ ಮುಖ್ಯ ಕಾರ್ಯದರ್ಶಿ ಸಭೆ ಮಾಡುವುದಿಲ್ಲ ಎಂದು ಟೀಕಿಸಿದರು.

ಕೇವಲ ಜನಸಂಖ್ಯೆ ಆಧರಿಸಿ ಮೀಸಲಾತಿ ಕೊಡುವುದಲ್ಲ ಸುಮಾರು 40 ವರ್ಷಗಳಿಂದ ಆದ ಅನ್ಯಾಯವನ್ನು ಪರಿಗಣಿಸಿ ಮೀಸಲಾತಿ ಕೊಡಬೇಕಿದೆ. ಅನೇಕ ದಶಕಗಳಿಂದ ಆದ ಅನ್ಯಾಯ ಪರಿಗಣಿಸಿ ಹೆಚ್ಚು ಮೀಸಲಾತಿ ಕೊಡದೆ ಇದ್ದರೆ ರಾಜ್ಯದ ಮಾದಿಗರು ಹೋರಾಟಕ್ಕೆ ಸನ್ನದ್ಧರಾಗುತ್ತಾರೆ ಎಂದು ಎಚ್ಚರಿಕೆ ನೀಡಿದರು. ಎಲ್ಲಾ ಚುಕ್ತಾ ಮಾಡಿ ಎಂದು ಆಗ್ರಹಿಸಿದರು. ಹಳೆ ಬಾಕಿ ಚುಕ್ತಾ ಮಾಡದೆ ಇದ್ದರೆ, ತೀವ್ರ ಹೋರಾಟ ಸಂಘಟಿಸುವುದಾಗಿ ತಿಳಿಸಿದರು.

**ಎಲ್ಲೆಡೆ ಹೋರಾಟ ಮಾದಿಗರ ಜಾಗೃತಿಯ ಸಂಕೇತ**

ರಾಜ್ಯದ 26 ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಇಂದು ಹೋರಾಟ ನಡೆಯುತ್ತಿದೆ. ಇದು ಮಾದಿಗರ ಜಾಗೃತಿಯ ಸಂಕೇತ ಎಂದು ಅವರು ವಿಶ್ಲೇಷಿಸಿದರು.

ಕರ್ನಾಟಕ ರಾಜ್ಯದ ಅನೇಕ ಶಾಸಕರು ಮಾದಿಗರ ಮತ ಇಲ್ಲದೇ ಎಂಎಲ್ಎ ಆಗಲು ಅಸಾಧ್ಯ ಎಂಬುದನ್ನು ನೆನಪಿಸಲು ಬಯಸುವುದಾಗಿ ಹೇಳಿದರು. ಮಾದಿಗರ ಮತಗಳನ್ನು ಪಡೆದು ವಿಧಾನಸೌಧದ ಮೆಟ್ಟಿಲೇರಿದವರಿಗೆ ನಾಲಿಗೆ ಬಿದ್ದು ಹೋಗಿದೆ ಎಂದು ಟೀಕಿಸಿದರು. ಮಾದಿಗರ ಪರವಾಗಿ ಮಾತನಾಡದ ನೀವು ಯಾವ ಯೋಗ್ಯತೆ ಇಟ್ಟುಕೊಂಡು ಮತ ಕೇಳುತ್ತೀರಿ ಎಂದು ಪ್ರಶ್ನಿಸಿದರು.

**ಮುಖ್ಯಮಂತ್ರಿಗಳ ಸಮಾಜವಾದ ಎಲ್ಲಿ ಹೋಗಿದೆ**

ಎಲ್ಲರಿಗೂ ನ್ಯಾಯ ಕೊಡುವುದಾಗಿ ಹೇಳುವ ಸಮಾಜವಾದಿ ಮುಖ್ಯಮಂತ್ರಿ ಯಾವುದರ ಚಾಂಪಿಯನ್ ಎಂದು ಕೇಳಿದರು. ಎಲ್ಲಾ ರಂಗಗಳಲ್ಲೂ ಹಿಂದುಳಿದ ಮಾದಿಗರಿಗೆ ಒಂದೇ ಒಂದು ಯೋಜನೆ ನೀಡಿಲ್ಲ ಎಂದು ಆಕ್ಷೇಪಿಸಿದರು.ಮಾದಿಗರು ಎಲ್ಲಾ ಕಡೆ ಹಿಂದುಳಿದಿದ್ದಾರೆ. ಎಲ್ಲಿ ಹೋಗಿದೆ ನಿಮ್ಮ ಸಮಾಜವಾದ ಎಂದು ಪ್ರಶ್ನೆ ಮಾಡಿದರು.

**ಅಸಹಕಾರ ಚಳವಳಿ ಒಂದೇ ಅಲ್ಲ;** ಸರಕಾರವನ್ನು ಕಿತ್ತೊಗೆಯುವ ಚಳವಳಿ ನಡೆಸುತ್ತೇವೆ ಎಂದು ಅವರು ತಿಳಿಸಿದರು. ಈ ಚಳವಳಿಯಲ್ಲಿ ಭಾಗವಹಿಸಿದ ಎಲ್ಲರಿಗೂ ಧನ್ಯವಾದ ಸಮರ್ಪಿಸಿದರು. ಶಾಸಕ ಬಸವರಾಜ ಮತ್ತಿಮಡು, ಬಿಜೆಪಿ ರಾಜ್ಯ ವಕ್ತಾರ ಹೆಚ್. ವೆಂಕಟೇಶ್ ದೊಡ್ಡೇರಿ ಮತ್ತು ಎಸ್.ಸಿ ಮೋರ್ಚಾ ರಾಜ್ಯ ಉಪಾಧ್ಯಕ್ಷ ಹೂಡಿ ಮಂಜುನಾಥ್, ಸಮಾಜದ ಮುಖಂಡರು ಮತ್ತು ಸಂಘಟನೆಗಳ ಪದಾಧಿಕಾರಿಗಳು ಇದ್ದರು.

## ಚೀನಾ ಉದ್ಯಮಿಯಿಂದ ರೂ.100 ಕೋಟಿ ಹೂಡಿಕೆ

• ಉದಯವಾಹಿನಿ, ಬೆಂಗಳೂರು

ಚೀನಾದ ಜವಳಿ ಉದ್ಯಮಿ ಪಾಲ್ ಪು ಅವರು ಕರ್ನಾಟಕದ ಜವಳಿ ಕ್ಷೇತ್ರದಲ್ಲಿ 100 ಕೋಟಿ ಬಂಡವಾಳ ಹೂಡಲು ಮುಂದೆ ಬಂದಿದ್ದಾರೆ. ಜವಳಿ ಸಚಿವ ಶಿವಾನಂದ ಪಾಟೀಲ ಅವರನ್ನು ಪಾಲ್ ಪು ಶುಕ್ರವಾರ ಭೇಟಿ ಮಾಡಿ ಜವಳಿ ಉದ್ಯಮ ಸ್ಥಾಪಿಸುವ ಕುರಿತು ಮಾತುಕತೆ ನಡೆಸಿದರು. ಪಾಲ್ ಪು ಅವರು ಸೆಪ್ಟೆಂಬರ್‌ವರೆಗೆ ಕರ್ನಾಟಕದಲ್ಲೇ ಇದ್ದು, ಯೋಜನಾ ಸ್ಥಳವನ್ನು ಅಂತಿಮಗೊಳಿಸಲಿದ್ದಾರೆ ಎಂದರು. ಉತ್ತರ ಕರ್ನಾಟಕದಲ್ಲಿ ತಕ್ಷಣಕ್ಕೆ ಅಗತ್ಯ ಮೂಲಸೌಕರ್ಯ ಇರುವ ಭೂಮಿ ಲಭ್ಯವಿದೆ. ವರ್ಷದಲ್ಲಿ 365 ದಿನ ನೀರು, ವಿದ್ಯುತ್, ರಾಷ್ಟ್ರೀಯ ಹೆದ್ದಾರಿ, ವಿಮಾನಯಾನ ಸೌಲಭ್ಯ ಇರುವ ಕಡೆ ಅಗತ್ಯ ಪ್ರಮಾಣದ ಭೂಮಿ ಒದಗಿಸಲಾಗುವುದು ಎಂದು ಪಾಟೀಲ ತಿಳಿಸಿದರು. ಇದಕ್ಕೆ ಸಮ್ಮತಿಸಿದ ಉದ್ಯಮಿ ಪು ಅವರು, ಮೊದಲ ಹಂತದಲ್ಲಿ ಮೈಸೂರು ಭಾಗದಲ್ಲಿ, ಎರಡನೆಯ ಹಂತದಲ್ಲಿ ಉತ್ತರ ಕರ್ನಾಟಕದಲ್ಲಿ ಉದ್ಯಮ ಸ್ಥಾಪನೆ ಮಾಡಲಾಗುವುದು ಎಂದು ಭರವಸೆ ನೀಡಿದರು. ಮೊದಲ ಹಂತದ ಯೋಜನೆಯಲ್ಲಿ 100 ಕೋಟಿ ಬಂಡವಾಳ ಹೂಡಿಕೆ ಮಾಡಲಿದ್ದು, ಐದು ಸಾವಿರ ಜನರಿಗೆ ಉದ್ಯೋಗ ನೀಡಲಾಗುವುದು. ತಕ್ಷಣವೇ ಬಂಡವಾಳ ಹೂಡಲು ಸಿದ್ಧರಿದ್ದು. 20 ಎಕರೆ ಭೂಮಿಯ ಅಗತ್ಯವಿದೆ ಎಂದು ಹೇಳಿದರು.

## ಧರ್ಮಸ್ಥಳ: ಸುಳ್ಳು ಸುದ್ದಿ ಹರಡಿದರೆ ಕ್ರಮ: ಗೃಹ ಸಚಿವ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು

ಧರ್ಮಸ್ಥಳ ವ್ಯಾಪ್ತಿಯಲ್ಲಿ ನಡೆದಿದೆ ಎನ್ನಲಾದ ಅಪರಾಧ ಕೃತ್ಯಗಳ ಪ್ರಕರಣದ ವಿಚಾರದಲ್ಲಿ ಸುಳ್ಳು ಸುದ್ದಿ ಹರಡುವವರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳುತ್ತೇವೆ' ಎಂದು ಗೃಹ ಸಚಿವ ಜಿ.ಪರಮೇಶ್ವರ ಅವರು ಎಚ್ಚರಿಕೆ ನೀಡಿದ್ದಾರೆ.

ಈ ಪ್ರಕರಣಗಳ ತನಿಖೆಗೆ ರಚಿಸಲಾಗಿರುವ ವಿಶೇಷ ತನಿಖಾ ತಂಡದ (ಎಸ್‌ಐಟಿ) ಮುಖ್ಯಸ್ಥ ಪ್ರಣಬ್ ಮೊಹಾಂತಿ ಅವರು ಪರಮೇಶ್ವರ ಅವರನ್ನು, ವಿಧಾನಸೌಧದ ಅವರ ಕಚೇರಿಯಲ್ಲಿ ಶುಕ್ರವಾರ ಭೇಟಿ ಮಾಡಿದ್ದರು. ದೀರ್ಘವಾದ ಚರ್ಚೆಯ ನಂತರ ಮೊಹಾಂತಿ ಅವರು ಅಲ್ಲಿಂದ ತೆರಳಿದರು. ಆನಂತರ ಸುದ್ದಿಗಾರರ ಜತೆ ಮಾತನಾಡಿದ ಪರಮೇಶ್ವರ, ಧರ್ಮಸ್ಥಳದ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಯುತ್ತಿದೆ. ಆದರೆ, ಕೆಲವರು ಸುಳ್ಳು ಸುದ್ದಿಗಳನ್ನು ಸೃಷ್ಟಿಸಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡುತ್ತಿದ್ದಾರೆ. ಜತೆಗೆ ಪ್ರಚೋದನಕಾರಿ ಪೋಸ್ಟ್‌ಗಳನ್ನು ಹಾಕುತ್ತಿದ್ದಾರೆ.

## ನಾಟಕ ಬಿಟ್ಟು ನ್ಯಾಯಾಲಯ ಮೆಟ್ಟಿಲು ಹತ್ತಿ: ಎಸ್.ಸುರೇಶ್ ಕುಮಾರ್

• ಉದಯವಾಹಿನಿ, ಮೈಸೂರು

ರಾಜಾಜಿನಗರ ಕ್ಷೇತ್ರದಲ್ಲಿ 'ಮತ ಕಳ್ಳತನ' ಆಗಿರುವುದಕ್ಕೆ ರಾಹುಲ್ ಗಾಂಧಿ ಬಳಿ ಯಾವುದೇ ದಾಖಲೆಗಳು ಇದ್ದರೆ ನಾಟಕ ಮಾಡುವುದನ್ನು ಬಿಟ್ಟು ನ್ಯಾಯಾಂಗವನ್ನು ಸಂಪರ್ಕಿಸಲಿ ಎಂದು ರಾಜಾಜಿನಗರ ಕ್ಷೇತ್ರದ ಬಿಜೆಪಿ ಶಾಸಕ ಎಸ್.ಸುರೇಶ್ ಕುಮಾರ್ ಹೇಳಿದ್ದಾರೆ. ಕಳೆದ ಲೋಕಸಭಾ ಚುನಾವಣೆಯಲ್ಲಿ ಮಹದೇವಪುರ ಮತ್ತು ರಾಜಾಜಿನಗರದಲ್ಲಿ 'ಮತ ಕಳ್ಳತನ' ಮಾಡಲಾಗಿದೆ ಎಂಬು ಆರೋಪಕ್ಕೆ ಪ್ರತಿಕ್ರಿಯಿಸಿರುವ ಸುರೇಶ್‌ಕುಮಾರ್, ಇವರ ನಾಟಕ ಪ್ರಜ್ಞಾವಂತ ಮತದಾರರಿಗೆ ಮಾಡುತ್ತಿರುವ ಅವಮಾನ ಮತ್ತು ಪ್ರಜಾಪ್ರಭುತ್ವದ ಅಣಕ ಎಂದು ತಿಳಿಸಿದ್ದಾರೆ. 2009 ಮತ್ತು ಆ ಬಳಿಕ ನಡೆದ ಎಲ್ಲಾ ಲೋಕಸಭಾ ಚುನಾವಣೆಗಳಲ್ಲಿ ರಾಜಾಜಿನಗರ ಕ್ಷೇತ್ರದಲ್ಲಿ ಬಿಜೆಪಿ ಸತತವಾಗಿ . 200900 21,304, 20140 48,602, 201900 44,004 ಮತ್ತು 2024ರಲ್ಲಿ 39,529 ಮತಗಳ ಮುನ್ನಡೆ ಸಾಧಿಸಿದ್ದಾರೆ ಎಂದು ಅವರು ತಿಳಿಸಿದರು. 'ಲೋಕಸಭೆ ಚುನಾವಣೆಯಲ್ಲಿ ರಾಜಾಜಿನಗರ ವಿಧಾನಸಭಾ ಕ್ಷೇತ್ರದಲ್ಲೂ ಮತಗಳ ಸಂಖ್ಯೆಯಲ್ಲೂ ಅಲ್ಪಮಟ್ಟದಲ್ಲಿ . 2009 2 2 2 0 1,80,000, 201400 1,94,316, 201900 2,11,000, 2024ರಲ್ಲಿ 2,01,287 ಇತ್ತು. ಕಾಂಗ್ರೆಸ್ ನಾಯಕರು ಆರೋಪಿಸಿರುವಂತೆ ಮತಗಳ ಕಳವು ಮಾಡುವ ಪ್ರಶ್ನೆ ಎಲ್ಲಿಂದ ಉದ್ಭವಿಸುತ್ತದೆ' ಎಂದು ಅವರು ಪ್ರಶ್ನಿಸಿದ್ದಾರೆ.

## ಅತ್ಯಾಚಾರ ಪ್ರಕರಣದಲ್ಲಿ ಪ್ರಜ್ವಲ್ ರೇವಣ್ಣ ದೋಷಿ

ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ತೀರ್ಪು

# ಪ್ರಜ್ವಲ ಏನು ನಿನ್ನ ರಾಸಲೀಲಾ

### ಪ್ರಜ್ವಲ್ ರೇವಣ್ಣ ಕೇಸ್‌ನಲ್ಲಿ 15000 ಫೋಟೋ, 2000 ವಿಡಿಯೋ..!

### ಎಲ್ಲವೂ ಅಶ್ಲೀಲವಾಗಿದೆ ಎಂದಿದ್ದ ಕೋರ್ಟ್





• ಉದಯವಾಹಿನಿ, ಬೆಂಗಳೂರು

ಮೈಸೂರಿನ ಕೆಆರ್ ನಗರದ ಮಹಿಳೆಯ ಅಪಹರಣ ಮತ್ತು ಅತ್ಯಾಚಾರ ಪ್ರಕರಣದಲ್ಲಿ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಜೆಡಿಎಸ್ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ತೀರ್ಪು ಪ್ರಕಟಿಸಿದೆ. ವಿಶೇಷ ನ್ಯಾಯಾಲಯದ ಜಡ್ಜ್ ಸಂತೋಷ್ ಗಜಾನನ ಭಟ್, ಜುಲೈ 29 ರಂದು ವಿಚಾರಣೆ ಪೂರ್ಣಗೊಳಿಸಿ ತೀರ್ಪನ್ನು ಕಾಯ್ದಿರಿಸಿದ್ದರು. ಇದೀಗ ಪ್ರಕರಣದಲ್ಲಿ ಪ್ರಜ್ವಲ್ ರೇವಣ್ಣ ದೋಷಿ ಎಂದು ತೀರ್ಪು ನೀಡಿದ್ದಾರೆ. ಪ್ರಜ್ವಲ್ ರೇವಣ್ಣಗೆ ಶಿಕ್ಷೆ ಏನು.. ಎಷ್ಟು ಎಂಬುದನ್ನು ನ್ಯಾಯಾಲಯ ಇನ್ನಷ್ಟೇ ಪ್ರಕಟಿಸಬೇಕಿದೆ. ಕನಿಷ್ಠ 10 ವರ್ಷ, ಗರಿಷ್ಠ ಜೀವಾವಧಿ ಶಿಕ್ಷೆಗೆ ಒಳಪಡುವ ಸಾಧ್ಯತೆ ಇದೆ. ಜಡ್ಜ್ ಸಂತೋಷ್ ಗಜಾನನ ಭಟ್ ತೀರ್ಪು ಪ್ರಕಟಿಸುತ್ತಿದ್ದಂತೆಯೇ ಪ್ರಜ್ವಲ್ ರೇವಣ್ಣ ಕಣ್ಣೀರಿಟ್ಟರು. ಕಣ್ಣೀರು ಒರೆಸುತ್ತಲೇ ಪ್ರಜ್ವಲ್ ರೇವಣ್ಣ ಅಲ್ಲಿಂದ ತೆರಳಿದರು. ಜುಲೈ 30 ರಂದು ಪ್ರಕಟವಾಗಬೇಕಿದ್ದ ತೀರ್ಪು ಕೆಆರ್ ನಗರದ ಮಹಿಳೆಯ ಅಪಹರಣ ಮತ್ತು ಅತ್ಯಾಚಾರ ಪ್ರಕರಣದಲ್ಲಿ ಜುಲೈ 30 ರಂದೇ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ತೀರ್ಪು ಪ್ರಕಟಿಸಬೇಕಿತ್ತು. ಕೆಲವೊಂದು ಸ್ಪಷ್ಟೀಕರಣ ಬೇಕಿದ್ದರಿಂದ ತೀರ್ಪನ್ನು ಕಾಯ್ದಿರಿಸುತ್ತಿರುವುದಾಗಿ ಜಡ್ಜ್ ತಿಳಿಸಿದ್ದರು.

**ಕೋರ್ಟ್ ಕೇಳಿದ ಸ್ಪಷ್ಟೀಕರಣ ಏನು:** ಪ್ರಾಸಿಕ್ಯೂಷನ್ ಹಾಗೂ ಆರೋಪಿಗಳ ಪರ ವಕೀಲರು ಗೂಗಲ್ ಮ್ಯಾಪ್ ಅನ್ನು ಕೂಡಾ ಸಾಕ್ಷ್ಯವನ್ನಾಗಿಸಿ ವಾದ ಮಂಡಿಸಿದ್ದಾರೆ. ಗೂಗಲ್ ಕಂಪನಿಯ ದೃಢೀಕರಣವಿಲ್ಲದೇ ಸಲ್ಲಿಸಿರುವ ಮ್ಯಾಪ್ ಅನ್ನು ಸಾಕ್ಷಿಯನ್ನಾಗಿ ಪರಿಗಣಿಸಬಹುದೇ ಎಂದು ನ್ಯಾಯಾಲಯ ಸ್ಪಷ್ಟನೆ ಕೇಳಿತ್ತು. ಇದಕ್ಕೆ ಉತ್ತರ ನೀಡಿದ್ದ ಎಸ್‌ಪಿ, ಅತ್ಯಾಚಾರ ನಡೆದ ಹೊಳೆನರಸೀಪುರ ಫಾರ್ಮ್ ಹೌಸ್‌ನ ಅಕ್ಷಾಂಶ ಹಾಗೂ ರೇಖಾಂಶವನ್ನು ಮಹಜರು ದಾಖಲೆಯಲ್ಲಿ ನಮೂದಿಸಿ ಸಲ್ಲಿಸಲಾಗಿದೆ. ಈ ಅಕ್ಷಾಂಶ ರೇಖಾಂಶಗಳನ್ನು ಕ್ಲಿಕ್ ಮಾಡಿದರೆ ಗೂಗಲ್ ಮ್ಯಾಪ್‌ನಲ್ಲಿ ಫಾರ್ಮ್ ಹೌಸ್ ಲೊಕೇಷನ್ ಹಾಗೂ 2021ರ ಫೋಟೋ ಸಿಗಲಿದೆ. ಹೀಗಾಗಿ ಇದನ್ನೂ ದಾಖಲೆಯ ಭಾಗವೆಂದು ಪರಿಗಣಿಸಬೇಕು ಎಂದು ಮನವಿ ಮಾಡಿದರು. ವಶಕ್ಕೆ ಪಡೆಯಲಾದ ಸ್ಯಾಮ್ಸಂಗ್ ಜೆ 4 ಮೊಬೈಲ್ ಫೋನ್ ಅನ್ನು ತನಿಖಾಧಿಕಾರಿ ಈ ಕೇಸಿನಲ್ಲಿ ಜಪ್ತಿ ಮಾಡಿರುವ ಬಗ್ಗೆ ಸ್ಪಷ್ಟೀಕರಣ ಬೇಕಿದೆ ಎಂದು ಕೋರ್ಟ್ ಕೇಳಿತ್ತು. ಇದಕ್ಕೆ ಪ್ರಜ್ವಲ್ ಪರ ವಕೀಲ ವಿಪಿನ್ ಕುಮಾರ್ ಜೈನ್ ಉತ್ತರಿಸಿ, ಬೇರೊಂದು ಕೇಸ್‌ನಲ್ಲಿ ವಶಕ್ಕೆ ಪಡೆದ ಮೊಬೈಲ್ ಅನ್ನು ತನಿಖಾಧಿಕಾರಿ ಈ ಕೇಸಿನಲ್ಲಿ ವಶಕ್ಕೆ ಪಡೆದಿಲ್ಲ. ಎಫ್‌ಎಸ್‌ಎಲ್‌ನಿಂದ ಅವರು ಸ್ವೀಕರಿಸುವ ಬಗ್ಗೆಯಾಗಲೀ ದಾಖಲೆಯಿಲ್ಲ. ಹೀಗಾಗಿ ಮೊಬೈಲ್ ತನಿಖಾಧಿಕಾರಿ ಬಳಿಯಲ್ಲಿರಲೇ ಇಲ್ಲ. ಹೀಗಾಗಿ ಈ ಸಾಕ್ಷ್ಯಕ್ಕೆ ಬೆಲೆಯಿಲ್ಲ ಎಂದು ವಾದ ಮಂಡಿಸಿದ್ದರು.

### ಏನಿದು ಪ್ರಕರಣ..

ಸರಣಿ ಅತ್ಯಾಚಾರ ಎಸಗಿರುವ ಆರೋಪ ಪ್ರಜ್ವಲ್ ರೇವಣ್ಣ ಮೇಲಿದ್ದು, ಇದರಲ್ಲಿ ಮೈಸೂರಿನ ಕೆಆರ್ ನಗರದ ಮಹಿಳೆ ಮೇಲೆ ಅತ್ಯಾಚಾರ ಎಸಗಿದ ಆರೋಪವೂ ಒಂದಾಗಿದೆ. ಅತ್ಯಾಚಾರ ಪ್ರಕರಣ ಬೆಳಕಿಗೆ ಬರಬಾರದು ಎಂದು ಮಹಿಳೆಯನ್ನು ಅಪಹರಿಸಿ ಹುಣಸೂರು ಬಳಿಯ ತೋಟದ ಮನೆಯಲ್ಲಿ ಕೂಡಿಹಾಕಲಾಗಿತ್ತು ಎಂಬ ಆರೋಪದ ಅಡಿ ದೂರು ದಾಖಲಾಗಿತ್ತು. ಈ ಪ್ರಕರಣದಲ್ಲಿ ಮಾಜಿ ಸಚಿವ ಹೆಚ್‌ಡಿ ರೇವಣ್ಣ ಮತ್ತು ಭವಾನಿ ರೇವಣ್ಣ ಸೇರಿದಂತೆ ಒಟ್ಟು 9 ಆರೋಪಿಗಳಿದ್ದಾರೆ. ಕೆಆರ್ ನಗರದ ಮಹಿಳೆ ಅಪಹರಣ ಪ್ರಕರಣದಲ್ಲಿ ಹೆಚ್‌ಡಿ ರೇವಣ್ಣ ಹಾಗೂ ಭವಾನಿ ರೇವಣ್ಣಗೆ ಈಗಾಗಲೇ ಜಾಮೀನು ದೊರೆತಿದೆ. ಪ್ರಮುಖ ಆರೋಪಿ ಪ್ರಜ್ವಲ್ ರೇವಣ್ಣ ಒಂದು ವರ್ಷದಿಂದ ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲಿ ಇದ್ದಾರೆ. ಪ್ರಕರಣ ಸಂಬಂಧ 2024ರ ಮೇ 31ರಂದು ಪ್ರಜ್ವಲ್ ರೇವಣ್ಣರನ್ನು ಪೊಲೀಸರು ಬಂಧಿಸಿದ್ದರು.



### ಎಲ್ಲವೂ ಅಶ್ಲೀಲವಾಗಿದೆ

ಪ್ರಜ್ವಲ್ ರೇವಣ್ಣ ಅವರ ವಕೀಲ ಅರುಣ್ ಅವರು, ಪ್ರಜ್ವಲ್ ಮಾಜಿ ಕಾರು ಚಾಲಕನ ಮೊಬೈಲ್ ಫೋನ್ ಜಪ್ತಿಗೆ ಸಂಬಂಧಿಸಿದ ವರದಿಯನ್ನು ನೀಡಲಾಗಿದೆ. ಮೊಬೈಲ್ ಫೋನ್ ಅನ್ನು ನಾವು ಪರಿಶೀಲಿಸಬೇಕಿದೆ. ಫೋನ್ ಅನ್ನು ಪರಿಶೀಲಿಸಲು ಅವಕಾಶ ನೀಡುವಂತೆ ಕೇಳಿಕೊಂಡರು. ನ್ಯಾಯಾಲಯವು, ಈ ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳನ್ನು ಮಾತ್ರ ನೀವು ಕೇಳಬಹುದು. ಎಲ್ಲವನ್ನೂ ಕೇಳುವಂತಿಲ್ಲ. ಇತರೆ ಮಹಿಳೆಯರ ಖಾಸಗಿತನ ಉಲ್ಲಂಘಿಸುವ ದಾಖಲೆಗಳು ನಿಮಗೆ ಏಕೆ ಬೇಕು.. ಎಲ್ಲವೂ ಅಶ್ಲೀಲವಾಗಿದೆ. ಅಶ್ಲೀಲತೆಗೆ ಒಂದು ಮಿತಿ ಇರಬೇಕು ಎಂದು ಹೇಳಿತು. ಬೇರೆ ಮಹಿಳೆಯರ ವೈಯಕ್ತಿಕ ವಿಷಯಗಳನ್ನು ಬಹಿರಂಗಪಡಿಸುವುದು ಸರಿಯಲ್ಲ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿತ್ತು.

### ಪ್ರಜ್ವಲ್ ರೇವಣ್ಣಗೆ ಕಾನೂನು ಬದಲಾಗಲ್ಲ ಎಂದಿದ್ದ ಹೈಕೋರ್ಟ್

ಪ್ರಜ್ವಲ್ ರೇವಣ್ಣ ಅವರ ವಕೀಲರು ತಮ್ಮ ಕಾರು ಚಾಲಕನ ಫೋನ್‌ನಿಂದ ಪಡೆದ ಫೋಟೋ ಮತ್ತು ವಿಡಿಯೋಗಳನ್ನು ನೀಡುವಂತೆ ಕೋರಿ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಏಕ ಸದಸ್ಯ ಪೀಠವು ಜನವರಿಯಲ್ಲಿ ನಡೆಸಿತ್ತು. ವಿಚಾರಣೆಯ ಸಂದರ್ಭದಲ್ಲಿ, ಹೈಕೋರ್ಟ್ ಸರ್ಕಾರಿ ವಕೀಲರನ್ನು ಪ್ರಶ್ನಿಸಿತು. ಎಲ್ಲಾ ದಾಖಲೆಗಳನ್ನು ನೀಡುವಂತೆ ಸೂಚಿಸಿತು. ಆದರೆ, ಖಾಸಗಿ ವಿಷಯಗಳನ್ನು ಬಹಿರಂಗಪಡಿಸಲು ಸಾಧ್ಯವಿಲ್ಲ ಎಂದು ತಿಳಿಸಿತು. ಪ್ರಜ್ವಲ್ ರೇವಣ್ಣ ಎಂದ ಮಾತ್ರಕ್ಕೆ ದೇಶದ ಕಾನೂನು ಬದಲಾಗಲ್ಲ. ಅಶ್ಲೀಲತೆಗೂ ಒಂದು ಮಿತಿ ಇರುತ್ತದೆ




## ಟ್ರಂಪ್ ಕುರುಡರಾಗಿರಬೇಕು ಅಥವಾ ಅಜ್ಞಾನಿ ಆಗಿರಬೇಕು!

### • ಅಮೆರಿಕಾ ಅಧ್ಯಕ್ಷರ ನಡೆಗೆ ಎಚ್‌ಡಿ ದೇವೇಗೌಡ ತೀವ್ರ ಆಕ್ಷೇಪ • ಭಾರತದ ಆರ್ಥಿಕತೆ ಸತ್ತಿದೆ ಎಂದ ಡೊನಾಲ್ಡ್ ಟ್ರಂಪ್

• ಉದಯವಾಹಿನಿ, ಬೆಂಗಳೂರು

ಟ್ರಂಪ್ ಕುರುಡರಾಗಿರಬೇಕು ಅಥವಾ ಅಜ್ಞಾನಿ ಆಗಿರಬೇಕು! ಹೀಗಂತ ಗುಡುಗಿದ್ದು ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡ. ಭಾರತದ ಆರ್ಥಿಕತೆ ಕುರಿತಾಗಿ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡೆಗೆ ದೇವೇಗೌಡ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಭಾರತದ ಆರ್ಥಿಕತೆ ಸತ್ತಿದೆ ಎಂದಿರುವ ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಅವರ ಹೇಳಿಕೆ ಬಗ್ಗೆ ತೀವ್ರ ಅಚ್ಚರಿ ವ್ಯಕ್ತಪಡಿಸಿರುವ ಮಾಜಿ ಪ್ರಧಾನಮಂತ್ರಿ ಹೆಚ್.ಡಿ. ದೇವೇಗೌಡರು, ಬಹುಶಃ ಟ್ರಂಪ್ ಕುರುಡರಾಗಿರಬೇಕು ಅಥವಾ ಅಜ್ಞಾನಿ ಆಗಿರಬೇಕು ಎಂದು ಟೀಕಿಸಿದ್ದಾರೆ.




ಈ ಕುರಿತಾಗಿ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಮಾಜಿ ಪ್ರಧಾನ ಮಂತ್ರಿಗಳು, ಟ್ರಂಪ್ ಅವರ ವರ್ತನೆ, ಭಾಷೆ ಅವರ ಹೇಳಿಕೆಯ ಇನ್ನಿತರ ಅಂಶಗಳ ಬಗ್ಗೆ ಅತೀವ ಅತೃಪ್ತಿ ವ್ಯಕ್ತಪಡಿಸಿದ್ದಾರೆ.

**ಎಚ್‌ಡಿಡಿ ಪತ್ರದಲ್ಲಿ ಏನಿದೆ:** ಭಾರತದಲ್ಲಿ ಒಬ್ಬ ಸಣ್ಣ ವ್ಯಾಪಾರಿ ಮತ್ತು ಬಡರೈತ ಕೂಡ ತನ್ನ ವ್ಯವಹಾರವನ್ನು ಬಹಳ ಘನತೆ, ಸಮಗ್ರತೆ ಮತ್ತು ಮಾನವೀಯತೆಯಿಂದ ನಡೆಸುತ್ತಿದ್ದಾನೆ. ಈ ಮೂಲಕ ಟ್ರಂಪ್ ಅವರಿಗೆ ಅನೇಕ ಪಾಠಗಳನ್ನು ಕಲಿಸಬಹುದು.

ಎಲ್ಲರಂತೆ ನಾನು ಕೂಡ ಭಾರತದ ಆರ್ಥಿಕತೆಯ ಬಗ್ಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆಧಾರ ರಹಿತ ಮತ್ತು ಕೋಪದ ಹೇಳಿಕೆಗಳಿಂದ ಆಶ್ಚರ್ಯಚಕಿತನಾಗಿದ್ದೇನೆ. ಆಧುನಿಕ ಇತಿಹಾಸದಲ್ಲಿ ಇಷ್ಟೊಂದು ಅಸ್ಥಿರ, ಅನಾಗರಿಕ ಮತ್ತು ಬೇಜವಾಬ್ದಾರಿಯುತ ರಾಷ್ಟ್ರಮುಖ್ಯಸ್ಥರನ್ನು ನಾನು ಕಂಡಿಲ್ಲ ಎಂದು ನಾನು ಭಾವಿಸುತ್ತೇನೆ.

ಟ್ರಂಪ್ ಅವರು ಭಾರತದೊಂದಿಗೆ ಮಾತ್ರವಲ್ಲ, ಜಗತ್ತಿನಾದ್ಯಂತ ಪ್ರತೀ ದೇಶದೊಂದಿಗೆ ಕೆಟ್ಟದಾಗಿ ವರ್ತಿಸಿದ್ದಾರೆ. ಅವರು ತಮ್ಮ ದೀರ್ಘಕಾಲದ ಮಿತ್ರರಾಷ್ಟ್ರಗಳನ್ನು ಸಹ ಬಿಟ್ಟಿಲ್ಲ. ಅವರಲ್ಲಿ ಮೂಲಭೂತವಾಗಿ ಏನೋ ಸಮಸ್ಯೆ ಇದೆ. ರಾಜತಾಂತ್ರಿಕತೆ ಅಥವಾ ರಾಜಕೀಯದ ಮೂಲಕ ಅದನ್ನು ಪತ್ತೆ ಹಚ್ಚಲು ಅಥವಾ ಪರಿಹರಿಸಲು ಸಾಧ್ಯವಿಲ್ಲ. ಅವರ ಕೋಪದ ಸ್ವಭಾವದ ಬಗ್ಗೆ ಇದಕ್ಕಿಂತ ಹೆಚ್ಚಿಗೆ ಹೇಳುವುದು ಸರಿಯಲ್ಲ. ಏಕೆಂದರೆ, ಅದು ನಮ್ಮ ತತ್ವಾದರ್ಶಗಳಿಗೆ, ಬದ್ಧತೆ ಕಡಿಮೆ ಎನಿಸುತ್ತದೆ. ಭಾರತದ ಸಣ್ಣ ವ್ಯಾಪಾರಿ ಮತ್ತು ಬಡರೈತ ಕೂಡ ತಮ್ಮ ವ್ಯವಹಾರವನ್ನು ಬಹಳ ಘನತೆ, ಸಮಗ್ರತೆ ಮತ್ತು ಮಾನವೀಯತೆಯಿಂದ ನಡೆಸುತ್ತಾ ಟ್ರಂಪ್‌ಗೆ ಅನೇಕ ಪಾಠಗಳನ್ನು ಕಲಿಸಬಹುದು ಎಂದು ನಾನು ಬಲವಾಗಿ ನಂಬಿದ್ದೇನೆ.

ಭಾರತವು ವೈವಿಧ್ಯಮಯ ಮತ್ತು ಪ್ರಜಾಪ್ರಭುತ್ವವಾದಿ ಸಾರ್ವಭೌಮ ರಾಷ್ಟ್ರ. ಸ್ವಾತಂತ್ರ್ಯದ ನಂತರ ಅದು ಯಾವಾಗಲೂ ಅತ್ಯುನ್ನತ ರಾಷ್ಟ್ರೀಯ ಹಿತಾಸಕ್ತಿಗಾಗಿ ಕಾರ್ಯನಿರ್ವಹಿಸುತ್ತಾ ಬಂದಿದೆ. ಭಾರತವು ತನ್ನ ದಾರಿಗೆ ಎದುರಾಗುವ ಎಲ್ಲಾ ತೊಂದರೆಗಳನ್ನು ಮಾತುಕತೆ ಮೂಲಕವೇ ಪರಿಹರಿಸಿಕೊಂಡು ಬಲಿಷ್ಠ ರಾಷ್ಟ್ರವಾಗಿ ಹೊರಹೊಮ್ಮಲು ದೇವರು ಕರುಣಿಸಿರುವ ಸಾಮರ್ಥ್ಯ ಮತ್ತು ಶಕ್ತಿಯನ್ನು ಹೊಂದಿದೆ ಎಂಬುದು ನನ್ನ ಭಾವನೆ.




### ಟ್ರಂಪ್ ಅವರ ಬೆದರಿಕೆಗೆ ಭಾರತ ಹೆದರುವುದಿಲ್ಲ

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತವು ನಮ್ಮ ರಾಷ್ಟ್ರೀಯ ಹಿತಾಸಕ್ತಿಯನ್ನು ರಾಜಿ ಮಾಡಿಕೊಂಡಿಲ್ಲ ಎಂಬ ಬಗ್ಗೆ ನನಗೆ ಅತೀವ ಸಂತೋಷ ಮತ್ತು ಹೆಮ್ಮೆ ಇದೆ. ಟ್ರಂಪ್ ಅವರ ಬೆದರಿಕೆಗೆ ಭಾರತ ಹೆದರುವುದಿಲ್ಲ ಮತ್ತು ಅಂಥ ಬೆದರಿಕೆಗಳಿಂದ ಭಾರತ ಎಂದಿಗೂ ಇನ್ನೊಬ್ಬರ ತಾಳಕ್ಕೆ ತಕ್ಕಂತೆ ನಡೆಯುವುದಿಲ್ಲ ಎಂದು ಈಗಾಗಲೇ ತೋರಿಸಿಕೊಟ್ಟಿದೆ. ಇದಕ್ಕೆ ವಿರುದ್ಧವಾಗಿ ರಾಷ್ಟ್ರದ ಅರ್ಧಕ್ಕಿಂತ ಹೆಚ್ಚು ಜನಸಂಖ್ಯೆ ಅವಲಂಬಿಸಿರುವ ಕೃಷಿ ವಲಯ ಮತ್ತು ಸಣ್ಣ ಮತ್ತು ಮಧ್ಯಮ ವ್ಯವಹಾರಗಳನ್ನು ಸಂರಕ್ಷಿಸಲು ಮೋದಿ ಅವರ ಸರಕಾರವು ಪರಿಪೂರ್ಣ ಪ್ರಯತ್ನ ಮಾಡಿದೆ. ಸರಕಾರ ಕೈಕೊಂಡ ದೃಢ ನಿಲುವು ಅಭೂತಪೂರ್ವ ರಾಷ್ಟ್ರೀಯ ಅಭಿವೃದ್ಧಿಯ ಪುನರುಜ್ಜೀವನಕ್ಕೆ ಕಾರಣವಾಗಿದೆ ಎಂದು ಪತ್ರದಲ್ಲಿ ಉಲ್ಲೇಖ ಮಾಡಿದ್ದಾರೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,982/Gram24ct ₹9,150/Gram22ct ಬೆಳ್ಳಿ: ₹113.00/Gram

## ವಿದ್ಯಾರ್ಥಿಗಳಿಗೆ ಸೆಂಟ್ರಲ್ ಕಾಲೇಜಿನ ಜ್ಞಾನಜ್ಯೋತಿ ಸಭಾಂಗಣದಲ್ಲಿ ಬೀಳ್ಕೊಡುಗೆ ಸಮಾರಂಭ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಗಣಕ ವಿಜ್ಞಾನ ವಿಭಾಗದ 2022–25ನೇ ಸಾಲಿನ ಬಿಸಿಎ ಪದವಿ ವಿದ್ಯಾರ್ಥಿಗಳಿಗೆ ಸೆಂಟ್ರಲ್ ಕಾಲೇಜಿನ ಜ್ಞಾನಜ್ಯೋತಿ ಸಭಾಂಗಣದಲ್ಲಿ ಬೀಳ್ಕೊಡುಗೆ ಸಮಾರಂಭ ಏರ್ಪಡಿಸಲಾಗಿತ್ತು. ಬಿಸಿಯು ವಿಶ್ರಾಂತ ಕುಲಪತಿಗಳಾದ ಪ್ರೊ.ಲಿಂಗರಾಜ ಗಾಂಧಿ, ನೂತನ ಕುಲಸಚಿವರಾದ ನವೀನ್ ಜೋಸೆಫ್, ಕುಲಸಚಿವ (ಮೌಲ್ಯಮಾಪನ) ಪ್ರೊ.ಬಿ.ರಮೇಶ್, ವಿತ್ತಾಧಿಕಾರಿ ಎಂ.ವಿ. ವಿಜಯಲಕ್ಷ್ಮಿ ಹಾಗೂ ವಿಭಾಗದ ಮುಖ್ಯಸ್ಥರಾದ ಪ್ರೊ. ರಮೇಶ್ ಕುಡೇನಟ್ಟಿ ನಿರ್ಗಮಿತ ವಿದ್ಯಾರ್ಥಿಗಳ ಸಮೂಹಕ್ಕೆ ಹಿತವಚನದ ಮಾರ್ಗದರ್ಶನ ನೀಡಿ ಶುಭ ಹಾರೈಸಿದರು. ಇದೇ ಸಂದರ್ಭದಲ್ಲಿ ವಿವಿಧ ಶೈಕ್ಷಣಿಕ ಚಟುವಟಿಕೆಗಳಲ್ಲಿ ಹಾಗೂ ಕ್ರೀಡಾ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು. ವಿದ್ಯಾರ್ಥಿಗಳಿಂದ ಗೀತಗಾಯನ ಮತ್ತು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

## ಬೆಂಗಳೂರು ಮೂಲದ ರಿಯಲ್ ಎಸ್ಟೇಟ್ ಕಂಪನಿ ಮೇಲೆ ಇಡಿ ದಾಳಿ

• ಉದಯವಾಹಿನಿ, ಬೆಂಗಳೂರು

ಫ್ಲಾಟ್‌ಗಳನ್ನು ಮಾರಾಟ ಮಾಡುವ ಹೆಸರಿನಲ್ಲಿ ಕೋಟ್ಯಂತರ ರೂಪಾಯಿಯನ್ನು ಮನೆ ಖರೀದಿದಾರರಿಗೆ ವಂಚಿಸಿದ ಆರೋಪ ಹೊತ್ತಿರುವ ಬೆಂಗಳೂರು ಮೂಲದ ರಿಯಲ್ ಎಸ್ಟೇಟ್ ಕಂಪನಿ ಮೇಲೆ ಜಾರಿ ನಿರ್ದೇಶನಾಲಯ ದಾಳಿ ನಡೆಸಿದ್ದು, ಶೋಧ ನಡೆಸಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಬೆಂಗಳೂರು ಮತ್ತು ಮುಂಬೈನಲ್ಲಿ ಓರ್ಝೋನ್ ಅರ್ಬಾನಾ ಡೆವಲಪರ್ಸ್ ಪ್ರೈ.ಲಿ.ಗೆ ಸೇರಿದ ಕನಿಷ್ಠ ಹತ್ತು ಆವರಣಗಳು ಮತ್ತು ಅದರ ಪ್ರಮುಖ ನಿರ್ವಹಣಾ ಸಿಬ್ಬಂದಿ ಮೇಲೆ ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ ದಾಳಿ ನಡೆಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಸತ್ಯಮೂರ್ತಿ ವಾಸುದೇವನ್ ಈ ಗುಂಪಿನ ಪ್ರಮೋಟರ್ ಆಗಿದ್ದಾರೆ. ಬೆಂಗಳೂರಿನ ದೇವನಹಳ್ಳಿ ತಾಲ್ಲೂಕಿನಲ್ಲಿರುವ ಓರ್ಝೋನ್ ಅರ್ಬಾನ ಎಂಬ ಕಂಪನಿ, ಅದರ ಪ್ರಮೋಟರ್ಸ್ ವಿರುದ್ಧ ದಾಖಲಾಗಿರುವ ಹಲವಾರು ಪೊಲೀಸ್ ಎಫ್‌ಐಆರ್‌ಗಳ ಆಧಾರದ ಮೇಲೆ ಇಡಿ ಕಂಪನಿ ವಿರುದ್ಧ ಪ್ರಕರಣ ದಾಖಲಿಸಿದೆ. ಇಂಟಿಗ್ರೇಟೆಡ್ ಟೌನ್‌ಶಿಪ್ ಯೋಜನೆಯನ್ನು 2018 ರಲ್ಲಿ ಖರೀದಿದಾರರಿಗೆ ಹಸ್ತಾಂತರಿಸಬೇಕಿತ್ತು. ಆದರೆ, 2024 ರವರೆಗೆ ಯೋಜನೆಯು ಕೇವಲ ಶೇ 49 ರಷ್ಟು ಮಾತ್ರ ಪೂರ್ಣಗೊಂಡಿದೆ ಎಂದು ಮೂಲಗಳು ತಿಳಿಸಿವೆ.

## ಪತಿಯ ವರ್ತನೆಗೆ ಬೇಸತ್ತು ಮಗು ಕೊಂದು, ತಾಯಿ ಆತ್ಮಹತ್ಯೆಗೆ ಯತ್ನ

• ಉದಯವಾಹಿನಿ, ಬೆಂಗಳೂರು

ಹಣಕಾಸು, ಕೌಟುಂಬಿಕ ವಿಷಯಕ್ಕೆ ಪದೇ ಪದೇ ಪತಿ ಜಗಳ ಮಾಡುತ್ತಿದ್ದ ಹಿನ್ನೆಲೆಯಲ್ಲಿ ಬೇಸತ್ತ ಪತ್ನಿಯೊಬ್ಬಳು ಮಗು ಕೊಂದು, ತಾನೂ ಆತ್ಮಹತ್ಯೆಗೆ ಯತ್ನಿಸಿರುವ ಘಟನೆಯೊಂದು ತಿಗಳರಪಾಳ್ಯದ ಬಾಲಾಜಿನಗರದಲ್ಲಿ ನಡೆದಿದೆ. ತಿಗಳರಪಾಳ್ಯದ ಒಂದು ವರ್ಷ ಎಂಟು ತಿಂಗಳ ಪುತ್ರಿ ಚಾರ್ವಿ ಮೃತ ದುರ್ದೈವಿ. ವಿಷ ಸೇವಿಸಿದ್ದ ಚಂದ್ರಿಕಾ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಳೆ. ಮನೆಯಲ್ಲಿ ಪತಿ ಕೆಲಸಕ್ಕೆ ತೆರಳಿದ ಬಳಿಕ ಮಗುವಿಗೆ ಕೀಟನಾಶಕ ಬೆರೆಸಿದ ಚಹಾ ಕುಡಿಸಿ ಬಳಿಕ ತಾನೂ ಸಹ ಸೇವಿಸಿದ್ದಾಳೆ. ನಂತರ ತನ್ನ ಗಂಡನಿಗೆ ಆತ್ಮಹತ್ಯೆ ವಿಷಯವನ್ನು ಚಂದ್ರಿಕಾ ತಿಳಿಸಿದ್ದಾಳೆ. ತಕ್ಷಣ ಆತಂಕದಿಂದ ಮನೆಗೆ ಧಾವಿಸಿದ ಮಹಿಳೆಯ ಪತಿ, ವಿಷ ಸೇವಿಸಿದ್ದ ಪತ್ನಿ ಹಾಗೂ ಮಗುವನ್ನು ಮಲ್ಲೇಶ್ವರ ಕೆ.ಸಿ. ಜನರಲ್ ಆಸ್ಪತ್ರೆಗೆ ದಾಖಲಿಸಿದ್ದಾರೆ. ಅಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿದ ಬಳಿಕ ಮಗುವನ್ನು ವಾಣಿ ವಿಲಾಸ ಆಸ್ಪತ್ರೆಗೆ ಹಾಗೂ ಚಂದ್ರಿಕಾಳನ್ನು ವಿಕ್ಟೋರಿಯಾ ಆಸ್ಪತ್ರೆಗೆ ಸ್ಥಳಾಂತರಿಸಿದರು. ಆದರೆ, ಚಿಕಿತ್ಸೆ ಫಲಿಸದೆ ಮಗು ಸಾವನ್ನಪ್ಪಿದೆ. ಚಂದ್ರಿಕಾ ಪ್ರಾಣಾಪಾಯದಿಂದ ಪಾರಾಗಿದ್ದಾಳೆ.

## ರೈಲ್ವೇ ಪ್ಲಾಟ್ ಫಾರ್ಮ್‌ನಲ್ಲೇ ಮಗುವಿಗೆ ಜನ್ಮ ನೀಡಿದ ತಾಯಿ

• ಉದಯವಾಹಿನಿ, ಬೆಂಗಳೂರು

ಸರ್ ಎಂ ವಿಶ್ವೇಶ್ವರಯ್ಯ ಟರ್ಮಿನಲ್‌ನಲ್ಲಿ ರೈಲುಗಾಗಿ ಕಾಯುತ್ತಿದ್ದ ಮಹಿಳೆ ಯೊಬ್ಬರು ಸಹ ಪ್ರಯಾಣಿಕರು, ರೈಲ್ವೆ ಸಿಬ್ಬಂದಿಯ ಸಕಾಲಿಕ ಸಹಾಯದಿಂದ ಪ್ಲಾಟ್‌ಫಾರ್ಮ್‌ನಲ್ಲಿ ಗಂಡು ಮಗುವಿಗೆ ಜನ್ಮ ನೀಡಿದರು. ತಾಯಿ, ನವಜಾತ ಶಿಶು ಇಬ್ಬರೂ ಆರೋಗ್ಯವಾಗಿದ್ದಾರೆ ಎಂದು ವರದಿಯಾಗಿದೆ.



ರೈಲು ಸಂಖ್ಯೆ 12836 ಬೆಂಗಳೂರು– ಹಟಿಯಾ ಎಕ್ಸ್‌ಪ್ರೆಸ್‌ನಲ್ಲಿ ಹಟಿಯಾಗೆ ತೆರಳುತ್ತಿದ್ದ 23 ವರ್ಷದ ಅರ್ಚನಾ ಕುಮಾರಿ ಅವರಿಗೆ ತೀವ್ರ ಹೆರಿಗೆ ನೋವು ಕಾಣಿಸಿಕೊಂಡಿತು.

ಈ ವೇಳೆ ರೈಲು ತಂಡದ ಭಾಗವಾಗಿ ಕರ್ತವ್ಯದಲ್ಲಿದ್ದ ಆರ್‌ವಿ ಸುರೇಶ್ ಬಾಬು ಅವರು ವೈದ್ಯಕೀಯ ಸಹಾಯಕ್ಕಾಗಿ ಕಮರ್ಷಿಯಲ್ ಕಂಟ್ರೋಲ್‌ಗೆ ತಕ್ಷಣ ಮಾಹಿತಿ ನೀಡಿದರು. ಉಪ ಸ್ಟೇಷನ್ ಮಾಸ್ಟರ್ (ವಾಣಿಜ್ಯ), ರೈಲ್ವೆ ರಕ್ಷಣಾ ಪಡೆ ಸಿಬ್ಬಂದಿ ಮತ್ತು ಮಹಿಳಾ ರೈಲ್ವೆ ಸಿಬ್ಬಂದಿಯೊಂದಿಗೆ, ಮಹಿಳೆಯನ್ನು ನಿಲ್ದಾಣ ದೊಳಗಿನ ಸುರಕ್ಷಿತ ಮತ್ತು ಖಾಸಗಿ ಆವರಣಕ್ಕೆ ಸ್ಥಳಾಂತರಿಸಿದರು. ಗುರುವಾರ ಬೆಳಿಗ್ಗೆ 8.30 ರ ಸುಮಾರಿಗೆ, ಅರ್ಚನಾ ಕುಮಾರಿ ಗಂಡು ಮಗುವಿಗೆ ಜನ್ಮ ನೀಡಿದರು. ಹೆರಿಗೆಯ ನಂತರ, ತಾಯಿ ಮತ್ತು ಮಗುವನ್ನು ಹೆಚ್ಚಿನ ಆರೈಕೆಗಾಗಿ ಸಿವಿ ರಾಮನ್ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಅರ್ಚನಾ ಕುಮಾರಿ ಅವರ ಪತಿ ನಿಶಾಂಕ್ ಕುಮಾರ್, ರೈಲ್ವೆ ಅಧಿಕಾರಿಗಳು ಮತ್ತು ಸಿಬ್ಬಂದಿಯ ಸಕಾಲಿಕ ಸಹಾಯಕ್ಕಾಗಿ ಕೃತಜ್ಞತೆ ಸಲ್ಲಿಸಿದರು.

## 1 ವಾರದಲ್ಲಿ ಸ್ಮೋಕಿಂಗ್ ಝೋನ್ ನಿರ್ಮಿಸದಿದ್ರೆ ಲೈಸೆನ್ಸ್ ರದ್ದು!

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿಯಲ್ಲಿರುವ 200ಕ್ಕೂ ಅಧಿಕ ಬಾರ್, ಪಬ್, ಹೋಟೆಲ್‌ಗಳಿಗೆ ಬಿಬಿಎಂಪಿ ನೋಟಿಸ್ ಜಾರಿ ಮಾಡಿದೆ. ಒಂದು ವಾರದೊಳಗೆ ಸ್ಮೋಕಿಂಗ್ ಝೋನ್ ನಿರ್ಮಿಸದಿದ್ರೆ ಲೈಸೆನ್ಸ್ ರದ್ದುಗೊಳಿಸುವುದಾಗಿ ಎಚ್ಚರಿಕೆ ನೀಡಿದೆ. ಬಿಬಿಎಂಪಿ ವ್ಯಾಪ್ತಿಯ ಎಂಟು ವಲಯಗಳಲ್ಲಿರುವ 200ಕ್ಕೂ ಅಧಿಕ ಬಾರ್, ಪಬ್ ಹಾಗೂ ಹೊಟೇಲ್‌ಗಳಿಗೆ ನೋಟಿಸ್ ನೀಡಿದೆ. ಈ ಮೂಲಕ ಎಲ್ಲಾ ಹೋಟೆಲ್‌ಗಳಲ್ಲಿ 20ಕ್ಕಿಂತ ಹೆಚ್ಚು ಆಸನಗಳಿರುವ ಸ್ಮೋಕಿಂಗ್ ಝೋನ್‌ನ್ನು ನಿರ್ಮಿಸಬೇಕು ಎಂದಿದೆ. ಸದ್ಯ ಸ್ಮೋಕಿಂಗ್ ಝೋನ್ ಇಲ್ಲ ಎಂಬ ಕಾರಣಕ್ಕೆ ನೋಟಿಸ್ ಜಾರಿ ಮಾಡಲಾಗಿದೆ. ನೋಟಿಸ್ ಬಂದ ಒಂದು ವಾರದೊಳಗೆ ಸ್ಮೋಕಿಂಗ್ ಝೋನ್ ನಿರ್ಮಾಣ ಮಾಡದಿದ್ದರೆ ಹೊಟೇಲ್‌ಗಳ ಲೈಸೆನ್ಸ್ ರದ್ದು ಮಾಡುತ್ತೇವೆ ಎಂದು ತಿಳಿಸಿದೆ.

# ಸೂರಿಲ್ಲದ ಫಲಾನುಭವಿಗಳ ಆಯ್ಕೆಯಲ್ಲಿ ಅಕ್ರಮ?

### ಬೆಂಗಳೂರು ಅಮೃತ ಮಹೋತ್ಸವ ಯೋಜನೆಯಡಿ ನಿಯಮಬಾಹಿರ ಸಹಾಯಧನ ಬಿಡುಗಡೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಏ.21ರಂದು 27.50 ಕೋಟಿ ರೂ. ಸಹಾಯಧನ ಬಿಡುಗಡೆ**

ಮಹಾನಗರದಲ್ಲಿ ಸ್ವಂತ ನಿವೇಶನ ಹೊಂದಿಲ್ಲದ ವಸತಿ ರಹಿತರಿಗೆ ಸೂರು ಕಲ್ಪಿಸುವ ಉದ್ದೇಶದಿಂದ ಜಾರಿಗೊಳಿಸಿರುವ 'ಬೆಂಗಳೂರು ಅಮೃತ ಮಹೋತ್ಸವ ಯೋಜನೆಯಲ್ಲಿ ಅಕ್ರಮ ನಡೆದಿರುವ ಆರೋಪಗಳು ಕೇಳಿ ಬಂದಿವೆ.

ರಾಜೀವ್‌ಗಾಂಧಿ ವಸತಿ ನಿಗಮದಿಂದ ಸಲ್ಲಿಸಿರುವ 550 ಮಂದಿ ಫಲಾನುಭವಿಗಳಿಗೆ ಬಿಬಿಎಂಪಿಯ ಕಲ್ಯಾಣ ವಿಭಾಗದಿಂದ ನಿಯಮಬಾಹಿರವಾಗಿ 27.50 ಕೋಟಿ ರೂ. ಸಹಾಯಧನ ಬಿಡುಗಡೆ ಮಾಡಲಾಗಿದೆ. ಹಣ ಬಿಡುಗಡೆ ಮಾಡಿದ ಬಳಿಕ ಫಲಾನುಭವಿಗಳ ಅರ್ಹತೆ ಪರಿಶೀಲನೆ ಕಾರ್ಯ ಕೈಗೊಂಡಿರುವುದು ಅಚ್ಚರಿ ಮೂಡಿಸಿದೆ. ಹೀಗಾಗಿ, ಫಲಾನುಭವಿಗಳ ಆಯ್ಕೆಯಲ್ಲೇ ಅಕ್ರಮ ನಡೆದಿರುವ ಅನುಮಾನ ಮೂಡಿದೆ.

ಬಿಬಿಎಂಪಿಯು ಅಮೃತ ಮಹೋತ್ಸವ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಅನುದಾನ ಮಂಜೂರು ಮಾಡಲು ಹಲವು ಷರತ್ತುಗಳನ್ನು ವಿಧಿಸಿದೆ. ಅರ್ಜಿದಾರರು ಈಗಾಗಲೇ ರಾಜೀವ್‌ಗಾಂಧಿ ವಸತಿ ನಿಗಮ, ಕೊಳಚೆ ನಿರ್ಮೂಲನಾ ಮಂಡಳಿ, ಬಿಡಿಎ, ವಸತಿ ಹಾಗೂ ಇತರೆ ಇಲಾಖೆಗಳಲ್ಲಿ 1 ಬಿಎಚ್‌ಕೆ ಮನೆಗಳಿಗೆ ಅರ್ಜಿ ಸಲ್ಲಿಸಿ, ಹಂಚಿಕೆ ಪತ್ರ ಹೊಂದಿರಬೇಕು. ಪಾಲಿಕೆ ವ್ಯಾಪ್ತಿಯಲ್ಲಿ ಕನಿಷ್ಠ 3 ವರ್ಷಗಳಿಂದ ವಾಸಿಸುತ್ತಿರಬೇಕು. ಅಗತ್ಯ ದಾಖಲೆಗಳೊಂದಿಗೆ ಪ್ರತ್ಯೇಕವಾಗಿ ಪಾಲಿಕೆಗೆ ಭೌತಿಕ ಅಥವಾ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ಅರ್ಜಿದಾರರು ಅಥವಾ ಅವರ ಕುಟುಂಬಸ್ಥರ ಹೆಸರಿನಲ್ಲಿ ಯಾವುದೇ ಪ್ರದೇಶದಲ್ಲಿ ಸ್ವಂತ ನಿವೇಶನ ಹಾಗೂ ಕಟ್ಟಡ ಇರಬಾರದೆಂದು ಮಾರ್ಗಸೂಚಿಯಲ್ಲಿ ತಿಳಿಸಲಾಗಿದೆ.

ಆದರೆ, ಪಾಲಿಕೆಯ ಎಂಟು ವಲಯಗಳ ಕಲ್ಯಾಣ ವಿಭಾಗದ ಅಧಿಕಾರಿಗಳಿಗೆ ರಾಜೀವ್‌ಗಾಂಧಿ ವಸತಿ ನಿಗಮದಿಂದ ಸಲ್ಲಿಸಿರುವ ಪಟ್ಟಿಯಲ್ಲಿರುವ 550 ಫಲಾನುಭವಿಗಳು ಮಾರ್ಗಸೂಚಿಯಂತೆ ಅಗತ್ಯ ದಾಖಲೆಗಳೊಂದಿಗೆ ಪಾಲಿಕೆಯಲ್ಲಿ ಪ್ರತ್ಯೇಕವಾಗಿ ಭೌತಿಕ ಅಥವಾ ಆನ್‌ಲೈನ್ ಮೂಲಕ ಅರ್ಜಿಯನ್ನೇ ಸಲ್ಲಿಸಿಲ್ಲ. ಅರ್ಜಿದಾರರ ದಾಖಲಾತಿಗಳು, ಸ್ಥಳ ಮಹಜರು ಪ್ರಕ್ರಿಯೆಯನ್ನು ಸಹಾಯಕ ಕಂದಾಯ ಅಧಿಕಾರಿಯು ಪರಿಶೀಲಿಸಿ ವರದಿ ಹಾಗೂ ಸೂಕ್ತ ಶಿಫಾರಸಿನೊಂದಿಗೆ ವಲಯ ಸಮಿತಿಯ ಅನುಮೋದನೆ ಪಡೆದು ಸಹಾಯಧನ ಪಾವತಿಗೆ ಕ್ರಮ ವಹಿಸಬೇಕಿದೆ.

ಪಾಲಿಕೆಯ ಮಾರ್ಗಸೂಚಿಯನ್ನು ಗಾಳಿಗೆ ತೂರಿ ವಲಯ ಸಮಿತಿಯಲ್ಲಿ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡದೆಯೇ ರಾಜೀವ್‌ಗಾಂಧಿ ವಸತಿ ನಿಗಮದಿಂದ ಸಲ್ಲಿಸಿರುವ 550 ಮಂದಿಯ ಬ್ಯಾಂಕ್ ಖಾತೆಗಳಿಗೆ ತಲಾ 5 ಲಕ್ಷ ರೂ. ನಂತೆ 27.50 ಕೋಟಿ ರೂ.ಗಳನ್ನು ಜಮೆ ಮಾಡಲಾಗಿದೆ. ಪ್ರತಿ 1 ಬಿಎಚ್‌ಕೆ ಫ್ಲ್ಯಾಟ್‌ಗೆ 11.20 ಲಕ್ಷ ರೂ. ಬೆಲೆ ನಿಗದಿಪಡಿಸಲಾಗಿದೆ. ಕೇಂದ್ರ ಮತ್ತು ರಾಜ್ಯ ಸರಕಾರ ಎಸ್‌ಸಿ/ಎಸ್‌ಟಿ ಫಲಾನುಭವಿಗಳಿಗೆ 3.50 ಲಕ್ಷ ರೂ., ಸಾಮಾನ್ಯ ವರ್ಗದವರಿಗೆ 2.70 ಲಕ್ಷ ರೂ. ಸಹಾಯಧನ ನೀಡುತ್ತಿದೆ. ಅದರಂತೆ ಎಸ್‌ಸಿ, ಎಸ್‌ಟಿ ಫಲಾನುಭವಿಗಳು 6.70 ಲಕ್ಷ ರೂ. ಸಾಮಾನ್ಯ, ಅಲ್ಪಸಂಖ್ಯಾತ ವರ್ಗದ ಫಲಾನುಭವಿಗಳು 7.50 ಲಕ್ಷ ರೂ. ಪಾವತಿ ಮಾಡಬೇಕಿದೆ. ಬಿಬಿಎಂಪಿಯು ಬೆಂಗಳೂರು ಅಮೃತ ಮಹೋತ್ಸವ ಯೋಜನೆಯಡಿ ಎಸ್‌ಸಿ, ಎಸ್‌ಟಿ, ಹಿಂದುಳಿದ ವರ್ಗದ ಅರ್ಹ ಫಲಾನುಭವಿಗಳಿಗೆ ತಲಾ 5 ಲಕ್ಷ ರೂ. ಸಹಾಯಧನ ನೀಡುತ್ತಿದೆ. ಹೀಗಾಗಿ, ಎಸ್‌ಸಿ, ಎಸ್‌ಟಿ ಫಲಾನುಭವಿಗಳು ಉಳಿದ 1.70 ಲಕ್ಷ ರೂ. ಹಾಗೂ ಹಿಂದುಳಿದವರು 2.50 ಲಕ್ಷ ರೂ. ವಂತಿಕೆ ಪಾವತಿಸಿ 1 ಬಿಎಚ್‌ಕೆ ಫ್ಲ್ಯಾಟ್ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

**ಬಿಬಿಎಂಪಿಯಿಂದ 5 ಲಕ್ಷ ರೂ. ಸಹಾಯಧನ**

**ರಾಜೀವ್‌ಗಾಂಧಿ ವಸತಿ ನಿಗಮದಿಂದ ದೇವಗೆರೆ, ಗೂಳಿಮಂಗಲ, ನವರತ್ನ ಅಗ್ರಹಾರ, ಸಾದೇನಹಳ್ಳಿ, ಅಗ್ರಹಾರಪಾಳ್ಯ, ಕೂಗೂರು, ಜೆ.ಭಂಗೀಪುರ, ಕುಕ್ಕನಹಳ್ಳಿ ಸೇರಿದಂತೆ ಹಲವೆಡೆ 1 ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆ'ಯಡಿ 1 ಬಿಎಚ್‌ಕೆ ಫ್ಲ್ಯಾಟ್‌ಗಳನ್ನು ನಿರ್ಮಿಸಲಾಗುತ್ತಿದೆ.**

**ಪರಿಶೀಲನೆಗೆ ಮುನ್ನವೇ 27.50 ಕೋಟಿ ರೂ. ಬಿಡುಗಡೆ**

**ಬಿಬಿಎಂಪಿಯಿಂದ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿ ರಾಜೀವ್‌ಗಾಂಧಿ ವಸತಿ ನಿಗಮಕ್ಕೆ ಪಟ್ಟಿ ಸಲ್ಲಿಸಬೇಕಿತ್ತು. ಆದರೆ, ಇಲ್ಲಿ ಉಲ್ಟಾಪಲ್ಟಾ ಪ್ರಕ್ರಿಯೆ ನಡೆದಿದೆ. ನಿಗಮವೇ 550 ಮಂದಿ ಫಲಾನುಭವಿಗಳ ಪಟ್ಟಿಯನ್ನು ಪಾಲಿಕೆಗೆ ಕಳುಹಿಸಿಕೊಟ್ಟಿದೆ. ಅದರಂತೆ ಪಾಲಿಕೆಯು ಏ.21ರಂದು 27.50 ಕೋಟಿ ರೂ. ಸಹಾಯಧನವನ್ನು ಬಿಡುಗಡೆ ಮಾಡಿದೆ. ಈ ಮೊತ್ತವನ್ನು ನಿಗಮವು ಫಲಾನುಭವಿಗಳ ಹೆಸರಿನಲ್ಲಿ ತೆರೆದಿರುವ ವರ್ಚುಯಲ್ ಖಾತೆಗೆ ತಲಾ 5 ಲಕ್ಷ ರೂ.ನಂತೆ ಜಮೆ ಮಾಡಿದೆ.**

## ಸಚಿವ ರಾಜಣ್ಣ ಮೇಲೆ ಹನಿಟ್ರ್ಯಾಪ್ ಯತ್ನ: ಯಾವುದೇ ಸಾಕ್ಷ್ಯ ಸಿಕ್ಕಿಲ್ಲ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಸಹಕಾರ ಸಚಿವ ಕೆ.ಎನ್. ರಾಜಣ್ಣ ಅವರನ್ನು ಹನಿಟ್ರ್ಯಾಪ್ ಮಾಡಲು ಯತ್ನಿಸಿದ್ದಾರೆ ಎಂಬ ಆರೋಪದ ತನಿಖೆ ನಡೆಸುತ್ತಿದ್ದ ಸಿಐಡಿಗೆ, ಆರೋಪಗಳಿಗೆ ಯಾವುದೇ ಸಾಕ್ಷ್ಯಗಳು ಸಿಕ್ಕಿಲ್ಲ ಎಂದು ಹೇಳಲಾಗುತ್ತಿದೆ.

ರಾಜ್ಯ ಸರ್ಕಾರಕ್ಕೆ ವರದಿ ಸಲ್ಲಿಸಿರುವ ಸಿಐಡಿ ಅಧಿಕಾರಿಗಳು, ಹನಿಟ್ರ್ಯಾಪ್ ಪ್ರಯತ್ನಗಳ ಕುರಿತು ಸಚಿವರ ಹೇಳಿಕೆಗಳನ್ನು ಬೆಂಬಲಿಸಲು ಯಾವುದೇ ಗಣನೀಯ ಪುರಾವೆಗಳು ಸಿಕ್ಕಿಲ್ಲ ಎಂದು ತಿಳಿಸಿದೆ ಎಂದು ಮೂಲಗಳು ತಿಳಿಸಿವೆ. ವರದಿ ಕುರಿತು ಪ್ರತಿಕ್ರಿಯೆ ನೀಡಿರುವ ಗೃಹ ಸಚಿವ ಡಾ.ಪರಮೇಶ್ವರ್ ಅವರು, ಸಚಿವ ರಾಜಣ್ಣ ಹನಿಟ್ರ್ಯಾಪ್ ದೂರು ವಿಚಾರಕ್ಕೆ ಸಂಬಂಧಿಸಿ ಸಿಐಡಿ ಅಧಿಕಾರಿಗಳು ವರದಿ ಕೊಟ್ಟಿದ್ದಾರೆ. ಅದರಲ್ಲಿ ಏನಿದೆ ಎಂಬುದನ್ನು ನಾನು ಇನ್ನೂ ಓದಿಲ್ಲ ಎಂದು ಹೇಳಿದರು. ವರದಿಯಂತೂ ಕೈಸೇರಿದೆ. ಆದರೆ ಇನ್ನೂ ಅದರಲ್ಲಿ ಏನಿದೆ ಎಂದು ನೋಡಿಲ್ಲ. ವರದಿ ನೋಡಿದ ಮೇಲೆ ಮಾತನಾಡುತ್ತೇನೆ. ಪ್ರಕರಣ ಚರ್ಚೆ ಸದನದಲ್ಲಿ ಆಯಿತು. ಇದರ ಬಗ್ಗೆ ನೀವು (ಮಾಧ್ಯಮಗಳಿಗೆ) ಸದ್ದು ಮಾಡಿದಿರಿ. ಈ ಸದ್ದಿಗೆ ಸಿಐಡಿಯವರು ಉತ್ತರ ಕೊಟ್ಟಿದ್ದಾರೆ. ಏನಿದೆ ಮೊದಲು ನೋಡೋಣ ಎಂದು ತಿಳಿಸಿದರು.

ಸಚಿವರು ಸುಳ್ಳು ಆರೋಪ ಮಾಡುತ್ತಿದ್ದಾರೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಅದರ ಬಗ್ಗೆ ನನಗೆ ತಿಳಿದಿಲ್ಲ. ವರದಿಯನ್ನು ನೋಡಬೇಕು ಎಂದರು. ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಪ್ರತಿಕ್ರಿಯಿಸಿ, ಇದಕ್ಕೂ ನನಗೂ ಏನು ಸಂಬಂಧ ದೂರುದಾರರ ಬಗ್ಗೆಯಾಗಲಿ ಅಥವಾ ತನಿಖೆಯ ಬಗ್ಗೆಯಾಗಲಿ ನನಗೆ ತಿಳಿದಿಲ್ಲ. ಮಾಧ್ಯಮಗಳಿಂದ ನಾನು ಈ ಬಗ್ಗೆ ಕೇಳುತ್ತಿದ್ದೇನೆ ಎಂದು ಹೇಳಿದರು.

ಪೊಲೀಸರು ಯಾರ ಒತ್ತಡದಲ್ಲಿ ಕೆಲಸ ಮಾಡುತ್ತಿದ್ದಾರೆಂದು ತಿಳಿಯುತ್ತಿಲ್ಲ. ಸರ್ಕಾರ ಅಕ್ರಮಗಳನ್ನು ಮುಚ್ಚಿಹಾಕುತ್ತಿದೆ, ಸಚಿವರಿಗೇ ನ್ಯಾಯ ಸಿಗದಿದ್ದರೆ, ಬಡವರ ಗತಿ ಏನು ಎಂದು ಪ್ರಶ್ನಿಸಿದ್ದಾರೆ.

> **ಆರೋಪಗಳು ನಿಜವಾಗಿದ್ದರೆ, ಅವರ ಹೇಳಿಕೆಗಳ ಸಾಬೀತುಪಡಿಸಲು ಸಾಕ್ಷ್ಯಗಳಿರುವುದೇ ಆದರೆ, ರಾಜಣ್ಣ ಮುಖ್ಯಮಂತ್ರಿ ಮತ್ತು ಗೃಹ ಸಚಿವರನ್ನು ತನಿಖೆಯನ್ನು ಸಿಬಿಐಗೆ ವಹಿಸುವಂತೆ ಒತ್ತಾಯಿಸಬೇಕು, ಆದರೆ, ವಿಧಾನಸಭೆಯಲ್ಲಿ ಸುಳ್ಳು ಆರೋಪಗಳನ್ನು ಮಾಡಿದ್ದರೆ, ರಾಜ್ಯದ ಜನರಲ್ಲಿ ಕ್ಷಮೆಯಾಚಿಸಬೇಕು ಎಂದು ಹೇಳಿದ್ದಾರೆ.**
>
> **ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್**

## ರಸ್ತೆಗಳಲ್ಲಿ ಅಡ್ಡಾದಿಡ್ಡಿ ವಾಹನ ನಿಲ್ಲಿಸುವವರೇ ಎಚ್ಚರ

• ಉದಯವಾಹಿನಿ, ಬೆಂಗಳೂರು



**ಟೋಯಿಂಗ್ ವ್ಯವಸ್ಥೆ ಜಾರಿಗೆ ಸರ್ಕಾರ ಮುಂದು..!**

ರಸ್ತೆ ಬದಿಯ ಪಾರ್ಕಿಂಗ್‌ನಿಂದ ನಗರದಲ್ಲಿ ಉಂಟಾಗುವ ಸಂಚಾರ ದಟ್ಟಣೆಯ ಸಮಸ್ಯೆಗೆ ಅಂತ್ಯ ಹಾಡಲು ರಾಜ್ಯ ಸರ್ಕಾರ ಮುಂದಾಗಿದ್ದು ಮತ್ತು ಟೋಯಿಂಗ್ ವ್ಯವಸ್ಥೆಯನ್ನು ಮತ್ತೆ ಆರಂಭಿಸಲು ಚಿಂತನೆ ನಡೆಸುತ್ತಿದೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ಡಾ. ಜಿ ಪರಮೇಶ್ವರ್ ಅವರು, ಬೆಂಗಳೂರಿನಲ್ಲಿ ಸಂಚಾರ ದಟ್ಟಣೆಗೆ ರಸ್ತೆ ಬದಿಯಲ್ಲಿ ವಾಹನಗಳನ್ನು ನಿಲ್ಲಿಸುವುದು ಒಂದು ಪ್ರಮುಖ ಕಾರಣವಾಗಿದೆ. ಹೀಗಾಗಿ ಟೋಯಿಂಗ್ ವ್ಯವಸ್ಥೆಯನ್ನು ಮತ್ತೆ ಆರಂಭಿಸಲು ಚಿಂತನೆ ನಡೆಸಲಾಗುತ್ತಿದೆ ಎಂದು ಹೇಳಿದರು.

ಈ ಬಾರಿ ವಾಹನ ಟೋಯಿಂಗ್ ಅನ್ನು ಖಾಸಗಿ ಸಂಸ್ಥೆಗಳಿಗೆ ವಹಿಸುವುದಿಲ್ಲ. ಇಲಾಖೆಯಿಂದಲೇ ಕಾರ್ಯಾಚರಣೆ ನಡೆಸಲಾಗುವುದು. ಅನಿವಾರ್ಯ ಕಾರಣಗಳಿಂದ ರಸ್ತೆಯಲ್ಲಿ ಎದ್ವಾತದ್ವಾವಾಗಿ ನಿಲ್ಲಿಸಲಾಗಿರುವ ವಾಹನಗಳನ್ನು ಟೋಯಿಂಗ್ ಮಾಡಲಾಗುವುದು ಎಂದು ತಿಳಿಸಿದರು.

> **ಈಗಾಗಲೇ ಪೊಲೀಸರಿಗೆ ಸೂಚನೆ ಕೊಟ್ಟಿದ್ದೇವೆ, ವಾಹನ ಮಾಲೀಕರು ಮತ್ತು ಚಾಲಕರ ಜೊತೆ ಮಾನವೀಯತೆಯಿಂದ ವರ್ತಿಸಬೇಕು, ಅವರೊಂದಿಗೆ ವಾಗ್ವಾದ ಮಾಡಬಾರದು ಎಂದು ಸೂಚನೆ ನೀಡಲಾಗಿದೆ ಎಂದು ಹೇಳಿದರು.**

## ಬಿಬಿಎಂಪಿ ಗ್ಯಾಂಗ್ ಮೆನ್ ರಮೇಶ್‌ನ ಕಿರುಕುಳಕ್ಕೆ ಬೇಸತ್ತ ನೌಕರರು ಪೊಲೀಸ್ ಆಯುಕ್ತರಿಗೆ ದೂರು

• ಉದಯವಾಹಿನಿ, ಬೆಂಗಳೂರು



ಬಿಬಿಎಂಪಿಯಲ್ಲಿ 3 ವರ್ಷಗಳಿಂದ ಅಮಾನತ್ತಿನಲ್ಲಿರುವ ಕ್ರಿಮಿನಲ್ ಆರೋಪಿ ಗ್ಯಾಂಗ್‌ಮೆನ್ ರಮೇಶ್ ರವರು ಪಾಲಿಕೆ ಅಧಿಕಾರಿ/ನೌಕರರಿಗೆ ಬೆದರಿಕೆ ಹಾಕಿ, ಅವಾಚ್ಯಕ ಶಬ್ದಗಳಿಂದ ನಿಂದಿಸಿ ಸರ್ಕಾರಿ ಕೆಲಸ ನಿರ್ವಹಿಸಲು ತೊಂದರೆ ಉಂಟುಮಾಡುತ್ತಿರುವ ಬಗ್ಗೆ ನಗರ ಪೊಲೀಸ್ ಆಯುಕ್ತರಿಗೆ ಬಿಬಿಎಂಪಿ ಅಧಿಕಾರಿ, ನೌಕರರು ದೂರು ನೀಡಿ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಹಾಲಿ ಕ್ರಿಮಿನಲ್ ಆರೋಪಿ ಗ್ಯಾಂಗ್‌ಮೆನ್ ರಮೇಶ್ ಕಳೆದ 3 ವರ್ಷಗಳಿಗೂ ಮೇಲ್ಪಟ್ಟು ಅಮಾನತ್ತಿನಲ್ಲಿರುವ ಪಾಲಿಕೆ ನೌಕರ ರವರು ಪ್ರತಿ ದಿನ ಪಾಲಿಕೆ ಕೇಂದ್ರ ಕಛೇರಿ ಮತ್ತು ವಿವಿಧ ವಲಯ ಕಛೇರಿಗಳಿಗೆ ಬೇಟಿ ಮಾಡಿ, ಅಧಿಕಾರಿ/ ನೌಕರರಿಗೆ ಬೇದರಿಕೆ ಹಾಕಿ, ಅವಾಚ್ಯಕ ಶಬ್ದಗಳಿಂದ ನಿಂದಿಸಿ ಸರ್ಕಾರಿ ಕೆಲಸ ನಿರ್ವಹಿಸಲು ತೊಂದರೆ ಉಂಟು ಮಾಡುತ್ತಾ, ಹಣ ನೀಡದೆ ಇದಂತಹ ಅಧಿಕಾರಿ /ನೌಕರರ ವಿರುದ್ದ ಅನಾಮದೇಯ ಪತ್ರಗಳನ್ನು ಬರೆಯುವುದು, ಲೋಕಸಭಾ ವಿಧಾನಸಭಾ ಚುನಾವಣೆಯಲ್ಲಿ ಚುನಾವಣೆ ಅಧಿಕಾರಿಗಳಿಗೆ ಇಲ್ಲಸಲ್ಲದ ತಪ್ಪು ಮಾಹಿತಿಗಳನ್ನು ನೀಡಿ, ದಿಕ್ಕು ತಪ್ಪಿಸಿ ವಂಚನೆ, ದ್ರೋಹ, ಮೋಸ ಮಾಡುವುದು ಹಾಗೂ ಅದೇ ರೀತಿ ಪೊಲೀಸ್ ಇಲಾಖೆ ಸರ್ಕಾರಕ್ಕೂ ಕೂಡ ದಿಕ್ಕು ತಪ್ಪಿಸಿ ವಂಚನೆ, ದ್ರೋಹ, ಮೋಸ ಮಾಡುವುದು ಇವನ ದಿನನಿತ್ಯದ ಕಾಯಕವಾಗಿರುತ್ತದೆ.

ಈಗಾಗಲೇ ನಂದಿನಿ ಲೇಔಟ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬರುವ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ನಂದಿನಿ ಲೇಔಟ್ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಿರಿಯ ಆರೋಗ್ಯ ಪರಿವೀಕ್ಷರಾದ ವಿಜಯ್ ಕುಮಾರ್ ರವರು ಹಣ ನೀಡದೆ ಇದ್ದ ಕಾರಣ. ಅವಾಚ್ಯಕ ಪಬ್ದಗಳಿಂದ ನಿಂದಿಸಿ ಪ್ರಾಣ ಬೇದರಿಕೆ ಹಾಕಿ, ಸರ್ಕಾರಿ ಕೆಲಸ ನಿರ್ವಹಿಸಲು ತೊಂದರೆ ಉಂಟುಮಾಡಿರುವ ಮೇರೆಗೆ ಹಾಲಿ ಗ್ಯಾಂಗ್‌ಮೆನ್ ರಮೇಶ್ ರವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಾಗಿರುತ್ತದೆ. ರಮೇಶ್ ಕ್ರಿಮಿನಲ್ ಆರೋಪಿ ಪಾಲಿಕೆ ಸಂಘದವತಿಯಿಂದ ಆಯೋಜಿಸುವ ಡಾ|| ಬಿ.ಆರ್. ಅಬೇಂಡ್ಕರ್ ದಿನಾಚರಣೆ, ಮಹಿಳಾ ದಿನಾಚರಣೆ, ಕನ್ನಡ ರಾಜ್ಯೋತ್ಸವ ಹಾಗೂ ಇನ್ನು ಹಲವಾರು ಕಾರ್ಯಕ್ರಮಕ್ಕೆ ಆಹ್ವಾನಿಸುವ ಮುಖ್ಯ ಅತಿಥಿಗಳು, ನ್ಯಾಯಾಧೀಶರು, ಉಪ ಲೋಕಾಯುಕ್ತರು ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ಹಾಗೂ ಪಾಲಿಕೆ ಅಧಿಕಾರಿಗಳಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಬಾರದೆಂದು ದಿಕ್ಕು ತಪ್ಪಿಸಿ ತಪ್ಪು ಮಾಹಿತಿ ನೀಡಿ ವ್ಯಾಟ್ಸ್ ಆಫ್ ಗ್ರೂಪ್‌ಗಳಲ್ಲಿ ಸಾಮಾಜಿಕ ಜಾಲತಾಣದಲ್ಲಿ ಪಾಲಿಕೆ ಅಧಿಕಾರಿ/ ನೌಕರರನ್ನು ತೇಜೋವಧೆ ಮಾಡಿ ಸುಳ್ಳು ಮಾಹಿತಿಗಳನ್ನು ನೀಡುವುದು. ಸಂಘದ ಕಾರ್ಯಕ್ರಮಗಳನ್ನು ಕುಗ್ಗಿಸುವ ಹಿನಕೃತ್ಯದಲ್ಲಿ ಭಾಗಿಯಾಗುವುದು ಅವನ ದಿನನಿತ್ಯದ ಕಾಯಕ. ಈ ಹಿಂದೆ ಪೌರಕಾರ್ಮಿಕ ಶ್ರೀಮತಿ.ಗೌರಮ್ಮ ರವರಿಂದ ರೂ. 80,000/- ಗಳನ್ನು ದಿನಗೂಲಿ ನೌಕರರಿಂದ ಸಕ್ರಮಾತಿ ಮಾಡುವುದಾಗಿ ಹಣ ಪಡೆದು ವಂಚಿಸಿರುತ್ತಾನೆ. ಆದ್ದರಿಂದ ಕ್ರಿಮಿನಲ್ ಹಿನ್ನೆಲೆ ಉಳ್ಳ ರಮೇಶ್ ಗ್ಯಾಂಗ್‌ಮೆನ್ ಮತ್ತು ಈತನ ಸಹಚರರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಿ, ರೌಡಿ ಪಟ್ಟಿಯಲ್ಲಿ ಹೆಸರು ಸೇರಿಸಿ, ಇವನ ಚಲನ ವಲನವನ್ನು ನಿಗಾ ಇಡಲು ಪಾಲಿಕೆ ಅಧಿಕಾರಿ/ ನೌಕರರುಗಳು ತಮ್ಮಲ್ಲಿ ಈ ಮೂಲಕ ಕೋರಿದ್ದಾರೆ

## ಇಂಧನ ಇಲಾಖೆ ಬಗ್ಗೆ ಹರಡುತ್ತಿರುವುದು ತಪ್ಪು ಮಾಹಿತಿ

• ಉದಯವಾಹಿನಿ, ಬೆಂಗಳೂರು

ಇತ್ತೀಚೆಗೆ ಆದಾಯ ತೆರಿಗೆ ಇಲಾಖೆಯ ತಂಡವು ನಮ್ಮ ಕಂಪನಿಗಳ ಆದಾಯ ತೆರಿಗೆ ಸಲ್ಲಿಕೆಗೆ ಸಂಬಂಧಿಸಿದ ಸಾಮಾನ್ಯ ಪರಿಶೀಲನೆ ನಡೆಸಿತು. ಇದು ನಿಯಮಿತವಾಗಿ ನಡೆಯುವ ಚಟುವಟಿಕೆಯಾಗಿದೆ. ಆದಾಯ ತೆರಿಗೆ ಇಲಾಖೆ ನಮ್ಮ ಕಂಪನಿಗಳಲ್ಲಿ ನಡೆಸಿದ ಪರಿಶೀಲನೆಗೂ ಸ್ಮಾರ್ಟ್ ಮೀಟರ್ ಕುರಿತಂತೆ ಇತ್ತೀಚೆಗೆ ನಡೆಯುತ್ತಿರುವ ಬೆಳವಣಿಗೆ ಅಥವಾ ಇಂಧನ ಇಲಾಖೆ ಸೇರಿದಂತೆ ಯಾವುದೇ ಸರ್ಕಾರಿ ಯೋಜನೆಗಳಿಗೆ ಯಾವುದೇ ಸಂಬಂಧವಿಲ್ಲ. ಕರ್ನಾಟಕ ಸರ್ಕಾರದ ಇಂಧನ ಇಲಾಖೆಯ ಬಗ್ಗೆ ಹರಡುತ್ತಿರುವ ತಪ್ಪು ಮಾಹಿತಿ ಎಂದು ಇಂಧನ ಸಚಿವ ಕೆಜೆ ಜಾರ್ಜ್ ಸ್ಪಷ್ಟನೆ ಕೊಟ್ಟಿದ್ದಾರೆ.


ಈ ಬಗ್ಗೆ ಸಚಿವ ಕೆಜೆ ಜಾರ್ಜ್ ಪ್ರತಿಕ್ರಿಯಿಸಿ, ನಮ್ಮ ಎಲ್ಲಾ ವ್ಯವಹಾರಗಳಲ್ಲಿ ದೀರ್ಘಕಾಲದಿಂದ ಪಾರದರ್ಶಕತೆ ಹಾಗೂ ಕಾನೂನುಪರ ಬದ್ಧತೆಯನ್ನು ನಾವು ಅನುಸರಿಸುತ್ತಿದ್ದೇವೆ. ಇತ್ತೀಚಿಗೆ ನಡೆದ ಈ ನಿಗದಿತ ಪರಿಶೀಲನೆಯ ಸಂದರ್ಭದಲ್ಲಿ ನಮ್ಮ ತಂಡಗಳು ಆದಾಯ ತೆರಿಗೆ ಇಲಾಖೆ ಅಧಿಕಾರಿಗಳಿಗೆ ಸಂಪೂರ್ಣ ಸಹಕಾರವನ್ನು ನೀಡಿದ್ದು, ಯಾವ ಬಗೆಯ ಉಲ್ಲಂಘನೆಗಳು ನಮ್ಮ ಕಡೆಯಿಂದ ಕಂಡುಬಂದಿಲ್ಲ.

ಹೀಗಿರುವಾಗ ಊಹಾಪೋಹಗಳು ಅಥವಾ ತಪ್ಪು ಮಾಹಿತಿ ಹಬ್ಬಿಸುವುದು ಅನುಚಿತ ನಡವಳಿಕೆಯಾಗಿದ್ದು, ಅಂತಹ ಎಲ್ಲಾ ಸುದ್ದಿಗಳನ್ನು ನಾವು ಸಂಪೂರ್ಣವಾಗಿ ತಿರಸ್ಕರಿಸುತ್ತೇವೆ ಖಂಡಿಸುತ್ತೇವೆ ಎಂದಿದ್ದಾರೆ.

ಈ ಸಮಯದಲ್ಲಿ ಎಲ್ಲರೂ ಜವಾಬ್ದಾರಿಯಿಂದ ವರ್ತಿಸಿ ಆಧಾರವಿಲ್ಲದ ಆರೋಪಗಳನ್ನು ಹರಡುವುದಾಗಲೀ ಅಥವಾ ಬೆಂಬಲಿಸುವುದಾಗಲೀ ಮಾಡಬಾರದು ಎಂದು ಇಂಧನ ಸಚಿವ ಏಎ ಜಾರ್ಜ್ ಅವರು ಕೇಳಿಕೊಂಡಿದ್ದಾರೆ.

## ಪಂ. ರಾಜ್ ಇಲಾಖೆಯ 1,300 ನೌಕರರ ವರ್ಗಾವಣೆ

• ಉದಯವಾಹಿನಿ, ಬೆಂಗಳೂರು



ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು 2024–25ನೆ ಸಾಲಿನ ಆಯವ್ಯಯ ಘೋಷಣೆಯಂತೆ ರಾಜ್ಯದಲ್ಲಿ ಮೊದಲ ಬಾರಿಗೆ ರಾಜ್ಯದ 31 ಜಿಲ್ಲೆಗಳಲ್ಲಿ ಗ್ರಾಮ ಪಂಚಾಯತಿಗಳ ಕಾರ್ಯದರ್ಶಿ ಗ್ರೇಡ್–1 ಮತ್ತು ಗ್ರೇಡ್–2 ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವರ್ಗಾವಣೆ ಪ್ರಕ್ರಿಯೆಯನ್ನು ಆನ್ ಲೈನ್ ಕೌನ್ಸಿಲಿಂಗ್ ಮೂಲಕ ಕೈಗೊಂಡು ಯಶಸ್ವಿಯಾಗಿ ಪೂರ್ಣಗೊಳಿಸಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ವರ್ಗಾವಣೆ ಪ್ರಕ್ರಿಯೆಯಲ್ಲಿ 31 ಜಿಲ್ಲೆಗಳಲ್ಲಿ ಒಟ್ಟು 2697 ನೌಕರರಿಂದ ವರ್ಗಾವಣೆಗಾಗಿ ಅರ್ಜಿಗಳು ಸ್ವೀಕೃತವಾಗಿದ್ದವು. ನೌಕರರು ಸಲ್ಲಿಸಿದ ಅರ್ಜಿಗಳನ್ನು ಪರಿಶೀಲಿಸಿ ಅರ್ಹತೆ ಹೊಂದಿದ 1,300 ನೌಕರರಿಗೆ ಆನ್ ಲೈನ್ ಮೂಲಕ ಕೌನ್ಸಿಲಿಂಗ್ ನಡೆಸಿದ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಡಿಜಿಟಲ್ ಸಹಿ ಮಾಡಿದ ವರ್ಗಾವಣೆ ಆದೇಶಗಳನ್ನು ಹೊರಡಿಸಿ ಸ್ಥಳದಲ್ಲೆ ನೌಕರರಿಗೆ ನೀಡಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಸಮಾಲೋಚನೆ ಅವಧಿಗಳನ್ನು ಆಯಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ನಡೆಸಿದರು, ಅವರು ಡಿಜಿಟಲ್ ಸಹಿ ಮಾಡಿದ ವರ್ಗಾವಣೆ ಆದೇಶಗಳನ್ನು ನೀಡಿದರು. ಅವುಗಳನ್ನು ಸ್ಥಳದಲ್ಲೇ ನೌಕರರಿಗೆ ಹಸ್ತಾಂತರಿಸಲಾಯಿತು ಎಂದು ಸಚಿವರು ಹೇಳಿದರು.

# ಸರಕಾರಿ ಸಂಸ್ಥೆಗಳಿಂದಲೆ 472 ಎಕರೆ ಕೆರೆ ಭೂಮಿ ಒತ್ತುವರಿ

### ಬಿಬಿಎಂಪಿ ವ್ಯಾಪ್ತಿಯಲ್ಲಿದ್ದ 202 ಕೆರೆಗಳ ಪೈಕಿ 183 ಉಳಿದಿವೆ, ಈಗಾಗಲೇ 136 ಕೆರೆಗಳ ಸರ್ವೆ ಕಾರ್ಯ ಪೂರ್ಣಗೊಂಡಿದೆ

• ಉದಯವಾಹಿನಿ, ಬೆಂಗಳೂರು

ಉದ್ಯಾನ ನಗರಿಯಲ್ಲಿ 472 ಎಕರೆ ಕೆರೆ ಭೂಮಿ ಒತ್ತುವರಿಯಾಗಿದ್ದರೂ, ಬಿಬಿಎಂಪಿ ಈವರೆಗೆ ಕೇವಲ 17.38 ಎಕರೆ ಮರು ವಶಕ್ಕೆ ಪಡೆಯುವಲ್ಲಿ ಯಶಸ್ವಿಯಾಗಿದೆ. ಆದರೆ, ಒಟ್ಟಾರೆ ಒತ್ತುವರಿಯಲ್ಲಿ ಸರಕಾರಿ ಸಂಸ್ಥೆಗಳೇ (288 ಎಕರೆ) ಸಿಂಹಪಾಲು ಹೊಂದಿದ್ದರಿಂದ ತೆರವಿಗೆ ಹಿನ್ನಡೆಯಾಗಿದೆ ಎಂಬ ಆರೋಪ ಕೇಳಿ ಬಂದಿದೆ.

ಬ್ರ್ಯಾಂಡ್ ಬೆಂಗಳೂರು ಯೋಜನೆಯಡಿ ಕೆರೆಗಳ ಅಭಿವೃದ್ಧಿ ಕೈಗೆತ್ತಿಕೊಳ್ಳುತ್ತಿರುವ ಬಿಬಿಎಂಪಿ ಕೆರೆ ವಿಭಾಗ, ಒತ್ತುವರಿಯಾಗಿರುವ ಭೂಮಿಯನ್ನು ಮರು ವಶಕ್ಕೆ ಪಡೆಯುವ ಜವಾಬ್ದಾರಿ ಹೊಂದಿದೆ. ಮಳೆ ನೀರು ಕಾಲುವೆ ಮತ್ತು ಕೆರೆಗಳ ಸಂರಕ್ಷಣೆಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸುಪ್ರೀಂ ಕೋರ್ಟ್ 2023 ರಲ್ಲಿ ರಾಜ್ಯ ಸರಕಾರಕ್ಕೆ ನಿರ್ದೇಶನ ನೀಡಿತ್ತು. ಅದರಂತೆ, ಕೆರೆ ಭೂಮಿ, ರಾಜಕಾಲುವೆಗಳ ಸರ್ವೆ ಕಾರ್ಯ ಕೈಗೊಂಡಿದೆ.

ಬಿಬಿಎಂಪಿ ವ್ಯಾಪ್ತಿಯಲ್ಲಿದ್ದ 202 ಕೆರೆಗಳ ಪೈಕಿ 183 ಉಳಿದಿವೆ. ಈಗಾಗಲೇ 136 ಕೆರೆಗಳ ಸರ್ವೆ ಕಾರ್ಯ ಪೂರ್ಣಗೊಂಡಿದೆ. ಈ ಪೈಕಿ ಬಿಬಿಎಂಪಿ 29 ಕೆರೆಗಳಿಗೆ ಸಂಬಂಧಿಸಿದ ಒತ್ತುವರಿ ತೆರವುಗೊಳಿಸಿದೆ. ಅಲ್ಲದೆ, 31 ಕೆರೆಗಳಲ್ಲಿ ಸರಕಾರಿ ಒತ್ತುವರಿ ಎಂದು ದಾಖಲಾಗಿದೆ. ಒತ್ತುವರಿದಾರರ ಪೈಕಿ 288 ಎಕರೆ ಕೆರೆ ಭೂಮಿಯನ್ನು ಸರಕಾರಿ ಸಂಸ್ಥೆಗಳು ಮತ್ತು 188 ಎಕರೆ ಭೂಮಿಯನ್ನು ಖಾಸಗಿ ವ್ಯಕ್ತಿಗಳಿಂದ ಒತ್ತುವರಿಯಾಗಿದೆ.



ಇನ್ನು 33 ಕೆರೆಗಳ ಸರ್ವೆ ಮತ್ತು ಒತ್ತುವರಿ ಪ್ರದೇಶ ಗುರುತಿಸುವ ಕಾರ್ಯ ನಡೆಯುವುದು ಬಾಕಿಯಿದೆ. ಬೆಂಗಳೂರಿನ 183 ಕೆರೆಗಳ ಪೈಕಿ 136 ಕೆರೆಗಳ ಸರ್ವೆ ಒತ್ತುವರಿ ಪ್ರದೇಶ ಗುರುತಿಸುವ ಕಾರ್ಯವನ್ನು ಕಂದಾಯ ಇಲಾಖೆ ಅಧಿಕಾರಿಗಳು ಪೂರ್ಣಗೊಳಿಸಿದ್ದಾರೆ. ಆದರೆ, ಬೆಂಗಳೂರು ದಕ್ಷಿಣ ಮತ್ತು ಆನೇಕಲ್ ತಾಲ್ಲೂಕುಗಳಲ್ಲಿರುವ 33 ಕೆರೆಗಳ ಸರ್ವೆ ಕಾರ್ಯವನ್ನು ಭೂ ದಾಖಲೆಗಳ ಸಹಾಯಕ ನಿರ್ದೇಶಕರು(ಎಡಿಎಲ್‌ಆರ್) ಇನ್ನೂ ಆರಂಭಿಸಿಲ್ಲ. ಇದರಿಂದ ಒತ್ತುವರಿ ತೆರವು ಕಾರ್ಯಕ್ಕೆ ಹಿನ್ನಡೆಯಾಗಿದೆ.

ಸರ್ವೆ ಕಾರ್ಯ ಪೂರ್ಣಗೊಳ್ಳುವುದನ್ನು ಬಿಬಿಎಂಪಿ ಎದುರು ನೋಡುತ್ತಿದೆ. ಕೆರೆಗಳ ಬಫರ್ ಜೋನ್ ಗುರುತಿಸುವಿಕೆ ಮತ್ತು ಒತ್ತುವರಿ ತೆರವು ಕಾರ್ಯ ಇನ್ನಷ್ಟೇ ಆರಂಭವಾಗಬೇಕಿದೆ.

> **ಕಂದಾಯ ಇಲಾಖೆಯಿಂದ ಕೆರೆ ಜಮೀನಿನ ಸರ್ವೆ ಪೂರ್ಣಗೊಳಿಸಿದ ನಂತರ ಒತ್ತುವರಿ ತೆರವು ಕಾರ್ಯ ಆರಂಭವಾಗಲಿದೆ. ಈಗಾಗಲೇ ಕೆಲ ಒತ್ತುವರಿದಾರರಿಗೆ ನೋಟಿಸ್ ನೀಡಲಾಗಿದೆ. ಇದರಲ್ಲಿನ ಹಲವು ಒತ್ತುವರಿದಾರರು ಕೋರ್ಟ್ ಮೆಟ್ಟಿಲೇರಿದ್ದಾರೆ. ಅಲ್ಲದೆ, ಹೆಚ್ಚಿನ ಭೂಮಿ ಸರಕಾರಿ ಸಂಸ್ಥೆಗಳೇ ಒತ್ತುವರಿ ಮಾಡಿಕೊಂಡಿರುವುದರಿಂದ ತೆರವು ಕಾರ್ಯಕ್ಕೆ ಹಿನ್ನಡೆಯುಂಟಾಗಿದೆ ಎಂದು ಹೆಸರು ಹೇಳಲಿಚ್ಛಿಸದ ಬಿಬಿಎಂಪಿ ಕೆರೆ ವಿಭಾಗದ ಅಧಿಕಾರಿಯೊಬ್ಬರು ಮಾಹಿತಿ ನೀಡಿದರು.**

**ಪಾಲಿಕೆ ಕಾನೂನು ತಂಡಕ್ಕೆ ಒತ್ತುವರಿ ತೆರವು ವಿರುದ್ಧ ಕೋರ್ಟ್**

**ಮಹದೇವಪುರ, ಬೊಮ್ಮನಹಳ್ಳಿ ವಲಯ ವ್ಯಾಪ್ತಿಯಲ್ಲಿ ಹೆಚ್ಚು ಕೆರೆಗಳಿದ್ದು, ಈ ಭಾಗದಲ್ಲಿ ಅತಿ ಹೆಚ್ಚು ಭೂಮಿ ಒತ್ತುವರಿಯಾಗಿದೆ. ಈಗಾಗಲೇ ಹಲವು ಖಾಸಗಿ ವ್ಯಕ್ತಿಗಳಿಗೆ ನೋಟಿಸ್ ನೀಡಲಾಗಿದೆ. ಈ ಪೈಕಿ ಹಲವರು ಜಾಗ ತೆರವುಗೊಳಿಸದಂತೆ ಕೋರಿ ನ್ಯಾಯಾಲಯದ ಮೆಟ್ಟಿಲೇರಿದ್ದಾರೆ. ಹಾಗಾಗಿ, ಹಲವು ಪ್ರಕರಣಗಳಲ್ಲಿ ಪಾಲಿಕೆ ಕಾನೂನು ತಂಡಕ್ಕೆ ಒತ್ತುವರಿ ತೆರವು ವಿರುದ್ಧ ಕೋರ್ಟ್ ನೀಡಿರುವ ತಡೆ ತೆರವು ಸಾಧ್ಯವಾಗಿಲ್ಲ. ಇದರಿಂದ ಒತ್ತುವರಿ ಭೂಮಿ ತೆರವು ಕಾರ್ಯಕ್ಕೆ ಹಿನ್ನಡೆಯಾಗಿದೆ. ಆದ್ದರಿಂದ ಬಿಬಿಎಂಪಿ ಕಾನೂನು ವಿಭಾಗದಲ್ಲಿ ಬದಲಾವಣೆ ಸಂಬಂಧ ಚರ್ಚೆಯೂ ನಡೆಯುತ್ತಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದರು.**

# ಸ್ಥಾಯಿ ಸಮಿತಿ; ಅಧ್ಯಕ್ಷ, ಮಾಜಿ ಅಧ್ಯಕ್ಷ ಜಟಾಪಟಿ

## ಚಿಕ್ಕಬಳ್ಳಾಪುರ ನಗರಸಭೆ ಸ್ಥಾಯಿ ಸಮಿತಿ ರಚನೆ; ಎ.ಗಜೇಂದ್ರ, ಡಿ.ಎಸ್.ಆನಂದರೆಡ್ಡಿ ಪ್ರತ್ಯೇಕ ಪಟ್ಟಿ

• **ಉದಯವಾಹಿನಿ, ಚಿಕ್ಕಬಳ್ಳಾಪುರ**



ಉದಯವಾಹಿನಿ ಚಿತ್ರ

ಚಿಕ್ಕಬಳ್ಳಾಪುರ ನಗರಸಭೆಯ ಆಡಳಿತ ಅವಧಿ 2025ರ ಅಕ್ಟೋಬರ್‌ಗೆ ಅಂತ್ಯವಾಗಲಿದೆ. ಈಗ ರಾಜಕಾರಣದ ಕೊನೆಯ ಆಟ ಎನ್ನುವಂತೆ ನಗರಸಭೆ ಸ್ಥಾಯಿ ಸಮಿತಿ ರಚನೆಗೆ ಆಡಳಿತ ಪಕ್ಷದಲ್ಲಿ ಮುಸುಕಿನ ಗುದ್ದಾಟ ಜೋರಾಗಿದೆ.

ನಗರಸಭೆ ಅಧ್ಯಕ್ಷ ಎ.ಗಜೇಂದ್ರ, ಮಾಜಿ ಅಧ್ಯಕ್ಷ ಹಾಗೂ ಸದಸ್ಯ ಡಿ.ಎಸ್.ಆನಂದರೆಡ್ಡಿ ಬಾಬು, ತಮ್ಮದೇ ಆದ ರಾಜಕೀಯ ಪಟ್ಟು ಹಾಕಿದ್ದಾರೆ. ಈ ಇಬ್ಬರು ನಾಯಕರು ಪ್ರತ್ಯೇಕವಾಗಿ ಸ್ಥಾಯಿ ಸದಸ್ಯರ ಪಟ್ಟಿಯನ್ನು ಪೌರಾಯುಕ್ತರಿಗೆ ನೀಡಿದ್ದಾರೆ. ಇದು ಈಗ ನಗರಸಭೆಯ ರಾಜಕಾರಣವನ್ನು ರಂಗೇರಿಸಿದೆ. ಗಜೇಂದ್ರ ನೀಡಿರುವ ಸದಸ್ಯರ ಪಟ್ಟಿಯಲ್ಲಿ ಆನಂದರೆಡ್ಡಿ ಹೆಸರು ಇಲ್ಲ. ಅಧ್ಯಕ್ಷರ ಮತ್ತು ಮಾಜಿ ಅಧ್ಯಕ್ಷರ ಪಟ್ಟಿಯಲ್ಲಿ ಕೆಲವು ಹೆಸರುಗಳು ಎರಡೂ ಕಡೆಯಲ್ಲಿವೆ. ಕೆಲವರ ಹೆಸರನ್ನು ಕೈಬಿಡಲಾಗಿದೆ. ಇನ್ನೇನು ಮೂರು ತಿಂಗಳು ಅಧಿಕಾರದ ಅವಧಿ ಇದೆ ಎನ್ನುವಾಗ ಸ್ಥಾಯಿ ಸಮಿತಿ ರಚನೆಯ ವಿಚಾರವು ತೀವ್ರವಾಗಿದೆ.

**ಅಧ್ಯಕ್ಷರ ಪಟ್ಟಿಯಲ್ಲಿರುವ ಸದಸ್ಯರು:** ಎಸ್.ಸುಮಾ, ಶಕೀಲಾಬಾನು, ರುಕ್ಕಿಣಿ ಟಿ.ವಿ. ಸತೀಶ್, ದೀಪ ಬಿ.ಕೆ., ವಿ. ಸುಬ್ರಹ್ಮಣ್ಯಾಚಾರಿ, ಆರ್.ಮಂಜುಳಮ್ಮ, ಸಿ.ಜೆ.ಭಾರತಿದೇವಿ, ಎನ್.ಎಸ್.ಚಂದ್ರಶೇಖರ್, ವೆಂಕಟೇಶಪ್ಪ ಸಿ., ಜಯಲಕ್ಷ್ಮಿ ಜಿ.ಕೆ ಅವರ ಹೆಸರು ಎ.ಗಜೇಂದ್ರ ಅವರ ಪಟ್ಟಿಯಲ್ಲಿವೆ.

**ಸಾಮಾನ್ಯ ಸಭೆಯಲ್ಲಿ ಚರ್ಚೆಯೇ ಆಗಿಲ್ಲ**

11 ಜನ ಸದಸ್ಯರನ್ನು ಸರ್ವಾನುಮತದಿಂದ ಅನುಮೋದಿಸಿ ಆಯ್ಕೆ ಮಾಡಲಾಗಿದೆ ಎಂದು ಗಜೇಂದ್ರ ಪೌರಾಯುಕ್ತರಿಗೆ ಪತ್ರದಲ್ಲಿ ತಿಳಿಸಿದ್ದಾರೆ.

ಮಾಜಿ ಅಧ್ಯಕ್ಷರ ಪಟ್ಟಿಯಲ್ಲಿರುವ ಸದಸ್ಯರು: ಡಿ.ಎಸ್.ಆನಂದರೆಡ್ಡಿ ಬಾಬು, ವಿ.ಸುಬ್ರಹ್ಮಣ್ಯಾಚಾರಿ, ಎ.ಬಿ.ಮಂಜುನಾಥ್, ದೀಪ ಬಿ.ಕೆ., ಸತೀಶ್, ಸುಮಾ ಎಸ್., ಅಫ್ಜಲ್, ವೆಂಕಟೇಶಪ್ಪ ಸಿ., ನರಸಿಂಹಮೂರ್ತಿ, ಟಿ.ಜೆ.ಅಂಬರೀಷ್, ಎನ್.ಎಸ್.ಚಂದ್ರಶೇಖರ್. ಜು.22ರಂದು ನಗರಸಭೆ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಅಧ್ಯಕ್ಷರು ಮತ್ತು ಪೌರಾಯುಕ್ತರ ಸಮ್ಮುಖದಲ್ಲಿ 11 ನಗರಸಭಾ ಸದಸ್ಯರ ಹೆಸರನ್ನು ಎಲ್ಲಾ ಸದಸ್ಯರು ಒಪ್ಪಿ ಸರ್ವಾನುಮತದಿಂದ ತೀರ್ಮಾನಿಸಿದ್ದಾರೆ. ಈ ಆಯ್ಕೆಯಾದ ಸದಸ್ಯರನ್ನು ಪೌರಾಯುಕ್ತರು ಸಭೆಯಲ್ಲಿ ಓದಿ, ರೆಕಾರ್ಡ್ ಮಾಡಿದ್ದಾರೆ. ಆದರೆ ಇದುವರೆಗೂ ಸ್ಥಾಯಿ ಸಮಿತಿಗೆ ಅಧ್ಯಕ್ಷರನ್ನು ನೇಮಿಸಿಲ್ಲ. ಆದ್ದರಿಂದ ತಾವು ಕೂಡಲೇ ನಿಯಮಾನುಸಾರ ತುರ್ತಾಗಿ ಸ್ಥಾಯಿ ಸಮಿತಿ ಅಧ್ಯಕ್ಷರನ್ನು ನೇಮಿಸಬೇಕು ಎಂದು ಆನಂದರೆಡ್ಡಿ ಹಾಗೂ ಅವರ ಪಟ್ಟಿಯಲ್ಲಿರುವ ಸದಸ್ಯರು ಕೋರಿದ್ದಾರೆ.

2013ರಿಂದಲೂ ನಗರಸಭೆ ಸ್ಥಾಯಿ ಸಮಿತಿಯ ಅಧ್ಯಕ್ಷ ಸ್ಥಾನ ಖಾಲಿ ಇದೆ. ಈ ಹಿಂದೆ ನಡೆದ ನಗರಸಭೆಯ ಹಲವು ಸಾಮಾನ್ಯ ಸಭೆಗಳಲ್ಲಿ ಸ್ಥಾಯಿ ಸಮಿತಿ ರಚನೆಯ ವಿಚಾರ ತೀವ್ರ ಚರ್ಚೆಗೆ ಕಾರಣವಾಗಿದೆ. ನಗರಸಭೆಯ ಅಧಿಕಾರದ ಅವಧಿ ಮೂರು ತಿಂಗಳು ಇರುವುದರಿಂದ ಮುಂದಿನ ದಿನಗಳಲ್ಲಿ ಆಯ್ಕೆ ಆಗುವುದಿಲ್ಲ ಎನ್ನುವ ಮಾತುಗಳು ನಗರಸಭೆಯ ಅಂಗಳದಿಂದ ಕೇಳುತ್ತಿದ್ದವು. ಆದರೆ ಈಗ ಸ್ಥಾಯಿ ಸಮಿತಿ ಅಧ್ಯಕ್ಷರ ನೇಮಕದ ವಿಚಾರವಾಗಿ ನಗರಸಭೆಯ ವಾತಾವರಣ ಕಾವೇರಿದೆ.

ನಗರಸಭೆಯ ಸ್ಥಾಯಿ ಸಮಿತಿ ಅಧ್ಯಕ್ಷರು, ಅಧ್ಯಕ್ಷರಿಗೆ ಸಮಾನ ಎನ್ನುವ ರೀತಿಯಲ್ಲಿಯೇ ಅಧಿಕಾರ ಹೊಂದಿರುವರು. ನೇಮಕದಿಂದ ಸುಗಮ ಆಡಳಿತಕ್ಕೂ ಅವಕಾಶವಾಗುತ್ತದೆ.

ಚಿಕ್ಕಬಳ್ಳಾಪುರ ನಗರಸಭೆಯ ಸಾಮಾನ್ಯ ಸಭೆಗಳಲ್ಲಿ ಸ್ಥಾಯಿ ಸಮಿತಿ ಅಧ್ಯಕ್ಷರ ಆಯ್ಕೆಗೆ ಸಂಬಂಧಿಸಿದಂತೆ ತೀವ್ರ ಜಟಾಪಟಿಗಳು ಸಹ ನಡೆದಿವೆ. ಸ್ಥಾಯಿ ಸಮಿತಿಗೆ ಯಾರು ಅಧ್ಯಕ್ಷರಾಗುತ್ತಾರೆ ಎನ್ನುವ ಕುತೂಹಲ ತೀವ್ರವಾಗಿದೆ. ಅಕ್ಟೋಬರ್‌ಗೆ ಕೊನೆಯಾಗಲಿದೆ ನಗರಸಭೆ ಅವಧಿ 2013ರಿಂದಲೂ ನಗರಸಭೆ ಸ್ಥಾಯಿ ಸಮಿತಿಗೆ ನೇಮಕವಾಗದ ಅಧ್ಯಕ್ಷ ಯಾರು ಅಧ್ಯಕ್ಷರಾಗುತ್ತಾರೆ ಎನ್ನುವ ಕುತೂಹಲ

**ಜು.22ರಂದು ನಡೆದ ಸಾಮಾನ್ಯ ಸಭೆ**

**ಸಾಮಾನ್ಯ ಸಭೆಯಲ್ಲಿ ಚರ್ಚೆಯೇ ಆಗಿಲ್ಲ ಜು.22ರಂದು ನಡೆದ ಸಾಮಾನ್ಯ ಸಭೆಯಲ್ಲಿ ಸ್ಥಾಯಿ ಸಮಿತಿ ರಚನೆಗೆ ಸಂಬಂಧಿಸಿದಂತೆ ಯಾವುದೇ ಚರ್ಚೆಗಳು ನಡೆದಿಲ್ಲ. ಹೊಸದಾಗಿ ಸಾಮಾನ್ಯ ಸಭೆ ಕರೆಯಲಿ. ಆ ಸಭೆಯಲ್ಲಿ ಎಲ್ಲಾ ಸದಸ್ಯರ ಜೊತೆ ಚರ್ಚೆಗಳು ನಡೆದ ನಂತರ ಆಯ್ಕೆ ಮಾಡಬೇಕು. ಆದರೆ ಅವರಿಷ್ಟಕ್ಕೆ ಸಂಬಂಧಿಸಿದಂತೆ ಪಟ್ಟಿ ಮಾಡಿದರೆ ಹೇಗೆ ಎಂದು ನಗರಸಭೆ ಸದಸ್ಯ ಮಟಮಪ್ಪ ಅಸಮಾಧಾನ ವ್ಯಕ್ತಪಡಿಸಿದರು. ಎರಡೂ ಪಟ್ಟಿಗಳು ಸಹ ಬೋಗಸ್ ಆಗಿವೆ. ಒಣಪ್ರತಿಷ್ಠೆಗಳನ್ನು ಬಿಟ್ಟು ಕಾನೂನು ಪ್ರಕಾರ ನಡೆಯಬೇಕು ಎಂದು ಆಗ್ರಹಿಸಿದರು.**

---

# ಭಾರತ ಯುವ ಜನರ ದೇಶ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ತುಮಕೂರು**

ಭಾರತದಲ್ಲಿ ಯುವಕರು ದೊಡ್ಡ ಸಂಖ್ಯೆಯಲ್ಲಿದ್ದಾರೆ. ಜಗತ್ತಿನ ಇತರೆ ಯಾವುದೇ ರಾಷ್ಟ್ರದಲ್ಲೂ ಇಷ್ಟೊಂದು ಸಂಖ್ಯೆಯ ಯುವ ಸಮೂಹ ಇಲ್ಲವಾಗಿದೆ. ಈ ಮಾನವ ಸಂಪತ್ತನ್ನು ದೇಶದ ಅಭಿವೃದ್ಧಿಗೆ ಬಳಸಿಕೊಳ್ಳಬೇಕಿದೆ ಎಂದು ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ ಸಲಹೆ ಮಾಡಿದರು. ತಾಲ್ಲೂಕಿನ ಕೆ.ಪಾಲಸಂದ್ರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಿತ್ತಗಾನಹಳ್ಳಿಯಲ್ಲಿ ಗುರುವಾರ ನಡೆದ ಶನೇಶ್ವರಸ್ವಾಮಿ, ಮಹಾಗಣಪತಿ, ನವಗ್ರಹ ಮೂರ್ತಿಗಳ ಪ್ರಾಣ ಪ್ರತಿಷ್ಠಾಪನೆ, ನೂತನ ದೇವಾಲಯ ಉದ್ಘಾಟನೆ, ಗೋಪುರ ಕಳಸ ಪ್ರತಿಷ್ಠಾಪನಾ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ವಿಶ್ವದ ಇತರೆ ದೇಶಗಳಿಗಿಂತ ಭಾರತದಲ್ಲಿ ಯುವಕರ ಸಂಖ್ಯೆ ಹೆಚ್ಚಾಗಿದೆ. ಯುವಜನರು ಹಿರಿಯರ ಮಾರ್ಗದರ್ಶನದಲ್ಲಿ ದೇಶದ ಅಭ್ಯುದಯಕ್ಕೆ ಸಂಕಲ್ಪ ಮಾಡಬೇಕು. ಸಾಮಾಜಿಕ ಸೇವಾ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಬೇಕು. ದೇಶ, ನಾಡು, ಸಮಾಜದ ರಕ್ಷಣೆ, ಬೆಳವಣಿಗೆಗೆ ಕೈ ಜೋಡಿಸಬೇಕು ಎಂದು ಹೇಳಿದರು.

25 ವರ್ಷಗಳ ಹಿಂದೆ ರಾಜ್ಯದಲ್ಲಿ ಸುಮಾರು 5 ಕೋಟಿ ಜನ ಸಂಖ್ಯೆ ಇದ್ದ ಸಮಯದಲ್ಲಿ ಬಾಲಗಂಗಾಧರನಾಥ ಸ್ವಾಮೀಜಿ 5 ಕೋಟಿ ವೃಕ್ಷ ಯೋಜನೆಯಡಿ ಗಿಡ ನೆಡುವ ಸಂಕಲ್ಪ ಮಾಡಿದ್ದರು. ಜೀವಸಂಕುಲ ಉಳಿಯಬೇಕಾದರೆ ಪರಿಸರ ಸಂರಕ್ಷಿಸಬೇಕಿದೆ. ಉಸಿರಾಡುವ ಆಮ್ಲಜನಕ ಗಿಡ, ಮರಗಳಿಂದಲೇ ಬರಬೇಕು. ಹಸಿರು ಸಂಪತ್ತು ಹೆಚ್ಚಿಸುವ ಜವಾಬ್ದಾರಿ ವಹಿಸಿಕೊಳ್ಳಬೇಕು ಎಂದು ತಿಳಿಸಿದರು. ಶಾಸಕ ಬಿ.ಸುರೇಶ್ ಗೌಡ, 'ದೇವಸ್ಥಾನಗಳು ಆಯಾ ಗ್ರಾಮಗಳ ಭಕ್ತಿ ಕೇಂದ್ರಗಳಾಗಬೇಕು.

ಊರಿನ ಎಲ್ಲರೂ ಪರಸ್ಪರ ಕಷ್ಟಸುಖಗಳಿಗೆ ಸ್ಪಂದಿಸುತ್ತಾ ಒಟ್ಟಾಗಿ ಬಾಳಬೇಕು. ದ್ವೇಷ, ಅಸೂಯೆ ಮರೆತರೆ ಶಾಂತಿ, ನೆಮ್ಮದಿಯಿಂದ ಬದುಕಬಹುದು' ಎಂದರು. ಗ್ರಾಮ ಪಂಚಾಯಿತಿ ಅಧ್ಯಕ್ಷೆ ಕವಿತಾ ಚಂದ್ರಶೇಖರ್, ಸದಸ್ಯೆ ಜಯಮ್ಮ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಗೂಳೂರು ಶಿವಕುಮಾರ್, ಬಿಜೆಪಿ ಮುಖಂಡರಾದ ಶಂಕರಣ್ಣ, ಸುಮಿತ್ರಾದೇವಿ, ರೇಣುಕಮ್ಮ, ಮುಖಂಡರಾದ ಬಸವರಾಜು, ಯತೀಶ್, ಮಧುಸೂದನ್, ಜಯಣ್ಣ, ಪುಷ್ಪಲತಾ, ಗಿರೀಶ್, ಉಮಾದೇವಿ, ಲಕ್ಷ್ಮಿದೇವಮ್ಮ, ಮಂಜುಳಾ ಪಾಲ್ಗೊಂಡಿದ್ದರು. ದೇವಸ್ಥಾನಕ್ಕೆ ಭೂಮಿ ದಾನ ಕೊಟ್ಟಿರುವ ಗಂಗಮ್ಮ, ಗಂಗನರಸಯ್ಯ, ಸಿದ್ದಲಿಂಗಯ್ಯ, ಗೌರಮ್ಮ, ಚಿಕ್ಕರಂಗಯ್ಯ ಕುಟುಂಬದವರು, ದಾನಿಗಳನ್ನು ಗೌರವಿಸಲಾಯಿತು.

---

# ಗ್ಯಾರಂಟಿಗೆ ಪರಿಶಿಷ್ಟರ ಹಣ; ಆಕ್ರೋಶ

• **ಉದಯವಾಹಿನಿ, ಕೋಲಾರ**



ಉದಯವಾಹಿನಿ ಚಿತ್ರ

ರಾಜ್ಯ ಕಾಂಗ್ರೆಸ್ ಸರ್ಕಾರವು ಗ್ಯಾರಂಟಿ ಯೋಜನೆಗಳಿಗೆ ಎಸ್‌ಸಿಪಿ–ಟಿಎಸ್‌ಪಿ ಅನುದಾನವನ್ನು ಬಳಸಿಕೊಳ್ಳಬಾರದೆಂದು ಒತ್ತಾಯಿಸಿ ಆಮ್ ಆದ್ಮಿ ಪಕ್ಷದ ಕಾರ್ಯಕರ್ತರು ಜಿಲ್ಲಾಡಳಿತ ಭವನದ ಎದುರು ಪ್ರತಿಭಟನೆ ನಡೆಸಿದರು.

ಆಮ್ ಆದ್ಮಿ ಪಾರ್ಟಿ ಜಿಲ್ಲಾ ಅಧ್ಯಕ್ಷ ವೆಂಕಟಾಚಲಪತಿ ಮಾತನಾಡಿ, 'ಪ್ರಸ್ತುತ ಸಾಲಿನ ಬಜೆಟ್‌ನಲ್ಲಿ ಪರಿಶಿಷ್ಟ ಸಮುದಾಯಗಳ ಅಭಿವೃದ್ಧಿಗೆ ಮೀಸಲು ಇಟ್ಟಿದ್ದ 42 ಸಾವಿರ ಕೋಟಿ ಗ್ಯಾರಂಟಿ ಯೋಜನೆಗಳಿಗೆ ಸುಮಾರು 11 ಸಾವಿರ ಕೋಟಿ ಬಳಸಿಕೊಳ್ಳಲು ಸರ್ಕಾರ ಮುಂದಾಗಿರುವುದು ಖಂಡನೀಯ' ಎಂದರು. ಯಾವುದೇ ಕಾರಣಕ್ಕೂ ದಲಿತರಿಗೆ ಮೀಸಲು ಇಟ್ಟಿರುವ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಬಾರದು. ಸಂವಿಧಾನದ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಆಶಯಗಳನ್ನು ಗೌರವಿಸಿ ದಲಿತರಿಗೆ ಮೀಸಲು ಇಟ್ಟಿರುವ ಹಣವನ್ನು ದಲಿತ ಸಮುದಾಯಗಳ ಅಭಿವೃದ್ಧಿಗೆ ಮಾತ್ರ ಬಳಸಬೇಕೆಂದು ಒತ್ತಾಯಿಸಿದರು.

ಬಳಿಕ ಹೆಚ್ಚುವರಿ ಜಿಲ್ಲಾಧಿಕಾರಿ ಎಸ್.ಎಂ.ಮಂಗಳಾ ಮೂಲಕ ಸರ್ಕಾರಕ್ಕೆ ಮನವಿ ರವಾನಿಸಿದರು.

ಪ್ರತಿಭಟನೆಯಲ್ಲಿ ಆಮ್ ಆದ್ಮಿ ಪಕ್ಷದ ರಾಜ್ಯ ಕಾರ್ಯದರ್ಶಿ ಬಾಲಕೃಷ್ಣ,ಜಿಲ್ಲಾ ಕಾರ್ಯದರ್ಶಿ ವಿಜಯಕುಮಾರ್, ಮುಖಂಡರಾದ ಶೇಷನ್, ಗೋಪಾಲ್, ವೇಣು ಗೋಪಾಲ್, ಖಾದೀರ್ ಬಾಷಾ ಸೇರಿದಂತೆ ಪಕ್ಷದ ಕಾರ್ಯಕರ್ತರು ಭಾಗವಹಿಸಿದ್ದರು.

---

## ವೇಮಗಲ್-ಕುರಗಲ್ ಪ.ಪಂ ಚುನಾವಣೆ; ಗೆಲುವಿಗಾಗಿ ಮೂರೂ ಪಕ್ಷದಿಂದ ಕಸರತ್ತು

• **ಉದಯವಾಹಿನಿ, ಕೋಲಾರ**


ಉದಯವಾಹಿನಿ ಚಿತ್ರ

ತಾಲ್ಲೂಕಿನ ವೇಮಗಲ್–ಕುರಗಲ್ ಪಟ್ಟಣ ಪಂಚಾಯಿತಿ ಚುನಾವಣೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಿದ್ದು, ಗೆಲುವಿಗಾಗಿ ಕಾಂಗ್ರೆಸ್ ಜೆಡಿಎಸ್–ಬಿಜೆಪಿ ಮೈತ್ರಿಕೂಟದಿಂದ ಭಾರಿ ಕಸರತ್ತು ನಡೆಯುತ್ತಿದೆ. ಆಗಸ್ಟ್ 17ರಂದು ನಡೆಯಲಿರುವ ಚುನಾವಣೆಗೆ ಆ.5ರವರೆಗೆ ನಾಮಪತ್ರ ಸಲ್ಲಿಕೆಗೆ ಅವಕಾಶವಿದೆ. ನಾಮಪತ್ರ ಸಲ್ಲಿಕೆ ಜೊತೆಗೆ ಭರ್ಜರಿ ಪ್ರಚಾರವೂ ಆರಂಭವಾಗಿದೆ. ಇತ್ತ ಕಾಂಗ್ರೆಸ್ ಹೈಕಮಾಂಡ್ 'ಎ' ಹಾಗೂ 'ಬಿ' ಫಾರಂ ಕೂಡ ರವಾನಿಸಿದೆ.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಲಕ್ಷ್ಮಿನಾರಾಯಣ ಹಾಗೂ ಕಾರ್ಯಾಧ್ಯಕ್ಷ ಊರುಬಾಗಿಲು ಶ್ರೀನಿವಾಸ್ 'ಎ' ಮತ್ತು 'ಬಿ' ಫಾರಂಗಳನ್ನು ಪಕ್ಷದ ಅಭ್ಯರ್ಥಿಗಳಿಗೆ ವಿತರಿಸಲು ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಉದಯಶಂಕರ್ ಅವರಿಗೆ ಹಸ್ತಾಂತರಿಸಿದರು. 'ಪಕ್ಷದ ನಿಷ್ಠಾವಂತ ಹಾಗೂ ಗೆಲ್ಲುವ ಅಭ್ಯರ್ಥಿಗಳನ್ನು ಕಣಕ್ಕಿಳಿಸಿ ಎಲ್ಲಾ 17 ವಾರ್ಡ್‌ಗಳಲ್ಲಿಯೂ ಕಾಂಗ್ರೆಸ್ ಪಕ್ಷ ಜಯಭೇರಿ ಬಾರಿಸಲು ಬದ್ಧತೆಯಿಂದ ಕೆಲಸ ಮಾಡಬೇಕು' ಎಂದು ಲಕ್ಷ್ಮಿನಾರಾಯಣ ಹಾಗೂ ಊರುಬಾಗಿಲು ಶ್ರೀನಿವಾಸ್ ಹೇಳಿದರು. 'ಶಿಷ್ಟಾಚಾರದ ಪ್ರಕಾರ ಅಭ್ಯರ್ಥಿಗಳಿಗೆ ನೀಡಬೇಕಾದ ಫಾರಂಗಳನ್ನು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಿಗೆ ನೀಡಿದ್ದು, ಅವುಗಳನ್ನು ಇದೀಗ ಗ್ರಾಮಾಂತರ ಬ್ಲಾಕ್ ಅಧ್ಯಕ್ಷರಿಗೆ ಹಸ್ತಂತರಿಸಲಾಗಿದೆ' ಎಂದರು. 'ಕಾಂಗ್ರೆಸ್ ಪಕ್ಷ ಬಲಿಷ್ಠವಾಗಿದೆ. ಇಲ್ಲಿ ಕಣಕ್ಕಿಳಿಯುವ ಪಕ್ಷದ ಅಭ್ಯರ್ಥಿಗಳಿಗೆ ಸಚಿವ ಕೆ.ಎಚ್.ಮುನಿಯಪ್ಪ ಸೇರಿದಂತೆ ಪಕ್ಷದ ಎಲ್ಲಾ ಶಾಸಕರು, ಸಚಿವರ ಬೆಂಬಲವಿದೆ. ಮುಖಂಡರು, ಕಾರ್ಯಕರ್ತರು ಮೈಮರೆತು ಕೂರದೆ ಹಗಲಿರುಳು ಶ್ರಮಿಸಿ ಅಭ್ಯರ್ಥಿಗಳನ್ನು ಗೆಲ್ಲಿಸಿಕೊಂಡು ಬರಬೇಕು ಎಂದು ಹೇಳಿದರು. ಜಿಲ್ಲಾ ಕಾಂಗ್ರೆಸ್ ಎಸ್‌ಸಿ ಘಟಕದ ಅಧ್ಯಕ್ಷ ಕೆ.ಜಯದೇವ್, ಮುಖಂಡ ಸೋಮಶೇಖರ್ ಇದ್ದರು.

---

# ಕ್ಯಾಸಂಬಳ್ಳಿ ಮಜರಾ ಗುಟ್ಟಹಳ್ಳಿ ಬಳಿ ಪಿಯು ಕಾಲೇಜಿಗೆ ಜಾಗ ಗುರುತು

• **ಉದಯವಾಹಿನಿ, ಕೆಜಿಎಫ್**


ಉದಯವಾಹಿನಿ ಚಿತ್ರ

ಕ್ಯಾಸಂಬಳ್ಳಿ ಮಜರಾ ಗುಟ್ಟಹಳ್ಳಿ ಬಳಿ ಪಿಯು ಕಾಲೇಜಿಗೆ ಮಂಜೂರಾಗಿರುವ ಜಾಗವನ್ನು ಸರ್ವೆ ಇಲಾಖೆ ಅಧಿಕಾರಿಗಳು ಸರ್ವೆ ನಡೆಸಿ ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಹಸ್ತಾಂತರಿಸಿದರು. ಕ್ಯಾಸಂಬಳ್ಳಿ ಸುತ್ತಮುತ್ತ ಇರುವ ಗ್ರಾಮಗಳಲ್ಲಿ ಪ್ರೌಢಶಾಲೆ ಹಂತದ ವಿದ್ಯಾಭ್ಯಾಸ ಮುಗಿಸುವ ವಿದ್ಯಾರ್ಥಿಗಳು ನಂತರದ ವಿದ್ಯಾಭ್ಯಾಸಕ್ಕೆ ದೂರದ ಊರುಗಳಿಗೆ ಹೋಗಬೇಕಿತ್ತು. ಈ ಹಿನ್ನೆಲೆಯಲ್ಲಿ ಕ್ಯಾಸಂಬಳ್ಳಿಯಲ್ಲಿ ಪಿಯು ಕಾಲೇಜು ಪ್ರಾರಂಭಮಾಡಬೇಕು ಎಂಬ ಬೇಡಿಕೆ ಬಹಳ ವರ್ಷಗಳಿಂದ ಇತ್ತು. 2022ರಲ್ಲಿ ಕಾಲೇಜಿಗೆ ಮಜರಾ ಗುಟ್ಟಹಳ್ಳಿ ಬಳಿ ಸರ್ವೆ ನಂಬರ್ 146ರಲ್ಲಿ 7 ಎಕರೆ 3 ಗುಂಟೆ ಜಾಗವನ್ನು ಮಂಜೂರು ಮಾಡಲಾಗಿತ್ತು. ಅದರ ಪಕ್ಕದಲ್ಲಿಯೇ ಇರುವ ಸರ್ವೆ ನಂಬರ್ 5ರಲ್ಲಿ ಐದು ಎಕರೆ ಜಮೀನನ್ನು ಮಂಜೂರು ಮಾಡಲಾಗಿತ್ತು. ಜೊತೆಗೆ ಸರ್ವೆ ನಂಬರ್ 121ರಲ್ಲಿ ಸಹ ಶಾಲಾ ಶಿಕ್ಷಣ ಇಲಾಖೆಗೆ ಜಾಗ ಮಂಜೂರು ಮಾಡಲಾಗಿತ್ತು. ತಾಲ್ಲೂಕು ಸರ್ವೆ ಅಧಿಕಾರಿ ಮೌಲಾಖಾನ್, ಪ್ರಾಂಶುಪಾಲ ಮಂಜುನಾಥ್, ಕ್ಯಾಸಂಬಳ್ಳಿ ರೆವಿನ್ಯೂ ಇನ್‌ಸ್ಪೆಕ್ಟರ್ ಮಂಜುನಾಥ್, ಕಾರ್ಯದರ್ಶಿ ರೋಜಾ, ಶಾಲಾ ಶಿಕ್ಷಣ ಇಲಾಖೆ ಸಿಬ್ಬಂದಿ ಈ ಸಂದರ್ಭದಲ್ಲಿ ಹಾಜರಿದ್ದರು.

**ಶಾಲಾ ಶಿಕ್ಷಣ ಇಲಾಖೆ ಕೋರಿಕೆಯಂತೆ ಜಾಗದ ಸರ್ವೆ ನಡೆಸಿ ಶಾಲಾ ಶಿಕ್ಷಣ ಇಲಾಖೆಗೆ ಹಸ್ತಾಂತರ ಮಾಡಲಾಯಿತು. ಕಾಲೇಜಿಗೆ ಮಂಜೂರಾದ ಸ್ಥಳದಲ್ಲಿ ಗ್ರಾಮ ಪಂಚಾಯಿತಿಯಿಂದ ಗೋಕುಂಟೆ ನಿರ್ಮಾಣ ಮಾಡಲಾಗಿದೆ. ಕಾಲೇಜು ಜಾಗದಲ್ಲಿ ನಿರ್ಮಾಣ ಮಾಡಲು ಹೇಗೆ ಅನುಮತಿ ನೀಡಲಾಯಿತು ಎಂದು ಸ್ಥಳದಲ್ಲಿದ್ದ ಮುಖಂಡ ಸೋಮಸುಂದರ ರೆಡ್ಡಿ ಅಧಿಕಾರಿಗಳನ್ನು ಪ್ರಶ್ನಿಸಿದರು.**

---

# ಡ್ರಗ್ಸ್ ಮಾಫಿಯಾ: ರಾಜ್ಯ ಗೃಹ ಇಲಾಖೆಯ ವೈಫಲ್ಯ

• **ಉದಯವಾಹಿನಿ, ಚಾಮರಾಜನಗರ**

ಮೈಸೂರಿನಲ್ಲಿ ಡ್ರಗ್ಸ್ ತಯಾರಿಕಾ ಘಟಕ ಪತ್ತೆಯಾಗಿರುವುದು ರಾಜ್ಯದ ಗೃಹ ಇಲಾಖೆಯ ವೈಫಲ್ಯಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದು ಚೂಡಾ ಮಾಜಿ ಅಧ್ಯಕ್ಷ ಕುಲಗಾಣ ಶಾಂತಮೂರ್ತಿ ಟೀಕಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತವರು ಜಿಲ್ಲೆಯಲ್ಲಿ ಡ್ರಗ್ಸ್ ತಯಾರಿಕ ಘಟಕ ಪತ್ತೆಯಾಗಿರುವುದು ಆತಂಕಕಾರಿ ವಿಚಾರ. ಮಹಾರಾಷ್ಟ್ರ ಪೊಲೀಸರು ಜಾಲ ಪತ್ತೆಹಚ್ಚಿದ್ದು ರಾಜ್ಯ ಪೊಲೀಸ್ ಇಲಾಖೆ ಮತ್ತು ಗೃಹ ಇಲಾಖೆಯ ವೈಫಲ್ಯತೆಯನ್ನು ಎತ್ತಿ ತೋರಿಸುತ್ತದೆ. ರಾಜ್ಯದಲ್ಲಿ ವ್ಯಾಪಕವಾಗಿ ಡ್ರಗ್ಸ್ ಮಾರಾಟ ನಡೆಯುತ್ತಿರುವುದು ನಾಗರಿಕರಲ್ಲಿ ಭಯವನ್ನುಂಟು ಮಾಡಿದೆ. ಹದಿಹರೆಯದ ಯುವಕ ಯುವತಿಯರು ಮಾದಕ ವಸ್ತುಗಳ ವ್ಯಸನಿಗಳಾಗುವ ಆತಂಕ ಎದುರಾಗಿದೆ. ದೇಶದ ಭವಿಷ್ಯ ರೂಪಿಸುವ ಯುವ ಸಮುದಾಯವನ್ನು ದುಶ್ಚಟಗಳಿಗೆ ಬಲಿಯಾಗುತ್ತಿರುವುದು ಬೇಸರದ ಸಂಗತಿ ಎಂದು ಶಾಂತಮೂರ್ತಿ ದೂರಿದ್ದಾರೆ.

ಮೂಲಭೂತವಾದಿ ಸಂಘಟನೆಗಳು ನಾರ್ಕೋಟಿಕ್ ಜಿಹಾದ್ ಮೂಲಕ ಯುವಸಮುದಾಯವನ್ನು ಬಲಿತೆಗೆದುಕೊಳ್ಳಲು ಯತ್ನಿಸುತ್ತಿದ್ದು ಇಂತಹ ಹೀನ ಕೃತ್ಯವನ್ನು ಪಕ್ಷಾತೀತವಾಗಿ, ಜಾತ್ಯತೀತವಾಗಿ ವಿರೋಧಿಸಬೇಕಾಗಿದೆ. ಮಕ್ಕಳ ಭವಿಷ್ಯ ಹಾಳಾಗದಂತೆ ಎಚ್ಚರವಹಿಸಬೇಕಾಗಿದೆ. ಡ್ರಗ್ಸ್ ಮಾಫಿಯಾದಲ್ಲಿ ಭಾಗಿಯಾಗಿರುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು.

ಆರೋಪಿಗಳ ಹಿಂದೆ ಪ್ರಬಲರು, ದೇಶದ್ರೋಹಿ ಸಂಘಟನೆಗಳ ಕೈವಾಡ ಶಂಕೆ ಇದ್ದು ತನಿಖೆ ನಡೆಸಬೇಕು. ಡ್ರಗ್ಸ್ ತಯಾರಿಕಾ ಘಟಕ ನಿರ್ಮಾಣದ ಹಿಂದಿರುವ ಎಲ್ಲರಿಗೂ ಶಿಕ್ಷೆಯಾಗಬೇಕು. ಡ್ರಗ್ಸ್ ದೇಶದ ಯಾವ ಭಾಗಗಳಿಗೆ ಸರಬರಾಜಾಗುತ್ತಿತ್ತು, ಪೂರೈಕೆದಾರರು ಯಾರು ಎಂಬ ನಿಟ್ಟಿನಲ್ಲಿ ಸಮಗ್ರ ತನಿಖೆ ನಡೆಯಬೇಕು. ರಾಷ್ಟ್ರದ ಅಂತರಿಕ ಸುರಕ್ಷತೆಗೆ ಆತಂಕ ಎದುರಾಗಿರುವ ಹಿನ್ನೆಲೆಯಲ್ಲಿ ಕೇಂದ್ರ ಗ್ರಹ ಇಲಾಖೆ ಮಧ್ಯಪ್ರವೇಶಿಸಿ ಸಮಗ್ರ ತನಿಖೆ ನಡೆಸಬೇಕು ಎಂದು ಶಾಂತಮೂರ್ತಿ ಕುಲಗಾಣ ಒತ್ತಾಯಿಸಿದ್ದಾರೆ.

---

# ಸೈಬರ್ ಅಪರಾಧ ಹೆಚ್ಚಳ ಎಚ್ಚರಿಕೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಶ್ರೀನಿವಾಸಪುರ**

ಇತ್ತೀಚಿನ ದಿನಗಳಲ್ಲಿ ಸೈಬರ್ ಅಪರಾಧ ಪ್ರಕರಣಗಳು ಹೆಚ್ಚಾಗುತ್ತಿದ್ದು, ಗ್ರಾಹಕರು ಯಾವುದೇ ಕಾರಣಕ್ಕೂ ತಮ್ಮ ಬ್ಯಾಂಕ್ ಖಾತೆಗೆ ಸಂಬಂಧಿಸಿದ ಮಾಹಿತಿಯನ್ನು ಇತರರ ಜೊತೆಗೆ ಹಂಚಿಕೊಳ್ಳಬಾರದೆಂದು ಜಿಲ್ಲಾ ಲೀಡ್ ಬ್ಯಾಂಕ್‌ನ ಮಹದೇವ್ ಎಸ್.ಜೋಶಿ ಹೇಳಿದರು. ತಾಲ್ಲೂಕಿನ ಲಕ್ಷ್ಮಿಪುರ ಕ್ರಾಸ್‌ನಲ್ಲಿ ಜಿಲ್ಲಾ ಲೀಡ್ ಬ್ಯಾಂಕ್ ಹಾಗೂ ಕೆನರಾ ಬ್ಯಾಂಕ್ ಶಾಖೆಯಿಂದ ಹಮ್ಮಿಕೊಂಡಿದ್ದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಾಮಾಜಿಕ ಭದ್ರತಾ ಯೋಜನೆಗಳ ಅರಿವು ಸಭೆಯಲ್ಲಿ ಮಾತನಾಡಿದರು.

**ಬ್ಯಾಂಕ್‌ನ ಮಹದೇವ್ ಎಸ್.ಜೋಶಿ ಹೇಳಿಕೆ**

ಕಾರ್ಯಕ್ರಮದಲ್ಲಿ ಕೆನರಾ ಬ್ಯಾಂಕ್ ಬೆಂಗಳೂರು ವೃತ್ತದ ಡಿಜಿಎಂ ಖಂಡೇಲ್ ವಾಲ್, ಕೋಲಾರ ಪ್ರಾದೇಶಿಕ ಕಚೇರಿಯ ಎಜಿಎಂ ಅಶೋಕ್ ಕುಮಾರ್, ಹಣಕಾಸು ಆರ್ಥಿಕ ಸಲಹೆಗಾರ ಜಿ ವೆಂಕಟೇಶ್, ನೆಲವಾಂಕಿ ಪಿಡಿಒ ವಿಜಯಲಕ್ಷ್ಮಿ, ಕೆನರಾ ಬ್ಯಾಂಕ್ ಲಕ್ಷ್ಮೀಪುರ ಕ್ರಾಸ್ ಶಾಖೆ ವ್ಯವಸ್ಥಾಪಕಿ ನಿಹಾರಿಕಾ, ನೆಲವಾಗಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಕೆ.ಎನ್.ರಾಧಮ್ಮ, ಜಿಲ್ಲಾ ಲೀಡ್ ಬ್ಯಾಂಕ್ ಅಧಿಕಾರಿ ಆನಂದ್ ಭಾಗವಹಿಸಿದ್ದರು.

**ಬ್ಯಾಂಕಿನಲ್ಲಿ ಖಾತೆ ಹೊಂದಿರುವ ಪ್ರತಿಯೊಬ್ಬ 18 ರಿಂದ 50 ವರ್ಷ ವಯೋಮಿತಿಯ ಗ್ರಾಹಕರು ಪ್ರಧಾನ ಮಂತ್ರಿ ಜೀವನ ಜ್ಯೋತಿ ಭೀಮಾ ಯೋಜನೆಯನ್ನು ಕಡ್ಡಾಯವಾಗಿ ಮಾಡಿಸಬೇಕು. ಇದರಿಂದ ಖಾತೆದಾರರ ನಾಮಿನಿಗೆ ರೂ. 2 ಲಕ್ಷ ದೊರೆಯುತ್ತದೆ. ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆ ಹೊಂದಿದ ಗ್ರಾಹಕರು ಅಪಘಾತದಲ್ಲಿ ಮರಣ ಹೊಂದಿದ ಪಕ್ಷದಲ್ಲಿ ನಾಮಿನಿಗೆ ರೂ. 2 ಲಕ್ಷ ಹಾಗೂ ಶೇ 50ರಷ್ಟು ಅಂಗವಿಕಲರಾದಲ್ಲಿ ರೂ. 1 ಲಕ್ಷ ಸಿಗುತ್ತದೆ. ಗ್ರಾಹಕರ ಬಳಿ ಹಳೆಯ ರೂ. 2 ಸಾವಿರದ ನೋಟುಗಳು ಇದ್ದಲ್ಲಿ ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾದಲ್ಲಿ ಬದಲಾವಣೆ ಮಾಡಿಕೊಳ್ಳಬಹುದೆಂದು ತಿಳಿಸಿದರು.**

---

# ಯಾವುದೇ ಹಗರಣ ನಡೆದಿಲ್ಲ, ಯಾರೇ ತನಿಖೆ ಮಾಡಿದ್ರು ಕ್ಲೀನ್‌ಚಿಟ್ ಸಿಗತ್ತೆ?

## ರಾಜಕೀಯಕ್ಕೆ ಬಾರದ ತಮ್ಮ ತಾಯಿಯ ವಿರುದ್ಧವೂ ಕುತಂತ್ರ ನಡೆದಿದ್ದು, ಇದರಿಂದ ಅವರಿಗೆ ನೋವಾಗಿದೆ ಎಂದು ಯತೀಂದ್ರ ಹೇಳಿಕೆ

• **ಉದಯವಾಹಿನಿ, ಮೈಸೂರು**


ಉದಯವಾಹಿನಿ ಚಿತ್ರ

ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ಅವರಿಗೆ ಪಿ.ಎನ್ .ದೇಸಾಯಿ ಆಯೋಗ ಕ್ಲೀನ್ ಚಿಟ್ ನೀಡಿದೆ. ಈ ಬಗ್ಗೆ ಎಂಎಲ್ಸಿ ಡಾ.ಯತೀಂದ್ರ ಅವರು ಪ್ರತಿಕ್ರಿಯಿಸಿದ್ದಾರೆ. ಮುಡಾದಲ್ಲಿ ಯಾವುದೇ ಹಗರಣ ನಡೆದಿಲ್ಲ. ಯಾರು ತನಿಖೆ ಮಾಡಿದರೂ ಕ್ಲೀನ್ ಚಿಟ್ ಸಿಗುತ್ತದೆ ಎಂದು ಹೇಳಿದ್ದಾರೆ. ಸುಪ್ರೀಂಕೋರ್ಟ್ ಕೂಡ ಇ.ಡಿ.ಗೆ ಛಾಟಿ ಬೀಸಿತ್ತು. ಹೈಕಮಾಂಡ್‌ಗೂ ಈ ಬಗ್ಗೆ ಸ್ಪಷ್ಟ ಮಾಹಿತಿ ಇದೆ. ರಾಜಕೀಯಕ್ಕೆ ಬಾರದ ತಮ್ಮ ತಾಯಿಯ ವಿರುದ್ಧವೂ ಕುತಂತ್ರ ನಡೆದಿದ್ದು, ಇದರಿಂದ ಅವರಿಗೆ ನೋವಾಗಿದೆ ಎಂದು ಯತೀಂದ್ರ ಹೇಳಿದ್ದಾರೆ.

**ಪೊಲೀಸರಿಗೆ ಸ್ಟ್ರಿಕ್ಟ್ ಆಗಿ ಸೂಚನೆ**

**ಸಿಎಂ ಸಿಲುಕಿಸುವ ಕುತಂತ್ರ:** ಮುಡಾ ಪ್ರಕರಣದಲ್ಲಿ ತಪ್ಪು ರೀತಿಯಲ್ಲಿ ಸಿಎಂ ಸಿದ್ದರಾಮಯ್ಯ ಅವರನ್ನು ಸಿಕ್ಕಿ ಹಾಕಿಸುವ ಕುತಂತ್ರ ಮಾಡಿದರು. ಈಗ ಸತ್ಯ ಹೊರ ಬರುತ್ತಿದೆ. ಸತ್ಯ ಯಾವಾಗಲೂ ಗೆಲ್ಲುತ್ತದೆ ಎಂದು ಯತೀಂದ್ರ ಅವರು ಒತ್ತಾಯಿಸಿದರು.

**ಸ್ನೇಹಮಯಿ ಕೃಷ್ಣ ಹೇಳಿದ್ದೇನು?:** ದೇಸಾಯಿ ಅವರು ಸರ್ಕಾರಕ್ಕೆ ವರದಿ ಸಲ್ಲಿಸಿದ್ದಾರೆ ಅಷ್ಟೇ. ಕ್ಲೀನ್ ಚಿಟ್ ನೀಡಿರುವ ಬಗ್ಗೆ ಸರ್ಕಾರ ತಿಳಿಸಬೇಕಿದೆ. ನನ್ನ ಬಳಿ ಇರುವ ದಾಖಲೆಗಳ ಪ್ರಕಾರ ಕ್ಲೀನ್ ಚಿಟ್ ನೀಡಲು ಸಾಧ್ಯವಿಲ್ಲ. ನಾನು ನೀಡಿರುವ ದಾಖಲೆಗಳನ್ನು ನ್ಯಾಯಾಧೀಶರು ಪರಿಗಣಿಸುವ ಸಾಧ್ಯತೆ ಇದೆ. ಕ್ಲೀನ್ ಚಿಟ್ ನೀಡಿದರೂ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. ಯಾಕೆಂದರೆ ಪ್ರಕರಣದ ವಿಚಾರಣೆ ನ್ಯಾಯಾಲಯದಲ್ಲಿ ನಡೆಯುತ್ತಿದೆ. ವರದಿ ಸಲ್ಲಿಕೆಯಾಗಿದೆ. ಆದಷ್ಟು ಬೇಗ ಸರ್ಕಾರ ಸಾರ್ವಜನಿಕರಿಗೆ ವರದಿಯನ್ನು ಬಹಿರಂಗಗೊಳಿಸಬೇಕು. ಈಗಲೂ ನನಗೆ ನ್ಯಾಯ ದೊರೆಯುವುದೆಂಬ ವಿಶ್ವಾಸವಿದೆ. ವರದಿ ಬಿಡುಗಡೆಯಾಗದೇ ಈಗಲೇ ಏನನ್ನೂ ಹೇಳಲಾಗದು. ಸಿಎಂಗೆ ಕ್ಲೀನ್ ಚಿಟ್ ಎಂದು ಬಿಂಬಿಸುವ ಮೂಲಕ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಾರೆ. ವರದಿ ಬಹಿರಂಗಗೊಳ್ಳದೆ ಹೇಗೆ ಕ್ಲೀನ್ ಚಿಟ್ ನೀಡಲು ಸಾಧ್ಯ. ವಸ್ತುನಿಷ್ಠ ತನಿಖೆಯ ಬಗ್ಗೆ ವರದಿ ಪ್ರಕಟವಾದ ಬಳಿಕವೇ ತಿಳಿಸಲಾಗುವುದು ಎಂದು ದೂರುದಾರ ಸ್ನೇಹಮಯಿ ಕೃಷ್ಣ ಮೈಸೂರಿನಲ್ಲಿ ಹೇಳಿದ್ದಾರೆ.

**ನಿಮ್ಮ ಋಣ ತೀರಿಸಲಾಗದು:** ವರುಣ ಕ್ಷೇತ್ರದ ಜನರು ನಮಗೆ ರಾಜಕೀಯವಾಗಿ ಶಕ್ತಿ ಕೊಟ್ಟಿದ್ದಾರೆ ನಮ್ಮ ತಂದೆ ಅವರನ್ನು ಸಿಎಂ ಮಾಡಿದ್ದಾರೆ. ನನ್ನನ್ನೂ ಶಾಸಕನಾಗಿ ಮಾಡಿದ್ದರು. ಈ ಹಿನ್ನೆಲೆಯಲ್ಲಿ ನಿನ್ನೆ ವರುಣ ಕ್ಷೇತ್ರದ ಜನರ ಋಣ ತೀರಿಸಲು ಆಗೋದಿಲ್ಲ ಎಂದು ಹೇಳುತ್ತಾ ಭಾವುಕರಾದ ಯತೀಂದ್ರ ಸಿದ್ದರಾಮಯ್ಯ.

ಮೈಸೂರಿನ ಎಲ್ಲಾ ಶಾಸಕರು ನನಗೆ ಆತ್ಮೀಯರು ಹಾಗಾಗಿ ನನಗೆ ಸಚಿವ ಸ್ಥಾನ ನೀಡಿ ಎಂದು ಕೇಳಿದ್ದಾರೆ. ಆದರೆ ತಂದೆ ಅವರು ಈಗಾಗಲೇ ಹೇಳಿದ್ದಾರೆ. ಅವರು ಸಿಎಂ ಆಗಿರುವವರೆಗೂ ನಾನು ಸಚಿವ ಸ್ಥಾನ ಕೇಳೋದಿಲ್ಲ. ಎಲ್ಲವೂ ತಂದೆ ಹೇಳಿದಂತೆ ಆಗುತ್ತದೆ ಎಂದ ಯತೀಂದ್ರ ಸಿದ್ದರಾಮಯ್ಯ

**ಡ್ರಗ್ ಹಾವಳಿಗೆ ಕಡಿವಾಣ**

**ಇನ್ನೂ ಮೈಸೂರಿನಲ್ಲಿ ಡ್ರಗ್ಸ್ ಸೀಜ್ ವಿಚಾರ ಮಾತನಾಡಿ, ಡ್ರಗ್ಸ್ ಹಾವಳಿ ಜಾಸ್ತಿಯಾಗಿದೆ ಅಂತ ಜನಗಳು ಹೇಳ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಸಿಎಂ ಅವರು ಪೊಲೀಸರಿಗೆ ಸ್ಟ್ರಿಕ್ಟ್ ಆಗಿ ಸೂಚನೆ ಕೊಟ್ಟಿದ್ದಾರೆ. ಪೊಲೀಸರು ಕೂಡ ಅವರ ಕೆಲಸ ಮಾಡ್ತಿದ್ದಾರೆ. ಆದರೆ ಮಹಾರಾಷ್ಟ್ರ ಪೊಲೀಸರು ನಮ್ಮವರಿಗಿಂತ ಚುರುಕಾಗಿ ಡ್ರಗ್ಸ್ ಜಾಲ ಭೇದಿಸಿದರು. ಡ್ರಗ್ಸ್ ತೊಲಗಿಸುವ ನಿಟ್ಟಿನಲ್ಲಿ ಪೊಲೀಸರು ಹೆಚ್ಚಿನ ಕೆಲಸ ಮಾಡಬೇಕಿದೆ ಎಂದು., ಡಾ. ಯತೀಂದ್ರ ಮೈಸೂರಿನಲ್ಲಿ ಹೇಳಿದರು.**

---

# ಮಿನಿ ನ್ಯೂಸ್

## ಮಲ್ಲೈ ಮಹದೇಶ್ವರ ದೇಗುಲ ಪ್ರತಿಷ್ಠಾಪನೆ

• **ಉದಯವಾಹಿನಿ, ಹಾರೋಹಳ್ಳಿ**

ತಾಲ್ಲೂಕಿನ ಚಿಕ್ಕಕಲ್ಬಾಳು ಗ್ರಾಮದಲ್ಲಿ ಮಲ್ಲೈ ಮಹದೇಶ್ವರ ದೇವಸ್ಥಾನ ಪ್ರತಿಷ್ಠಾಪನೆ ನಡೆಯಿತು. ಚಿಕ್ಕಕಲ್ಬಾಳು ಮಠದ ಶಿವಾನಂದ ಶಿವಾಚಾರ್ಯ ಅವರ ನೇತೃತ್ವದಲ್ಲಿ ದೇಗುಲ ಪ್ರತಿಷ್ಠಾಪನೆ ನೆರವೇರಿತು. ಇದರ ಅಂಗವಾಗಿ ಕಳಸರಾಧನೆ, ಮಹಾಗಣಪತಿ ಹೋಮ, ನವಗ್ರಹ ಹೋಮ, ಕುಂಭಾಭಿಷೇಕ ಹಾಗೂ ವಿವಿಧ ಪೂಜಾ ಕಾರ್ಯಗಳು ನೆರವೇರಿದವು. ಪ್ರತಾಪ್ ಮತ್ತು ತಂಡದಿಂದ ಮಹದೇಶ್ವರ ಕಥೆ ನಡೆಯಿತು. ಭಕ್ತರಿಗೆ ಅನ್ನ ಸಂತರ್ಪಣೆ ನಡೆಯಿತು.

## ಆ.2, 3ರಂದು 1 ಟಿಕೆಟ್ ಖರೀದಿಸಿದರೆ ಮತ್ತೊಂದು ಉಚಿತ!

• **ಉದಯವಾಹಿನಿ, ರಾಮನಗರ**

ಮನರಂಜನಾ ತಾಣವಾದ ವಂಡರ್‌ಲಾ ಹಾಲಿಡೇಸ್, ಸ್ನೇಹಿತರ ದಿನದ ಅಂಗವಾಗಿ ವಿಶೇಷ ಕೊಡುಗೆ ಘೋಷಿಸಿದೆ. ಆ. 2 ಮತ್ತು 3ರಂದು, ವಂಡರ್‌ಲಾ ಪ್ರವೇಶ ಟಿಕೆಟ್, ಟಿಕೆಟ್ ಮತ್ತು ಆಹಾರ ಕಾಂಬೊ ಮೇಲೆ ಒಂದು ಟಿಕೆಟ್ ಖರೀದಿಸಿದರೆ ಮತ್ತೊಂದು ಟಿಕೆಟ್ ಕೊಡುಗೆ ಸಿಗಲಿದೆ. ಈ ಕೊಡುಗೆ ಬೆಂಗಳೂರು, ಹೈದರಾಬಾದ್, ಕೊಚ್ಚಿನ್ ಮತ್ತು ಭುವನೇಶ್ವರದಲ್ಲಿರುವ ವಂಡರ್‌ಲಾ ಪಾರ್ಕ್‌ಗಳಲ್ಲಿ ಸಿಗಲಿದೆ. ಎರಡು ದಿನಗಳ ಉತ್ಸವದಲ್ಲಿ ಥ್ರಿಲ್ಲಿಂಗ್ ರೈಡ್ಸ್, ಲೈವ್ ಡಿಜೆ ವಿಸ್ತರಿತ ಪಾರ್ಕ್ ಸಮಯ ಮತ್ತು ವಿಶೇಷ ಕೊಡುಗೆಗಳನ್ನು ಪಡೆಯಬಹುದಾಗಿದೆ. ಈ ಕೊಡುಗೆ ಆನ್‌ಲೈನ್‌ನಲ್ಲಿ ಮಾತ್ರ ಲಭ್ಯ. ಮಧ್ಯಾಹ್ನದ ವೇಳೆಗೆ ವೇವ್ ಪೂಲ್ ಡಿಜೆ ಸೆಟ್ಸ್, ರಾತ್ರಿ ಡಿಜೆ, ಪ್ರತಿ ಪಾರ್ಕ್‌ಗಳಲ್ಲಿ ಒಂದು ಸ್ಥಳೀಯ ಟ್ವಿಸ್ಟ್ ಜೊತೆಗೆ ಪರಸ್ಪರ ಸಂವಾದದ ಗೇಮ್ ಮತ್ತು ಸ್ಪರ್ಧೆಗಳು, ಕ್ಯುರೇಟೆಡ್ ಫೋಮ್ ಪಾರ್ಟಿಗಳು ಇರಲಿವೆ. ಬೆಂಗಳೂರಿನ ವಂಡರ್‌ಲಾ ರೆಸಾರ್ಟ್‌ನಲ್ಲಿ 3 ಪಾರ್ಕ್ ಟಿಕೆಟ್, ಉಡುಗೊರೆ ಬ್ರೇಕ್‌ಫಾಸ್ಟ್ ಮತ್ತು 2 ಪಾನೀಯ ಖರೀದಿಸಿದರೆ 1 ಉಚಿತ ಇರಲಿದೆ.

## ಶಾಲೆಯಲ್ಲಿ ಹುಲಿ ದಿನಾಚರಣೆ

• **ಉದಯವಾಹಿನಿ, ಚಿಂತಾಮಣಿ**

ಆರ್.ಕೆ ವಿಷನ್ ವಿದ್ಯಾ ಸಂಸ್ಥೆಯಲ್ಲಿ ಅಂತರರಾಷ್ಟ್ರೀಯ ಹುಲಿ ಸಂರಕ್ಷಣಾ ದಿನಾಚರಣೆ ನಡೆಯಿತು. ಸಂಸ್ಥೆಯ ಕಾರ್ಯದರ್ಶಿ ಕೆ.ಆರ್.ಪ್ರೇಮಲತಾ ಮಾತನಾಡಿ, ಹುಲಿಗಳ ಪ್ರಾಕೃತಿಕ ಆವಾಸಸ್ಥಾನಗಳ ಸಂರಕ್ಷಣೆ ಮತ್ತು ಹುಲಿಗಳ ಸಂಖ್ಯೆ ಹೆಚ್ಚಳ ಕುರಿತು ಜನಜಾಗೃತಿ ಮೂಡಿಸುವ ಉದ್ದೇಶದಿಂದ 2010ರಿಂದ ಪ್ರತಿವರ್ಷ ಜುಲೈ 29ರಂದು ಹುಲಿ ದಿನಾಚರಣೆ ಆಚರಿಸಲಾಗುತ್ತಿದೆ ಎಂದು ತಿಳಿಸಿದರು. ಹುಲಿ, ಚಿರತೆ, ಸಿಂಹಗಳಂತಹ ಪ್ರಾಣಿಗಳು ಕಾಡು ಮತ್ತು ಅಭಯಾರಣ್ಯದ ಪ್ರಮುಖ ಆಕರ್ಷಣೆಗಳಾಗಿವೆ. ಹುಲಿ ಸ್ವಾಭಾವಿಕ ಸೌಂದರ್ಯ, ಆತ್ಮವಿಶ್ವಾಸ ಮತ್ತು ಗಾಂಭೀರ್ಯದ ನಡಿಗೆಗೆ ಹೆಸರುವಾಸಿಯಾಗಿದೆ. ಪರಿಸರ ವ್ಯವಸ್ಥೆಯನ್ನು ಸಮತೋಲನದಲ್ಲಿಡುವಲ್ಲಿ ಮತ್ತು ಜೀವ ವೈವಿಧ್ಯ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದರು.

ವಿದ್ಯಾರ್ಥಿಗಳು ಹುಲಿಗಳ ಜೀವನಕ್ಕೆ ಸಂಬಂಧಿಸಿದ, ಅವುಗಳ ಸಂರಕ್ಷಣೆಗಾಗಿ ಜನಜಾಗೃತಿ ಮೂಡಿಸುವ ಭಿತ್ತಿಪತ್ರ ಪ್ರದರ್ಶನ ಏರ್ಪಡಿಸಿದ್ದರು. ನಿರ್ದೇಶಕ ಜಿವಿಕೆ ರೆಡ್ಡಿ, ತನುಶ್ರೀರಾಮ್, ವರುಣ್ ಕೆ.ವಿ, ಶಿಕ್ಷಕರು ಭಾಗವಹಿಸಿದ್ದರು.

## ರಸ್ತೆ ಕಾಮಗಾರಿಗೆ ಭೂಮಿ ಪೂಜೆ

• **ಉದಯವಾಹಿನಿ, ಕೊಡಿಗೇನಹಳ್ಳಿ**

ಪಟ್ಟಣದಲ್ಲಿ ರೂ. 3 ಕೋಟಿ ವೆಚ್ಚದ ಜೆಜೆಎಂ ಕಾಮಗಾರಿ, ತೆರಿಯೂರು–ಕಡಗತ್ತೂರು ರೂ. 5 ಕೋಟಿ ವೆಚ್ಚದ ರಸ್ತೆ ಜೊತೆಗೆ ಅಡವಿನಾಗೇನಹಳ್ಳಿ–ಸುದ್ದೇಕುಂಟೆಯ ರೂ.5 ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಶಾಂತಲಾ ರಾಜಣ್ಣ ಭೂಮಿಪೂಜೆ ನೆರವೇರಿಸಿದರು. ನಂತರ ಮಾತನಾಡಿದ ಅವರು, ಕಡಗತ್ತೂರು, ಸುದ್ದೇಕುಂಟೆ– ಅಡವಿನಾಗೇನಹಳ್ಳಿ ರಸ್ತೆಗಳು ತುಂಬಾ ಹದಗೆಟ್ಟಿರುವುದರಿಂದ ಈ ಭಾಗದ ಜನರಿಗೆ ಅನುಕೂಲವಾಗುವಂತೆ ಗುತ್ತಿಗೆದಾರರು ಗುಣಮಟ್ಟದ ರಸ್ತೆಗೆ ಆದ್ಯತೆ ನೀಡಬೇಕು ಎಂದರು. ಇಒ ಲಕ್ಷ್ಮಣ್, ನೀರು ಸರಬರಾಜು ಎಇಇ ಲೋಕೇಶ್ವರಪ್ಪ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆದಿನಾರಾಯಣರೆಡ್ಡಿ, ಕೆಎಂಎಫ್. ನಿರ್ದೇಶಕ ಎಂ.ಪಿ. ಕಾಂತರಾಜು, ಗ್ರಾಮ ಪಂಚಾಯಿತಿ ಅಧ್ಯಕ್ಷ ಮಿಲ್ ಶ್ರೀನಿವಾಸ್ ಇತರರು ಹಾಜರಿದ್ದರು.

## ಬಸ್‌ಗಾಗಿ ಬೀದಿಗಿಳಿದ ವಿದ್ಯಾರ್ಥಿಗಳು



ಉದಯವಾಹಿನಿ ಚಿತ್ರ

• **ಉದಯವಾಹಿನಿ, ತುಮಕೂರು**

ಗ್ರಾಮೀಣ ಪ್ರದೇಶದಲ್ಲಿ ಸಮರ್ಪಕವಾಗಿ ಬಸ್ ಸೌಲಭ್ಯ ಕಲ್ಪಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ನೇತೃತ್ವದಲ್ಲಿ ವಿದ್ಯಾರ್ಥಿಗಳು ನಗರದಲ್ಲಿ, ಪ್ರತಿಭಟನೆ ನಡೆಸಿದರು. ಟೌನ್‌ಹಾಲ್ ವೃತ್ತದಲ್ಲಿ ಕೆಲ ಸಮಯ ಪ್ರತಿಭಟನೆ ನಡೆಸಿ, ನಂತರ ಜಿಲ್ಲಾಧಿಕಾರಿ ಕಚೇರಿವರೆಗೆ ಮೆರವಣಿಗೆಯಲ್ಲಿ ತೆರಳಿ ಪ್ರತಿಭಟಿಸಿದರು. ಗ್ರಾಮೀಣ ಪ್ರದೇಶದಲ್ಲಿ ಸರಿಯಾದ ಸಮಯಕ್ಕೆ ಕೆಎಸ್‌ಆರ್‌ಟಿಸಿ ಬಸ್‌ಗಳು ಸಂಚರಿಸದೆ ಶಾಲೆ, ಕಾಲೇಜುಗಳಿಗೆ ತೆರಳಲು ಸಾಧ್ಯವಾಗುತ್ತಿಲ್ಲ. ಶಕ್ತಿ ಯೋಜನೆ ಜಾರಿಯಾದ ನಂತರ ಬಸ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಸ್ಥಳಾವಕಾಶವೇ ಸಿಗುತ್ತಿಲ್ಲ. ಇದರಿಂದ ತೀವ್ರ ಸಮಸ್ಯೆಯಾಗುತ್ತಿದ್ದು, ಸಮರ್ಪಕವಾಗಿ ಬಸ್ ಸೌಲಭ್ಯ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ನಗರದಲ್ಲಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ವ್ಯವಸ್ಥೆ ಕಲ್ಪಿಸಬೇಕು. ವಿದ್ಯಾರ್ಥಿ ವೇತನ (ವಿದ್ಯಾ ಸಹಾಯ ಧನ) ಬಿಡುಗಡೆ ಮಾಡಬೇಕು. ವಿದ್ಯಾರ್ಥಿಗಳ ಬೇಡಿಕೆಗಳಿಗೆ ಸರ್ಕಾರ ತಕ್ಷಣ ಸ್ಪಂದಿಸಬೇಕು ಎಂದು ಒತ್ತಾಯಿಸಿದರು. ಜಿಲ್ಲಾಧಿಕಾರಿ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ಎಬಿವಿಪಿ ಪ್ರಾಂತ ಕಾರ್ಯದರ್ಶಿ ಪ್ರವೀಣ್, ರಾಜ್ಯ ಸಹಕಾರ್ಯದರ್ಶಿ ಎಚ್.ಆರ್.ಗುರುಪ್ರಸಾದ್, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಸುನಿಲ್, ಪ್ರಮುಖರಾದ ಸಿದ್ದರಾಮಯ್ಯ, ಹರ್ಷಿತಾ, ವರಲಕ್ಷ್ಮಿ ಭಾಗವಹಿಸಿದ್ದರು


ಅಂತರಾಳದಿಂದ..

EDITORIAL

# ಅಮೆರಿಕದಿಂದ ಸುಂಕದ ರಾಜಕೀಯ: ನಿಭಾಯಿಸಬೇಕಿದೆ ಕಠಿಣ ಪರಿಸ್ಥಿತಿ

ಭಾರತದಿಂದ ಆಮದು ಮಾಡಿಕೊಳ್ಳುವ ಸರಕುಗಳ ಮೇಲೆ ಅಮೆರಿಕವು ಶೇಕಡ 25ರಷ್ಟು ಸುಂಕ ಹೇರಿದೆ. ಅಮೆರಿಕದ ಜೊತೆಗಿನ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಮಾತುಕತೆಯಲ್ಲಿ ಭಾರತವು ಈ ಹಂತದಲ್ಲಿ ಹಿನ್ನಡೆ ಅನುಭವಿಸಿದಂತಿದೆ. ಹೀಗಾಗಿ, ಭಾರತವು ಸುಂಕದ ಪ್ರಹಾರವನ್ನು ಎದುರಿಸಬೇಕಾಗಿದೆ. ಕೊನೆಯ ಕ್ಷಣದಲ್ಲಿ ಯಾವುದೇ ಬದಲಾವಣೆಗಳು ಆಗದೆ ಇದ್ದರೆ, ಭಾರತದಿಂದ ಆಮದು ಮಾಡಿಕೊಳ್ಳುವ ಸರಕುಗಳ ಮೇಲೆ ಅಮೆರಿಕವು ಶೇಕಡ 25ರಷ್ಟು ಸುಂಕವನ್ನು ವಿಧಿಸಲಿದೆ. ಆದರೆ, ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಕೊನೆಯ ಕ್ಷಣದಲ್ಲಿ ಬದಲಾವಣೆಗಳನ್ನು ಮಾಡುವ ಸಾಧ್ಯತೆ ಇಲ್ಲವೇ ಇಲ್ಲ ಎಂದು ಹೇಳಲಾಗದು. ಸುಂಕ ಮಾತ್ರವೇ ಅಲ್ಲದೆ, ರಷ್ಯಾದಿಂದ ಶಸ್ತ್ರಾಸ್ತ್ರ ಹಾಗೂ ಕಚ್ಚಾ ತೈಲ ಆಮದು ಮಾಡಿಕೊಳ್ಳುತ್ತಿರುವ ಕಾರಣಕ್ಕೆ ಭಾರತದ ಮೇಲೆ ದಂಡವನ್ನು ವಿಧಿಸುವುದಾಗಿಯೂ ಟ್ರಂಪ್ ಹೇಳಿದ್ದಾರೆ. ಸುಂಕ ಹಾಗೂ ದಂಡದ ಪರಿಣಾಮವಾಗಿ ಭಾರತ ಮತ್ತು ಅಮೆರಿಕದ ನಡುವಿನ ವ್ಯಾಪಾರ ವಹಿವಾಟು ಕಠಿಣ ಸವಾಲಾಗಿ ಪರಿಣಮಿಸಲಿದೆ. ವಿಶ್ವದ ಅತಿದೊಡ್ಡ ಪ್ರಜಾತಂತ್ರ ರಾಷ್ಟ್ರವನ್ನು ಉದ್ದೇಶಿಸಿ ಮಾತನಾಡುವಾಗ ಟ್ರಂಪ್ ಅವರು ಬಳಸಿರುವ ಭಾಷೆಯು ಭಾರತವನ್ನು ಬೆದರಿಸುವಂತೆ ಹಾಗೂ ಅವಮಾನಿಸುವಂತೆ ಇತ್ತು. ಭಾರತ ಮಾಡುವ ಎಲ್ಲಾ ಕೆಲಸಗಳೂ ಪ್ರಯೋಜನಕಾರಿ ಅಲ್ಲ ಎಂದು ಹೇಳಿ, ಈ ಕಾರಣಕ್ಕಾಗಿ ಭಾರತದ ಮೇಲೆ ದಂಡ ಹೇರುವುದು ಸೂಕ್ತವಾಗುತ್ತದೆ ಎಂದು ಟ್ರಂಪ್ ಅವರು ಹೇಳುವುದು ತಮ್ಮನ್ನು ಮೆಚ್ಚಿಸಲು ವಿಶೇಷ ಪ್ರಯತ್ನಗಳನ್ನು ನಡೆಸಿರುವ ಸರ್ಕಾರವೊಂದನ್ನು ಅಣಕಿಸುವುದಕ್ಕೆ ಸಮ. ಮಧ್ಯಂತರ ವ್ಯಾಪಾರ ಒಪ್ಪಂದವು ಸಾಧ್ಯವಾಗದೆ ಇರುವುದು ಭಾರತದ ರಾಜತಾಂತ್ರಿಕ ಪ್ರಯತ್ನಗಳಿಗೆ ಆಗಿರುವ ಸೋಲು ಎನ್ನಬಹುದು. ಅಲ್ಲದೆ, ಮಾತುಕತೆಯ ಹೊತ್ತಿನಲ್ಲಿ ಹೊಂದಾಣಿಕೆ ಮಾಡಿಕೊಳ್ಳಲು ಭಾರತದ ಬಳಿ ಹೆಚ್ಚಿನ ಆಯ್ಕೆಗಳು ಇರುವಂತೆ ಕಾಣುತ್ತಿಲ್ಲ. ಟ್ರಂಪ್ ಅವರು ಭಾರತದ ಬಗ್ಗೆ ಬಳಸಬಾರದ ಭಾಷೆಯನ್ನು ಬಳಸಿದ್ದಾರೆ ಹಾಗೂ ಭಾರತವನ್ನು ಸಂಕಷ್ಟಕ್ಕೆ ಸಿಲುಕಿಸಲು ಯತ್ನಿಸಿದ್ದಾರೆ. ಕೇಂದ್ರ ವಾಣಿಜ್ಯ ಸಚಿವಾಲಯವು ವ್ಯಾಪಾರ ಒಪ್ಪಂದ ಸಾಧ್ಯವಾಗಿಸಲು ತನ್ನಿಂದ ಆದ ಎಲ್ಲಾ ಯತ್ನಗಳನ್ನೂ ನಡೆಸಿದೆ ಎಂಬುದು ನಿಜ. ಆದರೆ, ಇಲ್ಲಿ ವಿದೇಶಾಂಗ ಸಚಿವಾಲಯದ ಪಾತ್ರದ ಕುರಿತು ಹಾಗೂ ಒಪ್ಪಂದದ ವಿಚಾರವಾಗಿ ನಡೆಸಿದ ಪೂರ್ವಭಾವಿ ಪ್ರಯತ್ನಗಳ ಬಗ್ಗೆ ಅವಲೋಕನ ನಡೆಯಬೇಕಿದೆ. ಇದು ಆರೋಪಗಳನ್ನು ಮಾಡುತ್ತಾ ಕೂರಬೇಕಾದ ಸಂದರ್ಭ ಅಲ್ಲ. ಟ್ರಂಪ್ ಅವರು ಮುಂದಿರಿಸಿದ ಕೆಲವು ಕಠಿಣ ಬೇಡಿಕೆಗಳನ್ನು ಈಡೇರಿಸದೆ ಇದ್ದ ಕಾರಣಕ್ಕೆ ಹಾಗೂ ಹೈನು ಉತ್ಪನ್ನಗಳು ಮತ್ತು ಕೃಷಿ ಉತ್ಪನ್ನಗಳಿಗೆ ಭಾರತದ ಮಾರುಕಟ್ಟೆಯನ್ನು ಮುಕ್ತವಾಗಿಸಲು ಒಪ್ಪದೆ ಇದ್ದ ಕಾರಣಕ್ಕೆ ಒಪ್ಪಂದ ಸಾಧ್ಯವಾಗುತ್ತಿಲ್ಲ ಎಂದು ವರದಿಗಳು ಹೇಳುತ್ತಿವೆ. ಈ ವಿಚಾರಗಳಲ್ಲಿ ಭಾರತವು ಹೊಂದಾಣಿಕೆಗೆ ಒಪ್ಪಿಗೆ ಸೂಚಿಸಿದ್ದರೆ ಒಪ್ಪಂದ ಸಾಧ್ಯವಾಗುತ್ತಿತ್ತು ಎನ್ನುವುದಾದರೆ, ಒಪ್ಪಂದ ಮುರಿದುಬೀಳುವಂತೆ ಮಾಡುವುದನ್ನು ಹೊರತುಪಡಿಸಿ ಭಾರತದ ಎದುರು ಬೇರೆ ಆಯ್ಕೆಗಳೇ ಇರಲಿಲ್ಲ ಎಂದು ಹೇಳಬಹುದು.

**ಟ್ರಂಪ್ ಅವರನ್ನು ಖುಷಿಪಡಿಸಲು ಭಾರತದ ಕಡೆಯಿಂದ ಅಗತ್ಯಕ್ಕಿಂತ ಹೆಚ್ಚಿನ ಪ್ರಯತ್ನಗಳು ನಡೆದಿವೆ. ಪ್ರಧಾನಿ ನರೇಂದ್ರ ಮೋದಿ ಅವರು ಐದು ವರ್ಷಗಳ ಹಿಂದೆ ಗುಜರಾತ್‌ನಲ್ಲಿ ನಡೆದ ರ‍್ಯಾಲಿಯೊಂದರಲ್ಲಿ ಟ್ರಂಪ್ ಅವರ ಬಗ್ಗೆ ಬಹಳ ಆದರ ತೋರಿಸಿದ್ದರು. ಅಲ್ಲದೆ, ಈ ವರ್ಷದ ಫೆಬ್ರುವರಿಯಲ್ಲಿ ಮೋದಿ ಅವರು ಟ್ರಂಪ್ ಅವರ 'ಮೇಕ್ ಅಮೆರಿಕ ಗ್ರೇಟ್ ಅಗೇನ್' ಘೋಷವಾಕ್ಯದ ಜೊತೆಗೆ, 'ಮೇಕ್ ಇಂಡಿಯಾ ಗ್ರೇಟ್ ಅಗೇನ್' ಎಂಬ ಘೋಷವಾಕ್ಯವನ್ನು ಜೋಡಿಸಿ, ಇವೆರಡೂ ಒಟ್ಟಾದರೆ 'ಮೆಗಾ' ಪಾಲುದಾರಿಕೆ ಸಾಧ್ಯವಾಗುತ್ತದೆ ಎಂದು ಹೇಳಿದ್ದರು.**



ಭಾರತವು ಈಗ ಎದುರಾಗಿರುವ ಸವಾಲನ್ನು ಮೆಟ್ಟಿ ನಿಲ್ಲಬೇಕಿದೆ ಹಾಗೂ ಕಠಿಣ ಸವಾಲನ್ನು ಜಾಣ್ಮೆಯಿಂದ ನಿಭಾಯಿಸಬೇಕಿದೆ. ಗಂಭೀರ ಸ್ವರೂಪದ ಪರಿಣಾಮಗಳನ್ನು ಉಂಟುಮಾಡುವ ಯಾವುದೇ ಕೆಲಸವನ್ನು ಭಾರತ ಮಾಡುವುದಿಲ್ಲ ಎಂಬ ಸಂದೇಶ ರವಾನೆ ಆಗಬೇಕಿದೆ. ಮತ್ತೆ ಮತ್ತೆ ವಿದೇಶಗಳಿಗೆ ಭೇಟಿ ನೀಡುವುದು ಹಾಗೂ ಕ್ಯಾಮೆರಾ ಮುಂದೆ ನಿಲ್ಲುವುದು ರಾಜತಾಂತ್ರಿಕ ಮಟ್ಟದಲ್ಲಿ ನಡೆಯುವ ಕಠಿಣ ಪರಿಶ್ರಮದ ಕೆಲಸಗಳಿಗೆ ಪರ್ಯಾಯ ಅಲ್ಲ ಎನ್ನುವ ಪಾಠವನ್ನೂ ನಾವು ಕಲಿಯಬೇಕಿದೆ.



# ರಾಮಾಯಣ

## ಇಕ್ಷ್ವಾಕುವಂಶದ ಪರಂಪರೆ

• ಹಿಂದಿನ ಸಂಚಿಕೆಯಿಂದ

### 106ನೆಯ ಅಧ್ಯಾಯ

ಧರ್ಮವನ್ನು ಕೈಬಿಟ್ಟಿರುವ, ನಾಸ್ತಿಕನಾಗಿ ವಿಪರೀತ ಬುದ್ಧಿಯುಳ್ಳ ನಿನ್ನನ್ನು ನನ್ನ ತಂದೆಯು ಆಸ್ಥಾನದಲ್ಲಿಟ್ಟುಕೊಂಡಿದ್ದನ್ನೇ ನಿಂದಿಸುತ್ತೇನೆ. ನಿನ್ನ ಮಾತಿಗೆ ಒಳಗಾದರೆ ನನ್ನನ್ನೂ ನಾಸ್ತಿಕನೆಂದು ಹೇಳುವರು. ನಾಸ್ತಿಕನಾದವನನ್ನು ಸಮಸ್ತ ಪ್ರಜೆಗಳೂ ನಿಂದಿಸುವರು. ಸತ್ಪುರುಷರು ಲೋಕದಲ್ಲಿ ಧರ್ಮವೂ ಇಲ್ಲ, ದೈವವೂ ಇಲ್ಲ ಎಂಬ ನಾಸ್ತಿಕವಾದಕ್ಕೆ ಒಳಗಾಗರು, ಜಾಬಾಲಿ, ನಿನಗಿಂತಲೂ ಪೂರ್ವದಲ್ಲಿದ್ದ ಮಹಾತ್ಮರು ಶುಭಕರ್ಮ ಗಳನ್ನೂ ದಾನಧರ್ಮಗಳನ್ನೂ ಮಾಡಿ ಈ ಲೋಕದಲ್ಲಿ ಕೀರ್ತಿಯನ್ನೂ ಪರಲೋಕದಲ್ಲಿ ಸದ್ಗತಿಯನ್ನೂ ಪಡೆದರು. ಸತ್ಪುರುಷರಾಗಿ ಅತಿತೇಜಸ್ವಿಗಳಾಗಿ ಧರ್ಮಮಾರ್ಗಪ್ರವರ್ತಕರಾಗಿ ಸದ್ಗುಣಶೀಲರಾಗಿ ನಿಷ್ಕಪಟಿಗಳಾಗಿ ಹಿಂಸೆ ಅಸೂಯಾದಿ ದ್ರೋಹಬುದ್ಧಿಯಿಲ್ಲದವರಾಗಿ ಪೂಜ್ಯರಾದ ಋಷಿಗಳು ಸದಾಚಾರದಿಂದಲೇ ಉತ್ತಮವಾದ ಗತಿಯನ್ನು ಪಡೆದರು ಎಂದು ಅತ್ಯಂತ ಕೋಪ ಯುಕ್ತನಾಗಿ ನಾಡಿದನು.
ಜಾಬಾಲಿಮುನೀಶ್ವರನು ಶ್ರೀರಾಮನೇ ಲೋಕದಲ್ಲಿ ಸತ್ಯಸಂಧನೆಂದು ತಿಳಿದು ಆತನನ್ನು ಮೃದುನುಡಿಗಳಿಂದ ಸಂತವಿಸುತ್ತ ಎಲೈ ಶ್ರೀರಾಮನೆ, ನಾನು ಚಾರ್ವಾಕನಾಗಿ ಲೋಕದಲ್ಲಿ ದೈವವಿಲ್ಲ, ದಾನಧರ್ಮಗಳಿಲ್ಲ ಎಂದು ನಾಸ್ತಿಕವಾದವನ್ನು ನುಡಿದವನಲ್ಲ. ನಾನು ಕಾಲೋಚಿತವನ್ನರಿತು ಯಾವ ಕಾಲದಲ್ಲಿ ಸತ್ಯಧರ್ಮಗಳನ್ನು ಪ್ರತಿಪಾದಿಸಬೇಕು, ಯಾವ ಕಾಲದಲ್ಲಿ ಚಾರ್ವಾಕಮತಾನುಸಾರವಾಗಿ ನಾಸ್ತಿಕವಾದವನ್ನು ಪ್ರತಿವಾದಿಸಬೇಕು ಎಂದು ವಿಚಾರಿಸಿ ಆಯಾ ಕಾಲದಲ್ಲಿ ಅದನ್ನು ಪ್ರತಿಪಾದಿಸುವೆನು. ಈಗ ನೀನು ರಾಜ್ಯವನ್ನು ಬಿಟ್ಟು ಬಂದು ವನದಲ್ಲಿ ವಿರಕ್ತಮಾರ್ಗವನ್ನಾಶ್ರಯಿಸಿ ಕಾಯಕೇಶವನ್ನು ಮಾಡಿಕೊಂಡಿರುವುದನ್ನು ಕಂಡು ಯಾವ ಉಪಾಯ ದಿಂದಾದರೂ ವನವಾಸಪ್ರಯಾಸವನ್ನು ಬಿಡಿಸಿ ಅಯೋಧ್ಯಾಪಟ್ಟಣಕ್ಕೆ ಕರೆದುಕೊಂಡು ಹೋಗಿ ಸುಖದಲ್ಲಿರಿಸಬೇಕೆಂಬ ಬುದ್ಧಿಯಿಂದ ಚಾರ್ವಾಕಮತವನ್ನಾಶ್ರಯಿಸಿ ನಾಸ್ತಿಕವಾದವನ್ನು ಬೋಧಿಸಿದೆ ನಲ್ಲದೆ ನಾನು ಚಾರ್ವಾಕಪಕ್ಷದವನಲ್ಲ ಎಂದು ಕೋಪಶಾಂತಿಯನ್ನು ಮಾಡಿ ಸಂತವಿಸಿದನು.
**ಇಕ್ಷ್ವಾಕುವಂಶದ ಪರಂಪರೆ:** ಆಮೇಲೆ ವಸಿಷ್ಠ ಮುನೀಶ್ವರನು ಜಾಬಾಲಿಯ ಮಾತನ್ನು ಕೇಳಿ ಕೋಪಯುಕ್ತನಾದ ಶ್ರೀರಾಮನನ್ನು ನೋಡಿ ಈ ರೀತಿ ಹೇಳಿದನು: ಶ್ರೀರಾಮ ಕೇಳು : ಈ ಜಾಬಾಲಿಮುನೀಶ್ವರನು ಸಾಮಾನ್ಯನೆಂದು ನಿನ್ನ ಮನಸ್ಸಿನಲ್ಲಿ ತಿಳಿಯಬೇಡ. ಈತನು ಸಮಸ್ತ ಲೋಕಗಳ ಉತ್ಪತ್ತಿ ಲಯಗಳನ್ನೂ ಬಲ್ಲವನು. ಅಂಥ ಜ್ಞಾನಿಯಾದ ಈ ಮುನೀಶ್ವರನು ನಿನ್ನನ್ನು ಆಯೋಧ್ಯಾಪಟ್ಟಣಕ್ಕೆ ತಿರುಗಿಸಬೇಕೆಂಬ ಬುದ್ಧಿಯಿಂದ ಚಾರ್ವಾಕಮತವನ್ನಾಶ್ರಯಿಸಿ ನುಡಿದನಲ್ಲದೆ ಮೋಸಮಾಡ ಬೇಕೆಂದು ನುಡಿಯಲಿಲ್ಲ. ನೀನು ಮಹತ್ತಾದ ಇಕ್ಷಾಕುವಂಶದಲ್ಲಿ ಜನಿಸಿದವನು. ಈ ಲೋಕಗಳ ಉತ್ಪತ್ತಿಲಯಗಳನ್ನೂ ವಂಶಪರಂಪರೆಯನ್ನೂ ಹೇಳುತ್ತೇನೆ ಕೇಳು ಪೂರ್ವದಲ್ಲಿ ಜಲಪ್ರಳಯವಾಗಿ ಭೂಮಿಯು ಜಲದೊಳಗೆ ಮುಳುಗಿತು.

**ಮುಂದುವರಿಯುವುದು...**



☛ ವಿಶ್ವಾಸ್.ಡಿ.ಗೌಡ
ಉದಯವಾಹಿನಿ, ವಿಶೇಷ

# ಜೀವನ ಎಂದರೆ ಇಷ್ಟೆಯೇ?

ಪ್ರಪಂಚ ಸ್ಥಿರವಲ್ಲ, ಶಾಶ್ವತವಲ್ಲ. ನಾವೇ ಶಾಶ್ವತವಾಗಿ ಇಲ್ಲಿರಲೂ ಸಾಧ್ಯವಿಲ್ಲ...! ಆದರೆ ಇಂತಹ ಸ್ಥಿರವಲ್ಲದ, ಶಾಶ್ವತವಲ್ಲದ ಪ್ರಪಂಚದಲ್ಲಿ ನಮ್ಮ ಮನೆ, ಹೊಲ, ಗದ್ದೆ, ತೋಟ, ಬ್ಯಾಂಕ್ ಬ್ಯಾಲೆನ್ಸ್, ಶೇರು, ವ್ಯಾಪಾರ, ವ್ಯವಹಾರ, ಉದ್ದಿಮೆ, ನೌಕರಿ... ಇತ್ಯಾದಿ ಎಲ್ಲದರಲ್ಲೂ ಸ್ಥಿರವಾಗಿರಬೇಕೆಂದು ಬಯಸುತ್ತೇವೆ, ಇದು ವ್ಯವಸ್ಥಿತವಾಗಿ ಶಾಶ್ವತವಾಗಿ ಹೀಗೆಯೇ ಇರಲೆಂದು ಅಪೇಕ್ಷಿಸುತ್ತೇವೆ. ಇವುಗಳಲ್ಲಿ ಕೊಂಚ ಏರುಪೇರಾದರೂ ನಮಗೆ ದಿಗಿಲು, ಒಳಗೆ ಒತ್ತಡ. ಅಸ್ಥಿರ, ಅಶಾಶ್ವತ ಪ್ರಪಂಚದಲ್ಲಿ ಸ್ಥಿರವಾದ್ದನ್ನು, ಶಾಶ್ವತವಾದ್ದನ್ನು ಹುಡುಕುತ್ತೇವಲ್ಲ..! ನಮ್ಮಂತಹ ಭ್ರಮಿತರು ಇನ್ಯಾರು ಇರಲಿಕ್ಕಿಲ್ಲ. ತಪ್ಪಲ್ಲ, ಆದರೆ ಒಪ್ಪೂ ಅಲ್ಲ.

ನಾವು ಇಲ್ಲಿಯೇ ಶಾಶ್ವತವಾಗಿ ಉಳಿಯಲು ಬಂದಿಲ್ಲ ಎಂಬ ಅರಿವಿರಬೇಕು. ಅಂಟಿಕೊಳ್ಳಬಾರದು ಪ್ರಪಂಚಕ್ಕೆ. ತಾವರೆಯ ಎಲೆಯ ಮೇಲಿನ ನೀರ ಹನಿಯಂತಿರಬೇಕು, ಅಂಟಿಯೂ ಅಂಟದಂತೆ.



ನಾವು ಕಟ್ಟಿಕೊಂಡ ಕನಸುಗಳು, ಭ್ರಮೆಗಳು, ಆಸೆ ಆಕಾಂಕ್ಷೆಗಳು ನುಚ್ಚು ನೂರಾಗಲು ಎಷ್ಟರ ಸಮಯ..!? ಹೀಗೆ ಅಲುಗಾಡಿಸಿ ಬಿಸಾಕಿಬಿಟ್ಟರಾಯ್ತು ನಾವು ನಿಂತ ನೆಲವನ್ನು. ಈಚೆಗೆ ನೋಡಿದೆವಲ್ಲ ಕೇರಳ, ಕೊಡಗು, ಉತ್ತರ ಕರ್ನಾಟಕದಲ್ಲಿ ಆದ ಜಲಪ್ರಳಯ, ಭೂಕುಸಿತಗಳನ್ನು. ಹಿಂದೆ ಜಪಾನು, ಇಂಡೋನೇಷ್ಯಾ ಮತ್ತಿತರ ದೇಶಗಳಲ್ಲಾದ ಸುನಾಮಿ, ಚಂಡಮಾರುತ, ಭೂಕಂಪ ಮುಂತಾದ ಪ್ರಾಕೃತಿಕ ವಿಕೋಪಗಳನ್ನು ನೋಡಿದ್ದೆವಲ್ಲ. ಪ್ರಕೃತಿಗೆ ಅರೆಕ್ಷಣವೂ ಬೇಕಾಗುವುದಿಲ್ಲ, ನಾವು ಕಟ್ಟಿಕೊಂಡ ಮಹಲುಗಳನ್ನು, ಬೃಹತ್ ಕಟ್ಟಡಗಳನ್ನು, ರಸ್ತೆ, ಸೇತುವೆ ಇತ್ಯಾದಿಗಳನ್ನು ಗುಡಿಸಿ ಗುಂಡಾಂತರ ಮಾಡಲು. ಪ್ರಪಂಚ ಸ್ಥಿರವಲ್ಲ, ಈ ಜೀವನ ನಶ್ವರ ಎಂಬುದು ತಿಳಿದಿದ್ದರೂ ಬದುಕುವ ಅದಮ್ಯ ಆಸೆಯಿಂದ ಹೋರಾಡುತ್ತಿದ್ದೇವಲ್ಲ, ಇದೇ ಆಶ್ಚರ್ಯಕರ. ಕ್ಷಣಗಳು, ನಿಮಿಷಗಳು, ಗಂಟೆಗಳು, ದಿನ, ವಾರ, ತಿಂಗಳು, ವರುಷಗಳು ಕಳೆದಂತೆಲ್ಲಾ ನಮ್ಮ ಆಯುಷ್ಯ ಕ್ಷೀಣಿಸುತ್ತಾ ದಿನೇ ದಿನೇ ನಾವು ಸಾವಿಗೆ ಸಮೀಪಿಸುತ್ತಿದ್ದರೂ ಆಸೆಗಳು ಮಾತ್ರ ಅದಕ್ಕೆ ವಿರುದ್ಧವಾಗಿ ಆಗಸದೆತ್ತರಕ್ಕೆ ಬೆಳೆಯುತ್ತಲೇ ಇರುತ್ತವಲ್ಲ, ಇದಲ್ಲವೆ ಬದುಕಿನ ವಿಸ್ಮಯ.

ಜೀವನ ಎಂದರೆ ಇಷ್ಟೆಯೇ? ಹುಟ್ಟು, ಶೈಶವ, ಬಾಲ್ಯ, ಯೌವ್ವನ, ದುಡಿಮೆ, ಮದುವೆ, ಮಕ್ಕಳು, ಮೊಮ್ಮಕ್ಕಳು, ವೃದ್ಧಾಪ್ಯ ನಂತರ ಸಾಯುವುದು. ಇಷ್ಟೆಯೇ..!? ಹಾಗಾದರೆ ಬಾಳಿನ ಗುರಿಯಾದರೂ ಯಾವುದು? ಆದರ್ಶವಾದರೂ ಏನು? ಅಧಿಕಾರ, ಅಂತಸ್ತುಗಳ ಪಡೆಯುವುದೇ..? ಕೀರ್ತಿಪ್ರತಿಷ್ಠೆಗಳೇ..? ಧನಸಂಪತ್ತೇ..? ಯಾರ ಮುಂದೆ ಪ್ರದರ್ಶನ ಮಾಡಬೇಕಾಗಿದೆ ನಮ್ಮ ಆಸ್ತಿ, ಅಂತಸ್ತು, ಸಂಪತ್ತುಗಳ.. ಒಡವೆ ವಸ್ತ್ರಗಳ.. ಶಾರೀರಿಕ ಸೌಂದರ್ಯವ... ನಮ್ಮಂತೆಯೇ ಹುಟ್ಟಿ ಒಂದು ದಿನ ಸಾಯುವ ಹುಲುಮಾನವರ ಮುಂದೆಯೇ... ಯಾರ ಮೆಚ್ಚಿಸಲು ಈ ಬದುಕು.. ಇಲ್ಲಿ ನಮ್ಮಿಚ್ಛೆಯಿಂದಲ್ಲ, ನಮಗೋಸ್ಕರವಲ್ಲ, ಬೇರೆಯವರ ಹಿತಕ್ಕಾಗಿಯೂ ಅಲ್ಲ... ಬೇರೆಯವರು ಮೆಚ್ಚಲೆಂಬ ಪ್ರದರ್ಶನ ಪ್ರಿಯತೆಯ ಬದುಕು... ಅದಕ್ಕಾಗಿ ನಾವೆಲ್ಲ ಎಷ್ಟೆಷ್ಟು ತ್ಯಾಗ ಮಾಡುತ್ತೇವಲ್ಲ... ನಮ್ಮ ಸಮಯ, ಹಣ, ದುಡಿಮೆ, ನೆಮ್ಮದಿ, ಶಾಂತಿ... ಬದುಕೆಲ್ಲ ಇತರರ ಮೆಚ್ಚಿಸುವುದಕ್ಕೇ ಕಾಲ ಕಳೆಯುತ್ತೇವಲ್ಲ.

ನಮ್ಮಷ್ಟಕ್ಕೇ ನಾವು ಬದುಕಲು ಬಹಳ ಬೇಕಿಲ್ಲ. ಆದರೆ ಇತರರನ್ನು ನೋಡಿ ಬದಕಲು ನಮ್ಮ ದುಡಿಮೆ ಸಾಕಾಗುವುದಿಲ್ಲ... ಅದಕ್ಕಾಗಿ ಸಾಲ, ಲಂಚ, ಜೂಜು ಬೆಟ್ಟಿಂಗ್ ಇತ್ಯಾದಿ ಅಕ್ರಮಗಳು ಹುಟ್ಟಿಕೊಳ್ಳುತ್ತಾ ಹೋಗುತ್ತವೆ.

ಇದೆಕ್ಕೆಲ್ಲ ದಿವ್ಯೌಷಧವೇ ಆಧ್ಯಾತ್ಮಿಕ ಜ್ಞಾನ.



# ದೇಹದ ಉಷ್ಣತೆಯನ್ನು ನಿವಾರಿಸಿ ತಂಪಾಗಿರಿಸುವ ಆಹಾರಗಳಿವು

ದೇಹವನ್ನು ತಂಪಾಗಿಸುವ ಈ ಕೆಲವು ಆಹಾರಗಳನ್ನು ನಮ್ಮ ಡಯೆಟ್‌ನಲ್ಲಿ ಸೇರಿಸುವುದು ಉತ್ತಮ. ಇವು ದೇಹದ ಉಷ್ಣತೆಯನ್ನು ಕಡಿಮೆ ಮಾಡುವುದಲ್ಲದೆ ಆರೋಗ್ಯಕ್ಕೂ ಒಳ್ಳೆಯದು. ದೇಹದಲ್ಲಿ ಉಷ್ಣತೆಯು ನಾನಾ ರೀತಿಯಲ್ಲಿ ಪ್ರಭಾವ ಬೀರುತ್ತದೆ. ಅಂತಹ ಸಂದರ್ಭದಲ್ಲಿ ದೇಹವನ್ನು ತಂಪಾಗಿರಿಸುವುದು ಮುಖ್ಯ. ಸರಿಯಾದ ಪ್ರಮಾಣದ ಆಹಾರವನ್ನು ಸೇವಿಸುವ ಮೂಲಕ ದೇಹವನ್ನು ಪೋಷಿಸುವುದು ತ್ವರಿತ ಪರಿಣಾಮಕಾರಿಯಾಗಿದೆ. ದೇಹವನ್ನು ತಂಪಾಗಿರಿಸಲು ನಮ್ಮ ದಿನಚರಿಯಲ್ಲಿ ಈ ಕೆಲವು ಆಹಾರಗಳನ್ನು ಸೇರಿಸಿಕೊಳ್ಳಬೇಕು ಎನ್ನುತ್ತಾರೆ ಇಶಾ ಫೌಂಡೇಶನ್‌ನ ಸದ್ಗುರು ಜಗ್ಗಿ ವಾಸುದೇವ್.

**ಸಬ್ಜಾ/ತುಳಸಿ ಬೀಜಗಳು:** ಸಬ್ಜಾ ಬೀಜಗಳನ್ನು ಸೇವಿಸುವ ಮೊದಲು ನೀರಿನಲ್ಲಿ ನೆನೆಸಬೇಕು. ಈ ಬೀಜಗಳನ್ನು ಗುಲಾಬಿ ಶರಬತ್ತುಗಳು ಮತ್ತು ಫಲೂದಾಗಳಿಗೆ ಸೇರಿಸಲಾಗುತ್ತದೆ. ಈ ಬೀಜಗಳು ತಂಪಾಗಿಸುವ ಗುಣಗಳನ್ನು ಹೊಂದಿವೆ ಆದರೆ ಅವು ತೂಕ ನಷ್ಟಕ್ಕೆ ಸಹಾಯ ಮಾಡುತ್ತವೆ ಏಕೆಂದರೆ ಅವು ಹೊಟ್ಟೆ ತುಂಬಿರುವಂತೆ ಮಾಡುತ್ತದೆ.

**ರಾಗಿ:** ಇತರ ತಂಪಾಗಿಸುವ ಆಹಾರಗಳಲ್ಲಿ ರಾಗಿ ಕೂಡ ಸೇರಿದೆ. ಇದನ್ನು ರೊಟ್ಟಿ, ದೋಸೆ ತಯಾರಿಸಲು ಬಳಸಬಹುದು ಅಥವಾ ಹಾಲು ಅಥವಾ ಮೊಸರಿನೊಂದಿಗೆ ಸೇವಿಸಬಹುದು. ಕರ್ನಾಟಕದಲ್ಲಿ ರಾಗಿ ಹಿಟ್ಟನ್ನು ರಾಗಿ ಮುದ್ದೆಗಳ ರೂಪದಲ್ಲಿ ಸೇವಿಸಲಾಗುತ್ತದೆ. ಒರಿಸ್ಸಾದ ಬುಡಕಟ್ಟು ಮತ್ತು ಗುಡ್ಡಗಾಡು ಪ್ರದೇಶಗಳಲ್ಲಿ, ಅವರು ರಾಗಿಯಿಂದ ಮಾಡಿದ ಗಂಜಿಯನ್ನು ಸೇವಿಸುತ್ತಾರೆ.

**ಲಾವಂಚ ಬೇರು:** ಇದು ಭಾರತಕ್ಕೆ ಸ್ಥಳೀಯವಾಗಿರುವ ದೀರ್ಘಕಾಲಿಕ ಹುಲ್ಲು. ಅವು ತಂಪಾಗಿಸುವ ಸ್ವಭಾವಕ್ಕೆ ಹೆಸರುವಾಸಿಯಾಗಿದೆ ನೀರನ್ನು ತಂಪಾಗಿಡಲು ಈ ಹುಲ್ಲನ್ನು ಮಣ್ಣಿನ ಮಡಕೆಗಳಲ್ಲಿ ಹಾಕಲಾಗುತ್ತದೆ. ರುಚಿಯನ್ನು ಹೆಚ್ಚಿಸುತ್ತದೆ. ಪೋಸ್ಟ್ ಪ್ರಕಾರ ಲಾವಂಚ ಬೇರನ್ನು ಪರಿಮಳಯುಕ್ತ ಸಿರಪ್ ಅನ್ನು ಮಿಲ್ಕ್‌ಶೇಕ್‌ಗಳು ಜ್ಯೂಸ್‌ಗಳ ಸುವಾಸನೆ ಹೆಚ್ಚಿಸಲು ಬಳಸಲಾಗುತ್ತದೆ.

**ನಿಂಬೆ:** ನಿಂಬೆಯು ವಿಟಮಿನ್ ಸಿ ಜೊತೆಗೆ ರಿಬೋಫ್ಲಾವಿನ್, ವಿಟಮಿನ್ ಬಿ, ಕ್ಯಾಲ್ಸಿಯಂ, ಮೆಗ್ನೀಸಿಯಮ್, ರಂಜಕ, ಅನೇಕ ಪ್ರೋಟೀನ್‌ಗಳು ಮತ್ತು ಕಾರ್ಬೋಹೈಡ್ರೇಟ್‌ಗಳನ್ನು ಒದಗಿಸುತ್ತದೆ. ವ್ಯವಸ್ಥೆಯನ್ನು ತಂಪಾಗಿಸುವುದರ ಜೊತೆಗೆ, ನಿಂಬೆ ರಸವು ಅಧಿಕ ರಕ್ತದೊತ್ತಡವನ್ನು ಕಡಿಮೆ ಮಾಡುತ್ತದೆ. ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡುತ್ತದೆ, ದೇಹವನ್ನು ನಿರ್ವಿಷಗೊಳಿಸುತ್ತದೆ ಮತ್ತು ಮೂತ್ರನಾಳದ ಸೋಂಕಿನ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ.

**ಎಳ ನೀರು:** ಎಳ ನೀರು ದೇಹವನ್ನು ತಂಪಾಗಿಡಲು ಉತ್ತಮ ಪಾನೀಯವಾಗಿದೆ. ಇದು ತಂಪಾದ ಗುಣಗಳನ್ನು ಹೊಂದಿದ್ದು, ಬಿಸಿಲಿನ ತಾಪವನ್ನು ನಿವಾರಿಸಲು ಸಹಾಯ ಮಾಡುತ್ತದೆ. ಇದರಲ್ಲಿ ಎಲೆಕ್ಟ್ರೋಲೈಟ್‌ಗಳಿದ್ದು, ಇದು ದೇಹವನ್ನು ಹೈಡ್ರೀಕರಿಸಿ ದೇಹದ ಉಷ್ಣತೆಯನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

# 1 ನಿಮಿಷದಲ್ಲಿ ಹಾಲಿನ ಪುಡಿಯ ಲಡ್ಡು ಸವಿದು ನೋಡಿ!

ಮನೆಯಲ್ಲಿ ನೀವು ಬಹಳ ಇಷ್ಟಪಟ್ಟು ಹಲವು ಬಗೆಯ ಸ್ವೀಟ್‌ಗಳ ಮಾಡಿ ಸವಿದಿರುತ್ತೀರಿ. ಅದ್ರಲ್ಲೂ ಸುಲಭವಾಗಿ ಮಾಡಿ ಸವಿಯುವ ಸ್ವೀಟ್‌ಗಳು ಅಂದ್ರೆ ಎಲ್ಲರಿಗೂ ಇಷ್ಟವಾಗುತ್ತೆ. ಹಾಲಿನಿಂದ ಮಾಡುವ ಹಲವು ಖಾದ್ಯ ನಿಮಗೆ ಬಹಳ ಇಷ್ಟವಾಗುತ್ತೆ. ನಾವಿಂದು ಸುಲಭವಾಗಿ ಮಾಡುವಂತಹ ಸ್ವೀಟ್ ಕುರಿತಾಗಿ ತಿಳಿದುಕೊಳ್ಳೋಣ. ಅದ್ರಲ್ಲೂ ಸುಲಭದ ಲಡ್ಡು ಕುರಿತು ತಿಳಿಯೋಣ. ನೀವು ಹಲವು ಬಗೆ ಲಡ್ಡುಗಳನ್ನ ಮನೆಯಲ್ಲಿ ಇಲ್ಲವೆ ಬೇಕರಿಗಳಲ್ಲಿ ಖರೀದಿಸಿ ತಂದು ಸವಿದಿರುತ್ತೀರಿ. ಹಾಗೆ ಈ ಲಡ್ಡುಗಳ ರುಚಿಗೆ ಮನೆಯಲ್ಲಿ ಎಲ್ಲರಿಗೂ ಇಷ್ಟವಾಗಿರುತ್ತೆ. ಇನ್ನು ನಾವು ಸಹ ವಿವಿಧ ಬಗೆಯ ಲಡ್ಡು ಸವಿದಿರುತ್ತೇವೆ. ಆದ್ರೆ ನಾವಿಂದು ಮನೆಯಲ್ಲೇ ಮಾಡುವಂತಹ ಸುಲಭದ ಲಡ್ಡು ಕುರಿತಾಗಿ ಹೇಳಲಿದ್ದೇವೆ. ಅದ್ರಲ್ಲೂ ಹಾಲಿನ ಪುಡಿ ಹಾಗೆ ತೆಂಗಿನಕಾಯಿ ತುರಿಯನ್ನು ಬಳಸಿ ಅತ್ಯಂತ ರುಚಿ ರುಚಿಯ ಲಡ್ಡು ಮಾಡಬಹುದು. ಇದರ ರುಚಿಗೆ ನೀವು ಮರುಳಾಗುತ್ತೀರಿ. ಹಾಗಾದ್ರೆ ಈ ಹಾಲಿನ ಪುಡಿಯಿಂದ ನಿಮಿಷದೊಳಗೆ ರುಚಿ ರುಚಿಯ ಲಡ್ಡು ಮಾಡುವುದು ಹೇಗೆ ಅನ್ನೋದನ್ನ ತಿಳಿದುಕೊಳ್ಳಿ. ಹಾಲಿನ ಪುಡಿಯ ಲಡ್ಡು ಮಾಡಲು ಯಾವೆಲ್ಲಾ ಪದಾರ್ಥಗಳು ಬೇಕು? ಮಾಡುವ ವಿಧಾನವೇನು? ಮಾಡಲು ಎಷ್ಟು ಸಮಯ ಹಿಡಿಯಲಿದೆ ಎಂಬುದನ್ನು ನಾವಿಂದು ತಿಳಿದುಕೊಳ್ಳೋಣ.

**ಹಾಲಿನ ಪುಡಿಯ ಲಡ್ಡು ಮಾಡಲು ಯಾವೆಲ್ಲಾ ಪದಾರ್ಥಗಳು ಬೇಕು?**

- ಹಾಲಿನ ಪುಡಿ
- ಹಾಲು
- ಸಕ್ಕರೆ
- ಕೊಬ್ಬರಿ ತುರಿ ಪುಡಿ
- ಜೀರಿಗೆ ಪುಡಿ
- ಗೋಡಂಬಿ

**ಹಾಲಿನ ಪುಡಿಯ ಲಡ್ಡು ಮಾಡುವುದು ಹೇಗೆ?:** ಮೊದಲು ಒಲೆ ಮೇಲೆ ಒಂದು ಬಾಣಲೆ ಇಟ್ಟು ಅದಕ್ಕೆ ತುಪ್ಪ ಹಾಕಿಕೊಳ್ಳಿ. ಬಳಿಕ ಅದಕ್ಕೆ ಅರ್ಧ ಕಪ್ ಹಾಲು ಹಾಗೆ ಸಕ್ಕರೆ ಸಹ ಹಾಕಿಕೊಂಡು ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ಸಕ್ಕರೆ ಕರಗಿ ನೀರಾಗುವಂತೆ ಮಾಡಿಕೊಳ್ಳಿ. ಹೀಗಾಗಲು ಕನಿಷ್ಟ 1 ನಿಮಿಷ ಬೇಕಾಗಬಹುದು. ಹಾಗೆ ನಂತರ ಇದಕ್ಕೆ 1 ಕಪ್ ಹಾಲಿನ ಪುಡಿಯನ್ನು ಹಾಕಿಕೊಂಡು ಮಿಕ್ಸ್ ಮಾಡಿಕೊಳ್ಳಿ. ಹಾಲಿನ ಪುಡಿ ಹಾಕಿ 2 ನಿಮಿಷಗಳ ಕಾಲ ಚೆನ್ನಾಗಿ ಮಿಕ್ಸ್ ಮಾಡಿ ಕೊಳ್ಳಬೇಕು. ಇದು ಪೇಸ್ಟ್ ರೀತಿಯಾಗಿ ಬದಲಾಗುತ್ತದೆ. ಹೀಗೆ ಬದಲಾದಾಗ 1 ಕಪ್ ಕೊಬ್ಬರಿ ಪುಡಿಯನ್ನು ಸಹ ಹಾಕಿಕೊಂಡು ಮಿಕ್ಸ್ ಮಾಡಿಕೊಳ್ಳಿ. ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳುತ್ತಾ ಇದು ಗಟ್ಟಿಯಾಗಲು ಆರಂಭಿಸುತ್ತದೆ. ಈ ಸಮಯದಲ್ಲಿ ಗೋಡಂಬಿ ಪೀಸ್‌ಗಳು ಹಾಗೆ ಜೀರಿಗೆ ಪುಡಿಯನ್ನು ಕೂಡ ಹಾಕಿಕೊಂಡು ಮಿಕ್ಸ್ ಮಾಡಿಕೊಳ್ಳಿ. 1 ನಿಮಿಷ ಮಿಕ್ಸ್ ಮಾಡಿದ ಬಳಿಕ ಒಲೆ ಆಫ್ ಮಾಡಿಕೊಳ್ಳಿ. ಅನಂತರ ಮಿಶ್ರಣ ಬಿಸಿ ಬಿಸಿ ಇದ್ದಾಗಲೇ ಉಂಡೆ ಕಟ್ಟಿಕೊಂಡು ಆ ಉಂಡೆಯನ್ನು ಕೊಬ್ಬರಿ ತುರಿಯ ಪಾತ್ರೆಯಲ್ಲಿ ಹಾಕಿ ಉರುಳಿಸಿಕೊಂಡು ಇಟ್ಟುಕೊಳ್ಳಿ. ಇಷ್ಟಾದರೆ ನಿಮ್ಮ ಮುಂದೆ ಈ ರುಚಿ ರುಚಿಯ ಹಾಲಿನ ಪುಡಿಯ ಲಡ್ಡು ರೆಡಿಯಾಗುತ್ತದೆ. ಇದನ್ನು ಮನೆಯಲ್ಲಿ ಎಲ್ಲರು ಬಹಳ ಇಷ್ಟಪಟ್ಟು ಸವಿಯುತ್ತಾರೆ. ಮಕ್ಕಳಿಗೆ ಇದು ಬಹಳ ಇಷ್ಟವಾಗುತ್ತೆ. ನೀವು ಕೂಡ ಮನೆಯಲ್ಲಿ ಇದನ್ನೊಮ್ಮೆ ಟ್ರೈ ಮಾಡಿ ನೋಡಿ. 1 ನಿಮಿಷದಲ್ಲಿ ಬೆಣ್ಣ ಬಿಸ್ಕೇಟ್ ಮಾಡೋದು ಹೇಗೆ? ಒಂದು ಬೌಲ್‌ಗೆ 1 ಕಪ್ ಮೈದಾ ಹಿಟ್ಟು ಹಾಕಿ ಮುಕ್ಕಾಲು ಕಪ್ ಸಕ್ಕರೆ ಪುಡಿ, 1 ಸ್ಪೂನ್ ತುಪ್ಪ, ಹಾಕಿ ಕೈಯಿಂದ ಚೆನ್ನಾಗಿ ಮಿಕ್ಸ್ ಮಾಡಿ. ಉಂಡೆ ಕಟ್ಟುವಂತಹ ಹದಕ್ಕೆ ಈ ಹಿಟ್ಟನ್ನು ರೆಡಿ ಮಾಡಿಕೊಳ್ಳಿ. ಈಗ ಕುಕ್ಕರ್ ಅನ್ನು ಒಲೆ ಮೇಲೆ ಇಟ್ಟು ಅದರ ತಳದಲ್ಲಿ ಉಪ್ಪನ್ನು ಹರಡಬೇಕು. ಇಲ್ಲವೆ ಮರಳನ್ನು ಕೂಡ ಹರಡುತ್ತಾರೆ. ಬಳಿಕ ಮಧ್ಯದಿಂದ ಹಬೆ ಬರುವಂತಹ ಪ್ಲೇಟ್ ಇಟ್ಟು ನಂತರ ಅದರ ಮೇಲೆ ಈ ಉಂಡೆ ಕಟ್ಟಿರುವ ಹಿಟ್ಟನ್ನು ಇಟ್ಟು ಕುಕ್ಕರ್ ಒಳಗೆ ಇಡಿ. ನಂತರ ಸೀಟಿ ಬಳಸದೆ ಮುಚ್ಚಳ ಮುಚ್ಚಿ 12 ನಿಮಿಷ ಆದರು ಬೇಯಿಸಿಕೊಳ್ಳಿ. ಇಷ್ಟಾದರೆ ಬಿಸ್ಕೇಟ್ ರೆಡಿಯಾಗುತ್ತೆ.



ಮಖಾನ ಅಥವಾ ತಾವರೆ ಹೂವಿನ ಬೀಜಗಳ ಬಗ್ಗೆ ನೀವು ಕೇಳಿರಬಹುದು. ನಿಮ್ಮ ಮೂಳೆಗಳಲ್ಲಿ ಕ್ಯಾಲ್ಸಿಯಂ ಹೆಚ್ಚಿಸುವುದರಿಂದ ಹಿಡಿದು ನಿಮ್ಮ ಜೀರ್ಣ ಶಕ್ತಿಯನ್ನು ಕೂಡ ಇದು ದುಪ್ಪಟ್ಟುಗೊಳಿಸುತ್ತದೆ. ಇದನ್ನು ತಯಾರಿಸುವ ವಿಧಾನವನ್ನು ತಿಳಿಯೋಣ ಬನ್ನಿ. ತಾವರೆ ಹೂವು ನಿಮಗೆಲ್ಲ ಗೊತ್ತಿರುವ ಹಾಗೆ ತನ್ನ ಅಮೋಘ ಅಂದದಿಂದ ಎಲ್ಲರನ್ನೂ ಕೈ ಬೀಸಿ ಕರೆಯುತ್ತದೆ. ಬೆಳೆಯುವುದು ಕೆಸರಿನಲ್ಲಾದರೂ ದೇವರ ಮುಡಿ ಗೇರುವಷ್ಟು ಪಾವಿತ್ರ್ಯತೆ ಹೊಂದಿರುವ ಹೂವು. ಕೇವಲ ಪೂಜೆಗೆ ಮಾತ್ರವಲ್ಲ, ಜನರ ಆರೋಗ್ಯಕ್ಕೂ ಇವುಗಳಿಂದ ಲಾಭ ಉಂಟು. ಅಂದರೆ ಮಖಾನ ಎಂದೇ ಪ್ರಸಿದ್ಧವಾಗಿರುವ ಇವುಗಳ ಬೀಜಗಳು ಜನರ ಆಹಾರ ಪದ್ಧತಿಯಲ್ಲಿದ್ದರೆ ಅವುಗಳಿಂದ ಸಿಗುವ ಕ್ಯಾಲ್ಸಿಯಂ, ಪ್ರೋಟೀನ್, ನಾರು ಮತ್ತು ಇನ್ನಿತರ ಪೌಷ್ಟಿಕಾಂಶಗಳು ಕೇವಲ ದೇಹದ ಮೂಳೆಗಳನ್ನು ಬಲಪಡಿಸುವುದು ಮಾತ್ರವಲ್ಲದೆ ಜೀರ್ಣಶಕ್ತಿ ಸೇರಿದಂತೆ ಇನ್ನೂ ಹಲ ವಾರು ಆರೋಗ್ಯ ಪ್ರಯೋಜನಗಳನ್ನು ನೀಡುತ್ತವೆ ಎಂದು ಹೇಳುತ್ತಾರೆ. ದುರ್ಬಲ ಮೂಳೆ ಇರುವವರು ಇವುಗಳ ಸೇವನೆಯನ್ನು ಅಭ್ಯಾಸ ಮಾಡಿ ಕೊಳ್ಳಬಹುದು. ಬಾಯಿ ರುಚಿಗಾಗಿ ತಿನ್ನುವ ಮಖಾನ ಬೀಜಗಳು ತಮ್ಮ ಆರೋಗ್ಯ ಪ್ರಯೋಜನಗಳಿಗಾಗಿಯೇ ಪ್ರಸಿದ್ಧಿ ಪಡೆದಿವೆ.

**ಅನಾನಸ್ ಹಣ್ಣು ಸೇವನೆ ಮಾಡಿ :** ಅನಾನಸ್‌ನಲ್ಲಿ ವಿಟಮಿನ್ ಸಿ ಕಂಡುಬರುತ್ತದೆ, ಇದು ರೋಗನಿರೋಧಕ ಶಕ್ತಿಯನ್ನು ಬಲಪಡಿಸುತ್ತದೆ. ಇದಲ್ಲದೆ, ಪೊಟ್ಯಾಸಿಯಮ್ ಕೂಡ ಹೆಚ್ಚಿನ ಪ್ರಮಾಣದಲ್ಲಿ ಕಂಡುಬರುತ್ತದೆ. ಇದು ನಮ್ಮ ದೇಹವನ್ನು ಸಮತೋಲನ ಗೊಳಿಸಲು ಸಹಾಯ ಮಾಡುತ್ತದೆ. ಮೂಳೆಗಳಲ್ಲಿ ನೋವು ಅಥವಾ ಕ್ಯಾಲ್ಸಿಯಂ ಕೊರತೆಯನ್ನು ಅನುಭವಿಸುವ ಜನರು ತಮ್ಮ ಆಹಾರದಲ್ಲಿ ಅನಾನಸ್ ಹಣ್ಣನ್ನು ಸೇವನೆ ಮಾಡಿದರೆ ಒಳ್ಳೆಯದು.

**ಹಕ್ಕು ನಿರಾಕರಣೆ:** ಈ ಲೇಖನವು ಕೇವಲ ಮಾಹಿತಿಗಾಗಿ ಮಾತ್ರ. ಇದು ಯಾವುದೇ ರೀತಿಯಲ್ಲೂ ಯಾವುದೇ ಔಷಧಿ ಅಥವಾ ಚಿಕಿತ್ಸೆಗೆ ಪರ್ಯಾಯವಲ್ಲ. ವಿಜಯಕರ್ನಾಟಕ ಇದರ ಸತ್ಯತೆ, ನಿಖರತೆ ಮತ್ತು ಪರಿಣಾಮದ ಜವಾಬ್ದಾರಿಯನ್ನು ತೆಗೆದುಕೊಳ್ಳುವುದಿಲ್ಲ.

**ಮೊಸರು ಸೇವನೆ ಮಾಡಿ :** ಹಾಲು ಕುಡಿಯುವುದರಿಂದ ಮೂಳೆಗಳು ಬಲಗೊಳ್ಳುತ್ತವೆ ಎಂದು ಹೆಚ್ಚಿನ ಜನರು ಅಂದುಕೊಂಡಿದ್ದಾರೆ. ಆದರೆ ಮೊಸರಿನಲ್ಲಿ ಹಾಲಿಗಿಂತ ಹೆಚ್ಚಿನ ಕ್ಯಾಲ್ಸಿಯಂ ಇದೆ ಎಂದು ಬಹಳ ಕಡಿಮೆ ಜನರಿಗೆ ತಿಳಿದಿದೆ. ನೀವು ಹಾಲಿಗಿಂತ ಹೆಚ್ಚು ಮೊಸರು ಸೇವಿಸಿದರೆ, ಅದರಿಂದ ನಿಮಗೆ ಹೆಚ್ಚಿನ ಕ್ಯಾಲ್ಸಿಯಂ ಸಿಗುತ್ತದೆ.

**ನೆನೆಹಾಕಿದ ಬಾದಾಮಿ :** ವಿಟಮಿನ್ ಇ ಜೊತೆಗೆ, ಬಾದಾಮಿಯಲ್ಲಿ ಉತ್ತಮ ಪ್ರಮಾಣದ ಪ್ರೋಟೀನ್, ಸತು ಮತ್ತು ಕ್ಯಾಲ್ಸಿಯಂ ಕೂಡ ಕಂಡು ಬರುತ್ತದೆ. ಆರೋಗ್ಯ ತಜ್ಞರ ಪ್ರಕಾರ, ಬಾದಾಮಿ ಮೆದುಳನ್ನು ಚುರುಕುಗೊಳಿಸುವುದಲ್ಲದೆ ಮೂಳೆಗಳನ್ನು ಬಲಪಡಿಸುತ್ತದೆ. ಪ್ರತಿದಿನ ನೆನೆಸಿದ ಬಾದಾಮಿ ತಿನ್ನುವುದು ಮೂಳೆಗಳನ್ನು ಬಲಪಡಿಸುತ್ತದೆ.

**ಪಾಲಕ್ ಸೊಪ್ಪು :** ಆರೋಗ್ಯ ತಜ್ಞರ ಪ್ರಕಾರ, ಪಾಲಕ್‌ನಲ್ಲಿ ಉತ್ತಮ ಪ್ರಮಾಣದಲ್ಲಿ ಕ್ಯಾಲ್ಸಿಯಂ ಕಂಡು ಬರುವುದರಿಂದ, ದೇಹದ ಮೂಳೆಗಳನ್ನು ಬಲಪಡಿಸು ವಲ್ಲಿ ನೆರವಿಗೆ ಬರುತ್ತದೆ. ಆಹಾರ ಪದ್ಧತಿಯಲ್ಲಿ ಆಗಾಗ ಪಾಲಕ್ ಸೊಪ್ಪನ್ನು ಬಳಸುವುದರಿಂದ ಮೂಳೆಗಳಿಗೆ ಶೇಕಡಾ 25 ರಷ್ಟು ಕ್ಯಾಲ್ಸಿಯಂ ಅಂಶ ಸಿಕ್ಕಂತೆ ಆಗುತ್ತದೆ! ಪ್ರಮುಖವಾಗಿ ಇದರಲ್ಲಿ ಫೈಬರ್ ಮತ್ತು ವಿಟಮಿನ್ ಎ ಅಂಶ ಅಧಿಕ ಪ್ರಮಾಣದಲ್ಲಿ ಕಂಡು ಬರುತ್ತದೆ.

# ಮೂಳೆಗಳು ಗಟ್ಟಿ ಮುಟ್ಟಾಗಿರಬೇಕಾದ್ರೆ ಮಖಾನ ಬೀಜಗಳ ಲಾಡು ತಿನ್ನುವ ಅಭ್ಯಾಸ ಮಾಡಿಕೊಳ್ಳಿ!

**ಮಖಾನ ಬೀಜಗಳ ಲಾಡು:** ಒಂದು ಪ್ಯಾನ್ ತೆಗೆದುಕೊಂಡು ಅದರಲ್ಲಿ ಒಂದು ಟೀ ಚಮಚ ಹಸುವಿನ ತುಪ್ಪವನ್ನು ಹಾಕಿ. ಕಡಿಮೆ ಉರಿಯಲ್ಲಿ ಮಖಾನ ಬೀಜಗಳನ್ನು ಕ್ರಿಸ್ಪಿ ಆಗುವಂತೆ ಹುರಿಯಿರಿ. ಯಾವಾಗ ಈ ಬೀಜಗಳು ಒಡೆದುಕೊಳ್ಳಲು ಆರಂಭಿಸುತ್ತವೆ ಆಗ ಗ್ಯಾಸ್ ಆಫ್ ಮಾಡಿ. ನಂತರ ಇದೇ ಪ್ಯಾನ್ ನಲ್ಲಿ ಬಾದಾಮಿ, ಗೋಡಂಬಿ ಮತ್ತು ಒಣ ಕೊಬ್ಬರಿಯನ್ನು ಹಾಕಿ ಲೈಟ್ ಗೋಲ್ಡನ್ ಕಲರ್ ಬರುವವರೆಗೆ ಫ್ರೈ ಮಾಡಿ. ಈಗ ಮಿಕ್ಸರ್ ಗ್ರೈಂಡರ್‌ನಲ್ಲಿ ಮಖಾನ ಬೀಜಗಳನ್ನು ನುಣ್ಣಗೆ ಪುಡಿ ಮಾಡಿಕೊಳ್ಳಿ.

**ಮೂಳೆಗಳನ್ನು ಬಲಪಡಿಸುವ ಆಹಾರಗಳಿವು :** ಮೂಳೆಗಳನ್ನು ಬಲಪಡಿಸಲು ಕ್ಯಾಲ್ಸಿಯಂ, ಖನಿಜಾಂಶಗಳು ಮತ್ತು ಫಾಸ್ಫೇಟ್ ಬಹಳ ಮುಖ್ಯ. ಹೀಗಾಗಿ ಮೂಳೆಗಳನ್ನು ಬಲಪಡಿಸಲು, ದೈನಂದಿನ ಆಹಾರ ಪದ್ಧತಿಯಲ್ಲಿ ಸ್ನಾಯುಗಳು ಮತ್ತು ಮೂಳೆಗಳನ್ನು ಬಲಪಡಿಸುವ ಆಹಾರವನ್ನು ಸೇವಿಸಬೇಕು. ಅಂತಹ ಕೆಲವೊಂದು ಬಗೆಯ ಆಹಾರಗಳು ಇಲ್ಲಿದೆ ನೋಡಿ....

**ಮೂಳೆಗಳ ಆರೋಗ್ಯಕ್ಕೆ ಒಳ್ಳೆಯದು:** ನಮ್ಮ ಮೂಳೆಗಳನ್ನು ಬಲಪಡಿಸುವುದರ ಜೊತೆಗೆ ಮುಂಬರುವ ದಿನ ಗಳಲ್ಲಿ ಎದುರಾಗುವ ಮೂಳೆಗಳ ಹಲವಾರು ತೊಂದರೆಗಳಿಂದ ನಮ್ಮನ್ನು ರಕ್ಷಿಸುತ್ತದೆ. ವಯಸ್ಸಾದ ನಂತರದಲ್ಲಿ ಮೂಳೆಗಳ ಸವೆಯುವಿಕೆ, ಮೂಳೆಗಳು ಸೀಳು ಬಿಟ್ಟಂತಾಗುವುದು, ಅರ್ಧಕ್ಕೆ ಮುರಿದುಕೊಳ್ಳುವುದು ಇಂತಹ ಸಮಸ್ಯೆಗಳಿಂದ ರಕ್ಷಿಸುವ ಕೆಲಸ ಮಾಡುತ್ತದೆ. ಏಕೆಂದರೆ ಇವುಗಳಲ್ಲಿ ಕ್ಯಾಲ್ಸಿಯಂ ಅಪಾರ ಪ್ರಮಾಣದಲ್ಲಿದೆ.



# ಮಕ್ಕಳಿಗೆ ರಾತ್ರಿ ಮಲಗುವ ಮುನ್ನ ಹಾಲುಕುಡಿಸ್ತೀರಾ? ಹಾಗಾದ್ರೆ ಇದನ್ನು ತಿಳಿಯಿರಿ

ಹಾಲು ಆರೋಗ್ಯಕ್ಕೆ ಒಳ್ಳೆಯ ಪೌಷ್ಟಿಕಾಂಶ ಭರಿತ ಪಾನೀಯವಾಗಿದೆ. ಆದರೆ ರಾತ್ರಿ ಹೊತ್ತು ಮಕ್ಕಳಿಗೆ ಹಾಲು ಕುಡಿಸೋದ್ರಿಂದ ಅವರ ಹಲ್ಲಿನ ಮೇಲೆ ಹಾನಿಕಾರಕ ಪರಿಣಾಮ ಬೀರಬಲ್ಲದು. ಅದಕ್ಕಾಗಿ ಇಲ್ಲಿದೆ ದಂತ ವೈದ್ಯರ ಟಿಪ್ಸ್. ಮಕ್ಕಳಿಗೆ ಹಾಲು ಕುಡಿಸೋದು ಬಹಳ ಒಳ್ಳೆಯದು. ಇದು ಮಕ್ಕಳ ಮೂಳೆಗಳ ಬೆಳವಣಿಗೆಗೆ ಉತ್ತಮ. ಕೆಲವರಿಗೆ ರಾತ್ರಿ ಮಲಗುವ ಮೊದಲು ಮಕ್ಕಳಿಗೆ ಒಂದು ಗ್ಲಾಸ್ ಹಾಲು ಕುಡಿಸುವ ಅಭ್ಯಾಸವಿರುತ್ತದೆ. ರಾತ್ರಿ ಹಾಲು ಕುಡಿಯೋದ್ರಿಂದ ನಿದ್ದೆ ಚೆನ್ನಾಗಿ ಬರುತ್ತದೆ ಎನ್ನುವ ಕಾರಣಕ್ಕಾಗಿ ಹಾಲು ನೀಡುತ್ತಾರೆ. ಆದರೆ ನಿಮಗೆ ಗೊತ್ತಾ ಈ ಅಭ್ಯಾಸವು ಆರೋಗ್ಯಕ್ಕೆ ಹಾನಿಕಾರಕವಾಗಿದೆ. ಈ ಬಗ್ಗೆ ಆಸ್ಟರ್ ವೈಟ್‌ಫೀಲ್ಡ್ ಆಸ್ಪತ್ರೆಯ ದಂತವೈದ್ಯರಾದ ಡಾ. ಸಿಂಧುಯು ಮುಕ್ತಾಮತ್ ತಿಳಿಸಿದ್ದಾರೆ.

**ಮಲಗುವ ಮುನ್ನ ಹಾಲು ಕುಡಿಸುವುದರಿಂದ ಹಲ್ಲುಗಳಿಗೆ ಹಾನಿಯಾಗುತ್ತದೆ:** ಹಾಲು ಕ್ಯಾಲ್ಸಿಯಂ, ಜೀವಸತ್ವಗಳು ಮತ್ತು ಪೋಷಕಾಂಶಗಳಿಂದ ಸಮೃದ್ಧವಾಗಿದೆ. ಇದು ಬೆಳವಣಿಗೆ ಮತ್ತು ಮೂಳೆ ಬೆಳವಣಿಗೆಗೆ ಸಹಾಯಕವಾಗಿದೆ. ಆದರೆ ಈ ಆರೋಗ್ಯಕರ ಅಭ್ಯಾಸವು ನಿಮ್ಮ ಮಗುವಿನ ಹಲ್ಲುಗಳಿಗೆ ಸಮಸ್ಯೆಗಳನ್ನು ಉಂಟುಮಾಡುತ್ತದೆ ಎನ್ನುತ್ತಾರೆ ಮಕ್ಕಳ ದಂತವೈದ್ಯ ಡಾ. ಸಿಂಧು ಯು ಮುಕ್ತಾಮತ್. ಮಲಗುವ ಮುನ್ನ ಹಾಲು ಮಕ್ಕಳ ಹಲ್ಲುಗಳಿಗೆ ಹೇಗೆ ಕೆಟ್ಟದು ಎನ್ನುವುದನ್ನು ತಿಳಿದುಕೊಳ್ಳೋಣ.



**ಹಾಲಿನಲ್ಲಿ ಗುಪ್ತ ಸಕ್ಕರೆ ಇರುತ್ತದೆ:** ಹಾಲಿನಲ್ಲಿ ನೈಸರ್ಗಿಕವಾಗಿ ಲ್ಯಾಕ್ಟೋಸ್ ಇರುತ್ತದೆ, ಇದು ಒಂದು ರೀತಿಯ ಸಕ್ಕರೆ. ಇದು ಸಂಸ್ಕರಿಸಿದ ಸಕ್ಕರೆಯಷ್ಟು ಹಾನಿ ಕಾರಕವಲ್ಲದಿದ್ದರೂ, ಅದು ಹಲ್ಲುಗಳ ಮೇಲೆ ಹೆಚ್ಚು ಹೊತ್ತು ಇರುತ್ತದೆ. ವಿಶೇಷವಾಗಿ ರಾತ್ರಿಯಿಡೀ ಅದು ಹಲ್ಲಿನ ಮೇಲೆ ಇದ್ದರೆ, ಅದು ಹಲ್ಲು ಕೊಳೆಯುವಿಕೆಗೆ ಕಾರಣವಾಗಬಹುದು. ಮಗು ಹಾಲು ಕುಡಿದು ನಂತರ ಹಲ್ಲುಜ್ಜದೆ ಮಲಗಿದಾಗ ಹಾಲಿನ ಕೆಲವು ಭಾಗವು ಅವನ ಬಾಯಿಯಲ್ಲಿ ಉಳಿಯುತ್ತದೆ. ಬ್ಯಾಕ್ಟೀರಿಯಾಗಳು ಬೆಳೆಯಲು ಹಲ್ಲಿನ ದಂತಕವಚವನ್ನು ನಿಧಾನವಾಗಿ ನಾಶಮಾಡುವ ಆಮ್ಲಗಳನ್ನು ರೂಪಿಸುತ್ತದೆ.

**ಬಾಟಲ್ ಟೂತ್ ಡೆಲ್ಕಿ ಎಂದರೇನು?:** ಚಿಕ್ಕ ಮಕ್ಕಳು ಮತ್ತು ಶಿಶುಗಳಲ್ಲಿ ಇದನ್ನು ಬಾಲ್ಯದ ಕ್ಷಯ ಅಥವಾ ಬಾಟಲ್ ಆಧಾರಿತ ದಂತ ಕ್ಷಯ ಎಂದು ಕರೆಯಲಾಗುತ್ತದೆ. ಮಗು ತನ್ನ ಬಾಯಿಯಲ್ಲಿ ಹಾಲಿನ ಬಾಟಲಿಯೊಂದಿಗೆ ಮಲಗಿದಾಗ ಇದು ಹೆಚ್ಚಾಗಿ ಸಂಭವಿಸುತ್ತದೆ. ವಿಶೇಷವಾಗಿ ಮೇಲ್ಭಾಗದ ಮುಂಭಾಗದ ಹಲ್ಲುಗಳು, ರಾತ್ರಿಯಿಡೀ ಹಾಲಿನ ಸಕ್ಕರೆಗೆ ಒಡ್ಡಿಕೊಳ್ಳುತ್ತದೆ, ಇದಕ್ಕೆ ಚಿಕಿತ್ಸೆ ನೀಡದಿದ್ದರೆ ಹಲ್ಲಿನ ಕುಳಿಗಳು, ನೋವು ಮತ್ತು ಸೋಂಕಿಗೆ ಕಾರಣವಾಗಬಹುದು.

**ಶಿಶುಗಳಿಗೆ ರಾತ್ರಿಯಲ್ಲಿ ಹಾಲು ನೀಡುವುದನ್ನು ನಿಲ್ಲಿಸಬೇಕೇ** ಶಿಶುಗಳಿಗೆ ರಾತ್ರಿಯಲ್ಲಿ ಹಾಲು ನೀಡುವುದನ್ನು ನಿಲ್ಲಿಸಬೇಕು ಎಂದು ವೈದ್ಯರು ಹೇಳುವುದಿಲ್ಲ. ಆದರೆ ಹಾಲು ಕುಡಿದ ನಂತರ ಹಲ್ಲಿನ ನೈರ್ಮಲ್ಯ ಕಾಪಾಡುವುದು ಮುಖ್ಯ. ನಿಮ್ಮ ಮಗು ರಾತ್ರಿ ಹಾಲು ಕುಡಿದರೆ, ಆ ನಂತರ ಖಂಡಿತವಾಗಿಯೂ ಹಲ್ಲುಜ್ಜಿ. ಹಲ್ಲುಜ್ಜುವುದು ಸಾಧ್ಯವಾಗದಿದ್ದರೆ ಕನಿಷ್ಟ ಪಕ್ಷ ನೀರಿನಲ್ಲಿ ಬಾಯಿ ತೊಳೆಯುವುದು ಒಳ್ಳೆಯದು.

**ಹಲ್ಲು ಕೊಳೆಯುವುದನ್ನು ತಡೆಯಲು ದಂತವೈದ್ಯರ ಸಲಹೆ:** ನಿಮ್ಮ ಮಗುವಿನ ಮೊದಲ ಹುಟ್ಟುಹಬ್ಬದ ಮೊದಲು ದಂತ ತಪಾಸಣೆ ಮಾಡಿಸಿ. ಮಲಗುವಾಗ ಶಿಶುಗಳಿಗೆ ಹಾಲಿನ ಬಾಟಲಿಗಳನ್ನು ನೀಡುವುದನ್ನು ತಪ್ಪಿಸಿ. ಬಾಲ್ಯದಿಂದಲೇ ದಿನಕ್ಕೆ ಎರಡು ಬಾರಿ ಹಲ್ಲುಜ್ಜುವ ಅಭ್ಯಾಸವನ್ನು ರೂಢಿಸಿಕೊಳ್ಳಿ. ಮಗು ರಾತ್ರಿ ಹಾಲು ಕುಡಿದರೆ, ನಂತರ ಹಲ್ಲುಜ್ಜಲು ಹೇಳಿ. ಹಲ್ಲುಜ್ಜುವ 30 ನಿಮಿಷಕ್ಕೂ ಮೊದಲು ಹಾಲುಕುಡಿಸಿ.

● ಮುಖ್ಯಮಂತ್ರಿ ಜೊತೆ ಹಾವೇರಿ ಶಾಸಕರ ಸಭೆ ● ಕ್ಷೇತ್ರವಾರು ಬೇಡಿಕೆ ಸಲ್ಲಿಸಿದ ನಾಯಕರು

# ಹಾವೇರಿ ಜಿಲ್ಲಾಧಿಕಾರಿ ಕಚೇರಿಗೆ ಚತುಷ್ಪಥ ರಸ್ತೆ: ಸಿಎಂಗೆ ಶಾಸಕರ ಮನವಿ

• ಉದಯವಾಹಿನಿ, ಹಾವೇರಿ

ಜಿಲ್ಲೆಯ ಅಭಿವೃದ್ಧಿಗೆ ಸಂಬಂಧಪಟ್ಟಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಬೆಂಗಳೂರಿನಲ್ಲಿ ಭೇಟಿಯಾದ ಶಾಸಕರು, ವಿಶೇಷ ಸಭೆ ನಡೆಸಿ ಕ್ಷೇತ್ರವಾರು ಬೇಡಿಕೆ ಸಲ್ಲಿಸಿದರು.

ಶಿಗ್ಗಾವಿ-ಸವಣೂರು ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಮಗನನ್ನು ಸೋಲಿಸುವ ಮೂಲಕ ಕಾಂಗ್ರೆಸ್ ಕೈ ಬಲಪಡಿಸಿದ ಜಿಲ್ಲೆಯ ಜನರಿಗೆ, ವಿಶೇಷ ಕೊಡುಗೆ ನೀಡಲು ಮುಖ್ಯಮಂತ್ರಿ ಭರವಸೆ ನೀಡಿದ್ದರು. ಜೊತೆಗೆ, ಜಿಲ್ಲೆಗೆ ಅಗತ್ಯವಿರುವ ಬೇಡಿಕೆಗಳನ್ನು ಗಮನಕ್ಕೆ ತರುವಂತೆ ಶಾಸಕರಿಗೆ ತಿಳಿಸಿದ್ದರು.

ಬೇಡಿಕೆಗಳ ಪಟ್ಟಿ ಸಮೇತ ಮುಖ್ಯಮಂತ್ರಿ ಜೊತೆ ಮಾತುಕತೆ ನಡೆಸಿದ ಶಾಸಕರು, ಕ್ಷೇತ್ರ ಅಭಿವೃದ್ಧಿ ಹಾಗೂ ಜನರ ಆಶೋತ್ತರಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ತ್ವರಿತ ಕ್ರಮ ಕೈಗೊಳ್ಳುವಂತೆ ಕೋರಿದರು. ಜಿಲ್ಲೆಯ ಪ್ರತಿಯೊಂದು ವಿಧಾನಸಭಾ ಕ್ಷೇತ್ರಕ್ಕೆ ತಲಾ 50 ಕೋಟಿ ನೀಡುವುದಾಗಿ ಮುಖ್ಯಮಂತ್ರಿಯವರು ಈಗಾಗಲೇ ಘೋಷಿಸಿದ್ದಾರೆ. ಇದರ ಜೊತೆಯಲ್ಲಿಯೇ ಅಭಿವೃದ್ಧಿ ಕೆಲಸಕ್ಕಾಗಿ ಪ್ರತ್ಯೇಕ ಅನುದಾನ ನೀಡುವಂತೆಯೂ ಶಾಸಕರು ಬೇಡಿಕೆ ಮುಂದಿಟ್ಟರು.

**ಚತುಷ್ಪಥ ರಸ್ತೆಯ ಬೇಡಿಕೆ:** ಹಾವೇರಿ ಜಿಲ್ಲಾ ಕೇಂದ್ರವಾದರೂ ಮೂಲ ಸೌಕರ್ಯಗಳಿಂದ ವಂಚಿತವಾಗಿದೆ. ಈ ವಿಚಾರವನ್ನು ಮುಖ್ಯಮಂತ್ರಿ ಗಮನಕ್ಕೆ ತಂದ ಹಾವೇರಿ ಶಾಸಕ ರುದ್ರಪ್ಪ ಲಮಾಣಿ, ಜಿಲ್ಲಾ ಕೇಂದ್ರವಾದ ಹಾವೇರಿಯಿಂದ 7.50 ಕಿ.ಮೀ. ದೂರದಲ್ಲಿ ಜಿಲ್ಲಾಧಿಕಾರಿ ಕಚೇರಿಯಿದೆ. ಆದರೆ, ಅಲ್ಲಿಗೆ ಹೋಗಿಬರುವ ರಸ್ತೆ ಕಿರಿದಾಗಿದೆ. ಇದರಿಂದಾಗಿ ಜನರ ಸಂಚಾರಕ್ಕೆ ಕಷ್ಟವಾಗುತ್ತಿದೆ.

'ಇಂಥ ರಸ್ತೆಯನ್ನು ಚತುಷ್ಪಥ ರಸ್ತೆಯನ್ನಾಗಿ ಮಾಡಲು ಪ್ರತ್ಯೇಕ ಅನುದಾನ ನೀಡಬೇಕು' ಎಂದು ಕೋರಿದರು.ಜೆ.ಪಿ. ವೃತ್ತದಿಂದ ಮುನ್ಸಿಪಲ್ ಹೈಸ್ಕೂಲ್ ಮೈದಾನ, ಇಜಾರಿ ಲಕಮಾಪುರ, ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಹಿಮ್ಸ್), ದೇವಗಿರಿ ಯಲ್ಲಾಪುರ, ಜಿಲ್ಲಾಧಿಕಾರಿ ಕಚೇರಿಯವರೆಗೂ 7.50 ಕಿ.ಮೀ. ಚತುಷ್ಪಥ ರಸ್ತೆ ಆಗಬೇಕಿದೆ. ಇದಕ್ಕಾಗಿ ಸುಮಾರು 50 ಕೋಟಿ ಬೇಕಾಗಬಹುದು. ಇದೊಂದು ರಸ್ತೆಯಾದರೆ, ಜಿಲ್ಲಾಧಿಕಾರಿ ಕಚೇರಿಗೆ ಸಂಚರಿಸಲು ಸುಲಭವಾಗಲಿದೆ' ಎಂದರು.


ಉದಯವಾಹಿನಿ ಚಿತ್ರ

**ಹಿಮ್ಸ್‌ನಲ್ಲಿ 300 ಬೆಡ್ ಆಸ್ಪತ್ರೆ**

ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯು (ಹಿಮ್ಸ್) ಅತ್ಯುತ್ತಮ ರೀತಿಯಲ್ಲಿ ಪ್ರಗತಿ ಸಾಧಿಸುತ್ತಿದೆ. ಇದಕ್ಕೆ ಪ್ರತ್ಯೇಕವಾಗಿ 300 ಬೆಡ್‌ಗಳ ಆಸ್ಪತ್ರೆಯ ಅಗತ್ಯವಿದ್ದು ಅದಕ್ಕೆ ಅನುದಾನ ನೀಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ ಅವರು ಮುಖ್ಯಮಂತ್ರಿಯನ್ನು ಕೋರಿದರು. ಸಭೆಯಲ್ಲಿ ಪಾಲ್ಗೊಂಡಿದ್ದ ಅವರು 'ಜಿಲ್ಲೆಯಲ್ಲಿ ಕುಡಿಯುವ ನೀರು ಶಿಕ್ಷಣ ವೈದ್ಯಕೀಯ ಕೃಷಿ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಈಗಾಗಲೇ ಅಭಿವೃದ್ಧಿಯಾಗುತ್ತಿದೆ. ಮತ್ತಷ್ಟು ಅಭಿವೃದ್ಧಿ ಅಗತ್ಯವಿದ್ದು ಮಾದರಿ ಜಿಲ್ಲೆ ಮಾಡಲು ಸಹಕರಿಸಬೇಕು' ಎಂದು ವಿನಂತಿಸಿದರು.

**ರಾಣೆಬೆನ್ನೂರಿಗೆ ಹೊರವರ್ತುಲ ರಸ್ತೆ**

ಹಾವೇರಿ ಜಿಲ್ಲೆಯ ಪ್ರಮುಖ ನಗರವಾಗಿರುವ ರಾಣೆಬೆನ್ನೂರು ಏರುಗತಿಯಲ್ಲಿ ಅಭಿವೃದ್ಧಿಯಾಗುತ್ತಿದೆ. ಇಂಥ ನಗರಕ್ಕೆ ಹೊರವರ್ತುಲ ರಸ್ತೆಯ ಅಗತ್ಯವಿದ್ದು ಇದಕ್ಕಾಗಿ ಪ್ರತ್ಯೇಕ ಅನುದಾನ ನೀಡಬೇಕು ಎಂದು ರಾಣೆಬೆನ್ನೂರು ಶಾಸಕ ಪ್ರಕಾಶ ಕೋಳಿವಾಡ ಅವರು ಮುಖ್ಯಮಂತ್ರಿ ಎದುರು ಕೋರಿದರು. ಸಭೆಯಲ್ಲಿ ಮಾತನಾಡಿದ ಅವರು ರಾಣೆಬೆನ್ನೂರಿನ ಹಳೇ ಪ್ರದೇಶಗಳಿಗೆ ಮಾತ್ರ ನಿರಂತರ ಕುಡಿಯುವ ನೀರು ಪೂರೈಕೆಯಾಗುತ್ತಿದೆ. ಹೊಸ ಪ್ರದೇಶಗಳಿಗೂ ಯೋಜನೆ ವಿಸ್ತರಿಸಬೇಕು ಎಂದು ವಿನಂತಿಸಿದರು. ಶಾಸಕರ ಅನುದಾನವನ್ನು ಖರ್ಚು ಮಾಡಲು ಅಧಿಕಾರಿಗಳು ಸಾಕಷ್ಟು ಷರತ್ತುಗಳನ್ನು ಹಾಕುತ್ತಿದ್ದಾರೆ. ಕ್ಷೇತ್ರದ ಶಿಕ್ಷಣದ ಅಭಿವೃದ್ಧಿಗಾಗಿ ನಾನು ಗಮನ ಹರಿಸಿದ್ದೇನೆ. ಆದರೆ ಅಧಿಕಾರಿಗಳು ಇದಕ್ಕೆ ಒಪ್ಪುತ್ತಿಲ್ಲ. ಯಾವುದೇ ಷರತ್ತು ಇಲ್ಲದೇ ಶಾಸಕರ ಅನುದಾನವನ್ನು ಸ್ವವಿವೇಚನೆಯಿಂದ ಬಳಸಲು ಅವಕಾಶ ಕಲ್ಪಿಸಬೇಕು ಎಂದು ಕೋರಿದರು. ಆಶ್ರಯ ಮನೆಗಳ ನಿರ್ಮಾಣಕ್ಕೆ ನೀಡುತ್ತಿರುವ ವೈಯಕ್ತಿಕ ಅನುದಾನ ಯಾವುದಕ್ಕೂ ಸಾಲುತ್ತಿಲ್ಲ. ಹಣ ಕಡಿಮೆ ಇರುವುದರಿಂದ ಮನೆ ಕಟ್ಟಿಸಿಕೊಳ್ಳಲು ಫಲಾನುಭವಿಗಳು ಹಿಂದೇಟು ಹಾಕುತ್ತಿದ್ದಾರೆ. ಹೀಗಾಗಿ ಕ್ಷೇತ್ರಕ್ಕೆ 1000 ಮನೆಗಳನ್ನು ನೀಡುವ ಬದಲು 500 ಮನೆ ನೀಡಿ ಹೆಚ್ಚಿನ ಅನುದಾನ ಕೊಡಬೇಕು ಎಂದು ಮನವಿ ಮಾಡಿಕೊಂಡರು.

## ಕಸ್ಕೂಟಾ ಸಸ್ಯರೋಗ ಪತ್ತೆ: ಕಂಗಾಲಾದ ರೈತರು ಬೆಳೆ ಹಾನಿ ಪರಿಹಾರಕ್ಕೆ ಹೋರಾಟಗಾರ ಗಾರಂಪಳ್ಳಿ ಆಗ್ರಹ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಗಾರಂಪಳ್ಳಿ ಗ್ರಾಮದಲ್ಲಿ ಹಾಗೂ ಸುತ್ತಮುತ್ತ ಹೂಡದಳ್ಳಿ,ತಾದಲಾಪೂರ,ಗೌನಳ್ಳಿ,ದಸ್ತಾಪುರ ಸೇರಿದಂತೆ ಗ್ರಾಮಗಳಲ್ಲಿ ಮುಂಗಾರು ಬೆಳೆ ಉತ್ತಮವಾಗಿ ಬೆಳೆದರೆ ಮತ್ತೊಂದೆಡೆ ಕಸ್ಕೂಟಾ ಸಸ್ಯರೋಗದಿಂದ ರೈತರು ಕಂಗಾಲಾಗುತ್ತಿದ್ದಾರೆ ಕಸ್ಕುಟಾ ಸಸ್ಯರೋಗದಿಂದ ಬೆಳೆ ಬೆಳೆಯುವುದು ಕುಂಠಿತವಾಗುತ್ತಿದೆ ಅಧಿಕಾರಿಗಳು ತಜ್ಞರು ಸಮೀಕ್ಷೆ ನಡೆಸಿ ರೈತರಿಗೆ ಪರಿಹಾರ ನೀಡಬೇಕು ಎಂದು ಯುವ ಹೋರಾಟಗಾರ ಗೋಪಾಲ ಪೂಜಾರಿ ಗಾರಂಪಳ್ಳಿ ಒತ್ತಾಯಿಸಿದರು.

ತಾಲ್ಲೂಕಿನ ಗಾರಂಪಳ್ಳಿ ಸುತ್ತಮುತ್ತಲಿನ ಅನೇಕ ರೈತರ ಹೊಲಗದ್ದೆಗಳಲ್ಲಿ ಹಾಗೂ ಬೇರೆ ಬೇರೆ ಗ್ರಾಮಗಳಲ್ಲಿ ಕಸ್ಕೂಟಾ ಸಸ್ಯರೋಗ ಪತ್ತೆಯಾಗಿದ್ದು ಇದರಿಂದ ಬೆಳೆಗೆ ಸಿಗುವ ಪೌಷ್ಟಿಕಾಂಶವನ್ನು ಸಂಪೂರ್ಣವಾಗಿ ಕಸ್ಟುಟಾ ಸಸ್ಯ ರೋಗ ಪಡೆದು ತೊಗರಿ ಹಾಗೂ ಹೆಸರು ಉದ್ದು ಬೆಳೆಗಳಿಗೆ ಸಂಪೂರ್ಣವಾಗಿ ಕಸ್ಕುಟಾ ಬೆಳ್ಳಿ ಸುತ್ತಿಕೊಂಡು ಬೆಳೆ ಬೆಳೆಯಲು ಕುಂಠಿವಾಗಿ ಬೆಳೆ ನಾಶ ಮಾಡುತ್ತಿದೆವೆಂದು ಅವರು ಆರೋಪಿಸಿದರು.

ಈಗಾಗಲೇ ಚಿಮ್ಮನಚೋಡ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಅಭಿಲಾಷ ಸುಬೇದಾರ ರೈತರ ಜಮೀನುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಇದಕ್ಕೆ ರಾಸಾಯನಿಕ ಔಷಧಿ ಸಂಪಡಣೆಯಿಂದ ನಿಯಂತ್ರಿಸಲು ಸಾಧ್ಯವಿಲ್ಲ ಹೀಗಾಗಿ ಬೆಳೆಯುವ ಹಂತದಲ್ಲಿಯೇ ಈ ಕಸ್ಕೂಟ ಸಸ್ಯರೋಗಕ್ಕೆ ಕೈಯಿಂದಲ್ಲೇ ತೆಗೆದು ಹಾಕಬೇಕು ಎಂದು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

ಈ ಬಾರಿ ಉತ್ತಮ ಮುಂಗಾರು ಬೆಳೆಗಳು ಬೆಳೆದಿವೆ ರೈತರು ಸಾಲಸೂಲ ಮಾಡಿಕೊಂಡು ಹೊಲಗದ್ದೆಗಳಲ್ಲಿ ಬಿತ್ತನೆ ಮಾಡಿದ್ದು ಸಾವಿರಾರು ರೂಪಾಯಿಗಳಷ್ಟು ಲಾಗೋಡಿ ಮಾಡಿರುತ್ತಾರೆ,ಆದರೆ ಇತ್ತೀಚಿನ ದಿನಗಳಲ್ಲಿ ಹೆಸರು ಉದ್ದು ಬೆಳೆಗಳು ಹೂ,ಕಾಯಿ ಬಿಡುವ ಸಮಯದಲ್ಲಿ ಕಸ್ಟುಟಾ ಸಸ್ಯರೋಗ ಆಡುವ ಭಾಷೆಯಲ್ಲಿ ಅಂತರವಳ್ಳಿ ಬೆಳ್ಳಿ ಮತ್ತು ಕೀಟಬಾಧೆಯಿಂದ ರೈತರು ಬಹಳಷ್ಟು ಕಷ್ಟದಲ್ಲಿದ್ದಾರೆ ಕಸ್ಟುಟಾ ಸಸ್ಯರೋಗ ಬೆಳ್ಳಿಯು ಬೆಳೆಗಳಿಗೆ ಸುತ್ತಿಕೊಂಡು ಬೆಳೆ ನೆಲಕ್ಕೆ ಹಾಕಿ ಸಂಪೂರ್ಣ ಬೆಳೆ ಒಣಗುತ್ತದೆ ಇದರಿಂದ ಕೈಗೆ ಬಂದ ತುತ್ತು ಬಾಯಿಗೆ ಬರಲಿಲ್ಲಾ ಎಂಬುವ ಪರಿಸ್ಥಿತಿ ರೈತರ ಹಣೆಬರಹವಾಗಿದೆ. ಗಾರಂಪಳ್ಳಿ ಗ್ರಾಮದ ಮೋಮೀನ್ ಪಾಷ ಮತ್ತು ಬಕ್ಕಮ್ಮ,ರೇವಣ ಸಿದ್ದಪ್ಪ,ಸಂತೋಷ,ಶಿವಕುಮಾರ ಅಂಬಲಗಿ,ಬಸವರಾಜ ಎಂಬುವವರ ರೈತರುಗಳ ಜಮೀನುಗಳಲ್ಲಿ ಸಂಪೂರ್ಣ ಕಸ್ಟುಟಾ ಸಸ್ಯರೋಗ ಬೆಳ್ಳಿ ಅವರಿಸಿದ್ದು ಬೆಳೆನಾಶವಾಗುವ ಭೀತಿಯಲ್ಲಿ ರೈತರಿದ್ದಾರೆ. ತಕ್ಷಣ ಕೃಷಿ ಅಧಿಕಾರಿಗಳು ಗಮನಹರಿಸಿ ಉನ್ನತಮಟ್ಟದ ಕೃಷಿ ತಜ್ಞರನ್ನು ಆಹ್ವಾನಿಸಿ ಪರಿಶೀಲಿಸಿ ಇದಕ್ಕೆ ತಡೆಗಟ್ಟಲು ಸೂಕ್ತ ಸಲಹೆ ನೀಡಬೇಕು ಇಲ್ಲಾದಿದ್ದರೆ ಕೃಷಿ ಇಲಾಖೆ ಕಛೇರಿ ಎದುರುಗಡೆ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಗೋಪಾಲ ಪೂಜಾರಿ ಗಾರಂಪಳ್ಳಿ ಎಚ್ಚರಿಕೆ ನೀಡಿದ್ದಾರೆ.

ದೇವೀಂದ್ರಪ್ಪ ಬುಳ್ಳಾ, ಸಂಗನಬಸಯ್ಯ ಮಠ, ಶಿವಕುಮಾರ ಮುಸ್ತಾರಿ,ಇದ್ದರು.

> ಕಳೆದ ವರ್ಷವು ಕಸ್ಕೂಟ ಸಸ್ಯರೋಗವು ತಡೆಗಟ್ಟಲು ಕಲಬುರಗಿಯ ಕೃಷಿ ತಜ್ಞರ ತಂಡ ಆಗಮಿಸಿ ರೈತರ ಜಮೀನುಗಳಿಗೆ ತೆರಳಿ ಪರಿಶೀಲಿಸಿದ್ದಾರೆ ಇದಕ್ಕೆ ಔಷಧಿವಿಲ್ಲವೆಂದು ತಿಳಿಸಿದ್ದು ಸರ್ಕಾರವೇ ಇಂಥಹ ಸಸ್ಯರೋಗ ಬೆಳೆದಿದ್ದು ಅಧಿಕಾರಿಗಳಿಂದ ಸಮೀಕ್ಷೆ ನಡೆಸಿ ಸೂಕ್ತ ಪರಿಹಾರ ಘೋಷಿಸಬೇಕು.
> -ಗೋಪಾಲ ಪೂಜಾರಿ

## ರಸಗೊಬ್ಬರ ತಪಾಸಣೆ ತಂಡದಿಂದ ರಸಗೊಬ್ಬರ ದಾಸ್ತಾನು ಪರಿಶೀಲನೆ

• ಉದಯವಾಹಿನಿ,ಚಿಂಚೋಳಿ

ತಾಲ್ಲೂಕಿನ ರಸಗೊಬ್ಬರ ಅಂಗಡಿಗಳಲ್ಲಿ ಯಾವುದೇ ಕಾಳಸಂತೆಯಲ್ಲಿ ರಸಗೊಬ್ಬರ ಮಾರಾಟ ಮಾಡುವುದು ಕಂಡುಬಂದಿಲ್ಲ ಎಂದು ಸಹಾಯಕ ಕೃಷಿ ನಿರ್ದೇಶಕ ವೀರಶೆಟ್ಟಿ ರಾಠೋಡ್ ತಿಳಿಸಿದ್ದಾರೆ.

ಪಟ್ಟಣದಲ್ಲಿ ಮಾರಾಟ ಮಾಡುವ ರಸಗೊಬ್ಬರ ಅಂಗಡಿಗಳಿಗೆ ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ ನೇತೃತ್ವದಲ್ಲಿ ರಸಗೊಬ್ಬರ ತಪಾಸಣೆ ಅಧಿಕಾರಿಗಳ ತಂಡವನ್ನು ಭೇಟಿ ನೀಡಿ ಪರಿಶೀಲನೆ ಮಾಡಿ ಎಂ.ಎರ್.ಪಿ ದರದಲ್ಲಿ ರಸಗೊಬ್ಬರ ಮಾರಾಟ ಮಾಡಬೇಕು ಎಂದು ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ ಸೂಚಿಸಿದರು.

ಈಗಾಗಲೇ ತಾಲ್ಲೂಕಿನಾದ್ಯಂತ ಎಲ್ಲಾ ರೈತರ ಜಮೀನುಗಳಲ್ಲಿ ಪ್ರತಿಶತಃ 100ರಷ್ಟು ಬಿತ್ತನೆ ಕಾರ್ಯ ಪೂರ್ಣಗೊಂಡಿದೆ,ಇಲ್ಲಿ ಯಾವುದೇ ರಸಗೊಬ್ಬರ ಅವಶ್ಯಕತೆಯಿಲ್ಲ,ರಸಗೊಬ್ಬರ ರೈತರಿಗೆ ಅವಶ್ಯಕವಿದ್ದಲ್ಲಿ ದಾಸ್ತಾನುಯಿದೆ,ಈಗಾಗಲೇ ರೈತರು ಬಿತ್ತನೆ ಮಾಡಿದ್ದು ಉದ್ದು,ಹೆಸರು ಹೂ,ಚೊಳ್ಳೆ ಕಾಯಿ ಹಂತದಲ್ಲಿದೆ ತೊಗರಿಬೇಳೆ ಬೆಳೆ ಸೋಯಾಬಿನ್ ಕೂಡ ಚೆನ್ನಾಗಿ ಬೆಳೆದಿದೆ, ಅತಿಯಾದ ಮಳೆ ಸುರಿಯುತ್ತಿರುವುದರಿಂದ ರೈತರ ಜಮೀನುಗಳಲ್ಲಿ ಮಳೆಯ ನೀರು ನಿಲ್ಲದಂತೆ ಕಾಲುವೆ ಮೂಲಕ ಹೊರಹಾಕಬೇಕು ಇಲ್ಲಾದಿದ್ದರೆ ಮಳೆ ನಷ್ಟವಾಗಿ ಒಣಗುತ್ತದೆ.


ಉದಯವಾಹಿನಿ ಚಿತ್ರ

ನೀರು ಕಾಲುವೆ ಮೂಲಕ ಹೊರಹಾಕಿದ ನಂತರ ನ್ಯಾನೋ ಯುರಿಯಾ ರಸಗೊಬ್ಬರ ಸಿಂಪಡಿಸಬೇಕು ಎಂದು ಸಹಾಯಕ ಕೃಷಿ ನಿರ್ದೇಶಕ ವೀರಶೆಟ್ಟಿ ರಾಠೋಡ್ ಹೇಳಿದರು.


ತಾಲ್ಲೂಕಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶಂಕರ ರಾಠೋಡ್, ರೈತ ಸಂಪರ್ಕ ಕೃಷಿ ಸಹಾಯಕ ಅಧಿಕಾರಿ ಇಮ್ರಾನ್ ಅಲಿ,ಪಿಎಸ್‌ಐ ಮಡಿವಾಳಪ್ಪ ಬಾಗೋಡಿ,ಇದ್ದರು.

## ರೈತರು ಹೊಲದಲ್ಲಿ ನಾಟಿ ಮಾಡವ ತನಕ 12 ಗಂಟೆ ವಿದ್ಯುತ್ ಸಂಪರ್ಕ ಕಲ್ಪಿಸಿ: ಕೆ. ಕರಿಯಪ್ಪ

• ಉದಯವಾಹಿನಿ ಸಿಂಧನೂರು

ತಾಲ್ಲೂಕಿನ ಮಾವಿನಮಾಡು ರಾಮ ಕ್ಯಾಂಪ್ ಗೊಬ್ಬರಕಲ್ಲ, ಹಾಗೂ ರೌಡಕುಂದಾ ಗ್ರಾಮದ ರೈತರು ಸರಿಯಾಗಿ ವಿದ್ಯುತ್ ಸಂಪರ್ಕ ಕಲ್ಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಬೇಜವಾಬ್ದಾರಿ ಧೋರಣೆ ಅನುಸರಿಸುತ್ತಿದ್ದಾರೆ ಎಂದು ಬಿಜೆಪಿ ಪಕ್ಷದ ಮುಖಂಡ ಕೆ ಕರಿಯಪ್ಪ ಅವರು ಕಾರ್ಯಾಲಯಕ್ಕೆ ಆಗಮಿಸಿ ರೈತರು ತಮ್ಮ ಸಮಸ್ಯೆಗಳನ್ನು ಹೇಳಿಕೊಂಡರು

ಕೆ.ಕರಿಯಪ್ಪ ನವರು ರೈತರು ಪರವಾಗಿ ಇದ್ದವರು ತಕ್ಷಣ ನಗರದ ಜೆಸ್ಕಾಂ ಇಲಾಖೆ ಕಛೇರಿಗೆ ಭೇಟಿ ನೀಡಿ ಎಡಬ್ಲ್ಯೂಡಿ ಅಧಿಕಾರಿ ಜೊತೆಗೆ ವಿವಿಧ ಗ್ರಾಮಗಳಲ್ಲಿ ಪಂಪ್ ಸೆಟ್ ಗಳು ಮೂಲಕ ರೈತರು ತಮ್ಮ ಜಮೀನಿನಲ್ಲಿ ಸರಿಯಾಗಿ ವಿದ್ಯುತ್ ಸಂಪರ್ಕ ಕಡಿತಗೊಳಿಸಿ ಬರಿ 7 ತಾಸು ಕರೆಂಟ್ ಕರೆಂಟ್ ಕೊಡುತ್ತಾರೆ.ಆದರೆ ಹೊಲಗಳು ತೋಯುತ್ತಿಲ್ಲ. ಆದ್ದರಿಂದ ರೈತರು ಈಗಾಗಲೇ ಭತ್ತ ನಾಟಿ ಮಾಡುವ ಸಂದರ್ಭ ಆಗಿದ್ದರಿಂದ ನೀರು ಹೆಚ್ಚು ಬೇಕಾಗಿರುತ್ತದೆ ಅದಕ್ಕಾಗಿ ನಾಟಿ ಮಾಡುವ ತನಕ 12 ಗಂಟೆ ವಿದ್ಯುತ್ ಸಂಪರ್ಕ ಕಲ್ಪಿಸಿ ರೈತರಿಗೆ ಅನುಕೂಲವಾಗುತ್ತದೆ ಎಂದರು.


ಉದಯವಾಹಿನಿ ಚಿತ್ರ

> ಬೆಳಗ್ಗಿನ ಜಾವ ಸುಮಾರು 4 ಗಂಟೆಗೆ ವಿದ್ಯುತ್ ಪೂರೈಸುವಂತೆ ಹಾಗೂ 12 ಗಂಟೆಗಳ ವಿದ್ಯುತ್ ಪೂರೈಸುವಂತೆ ತಾಕೀತು ಮಾಡಿದರು.ಒಂದು ವೇಳೆ ರೈತರಿಗೆ ಸಮರ್ಪಕವಾಗಿ ವಿದ್ಯುತ್ ಒದಗಿಸಿದೆ ಇದ್ದರೆ ಮುಂದಾಗುವ ಪರಿಣಾಮಕ್ಕೆ ನೀವೇ ಜವಾಬ್ದಾರರು ಆಗಬೇಕಾಗುತ್ತದೆ ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ನರೇಶ್ ರಾಮ ಕ್ಯಾಂಪ್ ಯುವ ಮುಖಂಡ ಮಲ್ಲಿಕಾರ್ಜುನ ಕೆಇ ಬಿ, ರಾಜು ಅಡವಿಬಾವಿ, ಕೆಳಭಾಗದ ರೈತರು ಇನ್ನಿತರರು ಉಪಸ್ಥಿತರಿದ್ದರು.

## ಶಿಕ್ಷಕರನ್ನು ಬಿ.ಎಲ್.ಒ. ಕರ್ತವ್ಯದಿಂದ ಮುಕ್ತಗೊಳಿಸಲು ಒತ್ತಾಯ

• ಉದಯವಾಹಿನಿ ಚಡಚಣ

ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ ಆದೇಶದ ಮೇರೆಗೆ ಶಿಕ್ಷಕರನ್ನು ಬಿ.ಎಲ್.ಒ. ಕರ್ತವ್ಯದಿಂದ ಮುಕ್ತಗೊಳಿಸಬೇಕೆಂದು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಹಾಗೂ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪದಾಧಿಕಾರಿಗಳು ಚಡಚಣ ತಹಶೀಲ್ದಾರ ಸಂಜಯ ಇಂಗಳೆ ಅವರಿಗೆ ಮನವಿ ಸಲ್ಲಿಸಿದರು.

ಚಡಚಣ ತಾಲ್ಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಬಸವರಾಜ ಮಜ್ಜಗಿ ಹಾಗೂ ಪ್ರಧಾನ ಕಾರ್ಯದರ್ಶಿ ವಿಠ್ಠಲ ಕಾಂಬಳೆ ಮಾತನಾಡಿ ಕಂದಾಯ ಇಲಾಖೆ ನೀಡುವ ಚುನಾವಣೆ ಮತ್ತು ಇತರೆ ಕಾರ್ಯಗಳನ್ನು ಶಿಕ್ಷಕರು ಚಾಚು ತಪ್ಪದೇ ಮಾಡುತ್ತಿದ್ದಾರೆ. ಆದರೆ ಈಗ ಶಿಕ್ಷಕರಿಗೆ ಶಿಕ್ಷಣ ಇಲಾಖೆಯ ಕೆಲಸದ ಒತ್ತಡ ಹೆಚ್ಚಾಗಿದೆ. ಶಾಲೆಗಳು ಆರಂಭಗೊಂಡಿದ್ದು ಶಿಕ್ಷಕರು ಇದರಲ್ಲಿ ಪರಿಣಾಮಕಾರಿಯಾಗಿ ತೊಡಗಿಕೊಳ್ಳಬೇಕಿದೆ.

ಇತರೆ ಇಲಾಖೆಯ ಕೆಲಸಗಳಿಂದ ಬೋಧನೆಗೆ ಸಮಯವೇ ಸಿಗುತ್ತಿಲ್ಲ. ಇದು ಮಕ್ಕಳ ಪಾಠದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ.ಸಭೆಗಳಿಗೆ ಹಾಜರಾಗುವುದು, ಮತದಾರರ ಚೀಟಿಗೆ ಆಧಾರ ಲಿಂಕ್ ಮಾಡುವುದು, ಮತದಾರರ ಸೇರ್ಪಡೆ, ತೆಗೆದು ಹಾಕುವಿಕೆ, ತಿದ್ದುಪಡಿ ಇತರ ಬಹಳಷು ಕೆಲಸಗಳಿರುವುದರಿಂದ ಒತ್ತಡಕ್ಕೆ ಸಿಲುಕುವಂತಾಗಿದೆ.

ಬೋಧನೆ ಮತ್ತು ಬಿಎಲ್‌ಒ ಎರಡು ಕೆಲಸ ಸಮರ್ಪಕವಾಗಿ ಮಾಡಲಾಗುತ್ತಿಲ್ಲ. ಕಾರಣ ಶಿಕ್ಷಕರನ್ನು ಈ ಕೆಲಸದಿಂದ ಬಿಡುಗಡೆಗೊಳಿಸುವಂತೆ ಮನವಿ ಮಾಡಿದರು. ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎ ಎಸ್ ಸೋನಗಿ ಹಾಗೂ ಪ್ರಧಾನ ಕಾರ್ಯದರ್ಶಿ ಬಸವಂತ ಉಮರಾಣಿ ಮಾತನಾಡಿ ಶಿಕ್ಷಕರನ್ನು ಬಿ.ಎಲ್.ಒ. ಕರ್ತವ್ಯಕ್ಕೆ ನಿಯೋಜಿಸಬಾರದೆಂದು ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ ಮತ್ತು ಸರ್ವೋಚ್ಚ ನ್ಯಾಯಾಲಯವು ಆದೇಶ ನೀಡಿದೆ. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರ ಹೇಳಿಕೆಯನ್ನು ಮನಗಂಡು, ಸರ್ಕಾರ ಮತ್ತು ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಕರ್ತವ್ಯದಿಂದ ಮುಕ್ತಗೊಳಿಸಿ ಶೈಕ್ಷಣಿಕ ಪ್ರಗತಿಗೆ ಸಹಕರಿಸಬೇಕೆಂದು ಒತ್ತಾಯ ಮಾಡಿದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ಸಂಜಯ ಇಂಗಳೆ ಸರಕಾರಿ ನೌಕರರ ಸಂಘದ ಮನವಿಗೆ ಸಂಪೂರ್ಣವಾಗಿ ಸ್ಪಂದಿಸುವದಾಗಿ ತಿಳಿಸಿದರು. ಚಡಚಣ ತಾಲ್ಲೂಕಿನ ನೌಕರರ ಸಂಘದ ಸಲೀಮ್ ಮಕಾನದಾರ, ಮಲ್ಲು ಮೇತ್ರಿ ಹಾಗೂ ಎಲ್ಲಾ ಪದಾಧಿಕಾರಿಗಳು, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕುಮಾರ ತೇಲಿ ಎಲ್ಲಾ ಪದಾಧಿಕಾರಿಗಳು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

> ಶಾಲೆಯಲ್ಲಿ ಮಕ್ಕಳ ದಾಖಲಾತಿ, ಕ್ರೀಡಾಕೂಟ, ಪ್ರತಿಭಾ ಕಾರಂಜಿ ಸೇರಿದಂತೆ ಇಲಾಖೆಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು ಮತ್ತು ನಿರ್ವಹಣೆ ಮಾಡುವುದು ಕಷ್ಟವಾಗಿದೆ. ಒಂದು ತಿಂಗಳ ಕಾಲ ಮತದಾರರ ಪಟ್ಟಿ ತಯಾರಿಕೆ, ಮತ್ತು ಮನೆ ಮನೆಗೆ ಬೇಟಿ ಕರ್ತವ್ಯದಲ್ಲಿ ಶಿಕ್ಷಕರು ತೊಡಗಿಕೊಂಡಾಗ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣವನ್ನು ನೀಡಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು.
> -ಎಸ್ ಎಸ್ ಪಾಟೀಲ ಪ್ರಾಥಮಿಕ ಶಾಲಾ ಶಿಕ್ಷಕರ ಪತ್ತಿನ ಸಂಘದ ಅಧ್ಯಕ್ಷ

## ವಿವಿಧ ಗ್ರಾಮಗಳಿಗೆ ಜಿಲ್ಲಾ ಪಂ. ಸಿಇಒ ಭೇಟಿ

• ಉದಯವಾಹಿನಿ ಶಿರಹಟ್ಟಿ

ಕಳೆದ ಮೂರು-ನಾಲ್ಕು ದಿನಗಳಿಂದ ಜಿಲ್ಲಾದ್ಯಂತ ಬಿಡುವಿಲ್ಲದ ಸಂಚಾರ ನಡೆಸಿರುವ ಜಿಲ್ಲಾ ಪಂಚಾಯಿತಿ ಸಿಇಒ ಭರತ್ ಎಸ್ ಸರ್ಕಾರದ ವಿವಿಧ ಕಾಮಗಾರಿಗಳು, ಯೋಜನೆಗಳ ಅನುಷ್ಠಾನ ಹಾಗೂ ಮೂಲ ಸೌಕರ್ಯಗಳಿಗೆ ಸಂಬಂಧಿಸಿದಂತೆ ಪರಿಶೀಲನೆ ನೆಡೆಸಿದರು.

ಅವರು ಶಿರಹಟ್ಟಿ ತಾಲೂಕು ಮಜ್ಜೂರ ಹಾಗೂ ಮಾಚೇನಹಳ್ಳಿ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ ಪೂರ್ಣಗೊಂಡ ಕಾಮಗಾರಿಗಳನ್ನು ಪರಿಶೀಲಿಸಿ ನೆಡೆಸಿದರು. ಈ ಹಿನ್ನೆಲೆಯಲ್ಲಿ ಮಜ್ಜೂರ, ಶಿವಾಜಿ ತಾಂಡಾ, ಮಾಚೇನಹಳ್ಳಿ, ತೆಗ್ಗಿನ ಭಾವನೂರ, ನವಭಾವನೂರ ಗ್ರಾಮಗಳಿಗೆ ಅನಿರೀಕ್ಷಿತ ಭೇಟಿ ನೀಡಿ, ಜೆಜೆಎಂ ಕಾಮಗಾರಿಗಳು,ಸಂಪರ್ಕಗಳ ಗುಣಮಟ್ಟ, ಮೀಟರ್ ಅಳವಡಿಕೆ, ರಸ್ತೆ ಪುನಶ್ಚೇತನ, ನೀರಿನ ಗುಣಮಟ್ಟ, ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳ ಕಾರ್ಯ ನಿರ್ವಹಣೆ ಕುರಿತು ವಿವರವಾದ ಪರಿಶೀಲನೆ ನಡೆಸಿದರು. ಇದೆ ಸಂದರ್ಭದಲ್ಲಿ ಮನೆ ಮನೆಗಳಿಗೆ ಅಳವಡಿಸಲಾಗಿರುವ ನಳಗಳ ಸಂಪರ್ಕ ಬಗ್ಗೆ ಫಲಾನುಭವಿಗಳೊಂದಿಗೆ ಚರ್ಚೆ ಮಾಡಿದರು.


ಉದಯವಾಹಿನಿ ಚಿತ್ರ

ಗ್ರಾಮಗಳ ಭೇಟಿ ವೇಳೆ , ಗುಣಮಟ್ಟದ ಕಾಮಗಾರಿ ಕೈಗೊಳ್ಳುವಲ್ಲಿ ಅಧಿಕಾರಿಗಳು ಮತ್ತು ಗುತ್ತಿಗೆದಾರರ ಜವಾಬ್ದಾರಿ ಎಷ್ಟಿದೆಯೋ ಕಾಮಗಾರಿ ಗುಣಮಟ್ಟ ಕಾಪಾಡಿಕೊಳ್ಳುವುದು, ಸದುಪಯೋಗ ಪಡೆದುಕೊಳ್ಳುವ ಜವಾಬ್ದಾರಿ ಸಾರ್ವಜನಿಕರ ಮೇಲೂ ಇದೆ. ಹೀಗಾಗಿ ಸಾರ್ವಜನಿಕರು ಸರ್ಕಾರದ ಭಾಗವಾಗಿ ಜವಾಬ್ದಾರಿಗಳನ್ನು ನಿಭಾಯಿಸಬೇಕು ಕಾಮಗಾರಿಗಳು ಗುಣನುಟ್ಟದಿಂದ ಆಗುವಂತೆ ನೋಡಿಕೊಳ್ಳಬೇಕಲ್ಲದೇ ಪೂರ್ಣಗೊಂಡಿರುವ ಕಾಮಗಾರಿಗಳಿಂದ ಸದುಪಯೋಗ ಪಡೆದುಕೊಳ್ಳಬೇಕೆಂದರು.

## ಯೂರಿಯಾ ಅಕ್ರಮ ದಾಸ್ತಾನು: ಡಿಸಿ ದಿಢೀರ್ ಭೇಟಿ

• ಉದಯವಾಹಿನಿ ಹಾವೇರಿ

ಜಿಲ್ಲೆಯ ಹಲವು ಕಡೆಗಳಲ್ಲಿ ಯೂರಿಯಾ ಗೊಬ್ಬರವನ್ನು ಅಕ್ರಮವಾಗಿ ದಾಸ್ತಾನು ಮಾಡಿರುವ ಬಗ್ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ಅವರು ದಿಢೀರ್ ಪರಿಶೀಲನೆ ನಡೆಸಿದರು.

ಕೃಷಿ ಇಲಾಖೆ ಅಧಿಕಾರಿಗಳು ಹಾಗೂ ಪೊಲೀಸರ ಜೊತೆಯಲ್ಲಿ ಜಿಲ್ಲೆಯ ಹಲವು ಗೋದಾಮುಗಳಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿ, ದಾಸ್ತಾನು ಬಗ್ಗೆ ಮಾಹಿತಿ ಪಡೆದುಕೊಂಡರು. ಪೂರೈಕೆ, ಸಂಗ್ರಹ ಹಾಗೂ ಮಾರಾಟದ ಬಗ್ಗೆ ದಾಖಲೆ ಸಮೇತ ವಿವರಣೆ ಪಡೆದರು. ಜಿಲ್ಲೆಯಲ್ಲಿ ಯೂರಿಯಾ ಗೊಬ್ಬರದ ಅಭಾವ ಇರುವುದಾಗಿ ರೈತರು ದೂರುತ್ತಿದ್ದರು. ಕೆಲವರು ಯೂರಿಯಾವನ್ನು ಅಕ್ರಮವಾಗಿ ಖರೀದಿಸಿ ದಾಸ್ತಾನು ಇರಿಸಿ ದುಪ್ಪಟ್ಟು ಬೆಲೆಗೆ ಮಾರುತ್ತಿರುವ ಬಗ್ಗೆ ದೂರುಗಳಿದ್ದವು. ಹೀಗಾಗಿ, ಹಲವು ಗೋದಾಮುಗಳಲ್ಲಿ ದಿಢೀರ್ ಭೇಟಿ ನೀಡಿ ಪರಿಶೀಲಿಸಲಾಯಿತು ಎಂದು ಜಿಲ್ಲಾ ಮಟ್ಟದ ಅಧಿಕಾರಿಯೊಬ್ಬರು ಹೇಳಿದರು. ಪರಿಶೀಲನೆ ಸಂದರ್ಭದಲ್ಲಿ ಯಾವುದೇ ಅಕ್ರಮ ದಾಸ್ತಾನು ಕಂಡುಬಂದಿಲ್ಲ. ಮುಂದಿನ ದಿನಗಳಲ್ಲಿ ಪುನಃ ದಿಢೀರ್ ಭೇಟಿ ಇರಲಿದೆ ಎಂದರು.

# ಮುದ್ರಣ ಮಾಧ್ಯಮ ನಿಖರವಾದ ಸತ್ಯಾಂಶ ಒಳಗೊಂಡಿದೆ: ಗುತ್ತೆದಾರ

● ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ನಡೆದ ಪತ್ರಿಕಾ ದಿನಾಚರಣೆ ಕಾರ್ಯಕ್ರಮ

• ಉದಯವಾಹಿನಿ ಔರಾದ್

ಮಂಗಳೂರು ಸಮಾಚಾರ ಪತ್ರಿಕೆ ಯಿಂದ ಶುರುವಾದ ಪತ್ರಿಕಾ ದಿನಾಚರಣೆ ನಿಖರತೆ ಜೊತೆಗೆ ಪ್ರಖರತೆಯನ್ನು ಉಳಿಸಿಕೊಂಡಿದೆ, ಮುದ್ರಣ ಮಾಧ್ಯಮ ಸತ್ಯಾಂಶಗಳನ್ನು ಒಳಗೊಂಡಿರುತ್ತದೆ ಎಂದು ವಿಜಯ ಕರ್ನಾಟಕ ಸ್ಥಾನಿಕ ಸಂಪಾದಕ ದೇವಯ್ಯ ಗುತ್ತೇದಾರ ಹೇಳಿದರು.

ಪಟ್ಟಣದ ತಾ.ಪಂ ಸಭಾಂಗಣದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ನಡೆದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಅವರು ಪತ್ರಿಕಾ ದಿನಾಚರಣೆ ಇಂದು ಒಂದು ಸಂಭ್ರಮ ಅದರ ಜೊತೆಗೆ ಆತ್ಮಾವಲೋಕನ ಮಾಡಿಕೊಳ್ಳುವ ದಿನ ಪತ್ರಕರ್ತರು ಎದುರಿಸುತ್ತಿರುವ ಸವಾಲುಗಳು ಮೆಲುಕು ಹಾಕಬೇಕು, ಮುದ್ರಣ ಮಾಧ್ಯಮ ಮಿತ್ರರಿಗೆ ಹೆಚ್ಚಿನ ಜವಾಬ್ದಾರಿ ಇದೆ ಎಂದು ಸುಪ್ರೀಂ ಕೋರ್ಟ್ ಹೇಳುತ್ತದೆ, ಅನೇಕ ಮಹಾತ್ಮರೂ ಸಹ ಪತ್ರಕರ್ತರಾಗಿ ಸೇವೆ ಸಲ್ಲಿಸಿದ್ದಾರೆ ಅದರಂತೆ ನಾವು ಆ ಕಾರ್ಯ ಮುಂದುವರೆಸಿಕೊಂಡು ಬರುತ್ತಾ ಇರುವುದು ಶ್ಲಾಘನೀಯ. ಡಿಜಿಟಲ್ ಮಾಧ್ಯಮದಲ್ಲಿ ಸಾಮಾನ್ಯವಾಗಿ ಕೊರತೆಯಿರುವ ವಿಶ್ವಾಸಾರ್ಹತೆಯ ಅಂಶ ಮುದ್ರಣ ಮಾಧ್ಯಮದಲ್ಲಿದೆ. ಜನರು ಡಿಜಿಟಲ್ ವಿಷಯಕ್ಕಿಂತ ಭೌತಿಕ ವಸ್ತುಗಳನ್ನು ಹೆಚ್ಚು ನಂಬುತ್ತಾರೆ, ಎಲೆಕ್ಟ್ರಾನಿಕ್ ಮೀಡಿಯಾ ಬಂದರು ಸಹ ಮುದ್ರಣ ಮಾಧ್ಯಮದ ಮೇಲೆ ಯಾವುದೇ ಪ್ರಕಾರದ ಪರಿಣಾಮ ಬಿದ್ದಿಲ್ಲ, ಜನಪರ ಹಾಗೂ ಜೀವಪರವಾದ ಸುದ್ದಿಗಳನ್ನು ಮುದ್ರಣ ಮಾಧ್ಯಮ ನೀಡುತ್ತಾ ಬಂದಿದೆ.

ಪ್ರಜಾಪ್ರಭುತ್ವ ಉಳಿಯಲು ಮೂಲ ಕಾರಣವೇ ಪತ್ರಿಕಾ ರಂಗ. ಸಾಮಾಜಿಕ ಮಾಧ್ಯಮಗಳಿಂದ ಅಶಾಂತಿ ಉಂಟಾಗಿರುವುದನ್ನು ಕಾಣಬಹುದು ಆದರೆ ಮುದ್ರಣ ಮಾಧ್ಯಮದಿಂದ ಅಶಾಂತಿ ಉಂಟಾಗಿರುವ ಯಾವುದೇ ನಿದರ್ಶನಗಳು ಸಿಗುವುದಿಲ್ಲ ಆದ್ದರಿಂದ ಪತ್ರಕರ್ತರು ಸತ್ಯಾಂಶದ ಪರವಾಗಿ ನಿಲ್ಲಬೇಕು ಪತ್ರಿಕೋದ್ಯಮ ಬಲಶಾಲಿಯಾಗಬೇಕು ಪತ್ರಕರ್ತರು ಅಧ್ಯಯನಶೀಲರಾಗಬೇಕು ಎಂದು ತಿಳಿಸಿದರು.

ಭಾಲ್ಕಿ ಹಿರೇಮಠ ಸಂಸ್ಥಾನದ ಗುರುಬಸವ ಪಟ್ಟದೇವರು ಮಾತನಾಡಿ ಕಲ್ಯಾಣ ಕರ್ನಾಟಕ ಭಾಗದ ಧ್ವನಿಯಾಗಿ ನಿಂತಿರುವ ದೇವಯ್ಯ ಗುತ್ತೇದಾರ ಅವರ ಕಾರ್ಯ ವೈಖರಿ ಅನೇಕ ಜ್ವಲಂತ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಈ ಭಾಗದ ಧ್ವನಿಯಾಗಿದ್ದಾರೆ, ಅವರಿಗೆ ಡಾ.ಬಸವಲಿಂಗಪಟ್ಟದೇವರ ಅಮೃತ ಮಹೋತ್ಸವ ನಿಮಿತ್ತ ಕನ್ನಡ ಜಂಗಮ ಪ್ರಶಸ್ತಿ ನೀಡುತ್ತಿರುವುದು ಸಂತಸದ ಸಂಗತಿ, ಈ ಗಡಿ ಭಾಗದಲ್ಲಿ ಕನ್ನಡ ಉಳಿಸಿ ಬೆಳೆಸಿದ ಕೀರ್ತಿ ಪೂಜ್ಯ ಡಾ.ಚನ್ನಬಸವ ಪಟ್ಟದೇವರಿಗೆ ಸಲ್ಲುತ್ತದೆ. ಈ ಭಾಗದಲ್ಲಿ ಕನ್ನಡ ಬೆಳೆಸಿ ಉಳಿಸುವ ಕಾರ್ಯ ಪತ್ರಿಕಾ ಮಾಧ್ಯಮ ಮಾಡುತ್ತಿದೆ ಎಂದರು.

> ಔರಾದ ಮೇಲೆ ನನಗೆ ವಿಶೇಷ ಕಾಳಜಿ ಇದೆ ಯಾಕೆಂದರೆ ನನಗೆ ರಾಜಕೀಯ ಆಸಕ್ತಿ ಹುಟ್ಟಿದ್ದು ಇದೆ ಔರಾದ ನಿಂದಲೇ ಇಲ್ಲಿನ ಜನರ ಪ್ರೀತಿ ನನ್ನನ್ನು ಎಂಎಲ್ಸಿ ಆಗಲು ಕಾರಣವಾಯಿತು. ಜನಪ್ರತಿನಿಧಿಗಳೆ ಆಗಲಿ ಅಧಿಕಾರಿಗಳೇ ಆಗಲಿ ಜನ ಸಂಪರ್ಕ ಹೊಂದಿರಬೇಕು ಜನ ಸಂಪರ್ಕ ಇಲ್ಲದೆ ಇದ್ದಲ್ಲಿ ಅಧಿಕಾರ ಇದ್ದರು ಸಹ ವ್ಯರ್ಥ ಇಲ್ಲಿನ ಜನರ ಮೇಲೆ ಇರುವ ಪ್ರೀತಿ ಸದಾ ಜೀವಂತವಾಗಿರುತ್ತದೆ. ಇಲ್ಲಿನ ಪತ್ರಕರ್ತ ಮಿತ್ರರು ಸಮಾಜಕ್ಕೆ ನಿಖರತೆಯ ಸುದ್ದಿಗಳನ್ನು ನೀಡುತ್ತಾ ಸಾಮಾಜಿಕ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸ ಮಾಡುತ್ತಿದ್ದಾರೆ.
> -ವಿಜಯಸಿಂಗ್ ಮಾಜಿ ವಿಧಾನ ಪರಿಷತ್ ಸದಸ್ಯ


ಉದಯವಾಹಿನಿ ಚಿತ್ರ

**ದೇವಯ್ಯ ಗುತ್ತೆದಾರಗೆ ಕನ್ನಡ ಜಂಗಮ ಪ್ರಶಸ್ತಿ ಪ್ರದಾನ**

ತಾಪಂ ಸಭಾಂಗಣದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ನಡೆದ ಪತ್ರಿಕಾ ದಿನಾಚರಣೆಯಲ್ಲಿ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ನಾಡೋಜ ಡಾ.ಬಸವಲಿಂಗಪಟ್ಟದೇವರ ಅಮೃತ(75ನೇ ಜನ್ಮದಿನ) ಮಹೋತ್ಸವ ಅಂಗವಾಗಿ ಎರಡುವರೆ ದಶಕಗಳಿಂದ ಪತ್ರಿಕಾ ರಂಗದಲ್ಲಿ ಸೇವೆ ಸಲ್ಲಿಸುತ್ತಿರುವ ದೇವಯ್ಯ ಗುತ್ತೆದಾರ ಅವರಿಗೆ ರಾಜ್ಯ ಮಟ್ಟದ ಕನ್ನಡ ಜಂಗಮ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

**ಮುದ್ರಣ ಮಾಧ್ಯಮ ಮಿತ್ರರಿಗೆ ಹೆಚ್ಚಿನ ಜವಾಬ್ದಾರಿ**

## ಮಿನಿ ನ್ಯೂಸ್

### ವ್ಯಸನಮುಕ್ತ ದಿನಾಚರಣೆ ಜಾಗೃತಿ ಜಾಥಾ

• ಉದಯವಾಹಿನಿ ಕಲಬುರಗಿ

ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಪದವಿ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಕೇಂದ್ರದ ಸಂಯುಕ್ತಾಶ್ರಯದಲ್ಲಿ ನಗರದ ದರ್ಗಾ ರಸ್ತೆಯಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪದವಿ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಕೇಂದ್ರದಲ್ಲಿ ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಅಂಗವಾಗಿ ವ್ಯಸನ ಮುಕ್ತ ದಿನಾಚರಣೆ ಕಾರ್ಯಕ್ರಮ ಭಾಗವಾಗಿ ಇಲ್ಲಿನ ಜಿಮ್ಸ್ ಆಸ್ಪತ್ರೆ ಅವರಣದಿಂದ ಡಾ.ಬಿ.ಆರ್. ಅಂಬೇಡ್ಕರ್ ಪದವಿ ಮಹಾವಿದ್ಯಾಲಯದ ವರೆಗೆ ನಸಿರ್‌ಂಗ್ ವಿದ್ಯಾರ್ಥಿಗಳಿಂದ ಜಾಗೃತಿ ಜಾಥಾ ನಡೆಯಿತು.

ಪ್ರಭಾರಿ ಜಿಲ್ಲಾ ಶಸ್ತ್ರಜ್ಞ ಡಾ.ಓಂಪ್ರಕಾಶ ಅಂಬುರೆ ಮತ್ತು ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿ ಡಾ.ವಿವೇಕಾನಂದ ರೆಡ್ಡಿ ಅವರು ಜಿಲ್ಲಾ ಆಸ್ಪತ್ರೆಯಲ್ಲಿ ಚಾಲನೆ ನೀಡಿದರು.

### ವಿಜಯಪುರ ಜಿಲ್ಲೆಯನ್ನು 371 ಜೆ ಅಡಿಗೆ ಸೇರಿಸಲು ಆಗ್ರಹಿಸಿ ಪ್ರತಿಭಟನೆ

• ಉದಯವಾಹಿನಿ ವಿಜಯಪುರ

ವಿಜಯಪುರ ಜಿಲ್ಲೆಯನ್ನು 371 ಜೆ ಅಡಿಯಲ್ಲಿ ಸೇರಿಸುವಂತೆ ಆಗ್ರಹಿಸಿ ರೈತ ಭಾರತ ಪಕ್ಷ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿತು. ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಮೆರವಣಿಗೆಯಲ್ಲಿ ಹೊರಟ ರೈತ ಭಾರತ ಪಕ್ಷದ ಕಾರ್ಯಕರ್ತರು ನಗರದ ಪ್ರಮುಖ ಬೀದಿಗಳಲ್ಲಿ ಹಾಯ್ದು ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ ವಿಜಯಪುರ ಜಿಲ್ಲೆಯನ್ನು 371 ಜೆ ಗೆ ಸೇರಿಸಲು ಆಗ್ರಹಿಸಿದರು.

ರೈತ ಭಾರತ ಪಕ್ಷದ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ಕೆಂಗನಾಳ ಮಾತನಾಡಿ, ಹಿಂದುಳಿದ ವಿಜಯಪುರ ಜಿಲ್ಲೆಯನ್ನು 371 ಜೆ ಅಡಿಗೆ ಸೇರಿಸದೆ ಜಿಲ್ಲೆಗೆ ಭಾರಿ ಅನ್ಯಾಯ ಮಾಡಿದಂತಾಗಿದೆ. ಅನ್ಯಾಯ ಸರಿಪಡಿಸಲು ಸರ್ಕಾರ ಕೂಡಲೇ ವಿಜಯಪುರ ಜಿಲ್ಲೆಯನ್ನೂ 371 ಜೆ ಮೀಸಲಾತಿಗೆ ಸೇರಿಸಬೇಕು ಎಂದು ಒತ್ತಾಯಿಸಿದರು. ಈ ಬೇಡಿಕೆಗೆ ಸರ್ಕಾರ ಸ್ಪಂದಿಸದಿದ್ದರೆ ಬರುವ ದಿನಗಳಲ್ಲಿ ಉಗ್ರ ಹೋರಾಟ ಕೈಗೊಳ್ಳಬೇಕಾಗುತ್ತದೆ ಎಂದು ಕೆಂಗನಾಳ ಎಚ್ಚರಿಕೆ ನೀಡಿದರು.

### ಜಿಲ್ಲೆಯಲ್ಲಿ ಅತಿ ಹೆಚ್ಚು ಬಾಲ್ಯ ವಿವಾಹ

• ಉದಯವಾಹಿನಿ ಸಂಡೂರು

ಬಳ್ಳಾರಿ ಜಿಲ್ಲೆಯಲ್ಲಿ ಅತಿ ಹೆಚ್ಚು ಬಾಲ್ಯ ವಿವಾಹ ಪ್ರಕರಣಗಳು ಆಗಿವೆ, ಇತ್ತೀಚೆಗೆ ಮನುಷ್ಯ ಕ್ರೂರಿಯಾಗಿ ಬದುಕುತ್ತಿದ್ದಾನೆ ಎಂದು ಕ್ಷೇತ್ರ ಸಂಪನ್ಮೂಲ ವ್ಯಕ್ತ ಜಕಣಾಚಾರಿ ತಿಳಿಸಿದರು. ಅವರು ತಾಲ್ಲೂಕಿನ ಚೋರನೂರು ಹೋಬಳಿಯಲ್ಲಿ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಮನ್ವಯ ಅಧಿಕಾರಿಗಳ ಕಾರ್ಯಾಲಯ ಸಂಡೂರು, ಬಳ್ಳಾರಿ ಜಿಲ್ಲೆ, ಆರೋಗ್ಯ ಇಲಾಖೆ, ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಮಕ್ಕಳ ಸಹಾಯ ವಾಣಿ ಮತ್ತು ಗ್ರಾಮ ಪಂಚಾಯತಿ, ವಿವಿಧ ಭಾಗೀದಾರ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಬಾಲ್ಯ ವಿವಾಹ ತಡೆ ಜಾಗೃತಿ ಕಾರ್ಯಗಾರ ಉದ್ಘಾಟಿಸಿ ಮಾತನಾಡಿ ಬಳ್ಳಾರಿ ಜಿಲ್ಲೆಯಲ್ಲಿ ಅತಿ ಹೆಚ್ಚು ಬಾಲ್ಯ ವಿವಾಹ ಪ್ರಕರಣಗಳು ಪತ್ತೆಯಾಗಿದ್ದು ತಡೆಯಲು ಜಾಗೃತಿ ಮಾಡುತ್ತಿದ್ದೇವೆ ಅದರೂ ಮೂಢನಂಬಿಕೆ ಹೆಚ್ಚುತ್ತಿದೆ, ಮಕ್ಕಳ ಹಕ್ಕುಗಳ ಬಗ್ಗೆ, ಬಾಲ್ಯ ವಿವಾಹ ಕಾಯ್ದೆಗಳ ಬಗ್ಗೆ ಮಾಹಿತಿ ನೀಡಿ, ಮುಂದೆ ಗುರಿ ಇರಬೇಕು ಹಿಂದೆ ಗುರು ಇರಬೇಕು, ಜೊತೆಗೆ ಶಿಕ್ಷಣ ಇದ್ದರೆ ಮಾತ್ರ ಇಂತಹ ಲೈಂಗಿಕ ದೌರ್ಜನ್ಯ, ಬಾಲ್ಯ ವಿವಾಹ, ಬಾಲ ಕಾರ್ಮಿಕರು ಆಗದಂತೆ ತಡೆಗಟ್ಟಬಹುದು ಎಂದು ಹೇಳಿದರು.

### ಆನ್‌ಲೈನ್‌ನಲ್ಲಿ ಹಣ ವಂಚನೆ

• ಉದಯವಾಹಿನಿ ಉಡುಪಿ

ಸೈಬರ್ ಪೊಲೀಸರ ಸೋಗಿನಲ್ಲಿ ಆನ್‌ಲೈನ್‌ನಲ್ಲಿ ಹಣ ವಂಚಿಸಿರುವ ಕುರಿತು ಸೆನ್ ಅಪರಾಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಲಿಯೋಲ್ಲಾ ಎಂಬುವವರಿಗೆ ಟೆಲಿಕಾಮ್ ರೆಗ್ಯುಲೇಟರಿ ಆಫ್ ಇಂಡಿಯಾದಿಂದ ಎಂದು ಹೇಳಿ ಅಪರಿಚಿತ ವ್ಯಕ್ತಿ ಕರೆ ಮಾಡಿದ್ದು, ನಿಮ್ಮ ವಿರುದ್ಧ ಕಿರುಕುಳ ಮತ್ತು ಸುಳ್ಳು ಜಾಹೀರಾತಿಗೆ ಸಂಬಂಧಿಸಿದ ದೂರುಗಳು ದಾಖಲಾಗಿದೆ ಎಂದು ಹೇಳಿದ್ದ. ಮುಂಬೈ ಸೈಬರ್ ಪೊಲೀಸ್‌ನವರಿಗೆ ಕರೆಯನ್ನು ವರ್ಗಾವಣೆ ಮಾಡುವುದಾಗಿಯೂ ತಿಳಿಸಿದ್ದ ಎಂದು ದೂರಿನಲ್ಲಿ ಹೇಳಲಾಗಿದೆ. ಬಳಿಕ ಪೊಲೀಸ್ ಸಮವಸ್ತ್ರದ ಲ್ಲಿದ್ದ ವ್ಯಕ್ತಿ ವಾಟ್ಸ್‌ಆಯಪ್ ವಿಡಿಯೋ ಕರೆ ಮಾಡಿ, ಡಿಜಿಟಲ್ ಅರೆಸ್ಟ್ ಮಾಡುವುದಾಗಿ ಬೆದರಿಸಿ ಒಟ್ಟು 6 ಲಕ್ಷ ಪಡೆದು ವಂಚಿಸಿರುವುದಾಗಿ ದೂರಲಾಗಿದೆ.

### ಎ.ಸಿ ತಡೆಯಾಜ್ಞೆಗೂ ಬೆಲೆ ಇಲ್ಲವೇ: ಆರಗ

• ಉದಯವಾಹಿನಿ ತೀರ್ಥಹಳ್ಳಿ

ಉಪ ವಿಭಾಗಾಧಿಕಾರಿ ನೀಡಿದ ತಡೆಯಾಜ್ಞೆಗೆ ತಾಲ್ಲೂಕು ಕಚೇರಿಯಲ್ಲಿ ಬೆಲೆ ಇಲ್ಲವೇ. ಕೋಡ್ಲುಬೈಲು ಗ್ರಾಮದ ಗೇಣಿದಾರರ ಹೆಸರಿನ ಬದಲು ಬೇರೊಬ್ಬರ ಹೆಸರಿಗೆ ಪಹಣಿ ಖಾತೆ ಮಾಡಲಾಗಿದೆ. ಇದು ಹೇಗೆ ಸಾಧ್ಯ ಎಂದು ಮಂಗಳವಾರ ತಾಲ್ಲೂಕು ಕಚೇರಿಗೆ ಭೇಟಿ ನೀಡಿ ಉಪವಿಭಾಗಾಧಿಕಾರಿ ಜಿ.ಎಚ್. ಸತ್ಯನಾರಾಯಣ ಅವರನ್ನು ಶಾಸಕ ಆರಗ ಜ್ಞಾನೇಂದ್ರ ಪ್ರಶ್ನಿಸಿದರು. 1974ರ ಹಿಂದೆಯೇ ಗೇಣಿ ಸಾಗುವಳಿ ಚೀಟಿ ನೀಡಲಾಗಿದೆ. ನಿರಂತರವಾಗಿ ಪೌತಿಖಾತೆ ಬದಲಾಯಿಸಲು ಕುಟುಂಬ ಅರ್ಜಿಗಳನ್ನು ನೀಡುತ್ತಿದೆ. ಗೇಣಿಗೆ ಒಳಪಡದಿದ್ದರೆ ಜಮೀನನ್ನು ಸರ್ಕಾರಿ ಭೂಮಿ ಎಂದು ಘೋಷಿಸಿ ಎಂದು ತಹಶೀಲ್ದಾರ್‌ಗೆ ಅರ್ಜಿ ಸಲ್ಲಿಸಿದ್ದೇವೆ. ಆದರೆ, ನಮ್ಮ ಅರ್ಜಿಯಿದ್ದ ಸಂದರ್ಭದಲ್ಲೂ ಮತ್ತೊಬ್ಬರ ಹೆಸರಿಗೆ ಖಾತೆಯಾಗಿದೆ ಎಂದು ದೂರುದಾರರು ಅಳಲು ತೋಡಿಕೊಂಡರು.

'ಮಧ್ಯವರ್ತಿಗಳ ಹಾವಳಿಯಿಂದಾಗಿ ತಾಲ್ಲೂಕು ಕಚೇರಿಯ ಬಗ್ಗೆ ಜನರಲ್ಲಿ ಅಸಮಾಧಾನ ಹೆಚ್ಚಾಗುತ್ತಿದೆ. ಹಕ್ಕುಪತ್ರಗಳ ದಾಖಲೆಗಳು ಕಚೇರಿಯ ಹೊರಗೆ ಬಿಕಾರಿಯಾಗುತ್ತಿದೆ. 6 ಗುಮಾಸ್ತರ ಬದಲಿಗೆ ಅಕ್ರಮವಾಗಿ ಖಾಸಗಿ ಗುಮಾಸ್ತರನ್ನು ನೇಮಕ ಮಾಡಿಕೊಳ್ಳಲಾಗಿದೆ. ಅದಕ್ಕೆ ಅವಕಾಶ ಇದೆಯೇ ಎಂದು ಪ್ರಶ್ನಿಸಿದರು. 'ಶಾಸನಕನಾಗಿ ಎರಡು ವರ್ಷ ಕಳೆದಿದ್ದರು ಒಂದು ಹಕ್ಕುಪತ್ರ ನೀಡಲು ಸಾಧ್ಯವಾಗಿಲ್ಲ. ಹಕ್ಕುಪತ್ರ ನೀಡಲು ಆಗದ ಮೇಲೆ ಬಗರ್‌ಹುಕುಂ ಸಕ್ರಮೀಕರಣ ಸಮಿತಿ ಇದ್ದು ಪ್ರಯೋಜನವೇನು. ತಕ್ಷಣವೇ ಬಗರ್‌ಹುಕುಂ ಸಭೆ ನಡೆಸುತ್ತೇನೆ. ಯಾವುದೇ ಅರ್ಜಿಗಳನ್ನು ಕಂದಾಯ ಇಲಾಖೆ ನೀಡದಿದ್ದರೆ ಅದನ್ನೇ ನಿರ್ಣಯ ಮಾಡಿ ಸರ್ಕಾರಕ್ಕೆ ಕಳುಹಿಸುತ್ತೇನೆ. ವಿಧಾನಸಭೆಯಲ್ಲಿ ಈ ಬಗ್ಗೆ ಚರ್ಚೆ ನಡೆಸುತ್ತೇನೆ' ಎಂದು ತಿಳಿಸಿದರು. ಅಕ್ರಮವಾಗಿ ಗುಮಾಸ್ತರ ನೇಮಕವಾಗಿದ್ದರೆ ಅಧಿಕಾರಿಗಳು ಸಮಸ್ಯೆ ಎದುರಿಸಬೇಕಾಗುತ್ತದೆ. ಗೇಣಿ ಸಾಗುವಳಿ ಸಮಸ್ಯೆಯನ್ನು 10 ದಿನದೊಳಗೆ ಬಗೆಹರಿಸುತ್ತೇವೆ' ಎಂದು ಉಪ ವಿಭಾಗಾಧಿಕಾರಿ ಜಿ.ಎಚ್. ಸತ್ಯನಾರಾಯಣ ಹೇಳಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ನಿಮ್ಮಲ್ಲಿ ಶಕ್ತಿಯ ಕೊರತೆಯಿರದೇ ಆತ್ಮವಿಶ್ವಾಸದ ಕೊರತೆಯಿರುವುದರಿಂದ ನಿಮ್ಮ ನಿಜವಾದ ಸಾಮರ್ಥ್ಯವನ್ನು ಅರಿತುಕೊಳ್ಳಿ. ನೀವು ಕಮಿಷನ್‌ಗಳಿಂದ ರಾಯಧನಗಳಿಂದ ಪ್ರಯೋಜನ ಪಡೆಯುತ್ತೀರಿ.

**ವೃಷಭ** ನೀವು ಅವರ ಸಲುವಾಗಿ ಕಾಳಜಿ ತೆಗೆದುಕೊಳ್ಳುತ್ತೀರೆಂದು ಅವರಿಗೆ ಅರ್ಥವಾಗುವ ಹಾಗೆ ಅವರ ಸಂತೋಷವನ್ನು ಹಂಚಿಕೊಳ್ಳಿ. ನಿಮ್ಮ ಸಿಹಿಯಾದ ಪ್ರೀತಿಯ ಜೀವನದಲ್ಲಿನ ಉತ್ಕಟತೆಯನ್ನು ಆನಂದಿಸುತ್ತೀರಿ.

**ಮಿಥುನ** ನಿಮ್ಮ ಪ್ರಮುಖ ಆತಂಕ ಮತ್ತು ಒತ್ತಡದ ಒಂದು ಕಾರಣವೆಂದರೆ ಕೆಲವೊಮ್ಮೆಯಾದರೂ ನೀವು ಮಗುವಿನಂತಿರುವ ಸಾಮರ್ಥ್ಯವನ್ನು ಕಳೆದುಕೊಂಡಿದ್ದೀರಿ ಎಂದು ಚಿಂತಿಸುವುದಾಗಿದೆ.

**ಕರ್ಕಾಟಕ** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ.

**ಸಿಂಹ** ನೀವು ವಿಶ್ರಾಂತಿ ಪಡೆಯಲು ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಪೂರ್ಣಗೊಳ್ಳಬಹುದು.

**ಕನ್ಯಾ** ಕುಟುಂಬದೊಂದಿಗೆ ಸಾಮಾಜಿಕ ಚಟುವಟಿಕೆ ಎಲ್ಲರನ್ನೂ ಆರಾಮವಾಗಿ ಆಹ್ಲಾದಕರ ಮನಸ್ಥಿತಿಯಲ್ಲಿಡುತ್ತದೆ. ಯಾರಿಗಾದರೂ ಅವರ ಪ್ರೀತಿ ಯಶಸ್ವಿಯಾಗುವುದನ್ನು ಸ್ವತಃ ದೃಶ್ಯೀಕರಿಸುವುದು ಸಹಾಯ ಮಾಡಿ.

**ತುಲಾ** ಸಕಾರಾತ್ಮಕ ದೃಷ್ಟಿಕೋನ ನಿಮ್ಮ ಸುತ್ತಲಿನವರನ್ನು ಆಕರ್ಷಿಸಬಹುದು. ಇಂದು ಸುಮ್ಮನೆ ಕುಳಿತುಕೊಳ್ಳುವ ಬದಲು –ಏಕೆ ಏನನ್ನಾದರೂ ಮಾಡಬಾರದು. ಇದು ನಿಮ್ಮ ಗಳಿಕೆಯ ಶಕ್ತಿಯನ್ನು ಸುಧಾರಿಸುತ್ತದೆ.

**ವೃಶ್ಚಿಕ** ನಿಮ್ಮ ದೈಹಿಕ ಬಲವನ್ನು ನಿರ್ವಹಿಸಲು ನೀವು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ.

**ಧನಸ್ಸು** ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ಇತರರ ಮಾತುಗಳನ್ನು ನಂಬಿ ಇಂದು ಹೂಡಿಕೆ ಮಾಡಿದಲ್ಲಿ ಆರ್ಥಿಕ ನಷ್ಟದ ಸಾಧ್ಯತೆಯಿದೆ.

**ಮಕರ** ನೀವು ಅವರಿಗೆ ಸಹಾಯ ಮಾಡಿದರೆ, ನಿಮ್ಮ ಆರ್ಥಿಕ ಪರಿಸ್ಥಿತಿ ಸ್ವಲ್ಪ ತೊಂದರೆಗೊಳಗಾಗಬಹುದು. ಸಂಗಾತಿ ಕಾಳಜಿ ತೋರಿಸುತ್ತಾರೆ. ನಿಮ್ಮ ಪ್ರೇಮ ಜೀವನ ಶರದೃತುವಿನಲ್ಲಿನ ಮರದ ಎಲೆಯಂತಿರುತ್ತದೆ.

**ಕುಂಭ** ಆರೋಗ್ಯದ ಬಗ್ಗೆ ಗಮನ ನೀಡಬೇಕು. ನಿಮಗೆ ಹಣದ ಲಾಭವಾಗುವ ಪೂರ್ತಿ ಸಾಧ್ಯತೆ ಇದೆ, ಆದರೆ ಇದರೊಂದಿಗೆ ನೀವು ದಾನವನ್ನು ಸಹ ಮಾಡಬೇಕು ಏಕೆಂದರೆ ಇದರಿಂದ ನಿಮಗೆ ಮಾನಸಿಕ ಶಾಂತಿ ಸಿಗುತ್ತದೆ.

**ಮೀನ** ಇಂದು ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ವಿದೇಶದಲ್ಲಿ ವ್ಯಾಪಾರ ಮಾಡುವ ಈ ರಾಶಿಚಕ್ರದ ಜನರಿಗೆ ಇಂದು ಸಾಕಷ್ಟು ಹಣದ ಲಾಭವನ್ನು ಪಡೆಯಬಹುದು.

● ಡೆಂಗ್ಯೂ ರೋಗ ನಿರ್ಮೂಲನಕ್ಕೆ ಸೊಳ್ಳೆಗಳ ನಿಯಂತ್ರಣ ಅವಶ್ಯಕ : ಮಹೇಶ ಡಿ.

# ಡೆಂಗ್ಯೂ ವಿರೋಧಿ ಮಾಸಚರಣೆ ಕಾರ್ಯಕ್ರಮ





ಉದಯವಾಹಿನಿ ಚಿತ್ರ

• ಉದಯವಾಹಿನಿ ಚಿತ್ರದುರ್ಗ

ಸೊಳ್ಳೆಗಳ ನಿಯಂತ್ರಣ ಮಾಡದೆ, ಸೊಳ್ಳೆಗಳ ಕಡಿತ ನಿರ್ಲಕ್ಷ್ಯ ಮಾಡಿದರೆ ಡೆಂಗ್ಯೂ ಹಾಗೂ ಇತರೇ ಕೀಟಜನ್ಯ ಸಾಂಕ್ರಾಮಿಕ ರೋಗಗಳು ಖಚಿತವಾಗಿ ಬರುತ್ತವೆ, ಸೊಳ್ಳೆ ಕೀಟ ಚಿಕ್ಕದಾದರೂ ಕಾಟ ದೊಡ್ಡದು ಎಂಬಂತೆ ಸೊಳ್ಳೆಗಳ ಉತ್ಪತ್ತಿ, ನಿಯಂತ್ರಣದಿಂದ ಮಾತ್ರ ಕೀಟಜನ್ಯ ಸಾಂಕ್ರಾಮಿಕ ರೋಗಗಳ ನಿಯಂತ್ರಣ ಸಾಧ್ಯ ಎಂದು ಆರೋಗ್ಯ ನೀರಿಕ್ಷಣಾಧಿಕಾರಿ ಮಹೇಶ ಡಿ. ಅವರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರಾಷ್ಟ್ರೀಯ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ವಿಭಾಗ, ಬೆಳಗಟ್ಟ ಆರೋಗ್ಯ ಕೇಂದ್ರ ಮತ್ತು ಶ್ರೀ ಮಾರುತಿ ಗ್ರಾಮಂತರ ಪ್ರೌಢಶಾಲೆಯ ಇವರ ಸಹಯೋಗದೊಂದಿಗೆ ಶಾಲೆಯಲ್ಲಿ ★ಡೆಂಗ್ಯೂ ವಿರೋಧಿ ಮಾಸಚರಣೆ★ ಕಾರ್ಯಕ್ರಮ ಹಮ್ಮಿಕೊಂಡು ಡೆಂಘಿ ಸೊಳ್ಳೆ ಸಂತಾನೋತ್ಪತ್ತಿ ತಡೆಗೆ ಮತ್ತು ಡೆಂಘಿ ಹಾಗೂ ಇನ್ನಿತರ ಕೀಟಜನ್ಯ ಸಾಂಕ್ರಾಮಿಕ ರೋಗಗಳ ನಿಯಂತ್ರಣದ, ಬಗ್ಗೆ ಪ್ರಾತ್ಯಕ್ಷಿಕೆ ಮೂಲಕ ಮಾಹಿತಿ ಶಿಕ್ಷಣ ಮತ್ತು ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತ ತಿಳಿಸಿದರು. ಡೆಂಘಿ ಮುಂಗಾರು ಮಳೆಯ ಸಂದರ್ಭದಲ್ಲಿ ಹೆಚ್ಚುವುದು ಸಾಮಾನ್ಯ, ಅದ್ದರಿಂದ ಮನೆಯ ಸುತ್ತಮುತ್ತ ನೀರು ನಿಲ್ಲದಂತೆ, ಟೈರು, ಚಿಪ್ಪ, ಖಾಲಿ ಬಾಟಲಿಗಳಲ್ಲಿ, ಪ್ಲಾಸ್ಟಿಕ್, ಘನ ತಾಜ್ಯಗಳಲ್ಲಿ ನೀರು ನಿಲ್ಲದಂತೆ, ಪರಿಸರ ಸ್ವಚತೆಯಿಂದ, ಮನೆಯಲ್ಲಿ ಇರುವ ನೀರಿನ ಸಂಗ್ರಹ ಮಾಡುವ ಪರಿಕರಗಳನ್ನು ಸರಿಯಾಗಿ ಮುಚ್ಚುವುದರಿಂದ, ಸೊಳ್ಳೆ ಪರದೆಗಳನ್ನು ಬಳಸುವುದರಿಂದ, ಸೊಳ್ಳೆಗಳ ಉತ್ಪತ್ತಿ ತಾಣಗಳ ನಾಶ ಮಾಡುವುದರಿಂದ, ಸೊಳ್ಳೆ ಕಡಿತವನ್ನು ತಪ್ಪಿಸಲು ಪೂರ್ಣ ಪ್ರಮಾಣದ ತೋಳುಗಳನ್ನು ಹೊಂದಿರುವ ಉಡುಪುಗಳನ್ನು ಧರಿಸುವುದರಿಂದ ಡೆಂಗ್ಯೂದತಂಹ ಕೀಟಜನ್ಯ ಸಾಂಕ್ರಾಮಿಕ ರೋಗಗಳ ನಿಯಂತ್ರಣ ಮಾಡಬಹುದು. ಡೆಂಗ್ಯೂ ತಪ್ಪಿಸಲು ನೀವು ಎಷ್ಟೇ ಮುನ್ನೆಚ್ಚರಿಕೆಗಳನ್ನು ತೆಗೆದುಕೊಂಡರೂ, ಕೆಲವೊಮ್ಮೆ ಅದು ದಾಳಿ ಮಾಡುತ್ತದೆ. ಡೆಂಗ್ಯೂ ಜ್ವರದ ಲಕ್ಷಣಗಳು ಕಂಡುಬಂದರೆ ತಕ್ಷಣ ವೈದ್ಯಕೀಯ ಚಿಕಿತ್ಸೆ ಪಡೆಯುವುದರಿಂದ ಸ್ಥಿತಿ ಹದಗೆಡುವುದನ್ನು ತಡೆಯಬಹುದು.

**ಸೊಳ್ಳೆ ಕೀಟ ಚಿಕ್ಕದಾದರೂ ಕಾಟ ದೊಡ್ಡದು**

ಡೆಂಗ್ಯೂ ಸಮಯದಲ್ಲಿ ಕೆಲವರು ಪಪ್ಪಾಯಿ ಎಲೆಯ ರಸವನ್ನು ಸೇವಿಸುತ್ತಾರೆ. ಇದು ತುಂಬಾ ಜನಪ್ರಿಯವಾಗಿದೆ. ಆದರೆ ಇದು ಪರ್ಯಾಯವಲ್ಲ. ಅಲ್ಲದೆ, ಮಸಾಲೆಯುಕ್ತ ಮತ್ತು ಕರಿದ ಆಹಾರಗಳನ್ನು ತಪ್ಪಿಸಬೇಕು. ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವ ಆಹಾರವನ್ನು ಸೇವಿಸಿ. ಇವೆಲ್ಲವೂ ಡೆಂಗ್ಯೂನಿಂದ ಬೇಗನೆ ಚೇತರಿಸಿಕೊಳ್ಳಲು ನಿಮಗೆ ಸಹಾಯ ಮಾಡುತ್ತದೆ. ನಂತರ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಲಾರ್ವಗಳು, ಲಾರ್ವಗಳನ್ನು ನಿಯಂತ್ರಣ ಮಾಡುವ ಲಾರ್ವ ಭಕ್ಷಕ ಮೀನುಗಳನ್ನು ಪ್ರಾತ್ಯಕ್ಷಿಕೆ ಮೂಲಕ ತೋರಿಸಲಾಯಿತು, ಡೆಂಗ್ಯೂ ನಿಯಂತ್ರಣ ನಮ್ಮೆಲ್ಲರ ಜವಾಬ್ದಾರಿ ಎಂಬ ಘೋಷಣೆಯನ್ನು ಕೂಗಿದರು. ಕಾರ್ಯಕ್ರಮದಲ್ಲಿ ಆರೋಗ್ಯ ನೀರಿಕ್ಷಣಾಧಿಕಾರಿಗಳಾದ ಮಹೇಶ ಡಿ, ಪ್ರಾಥಮಿಕ ಆರೋಗ್ಯ ಸುರಕ್ಷ ಅಧಿಕಾರಿ ಟಿ. ನಿರ್ಮಲ, ಪ್ರೌಢಶಾಲೆಯ ಮುಖ್ಯ ಶಿಕ್ಷಕರಾದ ಶ್ರೀ ಮಂಜುನಾಥ, ಶ್ರೀ ನಿವಾಸ ರೆಡ್ಡಿ, ಶರಣಪ್ಪ, ಅಶಾ ಕಾರ್ಯಕರ್ತೆಯರು ಪಾಲ್ಗೊಂಡಿದ್ದರು.

**ವಿದ್ಯಾರ್ಥಿಗಳ ಸಹಕಾರ ಮುಖ್ಯ**

ಕೀಟಜನ್ಯ ಸಾಂಕ್ರಾಮಿಕ ರೋಗಗಳು ಹೆಚ್ಚಾಗದಂತೆ ಆರೋಗ್ಯ ಇಲಾಖೆವತಿಯಿಂದ ನಿರಂತರವಾಗಿ ಲಾರ್ವ ಸಮೀಕ್ಷೆ ನಡೆಸಿ ಆರೋಗ್ಯ ಸಿಬ್ಬಂದಿ ವರ್ಗದವರು ಮತ್ತು ಅಶಾ ಕಾರ್ಯಕರ್ತೆಯರು ಮನೆ ಮನೆಗೆ ಭೇಟಿ ನೀಡಿ ಅರಿವು ಮೂಡಿಸಿವುದರ ಜತೆಗೆ ಶಾಲೆ ಕಾಲೇಜುಗಳಲ್ಲಿ, ಆರೋಗ್ಯ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಡೆಂಘಿಯಂತಹ ಮಾರಕ ಸಾಂಕ್ರಾಮಿಕ ರೋಗಗಳ ಬಗ್ಗೆ ಮಾಹಿತಿ ಶಿಕ್ಷಣ ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ನಿರಂತರವಾಗಿ ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಹಮ್ಮಿಕೊಳ್ಳಲಾಗಿದೆ. ಡೆಂಗ್ಯೂದತಂಹ ರೋಗಗಳ ನಿಯಂತ್ರಣಕ್ಕೆ ಜನ ಸಮುದಾಯದ ಸಹಕಾರದ ಜೊತೆಗೆ ವಿದ್ಯಾರ್ಥಿಗಳ ಸಹಕಾರ ಮುಖ್ಯ.

**ಅರೋಗ್ಯ ಮಾಹಿತಿ ಶಿಕ್ಷಣ ನೀಡಿ ಡೆಂಗ್ಯೂ ಜಾಗೃತಿ**

ಅರೋಗ್ಯ ಕೇಂದ್ರ ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳಲ್ಲಿ ಅಶಾ ಕಾರ್ಯಕರ್ತೆಯರಿಂದ ತಿಂಗಳಲ್ಲಿ ಎರಡು ಬಾರಿ ಲಾರ್ವ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ, ಗ್ರಾಮ ಅರೋಗ್ಯ ನೈರ್ಮಲ್ಯ ಮತ್ತು ಪೌಷ್ಟಿಕಾಹಾರ ಸಮಿತಿಯ ಸಭೆಗಳಲ್ಲಿ, ಶಾಲೆ ಕಾಲೇಜುಗಳಲ್ಲಿ, ಜನರ ಜತೆಗೆ ಗುಂಪು ಸಭೆಗಳು, ತಾಯಂದಿರ ಸಭೆಗಳನ್ನು ನಡೆಸಿ ಕರಪತ್ರಗಳನ್ನು ವಿತರಿಸಿ, ಆರೋಗ್ಯ ಮಾಹಿತಿ ಶಿಕ್ಷಣ ನೀಡಿ ಡೆಂಗ್ಯೂ ಜಾಗೃತಿಯನ್ನು ಮೂಡಿಸಲಾಗುತ್ತಿದೆ. ಮನೆಮನೆಗಳಲ್ಲಿ ನೀರಿನ ಸಂಗ್ರಹ ಪರಿಕಾರಗಳ, ಸ್ವಚ್ಛತೆಯ ಬಗ್ಗೆ ಒಣ ದಿನಗಳನ್ನು ಆಚರಿಸುವ ಬಗ್ಗೆ, ಮುಂಜಾನೆ ಮತ್ತು ಮುಸ್ಸಂಜೆಯಲ್ಲಿ ಸೊಳ್ಳೆ ಬತ್ತಿಗಳನ್ನು ಉರಿಸುವ ಕುರಿತು, ಮನೆಯ ಕಿಟಕಿಗಳಿಗೆ ಜಾಲರ ಅಳವಡಿಸುವ, ಸೊಳ್ಳೆ ಪರದೆ ಉಪಯೋಗಿಸುವ ಬಗ್ಗೆ, ಘನ ತ್ಯಾಜ್ಯ ವಸ್ತುಗಳನ್ನು ಸರಿಯಾದ ಕ್ರಮದಲ್ಲಿ ಮತ್ತು ಸೂಕ್ತ ಸ್ಥಳಗಳಲ್ಲಿ ವಿಲೇವಾರಿ ಮಾಡುವ ಬಗ್ಗೆ, ನೈಸರ್ಗಿಕ ನೀರಿನ ತಾಣಗಳಿಗೆ ಲಾರ್ವ ಹಾರಿ ಮೀನುಗಳಾದ ಗಪ್ಪಿ ಗಂಬೂಸ್ಯಿದಂತಹ ಮೀನುಗಳನ್ನು ಬಿಡುವ ಕುರಿತು ಮಾಹಿತಿ ಶಿಕ್ಷಣ ನೀಡಲಾಗುತ್ತಿದೆ ಎಂದು ತಿಳಿಸಿದರು.




ಉದಯವಾಹಿನಿ ಚಿತ್ರ

ನೂತನ ತಹಶೀಲ್ದಾರರಾಗಿ ಕೀರ್ತಿ ಚಾಲಕ ಅಧಿಕಾರ ಸ್ವೀಕರಿಸಿಕೊಂಡರು. ಪ್ರಭಾರಿ ತಹಶೀಲ್ದಾರ ಎ ಡಿ ಅಮರ ವಾಡಗಿ ಅವರನ್ನ ಬೀಳ್ಕೊಡುಗೆ ಮಾಡಿ ಶ್ರೀಮತಿ ಕೀರ್ತಿ ಚಾಲಕ ತಹಶೀಲ್ದಾರ ಅವರನ್ನು ತಾಲ್ಲೂಕ ಆಡಳಿತ ಗ್ರಾಮ ಲೆಕ್ಕಾಧಿಕಾರಿಗಳು ಸ್ವಾಗತ ಮಾಡಿಕೊಂಡರು. ಈ ಸಂದರ್ಭದಲ್ಲಿ ತಾಲ್ಲೂಕ ಆಡಳಿತ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಕೋಲಿ ಸಮಾಜದ ಸದಸ್ಯತ್ವ ಅಭಿಯಾನ ಆ.03ರಂದು

• ಉದಯವಾಹಿನಿ, ಚಿಂಚೋಳಿ



ಅಖಿಲ ಭಾರತೀಯ ಕೋಲಿ ಸಮಾಜದ ರಾಜ್ಯ ಘಟಕದ ವತಿಯಿಂದ ಆ.3ರಂದು ಬೆಳಿಗ್ಗೆ 11ಕ್ಕೆ ಕಲಬುರ್ಗಿ ನಗರದ ಐವಾನ್ ಶಾಹಿ ಅತಿಥಿ ಗೃಹ ಸಭಾಭವನದಲ್ಲಿ ರಾಜ್ಯಮಟ್ಟದ ಸದಸ್ಯತ್ವ ಅಭಿಯಾನ ಮತ್ತು ರಾಜ್ಯ ಕಾರ್ಯಕಾರಿ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಪ್ರಧಾನ ಕಾರ್ಯದರ್ಶಿ ಲಕ್ಷ್ಮಣ ಆವುಂಟಿ ತಿಳಿಸಿದ್ದಾರೆ. ರಾಜ್ಯಾಧ್ಯಕ್ಷ ದತ್ತಾತ್ರೇಯ ರೆಡ್ಡಿ ಮುದಿರಾಜ ಅಧ್ಯಕ್ಷತೆಯಲ್ಲಿ ನಡೆಯುವ ಸಭೆಯಲ್ಲಿ ರಾಜ್ಯದ ಸಮಾಜದ ಪ್ರಮುಖ ಮುಖಂಡರು, ವಿವಿಧ ಮಠಾಧೀಶರು ಪ್ರಗತಿಪರ ಚಿಂತಕರು,ಸಾಹಿತಿಗಳು ಪಾಲ್ಗೊಳ್ಳಲಿದ್ದಾರೆ. ಹಿಮಾಚಲ ಪ್ರದೇಶದ ಶಿಮ್ಲಾ ಮಾಜೌ ಸಂಸದ ವೀರೇಂದ್ರ ಕಶ್ಯಪ ಸಂಘಟನೆಯ ರಾಷ್ಟ್ರೀಯ ಅಧ್ಯಕ್ಷರಾಗಿದ್ದು,ದೇಶದಾದ್ಯಂತ ಸದಸ್ಯತ್ವ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ರಾಜ್ಯದ ಎಲ್ಲಾ ಜಿಲ್ಲೆಗಳ ಮುಖಂಡರು ರಾಷ್ಟಮಟ್ಟದ ನಿಯಕರೊಂದಿಗೆ ಸಂಪರ್ಕ ಕಲ್ಪಿಸುವ , ರಾಜ್ಯದಲ್ಲಿನ ಎಲ್ಲಾ ಸಮಸ್ಯೆಗಳಿಗೂ ಪರಿಹಾರ ಕಲ್ಪಿಸುವ ಪ್ರಯತ್ನ ಸಂಘಟನೆ ಮಾಡುತ್ತಿದೆ, ಸಮಾನ್ಯ ಸದಸ್ಯತ್ವಕ್ಕೆ 100ರೂ. ಸಕ್ರೀಯ ಸದಸ್ಯತ್ವಕ್ಕೆ 300ರೂ., ಅಜೀವ ಸದಸ್ಯತ್ವಕ್ಕೆ 5000ರೂ.ಶುಲ್ಕ ವಿಧಿಸಲಾಗಿದೆ ಎಂದರು.


## ಬಿತ್ತನೆಗೆ ರಸಗೊಬ್ಬರ ಪೂರೈಸಿ: ರೈತ ಸಂಘದಿಂದ ಹೋರಾಟ

• ಉದಯವಾಹಿನಿ ಮುದ್ದೇಬಿಹಾಳ

ತಾಲ್ಲೂಕಿನಲ್ಲಿ ಬಿತ್ತನೆ ಕಾಲ ಆರಂಭವಾಗುತ್ತಿರುವಾಗಲೇ ಯೂರಿಯಾ ಗೊಬ್ಬರದ ಅಭಾವ ಗೋಚರವಾಗುತ್ತಿದೆ. ಅನೇಕ ಖಾಸಗಿ ಅಂಗಡಿಗಳಲ್ಲಿ ಗೊಬ್ಬರ ಲಭ್ಯವಿಲ್ಲದ ಕಾರಣ ಕಾಳಸಂತೆಯಲ್ಲಿ ದುಪ್ಪಟ್ಟು ಬೆಲೆಗೆ ಮಾರಾಟ ನಡೆಯುತ್ತಿದೆ ಎಂದು ರೈತ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಆಶ್ರಯದಲ್ಲಿ ರೈತ ಮುಖಂಡ ಹಾಗೂ ತಾಲ್ಲೂಕು ಕಾರ್ಯಾಧ್ಯಕ್ಷ ಬಿ.ಬಿ. ಪಾಟೀಲ್ ಅವರ ನೇತೃತ್ವದಲ್ಲಿ ರೈತರು ಶುಕ್ರವಾರ ತಹಶೀಲ್ದಾರ ಹಾಗೂ ಕೃಷಿ ಇಲಾಖೆಗೆ ಮನವಿ ಸಲ್ಲಿಸಿದರು. ಈ ವೇಳೆ ಮಾತನಾಡಿದ ಅವರು ''ಮುದ್ದೇಬಿಹಾಳ ತಾಲ್ಲೂಕಿನ ರೈತರು ಭೂಮಿ ಹದಮಾಡಿ ಬಿತ್ತನೆಗೆ ಸಜ್ಜಾಗಿದ್ದಾರೆ. ಈ ಸಂದರ್ಭದಲ್ಲಿ ಸುಮಾರು 11 ಲಕ್ಷ ಮೆಟ್ರಿಕ್ ಟನ್ ಯೂರಿಯಾ ಮತ್ತು ಡಿಎಪಿ ಗೊಬ್ಬರ ಅವಶ್ಯಕವಾಗಿದೆ. ಆದರೆ ಸರಕಾರವಿಲ್ಲದ ಪೋಷಣೆ ಮತ್ತು ಕಾಳಸಂತೆಯಲ್ಲಿ ದುಬಾರಿ ಬೆಲೆಗೆ ಮಾರಾಟ ನಡೆಯುತ್ತಿದೆ,'' ಎಂದು ಗಂಭೀರ ಆರೋಪವನ್ನೂ ಹೊರಹಾಕಿದರು. ಈ ಸಂದರ್ಭದಲ್ಲಿ ಕೃಷಿ ಸಹಾಯಕ ನಿರ್ದೇಶಕ ಎಸ್.ಡಿ. ಬಾವಿಕಟ್ಟಿ ಮನವಿಯನ್ನು ಸ್ವೀಕರಿಸಿ, ತಾಲ್ಲೂಕಿನಲ್ಲಿ ಗೊಬ್ಬರದ ಕರಿದಂಡಿ (ಬ್ಲಾಕ್ ಮಾರ್ಕೆಟ್) ಕಂಡು ಬಂದರೆ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ. ಪ್ರತಿ ರೈತನಿಗೆ 2 ಚೀಲ ರಸಗೊಬ್ಬರ ನೀಡುವಂತೆ ನಿರ್ದೇಶಿಸಲಾಗಿದೆ. ನ್ಯಾನೋ ಗೊಬ್ಬರ ಬಳಕೆಯ ಕುರಿತು ರೈತರಲ್ಲಿ ಜಾಗೃತಿ ಮೂಡಿಸಲಾಗುವುದು ಎಂದರು. ರೈತ ಮುಖಂಡ ಬಿ.ಬಿ. ಪಾಟೀಲ್ ಅವರು ಮುಂದುವರೆದು, ಬಿತ್ತನೆಯ ಸಮಯದಲ್ಲಿ ನ್ಯಾನೋ ಗೊಬ್ಬರ ಬಳಸುವಂತೆ ಸರಕಾರ ಒತ್ತಾಯಿಸುತ್ತಿದೆ.

ಆದರೆ ಅದು ದುಬಾರಿಯಾಗಿದೆ, ರೈತರಿಗೆ ಮುಂಚಿತವಾಗಿ ಮಾಹಿತಿ ನೀಡದೇ ಹಠಾತ್ ಬದಲಾವಣೆ ಸಾಧ್ಯವಲ್ಲ, ಎಂದು ಅಭಿಪ್ರಾಯಪಟ್ಟರು.


ಉದಯವಾಹಿನಿ ಚಿತ್ರ

**ಕಾಳಸಂತೆಯಲ್ಲಿ ಯೂರಿಯಾ ದುಪ್ಪಟ್ಟು ಬೆಲೆಗೆ ಮಾರಾಟ**

## ಮಟಕಾ: ಬಾಲ್ ಪೆನ್ ಜಪ್ತಿ

• ಉದಯವಾಹಿನಿ, ಕಲಬುರಗಿ

ತಾಲ್ಲೂಕಿನ ಖಾಜಾಕೋಟನೂರ ಗ್ರಾಮದ ಕಮಾನಿನ ಹತ್ತಿರವಿರುವ ಹೋಟೆಲ್ ಮುಂದುಗಡೆ ಮಟಕಾ ನಂಬರ್ ಬರೆದುಕೊಳ್ಳಲಾಗುತ್ತಿದೆ ಎಂಬ ಮಾಹಿತಿ ಮೇಲೆ ವಿಶ್ವವಿದ್ಯಾಲಯ ಪೊಲೀಸ್ ಠಾಣೆ ಎಎಸ್‌ಐ ನಿಜಲಿಂಗಪ್ಪ, ಸಿಬ್ಬಂದಿಗಳಾದ ವಿಶಾಲಸಿಂಗ್, ಬೊಗೇಶ ಮತ್ತು ವಿಠೋಬಾ ಅವರು ದಾಳಿ ನಡೆಸಿ ಖಾಜಾಕೋಟನೂರ ಗ್ರಾಮದ ಕಾಶಿನಾಥ ತಂದೆ ರೇವಣಸಿದ್ದಪ್ಪ ಸಾಹುರ (35) ಎಂಬಾತನನ್ನು ಬಂಧಿಸಿ 1025 ರೂ.ನಗದು, ಮಟಕಾ ಚೀಟಿ ಮತ್ತು ಒಂದು ಬಾಲ್ ಪೆನ್ ಜಪ್ತಿ ಮಾಡಿದ್ದಾರೆ. ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬೈಂದೂರು ಬಳಿ ಅಕ್ರಮ ಜಾನುವಾರು ಸಾಗಾಟ; ಇಬ್ಬರ ಬಂಧನ

• ಉದಯವಾಹಿನಿ ಕುಂದಾಪುರ

ಅಕ್ರಮ ಜಾನುವಾರು ಸಾಗಾಟ ಮಾಡುತ್ತಿದ್ದ ಇಬ್ಬರನ್ನು ಬೈಂದೂರು ಪೊಲೀಸರು ಬಂಧಿಸಿರುವ ಘಟನೆ ಜುಲೈ 31 ರಂದು ನಡೆದಿದೆ. ಬಂಧಿತ ಆರೋಪಿಗಳನ್ನು ಬೈಂದೂರಿನ ಗುಂಜನಗುಡ್ಡೆ ನಿವಾಸಿ ಅಬ್ದುಲ್ ಖಯೂಮ್ (26) ಮತ್ತು ಬೈಂದೂರಿನ ಕಲಿನ ಮನೆ ನಿವಾಸಿ ನಿವಾಸಿ ರಮೇಶ್ ಮೊಗವೀರ (40) ಎಂದು ಗುರುತಿಸಲಾಗಿದೆ.

ಜುಲೈ 31ರ ಮುಂಜಾನೆ 4 ಗಂಟೆ ಸುಮಾರಿಗೆ ಬಂದ ಖಚಿತ ಮಾಹಿತಿ ಮೇರೆಗೆ ಬೈಂದೂರು ಪೊಲೀಸ್ ಠಾಣೆಯ ಪಿಎಸ್‌ಐ ತಿಮ್ಮೇಶ್ ಬಿ.ಎನ್ ನೇತೃತ್ವದ ತಂಡ ಹೇರೂರಿನ ಚಟ್ನಳ್ಳಿ ಕಡೆಯಿಂದ ಬರುವ ರಸ್ತೆಯ ಗುಂಜನಗುಡ್ಡೆ ಬಳಿ ದಾಳಿ ನಡೆಸಿದ್ದಾರೆ. ಯಾವುದೇ ಅನುಮತಿ ಇಲ್ಲದೆ ಅಕ್ರಮವಾಗಿ ಜಾನುವಾರು ಸಾಗಿಸುತ್ತಿದ್ದ ಅಶೋಕ್ ಲೇಲ್ಯಾಂಡ್ ದೋಸ್ತ್ ವಾಹನವನ್ನು ತಂಡ ತಡೆದಿದೆ. ಪರಿಶೀಲನೆ ನಡೆಸಿದಾಗ, ಪೊಲೀಸರು ವಾಹನದಲ್ಲಿ ಕಂದು ಜೆರ್ಸಿ ತಳಿಯ ಹಸುವನ್ನು ಅಕ್ರಮವಾಗಿ ಸಾಗಿಸುತ್ತಿರುವುದು ಕಂಡುಬಂದಿದೆ. ತಕ್ಷಣವೇ ಪೊಲೀಸರು ಹಸುವನ್ನು ರಕ್ಷಿಸಿದ್ದಾರೆ. ಅಪರಾಧಕ್ಕೆ ಬಳಸಿದ ಅಶೋಕ್ ಲೇಲ್ಯಾಂಡ್ ದೋಸ್ತ್ ವಾಹನವನ್ನೂ ಪೊಲೀಸರು ವಶಪಡಿಸಿಕೊಂಡಿದ್ದಾರೆ. ಬೈಂದೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ.

## ಯಾದಗಿರಿ ಆರ್‌ಟಿಓ ಕಚೇರಿಯ ಶೌಚಾಲಯ ದುರಸ್ತಿಗೆ ಆಗ್ರಹ

• ಉದಯವಾಹಿನಿ ಯಾದಗಿರಿ

ನಗರದ ಪ್ರಾದೇಶಿಕ ಸಾರಿಗೆ ಇಲಾಖೆ ಕಚೇರಿಯಲ್ಲಿನ ಶೌಚಾಲಯ ದುರಸ್ತಿ ಹಾಗೂ ಸಮರ್ಪಕ ನೀರು ಪೂರೈಕೆ ಇನ್ನಿತರ ಮೂಲಭೂತ ಸೌಕರ್ಯ ಕಲ್ಪಿಸುವಂತೆ ಜಯ ಕರ್ನಾಟಕ ಜನಪರ ವೇದಿಕೆ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ರುದ್ರಾಂಬಿಕ. ಆರ್ .ಪಾಟೀಲ್ ಆಗ್ರಹಿಸಿದ್ದಾರೆ.



ಬಹು ದಿನಗಳಿಂದ ನಗರದ ಪ್ರಾದೇಶಿಕ ಸಾರಿಗೆ ಕಚೇರಿಯಲ್ಲಿ ಶೌಚಾಲಯದ ದುಸ್ಥಿತಿ ಅದೋಗತಿಯಾಗಿದೆ ಕಚೇರಿಯ ಶೌಚಾಲಯ ಕೊಠಡಿಯಲ್ಲಿ ನಲ್ಲಿಯ ನೀರು ಬರುವುದಿಲ್ಲ ಅಲ್ಲಿನ ಮಹಿಳಾ ಸಿಬ್ಬಂದಿಗಳು ನೀರನ್ನು ಹೊರಗಡೆಯಿಂದ ತಂದು ಬಳಸುವಂತಹ ಪರಿಸ್ಥಿತಿ ಎದುರಾಗಿದೆ ಅಧಿಕಾರಿಗಳು ಮಾತ್ರ ಕಣ್ಮುಚ್ಚಿ ಕುಳಿತಿರುವುದು ನಾಚಿಕೆಗೇಡಿನ ಸಂಗತಿಯಾಗಿದೆ.

ಶೌಚಾಲಯದ ಒಳಗಡೆ ಹೋದರೆ ಸಾಕು ನರಕಾಯತನೇ ಅನುಭವಿಸಬೇಕಾಗುತ್ತದೆ ಶೌಚಾಲಯದ ಬಾಗಿಲು ಚಿಲಕಗಳು ಮುರಿದಿವೆ ಶೌಚಾಲಯದಲ್ಲಿ ಸ್ವಚ್ಚತೆ ಇಲ್ಲ ಇದರಿಂದ ಅಲ್ಲಿನ ಮಹಿಳಾ ಸಿಬ್ಬಂದಿಗಳಿಗೆ ತುಂಬಾ ತೊಂದರೆಯಾಗುತ್ತಿದೆ ಕೂಡಲೇ ಸಂಬಂಧಿಸಿದ ಅಧಿಕಾರಿಗಳು ಎಚ್ಚೆತ್ತುಕೊಂಡು ಶೌಚಾಲಯ ದುರಸ್ತಿ ಸಮರ್ಪಕ ನೀರಿನ ವ್ಯವಸ್ಥೆ ಇನ್ನಿತರ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಂತೆ ಜಯ ಕರ್ನಾಟಕ ಜನಪರ ವೇದಿಕೆ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ರುದ್ರಾಂಬಿಕ. ಆರ್. ಪಾಟೀಲ್ ಒತ್ತಾಯಿಸಿದ್ದಾರೆ.





ಉದಯವಾಹಿನಿ ಚಿತ್ರ

## ವ್ಯಸನ ಮುಕ್ತ ದಿನಾಚರಣೆಯ ಕಾರ್ಯಕ್ರಮ

• ಉದಯವಾಹಿನಿ ಕೊಲ್ಹಾರ

ತಾಲ್ಲೂಕು ಆಡಳಿತದಿಂದ ಡಾ.ಮಹಾಂತ ಶಿವಯೋಗಿಗಳ ಜನ್ಮದಿನವನ್ನು ವ್ಯಸನ ಮುಕ್ತ ದಿನಾಚರಣೆಯ ಕಾರ್ಯಕ್ರಮ ಪಟ್ಟಣದ ಪಾಲಿಟೆಕ್ನಿಕ್ ಕಾಲೇಜ ಸಭಾಂಗಣದಲ್ಲಿ ನಡೆಯಿತು. ಕಾರ್ಯಕ್ರಮದ ಸಾನಿಧ್ಯ ವಹಿಸಿ ದಿಗಂಬರೇಶ್ವರ ಮಠದ ಶ್ರೀ ಕಲ್ಲಿನಾಥ ದೇವರು ಮಾತನಾಡಿ ಬಸವಣ್ಣನವರ ನುಡಿಗಳನ್ನು ತಮ್ಮ ಜೀವನದಲ್ಲಿ ಮತ್ತು ನಡೆಯಲ್ಲಿ ಅಳವಡಿಸಿಕೊಂಡ ಶ್ರೀಗಳು, ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಜೋಳಿಗೆ ಹಾಕಿಕೊಂಡು ಊರುರು ಸುತ್ತಿ ನಿಮ್ಮ ಚಟಗಳನ್ನು ನನ್ನ ಜೋಳಿಗೆಗೆ ಹಾಕಿ ಎಂದು ತಮ್ಮ ಜೀವನದ ಉದ್ದಕ್ಕೂ ಉತ್ತಮ ಸಮಾಜದ ನಿರ್ಮಾಣಕ್ಕೆ ಮೀಸಲಾಗಿದ್ದು ನಮಗೆ ಮಾದರಿ ಮತ್ತು ಮತ್ತು ಸಮಾಜಕ್ಕೆ ಶ್ರೇಷ್ಠ ಕೊಡುಗೆ ಎಂದು ಹೇಳಿದರು. ಉಪನ್ಯಾಸಕರಾಗಿ ಅರವಿಂದ್ ಕೊಪ್ಪದ ಮಾತನಾಡಿ ಶ್ರೀ ಮಹಾಂತ ಶಿವಯೋಗಿಗಳು ಮನುಷ್ಯನ ಬಾಹ್ಯ ಆಂತರಿಕ ಮನಃಪರಿವರ್ತನೆಗೆ ಆ ಕಾಲವನ್ನು ಸರಿಯಾಗಿ ಬಳಸಿಕೊಂಡು ಉತ್ತಮ ಸಮಾಜದ ನಿರ್ಮಾಣಕ್ಕೆ ಕೊಡುಗೆ ನೀಡಿದ್ದಾರೆ ನಾವು ಇಂದು ಯುವ ಜನತೆಯನ್ನು ಉತ್ತಮ ಮಾರ್ಗಕ್ಕೆ ತರಲು, ಶಿಕ್ಷಕರು ಪೋಷಕರು ಸಮಾಜದ ಹಿರಿಯರು ಪ್ರಯತ್ನ ಮಾಡಬೇಕಾದ ಅನಿವಾರ್ಯತೆ ಇದೆ ಎಂದು ತಿಳಿಸಿದರು. ತಹಶೀಲ್ದಾರ ಎಸ್ ಎಸ್ ನಾಯಕಲಮಠ, ಕಾರ್ಯನಿರ್ವಾಹಕ ಅಧಿಕಾರಿ ಸುನೀಲ ಮದ್ದಿನ, ಮುಖ್ಯಾಧಿಕಾರಿ ವೀರೇಶ ಹಟ್ಟಿ, ಪ್ರಾಚಾರ್ಯ ಎಂ ಎಸ್ ಗರಸಂಗಿ, ವೈದ್ಯಾಧಿಕಾರಿ ಲಕ್ಷ್ಮೀ ತಲ್ಲೂರು,ಸಮಾಜ ಕಲ್ಯಾಣ ಅಧಿಕಾರಿ ಮನು ಪತ್ತಾರ,ರವಿ ಗೊಳಸಂಗಿ, ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.



ಉದಯವಾಹಿನಿ ಚಿತ್ರ

## ನಿರೀಕ್ಷೆಗಳನ್ನು ಕಡಿಮೆ ಇಟ್ಟುಕೊಂಡಷ್ಟು ಬದುಕು ಸುಲಭ; ವೀರು ಶೆಟ್ಟಿ

• ಉದಯವಾಹಿನಿ ಉಜಿರೆ

ಜೀವನದಲ್ಲಿ ನಿರೀಕ್ಷೆಗಳನ್ನು ಕಡಿಮೆ ಇಟ್ಟುಕೊಂಡಷ್ಟು ಬದುಕು ಸುಲಭವಾಗುತ್ತದೆ. ನೀರಲ್ಲದರೂ ಹಾಕು, ಹಾಲಲ್ಲಾದರೂ ಹಾಕು ಎನ್ನುವ ಹಾಗೇ ನೀರಲ್ಲಿ ಮೀನನಾಗಿ, ಹಾಲಿನಲ್ಲಿ ಕೆನೆಯಾಗಿ ಬದುಕುಬೇಕು ಇದೇ ರೀತಿಯಲ್ಲಿ ನಮ್ಮ ಜೀವನವನ್ನು ಕಟ್ಟಿಕೊಳ್ಳಬೇಕು. ಇಂದು ಪುರುಷ-ಮಹಿಳೆಯರು ಸಮಾನವಾಗಿ ವೃತ್ತಿಯಾಗಿ ನಡೆಸುತ್ತಿದ್ದಾರೆ. ಕಲಿಕೆ ಅನ್ನುವುದು ನಿರಂತರವಾಗಿ ಇರುವುದು ಅದನ್ನು ನಾವು ಅನುಸರಿಸಬೇಕು. ದೊಡ್ಡ ಗುರಿಯನ್ನು ಇಟ್ಟುಕೊಳ್ಳಿ ಪ್ರತಿಯೊಬ್ಬರು ವೃತ್ತಿ ಜೀವನದಲ್ಲಿ ತಮ್ಮದೇ ಆದ ಶಿಸ್ತು ಅನ್ನು ಅಳವಡಿಸಿಕೊಂಡರೆ ಯಶಸ್ಸು ಕಾಣಬಹುದು ಜೊತೆಗೆ ಬಹುಮುಖ್ಯವಾಗಿ ದುರಭ್ಯಾಸಗಳಿಂದ ದೂರ ಇರುಬೇಕು. ಹಾಗೂ ಕ್ಷೌರಿಕ ವೃತಿಯಲ್ಲಿ ಹೊಸ ಬದಲಾವಣೆಗಳು ಆಗುತ್ತಿದೆ ಅದನ್ನು ಅಳವಡಿಸಿಕೊಂಡು ವೃತ್ತಿಯಲ್ಲಿ ಮುನ್ನಡೇರಿ. ಪರಮ ಪೂಜ್ಯ ಡಾ. ಡಿ.ವೀರೇಂದ್ರ ಹೆಗ್ಗಡೆಯವರು ರುಡ್ ಸೆಟ್ ಸಂಸ್ಥೆಯಲ್ಲಿ ಅತ್ಯುತ್ತಮವಾದ ಸೌಲಭ್ಯಗಳೊಂದಿಗೆ ಉಚಿತ ತರಬೇತಿ ನೀಡಿ ಯುವಜನರಿಗೆ ಅನುಕೂಲ ಮಾಡಿದ್ದಾರೆ. ಇದು ಪ್ರಪಂಚಕ್ಕೆ ಮಾದರಿಯಾಗಿದೆ. ಎಂದು ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮೋತ್ತನ ಟ್ರಸ್ಟ್ ಕಾರ್ಯದರ್ಶಿಗಳಾದ ಶ್ರೀ ವೀರು ಶೆಟ್ಟಿ ಅಭಿಪ್ರಾಯಪಟ್ಟರು.

ಉಜಿರೆ ರುಡ್ ಸೆಟ್ ಸಂಸ್ಥೆಯಲ್ಲಿ 30 ದಿನಗಳ ಕಾಲ ನಡೆದ ★ ಮೆನ್ಸ್ ಪಾರ್ಲರ್ ಸೆಲೂನ್ ಉದ್ಯಮಿ ತರಬೇತಿಯ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ, ಪ್ರಮಾಣ ಪತ್ರ ವಿತರಿಸಿ ಮಾತನಾಡಿದರು. ಪಡೆದ ತರಬೇತಿಯನ್ನು ಉಪಯೋಗಿಸಿಕೊಂಡು ಯಶಸ್ವಿಯಾಗಿ ಉದ್ಯಮ ನಡೆಸಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ರುಡ್ ಸೆಟ್ ಸಂಸ್ಥೆಗಳ ಕಾರ್ಯನಿರ್ವಾಹಕ ನಿರ್ದೇಶಕರಾದ ಶ್ರೀ ಬಿ.ಪಿ.ವಿಜಯ ಕುಮಾರ್ ವಹಿಸಿ, ಮಾತನಾಡಿದರು.

ಸರಕಾರ ಮತ್ತು ಬ್ಯಾಂಕಿನ ಹೊಸ ಯೋಜನೆಯ ಮೂಲಕ ಸಹಾಯಧನ, ಸಾಲ ಪಡೆದುಕೊಂಡು ಉದ್ಯಮ ಆರಂಭಿಸಿ, ಏನಾದರೂ ಮಾಹಿತಿ-ಮಾರ್ಗದರ್ಶನ ಬೇಕಾದರೆ ಸಂಸ್ಥೆಯನ್ನು ಸಂಪರ್ಕಿಸಿ ಎಂದು ಶುಭ ಕೋರಿದರು. ಕಾರ್ಯಕ್ರಮದಲ್ಲಿ ಅತಿಥಿ ಉಪನ್ಯಾಸಕರಾದ, ಶ್ರೀ ಲೋಕೇಶ್ ಮತ್ತು ಶ್ರೀ ರವಿ ಕುಮಾರ್ ಕಡೂರು, ಉಪಸ್ಥಿತರಿದ್ದರು.

**ದೊಡ್ಡ ಗುರಿ ಇಟ್ಟುಕೊಳ್ಳಿ**


ಉದಯವಾಹಿನಿ ಚಿತ್ರ

## ಪತ್ರಿಕಾ ದಿನಾಚರಣೆ

• ಉದಯವಾಹಿನಿ ಕುಂದಗೋಳ

ನಮ್ಮನ್ನು ನಾವು ಗೌರವಿಸಿಕೊಂಡು, ವಸ್ತುನಿಷ್ಠೆಯ ವರದಿಯ ಮಾಡುವ ಜತೆಗೆ ನಾವು ನಮ್ಮತನ-ಆತ್ಮಗೌರವ, ಆತ್ಮಬಲ ವೃದ್ಧಿಸಿಕೊಳ್ಳಬೇಕಾಗಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಲೋಚನೇಶ ಹೂಗಾರ ಅವರು ಪತ್ರಕರ್ತರಲ್ಲಿ ಕರೆನೀಡಿದರು. ಕುಂದಗೋಳ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಭವನದಲ್ಲಿ ಪತ್ರಿಕಾ ದಿನಾಚರಣೆಯನ್ನು ಉದ್ಘಾಟಿಸಿದ ಅವರು ಮಾತನಾಡಿ ಇಂದಿನ ದಿನದಲ್ಲಿ ಪತ್ರಿಕೆಗಳ ವಿತರಣೆ ಕರಕಷ್ಟವಾಗಿದ್ದು, ಜಾಹಿರಾತು ಆಧಾರಿತ ಸುದ್ದಿ ವ್ಯವಸ್ಥೆಯ ವಾತಾವರಣದ ಹೊರತಾಗಿ ವರದಿ ಮಾಡುವಂತ ಸ್ಥಿತಿ ಬರಬೇಕು ಎಂದು ಹೇಳಿದರು. ಸಾನಿಧ್ಯ ಕಲ್ಯಾಣಪುರ ಮಠದ ಬಸವಣ್ಣಜ್ಜನವರು ವಹಿಸಿದ್ದರು.

## ಮೋಸ, ವಂಚನೆ, ಒತ್ತಾಯಪೂರಕವಾಗಿ ದುಡಿಸಿಕೊಳ್ಳುವುದು ಅಪರಾಧ

● ಮಹಿಳೆಯರು ಮತ್ತು ಮಕ್ಕಳು ಎಚ್ಚೆತ್ತುಕೊಳ್ಳಬೇಕು: ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಪ್ರಶಾಂತ ನಾಗಲಾಪುರ್

• ಉದಯವಾಹಿನಿ ವಿಜಯನಗರ

ಸಾರ್ವಜನಿಕರನ್ನು ಮೋಸ, ವಂಚನೆ, ಒತ್ತಾಯಪೂರಕವಾಗಿ ದುಡಿಸಿಕೊಳ್ಳುವುದು ಕಾನೂನು ದೃಷ್ಟಿಯಿಂದ ದೊಡ್ಡ ಅಪರಾಧ ಎಂದು ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಪ್ರಶಾಂತ ನಾಗಲಾಪುರ್ ಹೇಳಿದರು.

ನಗರದ ಚಿತ್ತವಾಡ್ಗಿ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ತಾಲ್ಲೂಕು ಕಾನೂನು ಸೇವೆಗಳ ಸಮಿತಿ, ವಕೀಲರ ಸಂಘ, ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ ಮತ್ತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಹಯೋಗದಲ್ಲಿ ಏರ್ಪಡಿಸಿದ್ದ 'ಮಾನವ ಕಳ್ಳ ಸಾಗಾಣಿಕೆ ವಿರೋಧಿ ದಿನಾಚರಣೆ' ಉದ್ಘಾಟಿಸಿ ಅವರು ಮಾತನಾಡಿದರು.

ಈಚೇಗೆ ಮಾನವ ಕಳ್ಳ ಸಾಗಾಣಿಕೆ ಸಮಾಜದಲ್ಲಿ ಬಹುದೊಡ್ಡ ಸಮಸ್ಯೆಯಾಗಿ ಬೆಳೆದಿದೆ. ಮಹಿಳೆಯರು ಮತ್ತು ಮಕ್ಕಳು ಎಚ್ಚೆತ್ತುಕೊಳ್ಳಬೇಕು. ಬಡತನ, ನಿರುದ್ಯೋಗ, ತಂದೆ-ತಾಯಿಗಳಿಗೆ ವಿದ್ಯಾಭ್ಯಾಸದ ಕೊರತೆ ಇವೆಲ್ಲವೂ ಮಾನವ ಕಳ್ಳ ಸಾಗಾಣಿಕೆಗೆ ದಾರಿಯಾಗಿದೆ. ಮಹಿಳೆಯರು ಆಮಿಷಗಳಿಗೆ ಬಲಿಯಾಗಿ ಮೋಸ ಹೋಗುವುದನ್ನು ತಡೆಯಬೇಕು. ಮಕ್ಕಳನ್ನು ತುಂಬಾ ಜಾಗೃತೆಯಿಂದ ಬೆಳೆಸಲು ಹೆಚ್ಚು ಅರಿವು ಮೂಡಿಸಬೇಕಿದೆ. ಮಕ್ಕಳಿಗೆ ಕಾನೂನಾತ್ಮಕ ಸೌಲಭ್ಯಗಳನ್ನು ದೊರಕಿಸಿದಾಗ ಮಾತ್ರ ಮಗುವು ಬಲಿಷ್ಠವಾಗಿ ಬೆಳೆಯುತ್ತದೆ. ಸಾರ್ವಜನಿಕರಲ್ಲಿ ಕಾನೂನು ಮತ್ತು ಶಿಕ್ಷೆಗಳ ಕುರಿತು ಜಾಗೃತಿ ಮೂಡಿಸುವ ಕಾರ್ಯ ಅಧಿಕಾರಿಗಳಿಂದಾಗಬೇಕು.

ಮಾನವ ಕಳ್ಳ ಸಾಗಣಿಕೆಯನ್ನು ಸಂಪೂರ್ಣ ನಿರ್ಮೂಲನೆಗೆ ಸರ್ಕಾರ ಮತ್ತು ಸಂಘಸಂಸ್ಥೆಗಳ ಸಹಕಾರ ಅತ್ಯಗತ್ಯವಾಗಿದೆ. ಅಪರಾಧ ಚಟುವಟಿಕೆಗಳ ಬಗ್ಗೆ ಸಾರ್ವಜನಿಕರಿಗೆ ಕಾನೂನು ಅರಿವು ನೆರವು ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸಬೇಕಿದೆ ಎಂದರು.

ಈ ವೇಳೆ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಚಾರ್ಯರರಾದ ನಾಗರಾಜ್ ಹವಲ್ದಾರ್, ವಕೀಲರ ಸಂಘ ಪ್ರಧಾನ ಕಾರ್ಯದರ್ಶಿ ಪಿ. ಶ್ರೀನಿವಾಸ ಮೂರ್ತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಯೋಜನಾಧಿಕಾರಿ ಸಿಂಧು ಅಂಗಡಿ, ಪಿಎಸ್‌ಐ ಸೋಮ್ಲನಾಯಕ್, ಕಾರ್ಮಿಕ ಇಲಾಖೆಯ ಕಾರ್ಮಿಕ ನಿರೀಕ್ಷಕ ಜೆ.ಬಿ.ದೂಪದ್ ಸೇರಿದಂತೆ ಅಂಗನವಾಡಿ ಕಾರ್ಯಕರ್ತರು ಕಾಲೇಜಿನ ಶಿಕ್ಷಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.



ಉದಯವಾಹಿನಿ ಚಿತ್ರ

**ಮಾನವ ಕಳ್ಳಸಾಗಾಣಿಕೆ ವಿರೋಧಿ ದಿನಾಚರಣೆ**

ಸಮಾಜದಲ್ಲಿನ ಅಪ್ರಾಪ್ತ ಮಕ್ಕಳು, ಮಹಿಳೆಯರು ಸೇರಿ ವ್ಯಕ್ತಿಗಳನ್ನು ಕಳ್ಳ ಸಾಗಾಣಿಕೆ ಮಾಡಿ ಲೈಂಗಿಕ ಶೋಷಣೆ, ಭಿಕ್ಷಾಟನೆ, ಜೀತ ಪದ್ದತಿ, ಬಾಲ ಕಾರ್ಮಿಕತನ, ಅಂಗಾಂಗ ಕಸಿ, ಬಾಲ್ಯ ವಿವಾಹ ಮತ್ತು ವೇಶ್ಯೆವಾಟಿಕೆ ಚಟುವಟಿಕೆಗಳಲ್ಲಿ ಬಳಸಿಕೊಳ್ಳಲಾಗುತ್ತಿದೆ. ಸಾಮಾಜಿಕ ಜಾಲತಾಣಗಳಲ್ಲಿನ ಅಮೀಷಗಳ ಬಗ್ಗೆ ಸಾರ್ವಜನಿಕರು ಜಾಗೃತರಾಗಬೇಕಿದೆ. ನಿಮ್ಮ ಆಸಕ್ತಿಗಳನ್ನು ಗಮನಿಸಿ ಅವುಗಳನುಸಾರವಾಗಿ ವಂಚನೆ ಮಾಡುವ ಜಾಲ ನಿರಂತರ ಹೊಂಚು ಹಾಕುತ್ತಿರುತ್ತದೆ. ಇಂತಹವುಗಳಿಂದ ಜಾಗರೂಕರಾಗಬೇಕಿದೆ. –ಜೆ.ಚೈತ್ರ, ಅಪರ ಸಿವಿಲ್ ನ್ಯಾಯಾಧೀಶೆ

ಮಾನವ ಕಳ್ಳಸಾಗಣಿಕೆಗೆ ಮುಖ್ಯವಾಗಿ ಚಿಕ್ಕಮಕ್ಕಳು, ಯುವತಿಯರು, ಹೆಣ್ಣುಮಕ್ಕಳನ್ನು ಗುರಿಯಾಗಿಸಲಾಗಿದೆ. ಮಾದಕ ದ್ರವ್ಯ, ಕಳ್ಳ ಸಾಗಾಣಿಕೆ, ಶಸ್ತ್ರಾಸ್ತ್ರ ಕಳ್ಳ ಸಾಗಾಣಿಕೆ, ಮಾನವ ಮಾನವರನ್ನು ಕಳ್ಳತನ ಮಾಡುವುದು ಇಂತಹ ಪ್ರಕರಣಗಳು ನಾಗರಿಕ ಸಮಾಜವೇ ತಲೆ ತಗ್ಗಿಸುವಂತಾಗಿವೆ ಎಂದು ಬೇಸರ ವ್ಯಕ್ತಪಡಿಸಿದರು.
–ಶೃತಿ ತೇಲಿ, ಎರಡನೇ ಅಪರ ಸಿವಿಲ್ ನ್ಯಾಯಾಧೀಶರಾದ

## ರೈತರ ಸಮಸ್ಯೆಗೆ ಸ್ಪಂದಿಸದ ರಾಜ್ಯ ಸರ್ಕಾರ: ನಾಗರಾಜ ಛಬ್ಬಿ

• ಉದಯವಾಹಿನಿ ಕಲಘಟಗಿ

ರಾಜ್ಯದ್ಯಂತ ಕೇಂದ್ರ ಸರ್ಕಾರ ಯೂರಿಯಾ ಗೊಬ್ಬರ ಸಕಾಲದಲ್ಲಿ ನೀಡಿದ್ದು ಅದನ್ನು ರೈತರಿಗೆ ನೀಡುವಲ್ಲಿ ವಿಫಲವಾಗಿದೆ ಎಂದು ಮಾಜಿ ವಿಧಾನ ಪರಿಷತ್ ಸದಸ್ಯ ನಾಗರಾಜ ಛಬ್ಬಿ ಪತ್ರಿಕಾ ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ.

ಜಿಲ್ಲೆಗೆ ಸಂಬಂಧಿಸಿದ ಸಚಿವರು ತಾಲ್ಲೂಕಿನ ರೈತರ ಸಮಸ್ಯೆ ಗಿಂತ ನಗರಕ್ಕೆ ಮಾತ್ರ ಮಿಸಲಾಗಿದ್ದಾರೆ. ತಾಲ್ಲೂಕಿನಾದ್ಯಂತ ಗೊಬ್ಬರ ವಿತರಿಸುವ ಮಾರಾಟ ಮಳಿಗೆಗಳು ಹಾಗೂ ಸೊಸೈಟಿಗಳು ತಮ್ಮ ಲಾಭವನ್ನು ಮಾತ್ರ ನೋಡುತ್ತಿದ್ದು ರೈತರ ಹಿತದೃಷ್ಟಿ ನೋಡದೆ ಇರುವುದು ವಿಪರ್ಯಾಸ ಗೊಬ್ಬರ ಕಾಳು ಸಂತೆಯಲ್ಲಿ ಹೆಚ್ಚಿನ ಬೆಲೆಗೆ ಗೊಬ್ಬರ ಮಾರಾಟವಾಗುತ್ತದೆ ರೈತರಿಗೆ ಮಾತ್ರ ಲಭ್ಯವಾಗುತ್ತಿಲ್ಲ.

ಇದರ ಬಗ್ಗೆ ಅಧಿಕಾರಿಗಳು ಕ್ರಮ ಕೂಡತೆಗೆದುಕೊಳ್ಳುತ್ತಿಲ್ಲ ತಾಲ್ಲೂಕಿನಲ್ಲಿ ಆಡಳಿತ ಅಧಿಕಾರಿಗಳು ಆಡಳಿತ ಪಕ್ಷ ಸಂಪೂರ್ಣ ವಿಪುಲವಾಗಿದ್ದು ಭ್ರಷ್ಟಾಚಾರ ತುಂಬಿದೆ. ರೈತರು ದಿನವಿಡಿ ಗೊಬ್ಬರ ಖರಿದಿಸಲು ಪರದಾಡುತ್ತಿದ್ದು ಇದರ ಕುರಿತು ಕ್ರಮ ಕೈಗೊಳ್ಳದಿದ್ದರೆ ಬರವ ದಿನಗಳಲ್ಲಿ ಬೀದಿಗಿಳಿದು ರೈತರ ಪರ ಹೋರಾಟಮಾಡುವುದಾಗಿ ಪತ್ರಿಕಾ ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ.

## ರಾಹುಲ್ ಗಾಂಧಿ ಆರೋಪಗಳು ಆಧಾರ ರಹಿತ : ಚುನಾವಣಾ ಆಯೋಗ

**ನವದೆಹಲಿ:** ಬಿಜೆಪಿಗೆ ಮತ ಕಳ್ಳತನದಲ್ಲಿ ತೊಡಗಿದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮಾಡಿದ ಆರೋಪಗಳು ಆಧಾರರಹಿತ ಮತ್ತು ಬೇಜವಾಬ್ದಾರಿ ಹೇಳಿಕೆಗಳನ್ನು ನಿರ್ಲಕ್ಷಿಸುವಂತೆ ತನ್ನ ಅಧಿಕಾರಿಗಳಿಗೆ ಕೇಂದ್ರ ಚುನಾವಣಾ ಆಯೋಗ ಸೂಚಿಸಿದೆ. ಚುನಾವಣಾ ಆಯೋಗದ ವಿರುದ್ಧ ಮುಚ್ಚಿದ ಪುರಾವೆಗಳಿವೆ ಎಂದು ರಾಹುಲ್ ಗಾಂಧಿ ಸರಣಿ ಹೇಳಿಕೆ ಮುಂದುವರೆಸುತ್ತಿರುವ ಹಿನ್ನಲೆಯಲ್ಲಿ ತೀಕ್ಷ್ಣವಾಗಿ ಪ್ರತಿಕ್ರಿಯೆ ನೀಡಿರುವ ಆಯೋಗ ಮರೆಮಾಡಲು ಯಾವುದೇ ಸ್ಥಳವಿಲ್ಲ ಎಂದು ಹೇಳಿದೆ.

ಚುನಾವಣಾ ಆಯೋಗದ ವಿರುದ್ಧ ಪ್ರತಿದಿನವೂ ಮಾಡಲಾಗುತ್ತಿರುವ ಇಂತಹ ಆಧಾರರಹಿತ ಆರೋಪಗಳನ್ನು ನಿರ್ಲಕ್ಷಿಸುತ್ತದೆ ಮತ್ತು ದೈನಂದಿನ ಬೆದರಿಕೆಗಳನ್ನು ನೀಡಲಾಗುತ್ತಿದ್ದರೂ, ಎಲ್ಲಾ ಚುನಾವಣಾ ಅಧಿಕಾರಿಗಳು ಅಂತಹ ಬೇಜವಾಬ್ದಾರಿ ಹೇಳಿಕೆಗಳನ್ನು ನಿರ್ಲಕ್ಷಿಸಿ ನ್ಯಾಯಯುತ ಮತ್ತು ಪಾರದರ್ಶಕ ರೀತಿಯಲ್ಲಿ ಕೆಲಸ ಮಾಡುವಂತೆ ಹೇಳಿದೆ. ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕರಾದ ಗಾಂಧಿ, ತಮ ಪಕ್ಷವು ಆಪಾದಿತ ಚುನಾವಣಾ ಅಕ್ರಮಗಳ ಕುರಿತು ಹೊಂದಿರುವ ಪುರಾವೆಗಳನ್ನು ಆಣು ಬಾಂಬ್‌ಗೆ ಹೋಲಿಸಿದ್ದಾರೆ ಮತ್ತು ಅದು ಸ್ಫೋಟಗೊಂಡಾಗ ಚುನಾವಣಾ ಆಯೋಗಕ್ಕೆ ದೇಶದಲ್ಲಿ ಅಡಗಿಕೊಳ್ಳಲು ಯಾವುದೇ ಸ್ಥಳವಿರುವುದಿಲ್ಲ ಎಂದು ಹೇಳಿದರು.

## ವಾಣಿಜ್ಯ ಗ್ಯಾಸ್ ಸಿಲಿಂಡರ್ ಬೆಲೆಯಲ್ಲಿ 33.50ರೂ. ಇಳಿಕೆ

**ನವದೆಹಲಿ:** ತೈಲ ಸಂಸ್ಥೆಗಳು 19 ಕೆಜಿ ತೂಕದ ಎಲ್‌ಪಿಜಿ ವಾಣಿಜ್ಯ ಸಿಲಿಂಡರ್ ಬೆಲೆಯಲ್ಲಿ 33.50ರೂ.ನಷ್ಟು ಕಡಿತ ಮಾಡಿವೆ. 19 ಕೆಜಿ ವಾಣಿಜ್ಯ ಸಿಲಿಂಡರ್‌ಗಳ ಬೆಲೆಯನ್ನು ಪ್ರತಿ ಸಿಲಿಂಡರ್‌ಗೆ 33.50 ರೂ.ಗಳಷ್ಟು ಕಡಿಮೆ ಮಾಡಲಾಗಿದೆ. ಕೋಲ್ಕತ್ತಾ ಮತ್ತು ಚೆನ್ನೈನಲ್ಲಿ ಅತಿ ಹೆಚ್ಚು ಕಡಿತ ಮಾಡಲಾಗಿದೆ. ಆದರೆ 14.2 ಕೆಜಿ ಸಿಲಿಂಡರ್‌ಗಳ ಬೆಲೆಯಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ತಿಳಿದುಬಂದಿದೆ.

19 ಕೆಜಿ ಎಲ್‌ಪಿಜಿ ಸಿಲಿಂಡರ್ ಈಗ ಪ್ರತಿ ಸಿಲಿಂಡರ್‌ಗೆ 1,800 ರೂ.ಗಳಿಗಿಂತ ಕಡಿಮೆಯಿದ್ದರೆ, ದೆಹಲಿಯಲ್ಲಿ ಇದರ ಬೆಲೆ ಪ್ರತಿ ಸಿಲಿಂಡರ್‌ಗೆ 1,650 ರೂ.ಗಳಿಗಿಂತ ಕಡಿಮೆಯಿದೆ. ಇದಲ್ಲದೆ, ಮುಂಬೈನಲ್ಲಿಯೂ ಈ ಗ್ಯಾಸ್ ಅಗ್ಗವಾಗಿದೆ ಏಕೆಂದರೆ ಅದರ ಬೆಲೆ ಪ್ರತಿ ಸಿಲಿಂಡರ್‌ಗೆ 1,600 ರೂ.ಗಳಿಗಿಂತ ಕಡಿಮೆಯಿದೆ. ಬೆಂಗಳೂರಿನಲ್ಲಿ 19 ಕೆಜಿ ವಾಣಿಜ್ಯ ಸಿಲಿಂಡರ್ ಬೆಲೆ 1,738 ರೂ. ಇದೆ. ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ 19 ಕೆಜಿ ಎಲ್‌ಪಿಜಿ ಸಿಲಿಂಡರ್‌ನ ಬೆಲೆ ಆಗಸ್ಟ್ 1, 2025 ರಿಂದ ಪ್ರತಿ ಸಿಲಿಂಡರ್‌ಗೆ 33.5 ರೂ.ಗಳಷ್ಟು ಇಳಿದು 1,631.5 ರೂ.ಗಳಿಗೆ ತಲುಪಿದೆ. ಕಳೆದ ತಿಂಗಳು ಇದರ ಬೆಲೆ ಪ್ರತಿ ಸಿಲಿಂಡರ್‌ಗೆ 1,665 ರೂ.ಗಳಷ್ಟಿತ್ತು. ಕೋಲ್ಕತ್ತಾದಲ್ಲಿ ಆಗಸ್ಟ್ 2025ರಲ್ಲಿ 19 ಕೆಜಿ ಸಿಲಿಂಡರ್ ಬೆಲೆ 34.5 ರೂ.ಗಳಷ್ಟು ಇಳಿದು 1,734.5 ರೂ.ಗಳಿಗೆ ತಲುಪಿದೆ, ಆದರೆ ಕಳೆದ ತಿಂಗಳು ಪ್ರತಿ ಸಿಲಿಂಡರ್ ಬೆಲೆ 1,769 ರೂ.ಗಳಷ್ಟಿತ್ತು.

## ಅಪಾಯದಲ್ಲಿ ಚಹಾ ಉದ್ಯಮ: ಕಳವಳ

**ಗುವಾಹಟಿ:** ಭಾರತದ ಚಹಾ ಉದ್ಯಮದ ಆರ್ಥಿಕ ಸುಸ್ಥಿರತೆಯ ಬಗ್ಗೆ ಭಾರತೀಯ ಚಹಾ ಸಂಘ (ಐಟಿಎ) ಕಳವಳ ವ್ಯಕ್ತಪಡಿಸಿದ್ದು, ಈ ವಲಯವು ಅದರ ದೀರ್ಘಕಾಲೀನ ಬೆಳವಣಿಗೆಯ ಮೇಲೆ ಪರಿಣಾಮ ಬೀರುವ ಗಂಭೀರ ಸವಾಲುಗಳನ್ನು ಎದುರಿಸುತ್ತಿದೆ ಎಂದು ಎಚ್ಚರಿಸಿದೆ. ಐಟಿಎ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ, ಚಹಾ ಉದ್ಯಮವು 2025 ರಲ್ಲಿ ನಿರ್ಣಾಯಕ ಹಂತದಲ್ಲಿದೆ, ಉತ್ಪಾದನೆ ಕುಸಿತ, ಬೆಲೆ ಕುಸಿತ ಮತ್ತು ಆಮದು ಏರಿಕೆಯಿಂದಾಗಿ, ವಿಶೇಷವಾಗಿ ಅಸ್ಸಾಂ ಮತ್ತು ಪಶ್ಚಿಮ ಬಂಗಾಳದಂತಹ ಪ್ರಮುಖ ಚಹಾ ಉತ್ಪಾದಿಸುವ ರಾಜ್ಯಗಳ ಮೇಲೆ ಇದು ಪರಿಣಾಮ ಬೀರಿದೆ ಎಂದು ತಿಳಿಸಿದೆ.

2024ರಲ್ಲಿ ಚಹಾ ಉತ್ಪಾದನೆಯಲ್ಲಿ ಕುಸಿತ ಕಂಡುಬಂದಿದ್ದು, 2023 ಕ್ಕೆ ಹೋಲಿಸಿದರೆ ರಾಷ್ಟ್ರೀಯ ಉತ್ಪಾದನೆಯು 109 ಮಿಲಿಯನ್ ಕಿಲೋಗ್ರಾಂಗಳಷ್ಟು ಕುಸಿದಿದೆ ಎಂದು ಸಂಘವು ವರದಿ ಮಾಡಿದೆ. ದೈನಂದಿನ ತಾಪಮಾನದಲ್ಲಿ ಬಿಸಿ ಹೆಚ್ಚಳ ಮತ್ತು ಮಳೆಯಲ್ಲಿನ ಇಳಿಕೆ ಹಾಗೂ ಕೀಟಗಳ ದಾಳಿ ಸೇರಿದಂತೆ ಪ್ರತಿಕೂಲ ಹವಾಮಾನ ಪರಿಸ್ಥಿತಿಗಳು ಈ ವರ್ಷ ಉತ್ಪಾದನೆಯ ಮೇಲೆ ತೀವ್ರ ಪರಿಣಾಮ ಬೀರಿವೆ. ಡಾರ್ಜಿಲಿಂಗ್‌ನಂತಹ ಪ್ರಮುಖ ಪ್ರದೇಶಗಳಲ್ಲಿ ಉತ್ಪಾದನೆಯು 10.34% ರಷ್ಟು ಕುಸಿದಿದೆ, ಆದರೆ ಜುಲೈ ಬೆಳೆ ಕಳೆದ ವರ್ಷಕ್ಕೆ ಹೋಲಿಸಿದರೆ 15% ರಿಂದ 20% ರಷ್ಟು ಕುಸಿದಿದೆ ಎಂದು ಅಂದಾಜಿಸಲಾಗಿದೆ.

## 9ನೇ ಮದುವೆಯಾಗಲು ಮಾತುಕತೆಗೆ ಹೊರಟಿದ್ದವಳು ಸಿಕ್ಕಿಬಿದ್ದು

**ಮುಂಬೈ:** ಮಹಾರಾಷ್ಟ್ರದ ನಾಗ್ಪುರದಲ್ಲಿ ಆಘಾತಕಾರಿ ಘಟನೆಯೊಂದು ಬೆಳಕಿಗೆ ಬಂದಿದೆ. ಒಬ್ಬರಲ್ಲ, ಇಬ್ಬರಲ್ಲ 8 ಪುರುಷರನ್ನು ಮದುವೆಯಾಗಿ ಲಕ್ಷಾಂತರ ಹಣ ವಂಚಿಸಿದ್ದ ಖತರ್ನಾಕ್ ಲೇಡಿಯನ್ನು ಪೊಲೀಸರು ಬಂಧಿಸಿದ್ದಾರೆ. ಆರೋಪಿ ಸಮೀರಾ ಫಾತಿಮಾ ಎಂಬಾಕೆ ಅರೆಸ್ಟ್ ಆಗಿದ್ದಾಳೆ. 8 ಬಾರಿ ಮದುವೆಯಾಗಿ, ಲಕ್ಷಾಂತರ ರೂ. ವಸೂಲಿ ಮಾಡಿದ್ದಳು. 9ನೇ ಮದುವೆಯಾಗಲು ಮಾತುಕತೆಗೆ ಹೊರಟಿದ್ದಳು. ಈ ವೇಳೆ ಪೊಲೀಸರಿಗೆ ಲಾಕ್ ಆಗಿದ್ದಾಳೆ. ಮಹಾರಾಷ್ಟ್ರದ ನಾಗ್ಪುರದಲ್ಲಿ ಈಕೆಯನ್ನು ಬಂಧಿಸಲಾಗಿದೆ. ಪೊಲೀಸರ ಆರಂಭಿಕ ತನಿಖೆಯಲ್ಲಿ ಆರೋಪಿ ಮಹಿಳೆ, ತನ್ನ ಗಂಡಂದಿರನ್ನು ಬ್ಲ್ಯಾಕ್ ಮೇಲ್ ಮಾಡಿ ಹಣ ವಸೂಲಿ ಮಾಡುತ್ತಿದ್ದಳು ಎಂದು ತಿಳಿದುಬಂದಿದೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ.



ಪೊಲೀಸ್ ತನಿಖೆಯಲ್ಲಿ ಸಮೀರಾ ಫಾತಿಮಾ ತನ್ನ ಬೇರೆ ಬೇರೆ ಗಂಡಂದಿರಿಂದ ಹಣ ಸುಲಿಗೆ ಮಾಡಲು ಒಂದು ಗ್ಯಾಂಗ್ ಜೊತೆ ಕೆಲಸ ಮಾಡುತ್ತಿದ್ದಳು ಎಂದು ತಿಳಿದು ಬಂದಿದೆ. ಆರೋಪಿ ವೃತ್ತಿಯಲ್ಲಿ ಶಿಕ್ಷಕಿ ಎಂದು ತನಿಖೆಯಲ್ಲಿ ತಿಳಿದುಬಂದಿದೆ.

## ವಿಶ್ವಮಟ್ಟದಲ್ಲಿ ಅತ್ಯಂತ ಯಶಸ್ವಿಯಾಗಿ, ನಿಖರವಾಗಿ ನಿಸಾರ್ ಉಪಗ್ರಹದ ಉಡಾವಣೆ

**ತಿರುವನಂತಪುರಂ:** ವಿಶ್ವ ಮಟ್ಟದಲ್ಲಿ ಅತ್ಯಂತ ಯಶಸ್ವಿಯಾಗಿ , ನಿಖರವಾಗಿ ನಿಸಾರ್ ಉಪಗ್ರಹದ ಉಡಾವಣೆ ಮಾಡಲಾಗಿದೆ ಎಂದು ಇಸ್ರೋ ಅಧ್ಯಕ್ಷ ವಿ. ನಾರಾಯಣನ್ ಹೇಳಿದ್ದಾರೆ

ಭಾರತವು ಸ್ಥಳೀಯವಾಗಿ ಅಭಿವೃದ್ಧಿಪಡಿಸಿದ ಜಿಎಸ್‌ಎಲ್‌ವಿ-ಎಫ್6 ಮಾರ್ಕ್ ವಾಹಕ ಬಳಸಿಕೊಂಡು ಉಪಗ್ರಹವನ್ನು ಯಶಸ್ವಿಯಾಗಿ ನಿರ್ವಹಿರುವುದು ನಾಸಾಗೂ ಅಚ್ಚರಿ ಮೂಡಿಸಿತು ಜೊತೆಗೆ ಇದು ಅವರಿಗೂ ಊಹಿಸಲಾಗದ ಇಸ್ರೋ ಸಾಧನೆಯಾಗಿದೆ ಎಂದು ಎಂದು ತಿಳಿಸಿದ್ದಾರೆ. ಕಳೆದ ರಾತ್ರಿ ಇಲ್ಲಿನ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ಅವರು ಹರ್ಷ ವ್ಯಕ್ತಪಡಿಸಿದರು. ಭಾರತೀಯರು ಸ್ಥಳೀಯವಾಗಿ ಅಭಿವೃದ್ಧಿಪಡಿಸಿದ ಜಿಎಸ್‌ಎಲ್‌ವಿ ವಾಹಕವನ್ನು ಬಳಸಿಕೊಂಡು ಯಶಸ್ವಿಯಾಗಿ ಉಡಾವಣೆ




ಮಾಡಬಹುದು ಎಂದು ಅರ್ಥಮಾಡಿಕೊಂಡಾಗ ಅವರು ತುಂಬಾ ಉತ್ಸುಕಗೊಂಡಿದ್ದರು,ನಂತರ ಉಪಗ್ರಹವನ್ನು ಯಶಸ್ವಿಯಾಗಿ ಕಕ್ಷೆಗೆ ಸೇರಿದಾಗ ತುಂಬಾ ಸಂತೋಷಪಟ್ಟರು ಎಂದು ಹೇಳಿದರು.

ನಾರಾಯಣನ್ ಅವರ ಪ್ರಕಾರ, ಇದು ವಿಶ್ವದ ಅತ್ಯಂತ ನಿಖರವಾದ ಉಡಾವಣೆಗಳಲ್ಲಿ ಒಂದಾಗಿದ್ದು, ಐದು ಹಂತದ ರಾಕೆಟ್ ಪ್ರತಿ ಹಂತದಲ್ಲೂ ದೋಷರಹಿತವಾಗಿ ಕಾರ್ಯನಿರ್ವಹಿಸಿದೆ, ಕೇವಲ ಎರಡರಿಂದ ಮೂರು ಕಿಲೋಮೀಟರ್ ಅಂತರದಲ್ಲಿ ಉಪಗ್ರಹವನ್ನು ಅದರ ನಿಖರವಾದ ಕಕ್ಷೆಗೆ ಸೇರಿಸುತ್ತದೆ ಎಂದು ತಿಳಿಸಿದರು. ಇದು ವಿಶ್ವದಲ್ಲಿ ಇದುವರೆಗೆ ನಡೆಸಿದ ಅತ್ಯಂತ ನಿಖರವಾದ ಉಡಾವಣೆಗಳಲ್ಲಿ ಒಂದಾಗಿದೆ ಎಂಬ ಹೆಗ್ಗಳಿಕೆ ಮೂಡಿಸಿದೆ ಮತ್ತು ಭಾರತ ಮತ್ತು ಅಮೆರಿಕ ಜಂಟಿಯಾಗಿ ನಿರ್ಮಿಸಿದ ಅತ್ಯಂತ ತಾಂತ್ರಿಕವಾಗಿ ತೀವ್ರ ಮತ್ತು ಹೆಚ್ಚು ಉಪಯುಕ್ತವಾದ ಉಪಗ್ರಹವನ್ನು ಭಾರತೀಯ ಲಾಂಚರ್ ಬಳಸಿ ಕಕ್ಷೆಯಲ್ಲಿ ಇರಿಸಲಾಗಿದೆ ಇದು ಇಡೀ ದೇಶ ಹೆಮ್ಮೆಪಡಬಹುದು ಎಂದು ಅವರು ಹೇಳಿದರು.

● ಭಾರತ ಮತ್ತು ರಷ್ಯಾದ ಆರ್ಥಿಕತೆಗಳನ್ನು ಸತ್ತ ಆರ್ಥಿಕತೆ ಎಂದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್

# ಅಮೆರಿಕ ಅಧ್ಯಕ್ಷರಿಗೆ 'ಡೆಡ್ ಹ್ಯಾಂಡ್' ನೆನಪಿಸಿದ ರಷ್ಯಾದ ಮಾಜಿ ಅಧ್ಯಕ್ಷ

1 ಭಾರತ ಮತ್ತು ರಷ್ಯಾದ ಆರ್ಥಿಕತೆಗಳನ್ನು ಸತ್ತ ಆರ್ಥಿಕತೆ ಎಂದ ಡೊನಾಲ್ಡ್ ಟ್ರಂಪ್.

2 ಡೊನಾಲ್ಡ್ ಟ್ರಂಪ್‌ಗೆ 'ಡೆಡ್ ಹ್ಯಾಂಡ್' ನೆನಪಿಸಿ ತಿರುಗೇಟು ನೀಡಿದ ಡಿಮಿಟ್ರಿ ಮೆಡ್ವೆಡೆವ್.

3 ಶುರುವಾಗಿದೆ ಡೊನಾಲ್ಡ್ ಟ್ರಂಪ್ vs ಡಿಮಿಟ್ರಿ ಮೆಡ್ವೆಡೆವ್ ವಾಕ್ಸಮರ. ಯಾರು ಗೆಲ್ತಾರೆ?

**ಮಾಸ್ಕೋ:** ಭಾರತ ಮತ್ತು ರಷ್ಯಾದ ಆರ್ಥಿಕತೆಗಳು ಸತ್ತಿವೆ ಎಂಬ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೇಳಿಕೆಗೆ, ಮಾಸ್ಕೋ ನಿರೀಕ್ಷಿತ ಪ್ರತಿಕ್ರಿಯೆಯನ್ನೇ ಪಡೆದುಕೊಂಡಿದೆ. ಟ್ರಂಪ್ ಹೇಳಿಕೆಗೆ ತಿರುಗೇಟು ನೀಡಿರುವ ರಷ್ಯಾ ಮಾಜಿ ಅಧ್ಯಕ್ಷ ಮತ್ತು ಭದ್ರತಾ ಮಂಡಳಿಯ ಉಪಾಧ್ಯಕ್ಷ ಡಿಮಿಟ್ರಿ ಮೆಡ್ವೆಡೆವ್, ನೀವು ಯಾರನ್ನು ಸತ್ತವರು ಎಂದು ಲೇಬಲ್ ಮಾಡುತ್ತಿದ್ದಾರೋ ಅವರಿಂದ ಎದುರಾಗಬಹುದಾದ ಅಪಾಯಗಳನ್ನು ನಿರ್ಲಕ್ಷಿಸಬೇಡಿ ಎಂದು ಸೂಚ್ಯವಾಗಿ ಸಲಹೆ ನೀಡಿದ್ದಾರೆ.

ಅಮೆರಿಕ ಅಧ್ಯಕ್ಷರು ರಷ್ಯಾದ ಆರ್ಥಿಕತೆಯನ್ನು ಡೆಡ್ ಎಕಾನಮಿ ಎಂದು ಕರೆದಿದ್ದಾರೆ. ಪಾಪ ಅವರಿಗೆ ಶೀತಲ ಸಮರದ ಸಮಯದಲ್ಲಿ ಸೋವಿಯತ್ ರಷ್ಯಾ ಬಳಿ ಇದ್ದ 'ಡೆಡ್ ಹ್ಯಾಂಡ್' ಶಸ್ತ್ರಾಸ್ತ್ರದ ಬಗ್ಗೆ ಗೊತ್ತಿಲ್ಲ. ಅಮೆರಿಕ ಬಯಸಿದರೆ ನಾವು ಅದರ ಪರಿಣಾಮಗಳನ್ನು ಮನವರಿಕೆ ಮಾಡಿಕೊಡಲು ಸಿದ್ಧ ಎಂದು ಡಿಮಿಟ್ರಿ ಮೆಡ್ವೆಡೆವ್ ಅವರು ಡೊನಾಲ್ಡ್ ಟ್ರಂಪ್ ಅವರನ್ನು ಚುಚ್ಚಿದ್ದಾರೆ. ಇತ್ತೀಚಿನ ಮಧ್ಯಪ್ರಾಚ್ಯ ಬಿಕ್ಕಟ್ಟಿನ ಸಂದರ್ಭದಲ್ಲೂ, ಮೆಡ್ವೆಡೆವ್ ಅವರು, ಇರಾನ್‌ಗೆ ಸಿಡತಲೆ ಪೂರೈಸಲು ಅನೇಕ ರಾಷ್ಟ್ರಗಳು ಸಿದ್ಧ ಎಂದು ಹೇಳಿದ್ದರು. ಪೆರಿಮೀಟರ್' ಎಂದೂ ಕರೆಯಲ್ಪಡುವ ಡೆಡ್ ಹ್ಯಾಂಡ್' ಶೀತಲ ಸಮರದ ಯುಗದ ಸ್ವಯಂಚಾಲಿತ ಅಥವಾ ಅರೆ-ಸ್ವಯಂಚಾಲಿತ ಪರಮಾಣು ಶಸ್ತ್ರಾಸ್ತ್ರ ನಿಯಂತ್ರಣ ವ್ಯವಸ್ಥೆಯಾಗಿದ್ದು, ಒಂದು ವೇಳೇ ಯುದ್ಧದಲ್ಲಿ ದೇಶದ ಇಡೀ ನಾಯಕತ್ವವನ್ನೇ ನಾಶಮಾಡಿದರೂ, ಅದು ಪರಮಾಣು ಪ್ರತಿದಾಳಿಯನ್ನು ಪ್ರಾರಂಭಿಸುವ

ಮಾಸ್ಕೋದಿಂದ ನಿರೀಕ್ಷಿತ ಪ್ರತಿಕ್ರಿಯೆ



ಸಾಮರ್ಥ್ಯವನ್ನು ಹೊಂದಿತ್ತು.

ರಷ್ಯಾ-ಭಾರತ ತೈಲ ಮತ್ತು ಮಿಲಿಟರಿ ಒಪ್ಪಂದವನ್ನು ಕುಟುವಾಗಿ ಟೀಕಿಸಿದ್ದ ಡೊನಾಲ್ಡ್ ಟ್ರಂಪ್, ಎರಡೂ ದೇಶಗಳು ಮಾತ್ರವಲ್ಲದೇ ಇಡೀ ಜಗತ್ತೇ ಆಶ್ಚರ್ಯಚಕಿತವಾಗುವಂತೆ, ಭಾರತ-ರಷ್ಯಾ ತಮ್ಮ ಸತ್ತ ಆರ್ಥಿಕತೆಯನ್ನು ಒಟ್ಟಾಗಿ ಹೂಳಲಿ ಎಂದು ಹೇಳಿಕೆ ನೀಡಿದ್ದರು.

ಇದಕ್ಕೆ ಪ್ರತೀಕಾರವಾಗಿ ಡಿಮಿಟ್ರಿ ಮೆಡ್ವೆಡೆವ್ ತಮ್ಮ ಪೋಸ್ಟ್‌ನಲ್ಲಿ, ರಷ್ಯಾದ ಮಾಜಿ ಅಧ್ಯಕ್ಷರ ಕೆಲವು ಮಾತುಗಳು ಅಮೆರಿಕದ ಪ್ರಬಲ ಅಧ್ಯಕ್ಷರಿಂದ ಅಂತಹ ನಡುಕ ಹುಟ್ಟಿಸುವ ಪ್ರತಿಕ್ರಿಯೆಯನ್ನು ಉಂಟುಮಾಡಬಹುದಾದರೆ, ರಷ್ಯಾ ಸಂಪೂರ್ಣವಾಗಿ ಸರಿಯಾಗಿದೆ ಎಂದು ಅರ್ಥ ಎಂದು

### ಟ್ರಂಪ್ VS ಮೆಡ್ವೆಡೆವ್

**ಡೊನಾಲ್ಡ್ ಟ್ರಂಪ್ ಅವರು ಕೆಲವೇ ದಿನಗಳ ಹಿಂದೆ ಡಿಮಿಟ್ರಿ ಮೆಡ್ವೆಡೆವ್ ಅವರನ್ನು ಗುರಿಯಾಗಿಸಿಕೊಂಡು, ರಷ್ಯಾ ಮತ್ತು ಯುಎಸ್‌ಎ ಬಹುತೇಕ ವಿಚಾರಗಳಲ್ಲಿ ಒಟ್ಟಿಗೆ ವ್ಯವಹರಿಸುವುದಿಲ್ಲ. ಈ ಭಿನ್ನಾಭಿಪ್ರಾಯವನ್ನು ಹಾಗೆಯೇ ಮುಂದುವರೆಸೋಣ. ಆದರೆ ರಷ್ಯಾದ ವಿಫಲ ಮಾಜಿ ಅಧ್ಯಕ್ಷ ಡಿಮಿಟ್ರಿ ಮೆಡ್ವೆಡೆವ್ ತಮ್ಮ ಹೇಳಿಕೆಗಳ ಬಗ್ಗೆ ಎಚ್ಚರವಹಿಸುವುದು ಒಳಿತು. ಅವರು ಕೆಲವೊಮ್ಮೆ ತುಂಬಾ ಅಪಾಯಕಾರಿ ಪ್ರದೇಶವನ್ನು ಪ್ರವೇಶಿಸುತ್ತಾರೆ ಎಂದು ಎಚ್ಚರಿಕೆ ನೀಡಿದ್ದರು.**

ತಿರುಗೇಟು ನೀಡಿದ್ದಾರೆ. 2008ರಿಂದ 2012ರವರೆಗೆ ರಷ್ಯಾದ ಅಧ್ಯಕ್ಷರಾಗಿದ್ದ ಡಿಮಿಟ್ರಿ ಮೆಡ್ವೆಡೆವ್ 2012ರಿಂದ 2020ರವರೆಗೆ ರಷ್ಯಾದ ಪ್ರಧಾನಮಂತ್ರಿಯಾಗಿಯೂ ಸೇವೆ ಸಲ್ಲಿಸಿದ್ದಾರೆ. ಅವರು ಪ್ರಸ್ತುತ ರಷ್ಯಾದ ಭದ್ರತಾ ಮಂಡಳಿಯ ಉಪಾಧ್ಯಕ್ಷರಾಗಿದ್ದಾರೆ.

**ಭಾರತದಿಂದಲೂ ಖಡಕ್ ಪ್ರತಿಕ್ರಿಯೆ:**

ಇನ್ನು ಡೊನಾಲ್ಡ್ ಟ್ರಂಪ್ ಅವರ ಸತ್ತ ಆರ್ಥಿಕತೆ ಹೇಳಿಕೆಗೆ ಭಾರತದಲ್ಲೂ ವ್ಯಾಪಕ ಖಂಡನೆ ವ್ಯಕ್ತವಾಗಿದೆ. ಈ ಕುರಿತು ಪ್ರತಿಕ್ರಿಯೆ ನೀಡಿರುವ ಅನೇಕ ಭಾರತೀಯ ನಾಯಕರು, ಭಾರತದ ಆರ್ಥಿಕತೆ ಜೀವಂತ ಸೆಲೆಯಾಗಿದೆ ಎಂದು ಡೊನಾಲ್ಡ್ ಟ್ರಂಪ್ ಅವರಿಗೆ ತಿರುಗೇಟು ನೀಡಿದ್ದಾರೆ.

## ಬಿಹಾರದಲ್ಲಿ ಶಾಲಾ ಸಿಬ್ಬಂದಿಗೆ ವೇತನ ಹೆಚ್ಚಳ

**ಪಾಟ್ನಾ:** ಮಧ್ಯಾಹ್ನ ಊಟದ ಅಡುಗೆಯವರು, ಶಾಲೆಗಳಲ್ಲಿ ರಾತ್ರಿ ಕಾವಲುಗಾರರು ಮತ್ತು ದೈಹಿಕ ಶಿಕ್ಷಣ ಮತ್ತು ಆರೋಗ್ಯ ಬೋಧಕರಿಗೆ ವೇತನ ಹೆಚ್ಚಳ ಮಾಡಿ ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು ಮತ್ತೊಂದು ಬಂಪರ್ ಕೊಡುಗೆ ನೀಡಿದ್ದಾರೆ.

ಇದು ಶಾಲಾ ಬೆಂಬಲ ಸಿಬ್ಬಂದಿಯ ಯೋಗಕ್ಷೇಮ ಮತ್ತು ಕೆಲಸದ ಪರಿಸ್ಥಿತಿಗಳನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಿದೆ ಎಂದು ಮುಖ್ಯಮಂತ್ರಿ ತಮ ಅಧಿಕೃತ ಸಾಮಾಜಿಕ ಜಾಲತಾಣ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಸರ್ಕಾರ ಹೊರಡಿಸಿರುವ ಹೊಸ ಮಾರ್ಗಸೂಚಿಗಳ ಪ್ರಕಾರ, ಶಿಕ್ಷಣ ವ್ಯವಸ್ಥೆ ಬಲಪಡಿಸುವಲ್ಲಿ ಅಡುಗೆಯವರು (ಬಿಸಿಯೂಟ ತಯಾರಕರು), ರಾತ್ರಿ ಕಾವಲುಗಾರರು ಮತ್ತು ದೈಹಿಕ ಶಿಕ್ಷಣ ಮತ್ತು ಆರೋಗ್ಯ ಬೋಧಕರು ಪ್ರಮುಖ ಪಾತ್ರ ವಹಿಸಿದ್ದಾರೆ. ಇದನ್ನ ಗಮನದಲ್ಲಿಟ್ಟುಕೊಂಡು, ಈ ಕಾರ್ಮಿಕರ ಗೌರವಧನವನ್ನು ದ್ವಿಗುಣಗೊಳಿಸುವ ಮೂಲಕ ಗೌರವಾನ್ವಿತ ಹೆಚ್ಚಳ ಮಾಡಲು ನಾವು ನಿರ್ಧರಿಸಿದ್ದೇವೆ ಎಂದು ತಮ್ಮ ಪೋಸ್ಟ್‌ನಲ್ಲಿ ಹಂಚಿಕೊಂಡಿದ್ದಾರೆ.

2005ರ ನವೆಂಬರ್‌ನಲ್ಲಿ ನಮ್ಮ ಸರ್ಕಾರ ರಚನೆಯಾದಾಗಿನಿಂದ, ನಾವು ಶಿಕ್ಷಣ ವ್ಯವಸ್ಥೆಯನ್ನು ಸುಧಾರಿಸಲು ನಿರಂತರವಾಗಿ ಕೆಲಸ ಮಾಡುತ್ತಿದ್ದೇವೆ.



2005 ರಲ್ಲಿ ಶಿಕ್ಷಣದ ಒಟ್ಟು ಬಜೆಟ್ 4,366 ಕೋಟಿ ರೂ.ಗಳಾಗಿದ್ದು, ಈಗ ಅದು 77,690 ಕೋಟಿ ರೂ. ಗಳಿಗೆ ಏರಿಕೆಯಾಗಿದೆ. ಹೆಚ್ಚಿನ ಸಂಖ್ಯೆಯ ಶಿಕ್ಷಕರ ನೇಮಕಾತಿ, ಹೊಸ ಶಾಲಾ ಕಟ್ಟಡಗಳ ನಿರ್ಮಾಣ ಮತ್ತು ಮೂಲಸೌಕರ್ಯಗಳ ಅಭಿವೃದ್ಧಿಯಿಂದಾಗಿ ಶಿಕ್ಷಣ ವ್ಯವಸ್ಥೆಯಲ್ಲಿ ವ್ಯಾಪಕ ಸುಧಾರಣೆ ಕಂಡುಬಂದಿದೆ. ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಅಡುಗೆಯವರು, ರಾತ್ರಿ ಕಾವಲುಗಾರರು ಮತ್ತು ದೈಹಿಕ ಶಿಕ್ಷಣ ಮತ್ತು ಆರೋಗ್ಯ ಬೋಧಕರು ಪ್ರಮುಖ ಪಾತ್ರವಹಿಸಿದ್ದಾರೆ.

ಇದನ್ನ ಗಮನದಲ್ಲಿಟ್ಟುಕೊಂಡು, ಗೌರವಧನ ದ್ವಿಗುಣಗೊಳಿಸುವ ಮೂಲಕ ಗೌರವಾನ್ವಿತ ಹೆಚ್ಚಳ ಮಾಡಲು ನಾವು ನಿರ್ಧರಿಸಿದ್ದೇವೆ. ಅಲ್ಲದೇ, ದೈಹಿಕ ಶಿಕ್ಷಣ ಮತ್ತು ಆರೋಗ್ಯ ಬೋಧಕರ ಗೌರವಧನವನ್ನು 8 ಸಾವಿರದಿಂದ 16,000 ರೂ. ಗಳಿಗೆ, ವಾರ್ಷಿಕ ವೇತನವನ್ನ 200 ರೂ.ಗಳಿಂದ 400 ರೂ.ಗಳಿಗೆ ಹೆಚ್ಚಿಸಲಾಗಿದೆ. ಇದು ಕಾರ್ಯನಿರತ ಸಿಬ್ಬಂದಿ ಮನೋಸ್ಥೈರ್ಯವನ್ನು ಹೆಚ್ಚಿಸುತ್ತದೆ ಎಂದು ನಿತೀಶ್ ಕುಮಾರ್ ತಿಳಿಸಿದ್ದಾರೆ.

**ಶಿಕ್ಷಣ ಇಲಾಖೆ ಅಡಿಯಲ್ಲಿ ಮಧ್ಯಾಹ್ನದ ಬಿಸಿಯೂಟ ತಯಾರಿಕೆಯಲ್ಲಿ ಕೆಲಸ ಮಾಡುವ ಅಡುಗೆಯವರ ಗೌರವಧನವನ್ನು ದ್ವಿಗುಣಗೊಳಿಸಲು ನಿರ್ಧರಿಸಲಾಗಿದೆ. ಬಿಸಿಯೂಟ ತಯಾರಕರ ಗೌರವಧನವನ್ನು 1,650 ರೂ.ಗಳಿಂದ 3,300 ರೂ.ಗಳಿಗೆ ಹೆಚ್ಚಿಸಲಾಗಿದೆ. ಅದೇ ಸಮಯದಲ್ಲಿ ಮಾಧ್ಯಮಿಕ/ಉನ್ನತ ಶಿಕ್ಷಣ ಶಾಲೆಯಲ್ಲಿ ಕೆಲಸ ಮಾಡುವ ರಾತ್ರಿ ಕಾವಲುಗಾರರ ಗೌರವಧನವನ್ನು 5000 ರಿಂದ 10,000 ರೂ. ಗಳಿಗೆ ದ್ವಿಗುಣಗೊಳಿಸಲು ನಿರ್ಧರಿಸಲಾಗಿದೆ.**

## 2ನೇ ದಿನ ಅಮರನಾಥ ಯಾತ್ರೆ ಸ್ಥಗಿತ

**ಜಮ್ಮು:** ಪ್ರತಿಕೂಲ ಹವಾಮಾನದಿಂದಾಗಿ ಜಮುವಿನಿಂದ ಅಮರನಾಥ ಯಾತ್ರೆಯನ್ನು ಸತತ ಎರಡನೇ ದಿನವಾದ ಇಂದು ಕೂಡ ಸ್ಥಗಿತಗೊಳಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ದಕ್ಷಿಣ ಕಾಶೀರ ಹಿಮಾಲಯದಲ್ಲಿರುವ ಅಮರನಾಥ ಗುಹಾ ದೇವಾಲಯಕ್ಕೆ ಹೊಸ ಯಾತ್ರಿಕರಿಗೆ ಅವಕಾಶ ನೀಡಲಾಗಿಲ್ಲ ಎಂದು ಅವರು ತಿಳಿಸಿದ್ದಾರೆ.

ಹವಾಮಾನ ಪರಿಸ್ಥಿತಿ ಸುಧಾರಿಸದ ಕಾರಣ ಪಹಲ್ಗಾಮ್ ಮತ್ತು ಬಾಲ್ಟಾಲ್‌ನ ಅವಳಿ ಮೂಲ ಶಿಬಿರಗಳಿಂದ ಹೆಚ್ಚಿನ ಭದ್ರತೆಯ ಭಗವತಿ ನಗರ ಮೂಲ ಶಿಬಿರದಲ್ಲಿ ಯಾತ್ರಾರ್ಥಿಗಳನ್ನು ಇರಿಸಲಾಗಿದೆ.

ಜುಲೈ 3 ರಂದು ಕಣಿವೆಯಿಂದ 38 ದಿನಗಳ ತೀರ್ಥಯಾತ್ರೆ ಪ್ರಾರಂಭವಾದಾಗಿನಿಂದ 4 ಲಕ್ಷಕ್ಕೂ ಹೆಚ್ಚು ಯಾತ್ರಿಕರು 3,880 ಮೀಟರ್ ಎತ್ತರದ ಗುಹಾ ದೇವಾಲಯದಲ್ಲಿ ಶಿವನ ಹಿಮಲಿಂಗಕ್ಕೆ ಪೂಜೆ ಸಲ್ಲಿಸಿದ್ದಾರೆ.



ಪ್ರತಿಕೂಲ ಹವಾಮಾನ ಪರಿಣಾಮ

ಜಮ್ಮುವಿನಿಂದ ಗುಹಾ ದೇವಾಲಯಕ್ಕೆ ಯಾತ್ರೆಯನ್ನು ಇಂದು ಸ್ಥಗಿತಗೊಳಿಸಲಾಗಿದೆ.

ಪ್ರತಿಕೂಲ ಹವಾಮಾನದ ಜೊತೆಗೆ ಮುನ್ನೆಚ್ಚರಿಕೆ ಕ್ರಮಗಳನ್ನು ಗಮನದಲ್ಲಿಟ್ಟುಕೊಂಡು ಇದನ್ನು ಮಾಡಲಾಗಿದೆ.

ಜಮುವಿನಿಂದ ಯಾತ್ರೆಯನ್ನು ಸ್ಥಗಿತಗೊಳಿಸಲಾಗುತ್ತಿರುವುದು ಇದು ಎರಡನೇ ಬಾರಿ. ಜುಲೈ 2 ರಂದು ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಮೊದಲ ಬ್ಯಾಚ್‌ಗೆ ಚಾಲನೆ ನೀಡಿದ ನಂತರ ಸದ್ಯ ಒಟ್ಟು 1,44,124 ಯಾತ್ರಿಕರು ಜಮ್ಮು ಶಿಬಿರದಿಂದ ತೆರಳಿದ್ದಾರೆ.

## 166 ನಾಯಕರಿಗೆ 10 ವರ್ಷ ಜೈಲು ಶಿಕ್ಷೆ

**ಇಸ್ಲಾಮಾಬಾದ್:** ಇಮ್ರಾನ್ ಖಾನ್ ಅವರನ್ನು ಬೆಂಬಲಿಸಿ ಇಮ್ರಾನ್ ಖಾನ್ ಮುಕ್ತ ಚಳುವಳಿ ಪ್ರಾರಂಭವಾಗುವ ಸ್ವಲ್ಪ ಮೊದಲು, ಪಾಕಿಸ್ತಾನದ ಭಯೋತ್ಪಾದನಾ ನಿಗ್ರಹ ನ್ಯಾಯಾಲಯವು ಪಿಟಿಐ (ಪಾಕಿಸ್ತಾನ್ ತೆಹ್ರೀಕ್-ಇ-ಇನ್ಸಾಫ್) ನ 166 ನಾಯಕರಿಗೆ 10 ವರ್ಷಗಳ ಶಿಕ್ಷೆ ವಿಧಿಸುವ ಮೂಲಕ ರಾಜಕೀಯ ವಲಯಗಳಲ್ಲಿ ಕೋಲಾಹಲವನ್ನು ಸೃಷ್ಟಿಸಿದೆ. ಮೇ 9, 2023 ರಂದು ಫೈಸಲಾಬಾದ್‌ನಲ್ಲಿರುವ ಐಎಸ್‌ಐ ಕಚೇರಿ ಸೇರಿದಂತೆ ಮಿಲಿಟರಿ ನೆಲೆಗಳ ಮೇಲಿನ ದಾಳಿಗೆ ಸಂಬಂಧಿಸಿದಂತೆ ಈ ತೀರ್ಪು ನೀಡಲಾಗಿದೆ. ಈ ಶಿಕ್ಷೆಯನ್ನು ಇಮ್ರಾನ್ ಖಾನ್‌ಗೆ ಹೆಚ್ಚುತ್ತಿರುವ ಬೆಂಬಲವನ್ನು ಹತ್ತಿಕ್ಕುವ ತಂತ್ರವೆಂದು ಪರಿಗಣಿಸಲಾಗುತ್ತಿದೆ.

ಈ ನಾಯಕರಲ್ಲಿ ರಾಷ್ಟ್ರೀಯ ಅಸೆಂಬ್ಲಿ, ಸೆನೆಟ್‌ನ ಪ್ರಮುಖ ವಿರೋಧ ಪಕ್ಷಗಳು ಸಹ ಸೇರಿವೆ. ಇಮ್ರಾನ್ ಖಾನ್ ಅವರ ಪಕ್ಷ ಮತ್ತೊಮ್ಮೆ ಸಾರ್ವಜನಿಕ ಬೆಂಬಲವನ್ನು ಗಳಿಸಲು ತಯಾರಿ ನಡೆಸುತ್ತಿರುವ ಸಮಯದಲ್ಲಿ ಈ ನಿರ್ಧಾರ ಬಂದಿದೆ. ಪಿಟಿಐ ಈ ನಿರ್ಧಾರವನ್ನು ರಾಜಕೀಯ ಸೇಡಿನ ಕ್ರಮ ಎಂದು ಕರೆದಿದೆ ಮತ್ತು ಲಾಹೋರ್ ಹೈಕೋರ್ಟ್‌ನಲ್ಲಿ ಅದನ್ನು ಪ್ರಶ್ನಿಸುವುದಾಗಿ ಘೋಷಿಸಿದೆ.



ಇಮ್ರಾನ್‌ಗೆ ಹೊಡೆತ

**ಯಾವ ನಾಯಕರಿಗೆ ಶಿಕ್ಷೆಯಾಯಿತು?:**

ಒಮರ್ ಅಯೂಬ್ ರಾಷ್ಟ್ರೀಯ ಅಸೆಂಬ್ಲಿಯಲ್ಲಿ ವಿರೋಧ ಪಕ್ಷದ ನಾಯಕ, ಶಿಬ್ಲಿ ಫರಾಜ್ ಸೆನೆಟ್ ವಿರೋಧ ಪಕ್ಷದ ನಾಯಕಿ, ಜರ್ತಾಜ್ ಗುಲ್ ಮಾಜಿ ಸಚಿವ ಮತ್ತು ಪಿಟಿಐ ನಾಯಕ, ಸಾಹಿಬ್‌ಜಾದಾ ಹಮೀದ್ ರಜಾ ಪಿಟಿಐ ಹಿರಿಯ ಸದಸ್ಯ, ಶಿಕ್ಷೆಗೊಳಗಾದವರಲ್ಲಿ ಆರು ರಾಷ್ಟ್ರೀಯ ಅಸೆಂಬ್ಲಿ ಸದಸ್ಯರು, ಒಬ್ಬ ಪಂಜಾಬ್ ಅಸೆಂಬ್ಲಿ ಶಾಸಕ ಮತ್ತು ಒಬ್ಬ ಸೆನೆಟರ್ ಸೇರಿದ್ದಾರೆ.

## ಮಾಲೆಗಾಂವ್ ಸ್ಫೋಟ: ಭಾಗವತ್ ಬಂಧನಕ್ಕೆ ಒತ್ತಡವಿತ್ತು

**ಪುಣೆ:** ಮಾಲೆಗಾಂವ್ ಸ್ಫೋಟ ಪ್ರಕರಣದ ತನಿಖೆಯ ಸಮಯದಲ್ಲಿ ಮಹಾರಾಷ್ಟ್ರ ಭಯೋತ್ಪಾದನಾ ನಿಗ್ರಹ ದಳದ ಭಾಗವಾಗಿದ್ದ ಮಾಜಿ ಪೊಲೀಸ್ ಅಧಿಕಾರಿಯೊಬ್ಬರು, ರಾಷ್ಟ್ರೀಯ ಸ್ವಯಂಸೇವಕ ಸಂಘ ಮುಖ್ಯಸ್ಥ ಮೋಹನ್ ಭಾಗವತ್ ಅವರನ್ನು ಬಂಧಿಸಲು ತಮಗೆ ಸೂಚನೆ ನೀಡಲಾಗಿತ್ತು ಎಂದು ನಿವೃತ್ತ ಪೊಲೀಸ್ ಅಧಿಕಾರಿ ಹೇಳಿದ್ದಾರೆ.

ಬಿಜೆಪಿ ಸಂಸದೆ ಪ್ರಜ್ಞಾ ಸಿಂಗ್ ಠಾಕೂರ್ ಸೇರಿದಂತೆ ಪ್ರಕರಣದ ಎಲ್ಲಾ 7 ಆರೋಪಿಗಳನ್ನು ಖುಲಾಸೆಗೊಳಿಸಿದ ವಿಶೇಷ ನ್ಯಾಯಾಲಯದ ತೀರ್ಪಿಗೆ ಪ್ರತಿಕ್ರಿಯೆಯಾಗಿ ನಿವೃತ್ತ ಇನ್ಸ್‌ಪೆಕ್ಟರ್ ಮೆಹಿಬೂಬ್ ಮುಜಾವರ್ ಈ ಹೇಳಿಕೆ ನೀಡಿದ್ದಾರೆ.

ಸೋಲಾಪುರದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಮುಜಾವರ್, ಭಾಗವತ್ ಅವರನ್ನು ಗುರಿಯಾಗಿಸುವ ನಿರ್ದೇಶನವು ಕೇಸರಿ ಭಯೋತ್ಪಾದನೆಯ ನಿರೂಪಣೆಯನ್ನು ಸ್ಥಾಪಿಸುವ ವಿಶಾಲ ಕಾರ್ಯಸೂಚಿಯ ಭಾಗವಾಗಿದೆ ಎಂದು ಆರೋಪಿಸಿದರು. ಅವರ ಪ್ರಕಾರ, ಇತ್ತೀಚಿನ ತೀರ್ಪು ಎಟಿಎಸ್ ತನಿಖೆಯ ಹಲವು ಅಂಶಗಳನ್ನು ಕಟ್ಟುಕಥೆ ಎಂದು ದೃಢಪಡಿಸುತ್ತದೆ. ತನಿಖೆಯ ಸಮಯದಲ್ಲಿ ಎಟಿಎಸ್ ಮಾಡಿದ ನಕಲಿ ಕೆಲಸಗಳನ್ನು ನ್ಯಾಯಾಲಯದ ನಿರ್ಧಾರವು



ರದ್ದುಗೊಳಿಸಿದೆ ಎಂದು ಅವರು ಹೇಳಿದರು.

ಇಡೀ ತನಿಖೆಯು ರಾಜಕೀಯವಾಗಿ ಪ್ರಭಾವಿತವಾಗಿದೆ ಮತ್ತು ಕೆಲವು ಸೈದ್ಧಾಂತಿಕ ಗುಂಪುಗಳನ್ನು ದೋಷಾರೋಪಣೆ ಮಾಡುವ ಗುರಿಯನ್ನು ಹೊಂದಿದೆ ಎಂದು ಅವರು ಹೇಳಿದರು. ಗಮನಾರ್ಹವಾಗಿ, ಎಟಿಎಸ್ ಆರಂಭದಲ್ಲಿ ಪ್ರಕರಣವನ್ನು ತನಿಖೆ ಮಾಡಿದ್ದರೂ, ನಂತರ ಅದನ್ನು ರಾಷ್ಟ್ರೀಯ ತನಿಖಾ ಸಂಸ್ಥೆ ವಹಿಸಿಕೊಂಡಿತು.

''ನಕಲಿ ಅಧಿಕಾರಿ ನಡೆಸಿದ ನಕಲಿ ತನಿಖೆಯನ್ನು ತೀರ್ಪು ಬಹಿರಂಗಪಡಿಸಿದೆ'' ಎಂದು ಮುಜಾವರ್ ಹಿರಿಯ ಅಧಿಕಾರಿಯನ್ನು ಹೆಸರಿಸಿ ಹೇಳಿದರು. ಸೆಪ್ಟೆಂಬರ್ 29, 2008 ರಂದು ಮಾಲೆಗಾಂವ್‌ನಲ್ಲಿ ನಡೆದ ಸ್ಫೋಟದ ತನಿಖೆ ನಡೆಸಿದ ಎಟಿಎಸ್ ತಂಡದ ಭಾಗವಾಗಿದ್ದರು, ಇದರಲ್ಲಿ ಆರು ಜನರು ಸಾವನ್ನಪ್ಪಿದರು ಮತ್ತು 101 ಜನರು ಗಾಯಗೊಂಡರು ಎಂದು ಮುಜಾವರ್ ಹೇಳಿದರು.

ಕಟ್ಟುಕಥೆ ಎಂದು ದೃಢ

ಮೋಹನ್ ಭಾಗವತ ಅವರನ್ನು ''ಹೋಗಿ ಹಿಡಿಯಲು ಕೇಳಲಾಯಿತು ಎಂದು ಹೇಳಿಕೊಂಡರು. ಆಗ ಎಟಿಎಸ್ ಏನು ತನಿಖೆ ನಡೆಸಿತು ಮತ್ತು ಏಕೆ ಎಂದು ನಾನು ಹೇಳಲಾರೆ? ಆದರೆ ರಾಮ್ ಕಲ್ಸಂಗ್ರ, ಸಂದೀಪ್ ಡಾಂಗೆ, ದಿಲೀಪ್ ಪಾಟಿದಾರ್ ಮತ್ತು ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರಂತಹ ವ್ಯಕ್ತಿಗಳ ಬಗ್ಗೆ ನನಗೆ ಕೆಲವು ಗೌಪ್ಯ ಆದೇಶಗಳನ್ನು ನೀಡಲಾಯಿತು. ಈ ಎಲ್ಲಾ ಆದೇಶಗಳು ಅವರನ್ನು ಅನುಸರಿಸಲು ಸಾಧ್ಯವಾಗುತ್ತಿರಲಿಲ್ಲ' ಎಂದು ಅವರು ಹೇಳಿದರು.

## ಪೊಲೀಸರ ಮೇಲೆ ಸಚಿವನ ಸಹೋದರನಿಂದ ಹಲ್ಲೆ

**ಕರ್ನೂಲ್:** ದೇವಸ್ಥಾನದಲ್ಲಿ ಕರ್ತವ್ಯ ನಿರ್ವಹಣೆ ಮಾಡುತ್ತಿದ್ದ ಪೊಲೀಸರ ಮೇಲೆ ಸಚಿವರೊಬ್ಬರ ಸಹೋದರ ಹಲ್ಲೆ ಮಾಡಿರುವ ವಿಡಿಯೋವೊಂದು ವ್ಯಾಪಕ ವೈರಲ್ ಆಗುತ್ತಿದೆ. ಆಂಧ್ರಪ್ರದೇಶದ ಸಚಿವ ಬಿಸಿ ಜನಾರ್ದನ ರೆಡ್ಡಿ ಸಹೋದರ ಮದನ್ ಭೂಪಾಲ್ ರೆಡ್ಡಿ ದೇವಸ್ಥಾನದಲ್ಲಿ ಪೊಲೀಸ್ ಅಧಿಕಾರಿಗೆ ಕಪಾಳಮೋಕ್ಷ ಮಾಡಿರುವ ಘಟನೆ ಕರ್ನೂಲಿನಲ್ಲಿ ನಡೆದಿದೆ. ಕರ್ನೂಲು ಜಿಲ್ಲೆಯ ಕೋಳಿಮಿಗುಂಡ್ಲಾದ ಶ್ರೀ ಲಕ್ಷ್ಮಿ ನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಈ ಘಟನೆ ನಡೆದಿದ್ದು, ಮದನ್ ಭೂಪಾಲ್ ರೆಡ್ಡಿ ಕಾನ್ಸ್‌ಟೇಬಲ್ ಒಬ್ಬರಿಗೆ ಕಪಾಳಮೋಕ್ಷ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ. ಈ ಘಟನೆ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಕೋಳಿಮಿಗಂಡ್ಲ ಲಕ್ಷ್ಮಿ ನರಸಿಂಹ ದೇವಾಲಯದ ನವೀಕರಣ ಕಾರ್ಯ ನಡೆಸಲಾಗಿತ್ತು. ಈ ಕಾಮಗಾರಿಗಳು ಪೂರ್ಣಗೊಂಡ ನಂತರ, ಆಗಮ ಶಾಸ್ತ್ರದ ಪ್ರಕಾರ ಉದ್ಘಾಟನಾ ಸಮಾರಂಭವನ್ನು ನಡೆಸಲಾಯಿತು. ಕುಂಭಾಭಿಷೇಕ ಮತ್ತು ನಿತ್ಯ ಕಲ್ಯಾಣಂ ನಡೆಯಿತು. ಸಚಿವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಆದರೆ, ತಮ್ಮ ಸಹೋದರನನ್ನು ಒಳಗೆ ಬಿಡದಿದ್ದಾಗ ಅವರು ಕೋಪ ವ್ಯಕ್ತಪಡಿಸಿದರು. ಈ ವೇಳೆ ಜನಸಂದಣಿಯನ್ನು ನಿರ್ವಹಿಸಲು ಕರ್ತವ್ಯದಲ್ಲಿದ್ದ ಜಶ್ವಂತ್ ಎಂದು ಗುರುತಿಸಲಾದ ಕಾನ್ಸ್‌ಟೇಬಲ್ ಅವರನ್ನು ತಡೆದಿದ್ದು, ಈ ವೇಳೆ ಮದನ್ ಭೂಪಾಲ್ ರೆಡ್ಡಿ ನಾನು ಯಾರು ಗೊತ್ತಾ ಎಂದು ಹೇಳಿ ಗಲಾಟೆ ತೆಗೆದಿದ್ದಾರೆ. ಅಲ್ಲದೆ ಕೂಡಲೇ ನನ್ನನ್ನು ಒಳಗೆ ಬಿಡು ಎಂದು ಕೇಳಿದ್ದಾರೆ.

# ಡೊನಾಲ್ಡ್ ಟ್ರಂಪ್‌ಗೆ ನೊಬೆಲ್ ಶಾಂತಿ ಪ್ರಶಸ್ತಿ ಕೊಡುವಂತೆ ಶ್ವೇತಭವನ ಆಗ್ರಹ

● ಭಾರತ-ಪಾಕಿಸ್ತಾನ, ಇಸ್ರೇಲ್-ಇರಾನ್, ಥಾಯ್ಲೆಂಡ್-ಕಾಂಬೋಡಿಯಾ ಯುದ್ಧಗಳನ್ನು ಡೊನಾಲ್ಡ್ ಟ್ರಂಪ್ ತಡೆದಿದ್ದಾರೆ: ಕ್ಯಾರೋಲಿನ್

**ವಾಷಿಂಗ್ಟನ್ ಡಿಸಿ:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಅವರ ಶ್ವೇತಭವನದ ಪಟಾಲಂ, ಕೆಟ್ಟು ಹೋಗಿರುವ ಗ್ರಾಮಾಫೋನ್ ರೀತಿಯಲ್ಲಿ ಹೇಳಿದ್ದನ್ನೇ ಹೇಳುವ ಚಾಳಿ ಬೆಳೆಸಿಕೊಂಡಿದೆ. ಭಾರತ-ಪಾಕಿಸ್ತಾನ ಕದನ ವಿರಾಮ ಒಪ್ಪಂದದಲ್ಲೂ ತಮ್ಮ ಪಾತ್ರವಿದೆ ಎಂದು ಅಬ್ಬರಿಸಿ ಬೊಬ್ಬೆ ಹಾಕುತ್ತಿರುವ ಡೊನಾಲ್ಡ್ ಟ್ರಂಪ್, ಈ ವಿಷಯದಲ್ಲಿ ಭಾರತ ಸರ್ಕಾರದ ಸ್ಪಷ್ಟನೆಗೂ ಕ್ಯಾರೆ ಅಂತಿಲ್ಲ.


ಡೊನಾಲ್ಡ್ ಟ್ರಂಪ್ ಅವರ ಈ ವರ್ತನೆಗೆ ಪೂರಕವಾಗಿ ಶ್ವೇತಭವನ ಕೂಡ ಇಂತದ್ದೇ ಹೇಳಿಕೆಗಳನ್ನು ನೀಡುತ್ತಿದ್ದು, ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಕ್ಯಾರೋಲಿನ್ ಲೀವಿಟ್ ಮತ್ತೊಮ್ಮೆ ಡೊನಾಲ್ಡ್ ಟ್ರಂಪ್ ಅವರ ಮಧ್ಯಸ್ಥಿಕೆಯಿಂದಾಗಿಯೇ ಭಾರತ-ಪಾಕಿಸ್ತಾನ ಕದನ ವಿರಾಮ ಒಪ್ಪಂದ ಏರ್ಪಟ್ಟಿದೆ ಎಂದು ಹೇಳಿದ್ದಾರೆ.

ಶ್ವೇತಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಕ್ಯಾರೋಲಿನ್ ಲೀವಿಟ್, ಡೊನಾಲ್ಡ್ ಟ್ರಂಪ್ ಅವರು ಭಾರತ ಮತ್ತು ಪಾಕಿಸ್ತಾನದ ನಡುವಿನ ಕದನ ವಿರಾಮ ಒಪ್ಪಂದವೂ ಸೇರಿದಂತೆ, ಅನೇಕ ಜಾಗತಿಕ ಕದನ ವಿರಾಮಗಳನ್ನು ಜಾರಿಗೊಳಿಸುವಲ್ಲಿ ಮಹತ್ವದ ಪಾತ್ರ ನಿರ್ವಹಿಸಿದ್ದಾರೆ ಎಂದು ಪ್ರತಿಪಾದಿಸಿದ್ದಾರೆ.

ಭಾರತ ಸರ್ಕಾರ ಕ್ಯಾರೆ ಅಂತಿಲ್ಲ

**ಟ್ರಂಪ್‌ಗೆ ನೊಬೆಲ್ ಕೊಡಬೇಕಂತೆ:**

ನಮ್ಮ ಅಧ್ಯಕ್ಷರು ಥೈಲ್ಯಾಂಡ್ ಮತ್ತು ಕಾಂಬೋಡಿಯಾ, ಇಸ್ರೇಲ್ ಮತ್ತು ಇರಾನ್, ರುವಾಂಡಾ ಮತ್ತು ಕಾಂಗೋ ಪ್ರಜಾಸತ್ತಾತ್ಮಕ ಗಣರಾಜ್ಯ, ಭಾರತ ಮತ್ತು ಪಾಕಿಸ್ತಾನ, ಸೆರ್ಬಿಯಾ ಮತ್ತು ಕೊಸೊವೊ ಹಾಗೂ ಈಜಿಪ್ಟ್ ಮತ್ತು ಇಥಿಯೋಪಿಯಾ ನಡುವಿನ ಸಂಘರ್ಷಗಳನ್ನು ಕೊನೆಗೊಳಿಸಿದ್ದಾರೆ ಎಂದು ಕ್ಯಾರೋಲಿನ್ ಲೀವಿಟ್ ಹೇಳಿಕೆ ನೀಡಿದ್ದಾರೆ.



ಮುಂದುವರೆದು, ಡೊನಾಲ್ಡ್ ಟ್ರಂಪ್ ಅವರು ಸರಾಸರಿಯಾಗಿ ತಿಂಗಳಿಗೆ ಒಂದು ಶಾಂತಿ ಒಪ್ಪಂದ ಅಥವಾ ಕದನ ವಿರಾಮ ಮಧ್ಯಸ್ಥಿಕೆ ವಹಿಸಿದ್ದು, ಅವರಿಗೆ ನೊಬೆಲ್ ಶಾಂತಿ ಪ್ರಶಸ್ತಿಯನ್ನು ನೀಡುವ ಸಮಯ ಬಂದಿದೆ ಎಂದು ಹೇಳುವ ಮೂಲಕ ಕ್ಯಾರೋಲಿನ್ ಲೀವಿಟ್ ಅಚ್ಚರಿ ಮೂಡಿಸಿದ್ದಾರೆ.

ಟ್ರಂಪ್ ಆಡಳಿತವು ಭಾರತ ಮತ್ತು ಪಾಕಿಸ್ತಾನದ ನಡುವೆ ಕದನ ವಿರಾಮವನ್ನು ಖಚಿತಪಡಿಸಿದೆ ಎಂದು ಶ್ವೇತ ಭವನವು ಪುನರುಚ್ಚರಿಸಿದೆ. ಅಲ್ಲದೇ ಪ್ರಸ್ತುತ ಜಾಗತಿಕ ಸಂಘರ್ಷಗಳಿಗೆ ಶಾಂತಿಯುತ ಪರಿಹಾರಗಳನ್ನು ಹುಡುಕುವಲ್ಲಿ, ಡೊನಾಲ್ಡ್ ಟ್ರಂಪ್ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದಾರೆ. ಅಮೆರಿಕ ಅಧ್ಯಕ್ಷರು ನೊಬೆಲ್ ಪ್ರಶಸ್ತಿಗೆ ಅರ್ಹರು ಎಂದು ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಹೇಳಿದ್ದಾರೆ.

### ಟ್ರಂಪ್ ಹೇಳಿದ್ದೇನು?

**ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೂಡ ಈ ಹಿಂದೆ ಹಲವು ಬಾರಿ ಭಾರತ-ಪಾಕಿಸ್ತಾನ ಕದನ ವಿರಾಮ ಒಪ್ಪಂದ ಜಾರಿಯಾಗುವಲ್ಲಿ ತಮ್ಮ ಪಾತ್ರವಿದೆ ಎಂದು ವಾದಿಸಿದ್ದಾರೆ. ಎರಡೂ ರಾಷ್ಟ್ರಗಳು ಪರಮಾಣು ಯುದ್ಧದ ಅಂಚಿನಲ್ಲಿದ್ದವು. ನಾವು ವ್ಯಾಪಾರ ಬೆದರಿಕೆಯನ್ನು ಬಳಸಿ ಈ ಯುದ್ಧವನ್ನು ತಡೆದೆವು. ಭಾರತ-ಪಾಕಿಸ್ತಾನ ಕದನ ವಿರಾಮ ಒಪ್ಪಂದಕ್ಕಾಗಿ ನೊಬೆಲ್ ಕೊಡಬೇಕು ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದರು.**

ಆದಾಗ್ಯೂ, ಭಾರತವು ಡೊನಾಲ್ಡ್ ಟ್ರಂಪ್ ಅವರ ಈ ವಾದವನ್ನು ಮೊದಲ ದಿನದಿಂದಲೇ ತಿರಸ್ಕರಿಸುತ್ತಿದೆ. ಈ ಕುರಿತು ಹಲವು ಬಾರಿ ಸ್ಪಷ್ಟನೆ ನೀಡಿರುವ ಭಾರತ, ಪಾಕಿಸ್ತಾನದೊಂದಿಗಿನ ಕದನ ವಿರಾಮ ಒಪ್ಪಂದದಲ್ಲಿ ಯಾವುದೇ ಮೂರನೇ ಶಕ್ತಿಯ ಮಧ್ಯಸ್ಥಿಕೆಗೆ ನಾವು ಅವಕಾಶ ಮಾಡಿಕೊಟ್ಟಿಲ್ಲ ಎಂದು ಸ್ಪಷ್ಟಪಡಿಸಿದೆ.

ಈ ಕುರಿತು ಸಂಸತ್ತಿನ ಮಾನ್ಸೂನ್ ಅಧಿವೇಶನದಲ್ಲಿ ಬಿಸಿಬಿಸಿ ಚರ್ಚೆಯಾಗಿದ್ದು, ವಿಪಕ್ಷಗಳ ಪ್ರಶ್ನೆಗೆ ಸ್ಪಷ್ಟ ಉತ್ತರ ನೀಡಿರುವ ಕೇಂದ್ರ ಸರ್ಕಾರ, ಭಾರತ ಪಾಕಿಸ್ತಾನ ಕದನ ವಿರಾಮ ಒಪ್ಪಂದಕ್ಕೆ ಸಂಬಂಧಿಸಿದಂತೆ ನರೇಂದ್ರ ಮೋದಿ ಮತ್ತು ಡೊನಾಲ್ಡ್ ಟ್ರಂಪ್ ನಡುವೆ ಮಾತುಕತೆ ನಡೆದಿಲ್ಲ ಎಂದು ಹೇಳಿದೆ.

- **ಡೊನಾಲ್ಡ್ ಟ್ರಂಪ್‌ಗೆ ನೊಬೆಲ್ ಶಾಂತಿ ಪ್ರಶಸ್ತಿ ಕೊಡುವಂತೆ ಶ್ವೇತಭವನ ಆಗ್ರಹ.**
- **ಡೊನಾಲ್ಡ್ ಟ್ರಂಪ್ ಜಾಗತಿಕ ಯುದ್ಧಗಳನ್ನು ತಡೆದಿದ್ದಾರೆ ಎಂದ ಶ್ವೇತಭವನ ಪತ್ರಿಕಾ ಕಾರ್ಯದರ್ಶಿ.**
- **ಭಾರತ-ಪಾಕಿಸ್ತಾನ ಕದನ ವಿರಾಮ ಒಪ್ಪಂದದಲ್ಲಿ ಟ್ರಂಪ್ ಪಾತ್ರವಿದೆ ಎಂದ ಕ್ಯಾರೋಲಿನ್ ಲೀವಿಟ್.**

# ದರ್ಶನ್, ಧ್ರುವ ನಡುವಿನ ಬಿರುಕು ಶಮನ



ಸ್ಯಾಂಡಲ್ ವುಡ್ ಹೊಸ ಬದಲಾವಣೆಗೆ ಸಾಕ್ಷಿಯಾಗಿದೆ. ಇಬ್ಬರು ಸ್ಟಾರ್ ನಟರ ನಡುವಿನ ವೈಮನಸ್ಸು ಶಮನ ಆಗಿರುವ ಸೂಚನೆ ಕಂಡುಬಂದಿದೆ. I stand with Darshan sir ಎಂದು ಹೇಳುವ ಮೂಲಕ ದರ್ಶನ್ ಬೆಂಬಲಕ್ಕೆ ಧ್ರುವ ಸರ್ಜಾ ನಿಂತಿರುವುದು ಸ್ಪಷ್ಟವಾಗಿ ಗೋಚರಿಸುತ್ತಿದೆ. ಈ ಮೂಲಕ ಕನ್ನಡ ಚಿತ್ರರಂಗದಲ್ಲಿ ಮತ್ತೆ ದರ್ಶನ್, ಧ್ರುವ ಒಂದಾಗುವ ಘಾಟು ಬಂದಿದೆ. ತಮ್ಮದೇ ಬಣದಲ್ಲಿ ಗುರುತಿಸಿಕೊಂಡಿದ್ದ ಪ್ರಥಮ್ ವಿರುದ್ಧವೇ ಧ್ರುವ ಮಾತನಾಡಿದ್ದಾರೆ. ಈ ಮೂಲಕ ದರ್ಶನ್ ಪರ ಧ್ರುವ ಸರ್ಜಾ ಬ್ಯಾಟಿಂಗ್ ಮಾಡಿದ್ದಾರೆ. ದರ್ಶನ್ ಫ್ಯಾನ್ಸ್ ಎನ್ನಲಾದ ವ್ಯಕ್ತಿಗಳಿಂದ ಜೀವಬೆದರಿಕೆ ಇದೆ ಎಂದು ದೂರು ದಾಖಲಿಸಿರುವ ಪ್ರಥಮ್ ದರ್ಶನ್ ವಿರುದ್ಧ ಹರಿಹಾಯ್ದಿದ್ದರು. ಇದೀಗ ಪ್ರಥಮ್ ಹೇಳಿಕೆ ತಪ್ಪೆಂದು ಖಡಕ್ಕಾಗಿ ಹೇಳಿದ್ದಾರೆ ಧ್ರುವ ಸರ್ಜಾ. ಈ ಮೊದಲು ಆಪ್ತರಾಗಿದ್ದ ದರ್ಶನ್, ಧ್ರುವ ನಡುವೆ ವೈಯಕ್ತಿಕ ವಿಚಾರಕ್ಕೆ ಮುನಿಸು ಉಂಟಾಗಿತ್ತು. ಈ ವಿಚಾರ ಅಧಿಕೃತವಾಗಿ ಗೋಚರಿಸಿತ್ತು. ಇದೇ ದರ್ಶನ್ ಕೊಲೆ ಆರೋಪದ ಮೇಲೆ ಜೈಲು ಸೇರಿದ್ದಾಗ ಧ್ರುವ ಕಟುವಾಗಿ ಮಾತನಾಡಿದ್ದರು. ಅದಕ್ಕೂ ಮುನ್ನವೇ ದರ್ಶನ್ ವಿಚಾರವಾಗಿ ತಮ್ಮದೇ ಹುಟ್ಟುಹಬ್ಬದ ದಿನ ನೇರವಾಗೇ ಆಕ್ರೋಶ ಹೊರಹಾಕಿದ್ದರು ಧ್ರುವ. ಇದೀಗ ದಿಢೀರ್ ಬದಲಾವಣೆ ಎನ್ನುವಂತೆ ಧ್ರುವ ಎಂದಿರುವುದು ಭಾರೀ ಕುತೂಹಲಕ್ಕೆ ಕಾರಣವಾಗಿದೆ. ಅಸಲಿಗೆ ಹಿಂದೆ ಈ ಇಬ್ಬರು ಸ್ಟಾರ್ ನಟರ ನಡುವಿನ ಮುನಿಸು ಕಾವೇರಿ ನೀರಿಗಾಗಿ ಹೋರಾಟದ ವೇದಿಕೆಯಲ್ಲಿ ಜಗಜ್ಜಾಹೀರಾಗಿತ್ತು, ಬಳಿಕ ಅದೇ ನಿಜವಾಗಿತ್ತು. ಇದೀಗ ದರ್ಶನ್ ಫ್ಯಾನ್ಸ್ ವಿರುದ್ಧದ ಹೋರಾಟದಲ್ಲಿ ಧ್ರುವ ಸರ್ಜಾ ಮಾತು ಸಾಫ್ಟ್ ಕಾರ್ನರ್ ಆಗಿದ್ದು ಇದು ಬೇರೆಯದ್ದೇ ಅರ್ಥ ಕಲ್ಪಿಸುತ್ತಿದೆ.



# ನಟಿ ಭಾವನಾ ರಾಮಣ್ಣ ಸೀಮಂತ ಶಾಸ್ತ್ರ



ನಟಿ ಭಾವನಾ ರಾಮಣ್ಣ ಅಮ್ಮನಾಗುತ್ತಿರುವ ಸಂತಸದಲ್ಲಿದ್ದಾರೆ. ಇದೀಗ ಅವರು ಏಳು ತಿಂಗಳ ಗರ್ಭಿಣಿಯಾಗಿದ್ದು ಸೀಮಂತ ಶಾಸ್ತ್ರ ನಡೆದಿದೆ. ಅವರ ನಿವಾಸದಲ್ಲೇ ಸೀಮಂತ ನಡೆದಿದ್ದು ಆಪ್ತರನ್ನಷ್ಟೇ ಆಹ್ವಾನಿಸಿದ್ದರು.

ಐವಿಎಫ್ ಮೂಲಕ ಗರ್ಭಿಣಿಯಾಗಿರುವ ಭಾವನಾ ಅವಳಿ ಮಕ್ಕಳಿಗೆ ಶೀಘ್ರದಲ್ಲೇ ಜನ್ಮ ನೀಡಲಿದ್ದಾರೆ. ಸೀಮಂತಕ್ಕೆ ಭವನಾ ಹಸಿರು ಬಣ್ಣದ ಸೀರೆ ಧರಿಸಿದ್ದರು.

ಈ ಕಾರ್ಯಕ್ರಮಕ್ಕೆ ಸಿನಿಮಾ ಉದ್ಯಮದ ಕೆಲವೇ ಆಪ್ತರು, ಕುಟುಂಬಸ್ಥರು ಹಾಗೂ ಸ್ನೇಹಿತೆಯರನ್ನು ಮಾತ್ರ ಭಾವನಾ ಆಹ್ವಾನಿಸಿದ್ದರು. ಸರಳವಾಗಿ ನಡೆದರೂ ಸಂಪ್ರದಾಯದ ಪ್ರಕಾರ ಸೀಮಂತ ನಡೆದಿದೆ. ಮತ್ತೈದೆಯರು ಭಾವನಾಗೆ ಮಡಿಲು ತುಂಬುವ ಶಾಸ್ತ್ರ ಮಾಡಿ ಸಿಹಿ ತಿನ್ನಿಸಿದ್ದಾರೆ. ಹಳದಿ ಮಿಶ್ರಿತ ಹೂವಿಂದ ಅಲಂಕೃತ ಜಾಗದ ಮುಂದೆ ಭಾವನಾ ಕುಳಿತು ಸೀಮಂತ ಶಾಸ್ತ್ರ ಮಾಡಿಸಿಕೊಂಡಿದ್ದಾರೆ.

# 'ಕೊತ್ತಲವಾಡಿ' ಸಿನಿಮಾದಲ್ಲಿ ಬಳಕೆ ಆಗಿದೆ ಯಶ್ ಖರೀದಿಸಿದ್ದ ಮೊದಲ ಬೈಕ್

ಕೊತ್ತಲವಾಡಿ ಚಿತ್ರವು ಯಶ್ ಅವರ ತಾಯಿ ಪುಷ್ಪಾ ಅವರಿಂದ ನಿರ್ಮಾಣಗೊಂಡಿದೆ. ಚಾಮರಾಜನಗರದ ಕೊತ್ತಲವಾಡಿ ಗ್ರಾಮದ ಹಿನ್ನೆಲೆಯಲ್ಲಿ ಈ ಚಿತ್ರ ಸಾಗುತ್ತದೆ. ಪೃಥ್ವಿ ಅಂಬರ್ ಅವರು ನಾಯಕನಾಗಿ ಅಭಿನಯಿಸಿದ್ದಾರೆ. ಚಿತ್ರದಲ್ಲಿ ಬಳಸಲಾದ ಬೈಕ್ ಯಶ್ ಅವರ ಹಳೆಯ ಬೈಕ್ ಎಂಬುದು ವಿಶೇಷ. ರಾಕಿಂಗ್ ಸ್ಟಾರ್ ಯಶ್ ಅವರ ತಾಯಿ ಪುಷ್ಪಾ ಅವರು ನಿರ್ಮಿಸಿದ 'ಕೊತ್ತಲವಾಡಿ' ಸಿನಿಮಾ ಇಂದು ರಿಲೀಸ್ ಆಗಿದೆ. ಈ ಚಿತ್ರದ ಬಗ್ಗೆ ಫ್ಯಾನ್ಸ್ ಸಾಕಷ್ಟು ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಸಿನಿಮಾ ಹೇಗಿದೆ ಎಂಬುದನ್ನು ಅಭಿಮಾನಿಗಳು ನಿರ್ಧರಿಸಲಿದ್ದಾರೆ. ಸಿನಿಮಾದಲ್ಲಿ ಕಥಾ ನಾಯಕ ಪೃಥ್ವಿ ಅಂಬಾರ್ ಅವರು ಒಂದು ಬೈಕ್ ಓಡಿಸುತ್ತಾರೆ. ಈ ಬೈಕ್ ಯಶ್ ಅವರದ್ದು ಎಂದು ಹೇಳಿದ್ದಾರೆ ಪೃಥ್ವಿ ಅಂಬಾರ್.

'ಕೊತ್ತಲವಾಡಿ' ಸಿನಿಮಾದ ಕಥೆ ಸಾಗೋದು ಚಾಮರಾಜನಗರದ ಕೊತ್ತಲವಾಡಿ ಊರಿನಲ್ಲಿ. ಪಕ್ಕಾ ಗ್ರಾಮೀಣ ಸೊಗಡಿನಲ್ಲಿ ಸಿನಿಮಾದ ಕಥೆ ಸಾಗುತ್ತದೆ. ಈ ಚಿತ್ರದಲ್ಲಿ ಕಥಾ ನಾಯಕ ಪೃಥ್ವಿ ಅಂಬಾರ್ ಅವರು ಸಿಬಿಝುಡ್ ಬೈಕ್‌ನಲ್ಲಿ ಓಡಾಡುತ್ತಾರೆ. ಮೆಟ್ರೊ ಸಾಗಾ ಯೂಟ್ಯೂಬ್ ಚಾನೆಲ್‌ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಪೃಥ್ವಿ ಅವರು, 'ಶೂಟಿಂಗ್'ಗೆ ಬಳಕೆ ಆದ ಬೈಕ್‌ಗೆ ಒಂದು ವಿಶೇಷತೆ ಇದೆ ಎಂದು ನಿರ್ದೇಶಕರು ಹೇಳುತ್ತಲೇ ಬರುತ್ತಿದ್ದರು.


ಅದೇನು ಎಂದು ಗೊತ್ತಿರಲೇ ಇಲ್ಲ. ನಾನು ಪಿಯುಸಿಯಲ್ಲಿ ಇದ್ದಾಗ ಸಿಬಿಝುಡ್ ಬೈಕ್ ಇದೆ ಎಂದರೆ ಕ್ರೇಜ್ ಇತ್ತು. ಏನು ಎಂಬ ಪ್ರಶ್ನೆ ಇತ್ತು' ಎಂದಿದ್ದಾರೆ ಪೃಥ್ವಿ. ಆರಂಭದಲ್ಲಿ ಯಶ್ ತಾಯಿ ನಿರ್ಮಾಪಕಿ ಎಂಬ ವಿಚಾರ ಯಾರಿಗೂ ಹೇಳಿರಲಿಲ್ಲ.

# ಹುಟ್ಟುಹಬ್ಬಕ್ಕೆ ಜನಮೆಚ್ಚುವ ಘೋಷಣೆ ಮಾಡಿದ ಸೋನು ಸೂದ್




ಸೋನು ಸೂದ್ ನಟನಾಗಿ ಮಾತ್ರವಲ್ಲದೆ ಸಾಮಾಜಿಕ ಕಾರ್ಯದಿಂದಲೂ ಜನಪ್ರಿಯರು. ಕೋವಿಡ್ ಸಮಯದಲ್ಲಿ ಸೋನು ಸೂದ್ ಮಾಡಿದ ಸಹಾಯ ದೇಶದೆಲ್ಲೆಡೆ ಮೆಚ್ಚುಗೆಗೆ ಪಾತ್ರವಾಗಿತ್ತು. ಇತ್ತೀಚೆಗಷ್ಟೆ ಸೋನು ಸೂದ್ ತಮ್ಮ ಹುಟ್ಟುಹಬ್ಬ ಆಚರಿಸಿಕೊಂಡರು. ಹುಟ್ಟುಹಬ್ಬದಂದು ಮಹತ್ವದ ಘೋಷಣೆಯೊಂದನ್ನು ಅವರು ಮಾಡಿದ್ದಾರೆ. ಸೋನು ಸೂದ್ ಒಳ್ಳೆಯ ನಟ, ಫಿಟ್‌ನೆಸ್ ಫ್ರೀಕ್ ಆಗಿರುವ ಜೊತೆಗೆ ಒಳ್ಳೆಯ ಸಮಾಜ ಸೇವಕ ಸಹ. ಕೋವಿಡ್ ಸಮಯದಲ್ಲಿ ಸೋನು ಸೂದ್ ಮಾಡಿದ ಸೇವಾ ಕಾರ್ಯಕ್ಕೆ ದೇಶದ ಉನ್ನತ ನಾಯಕರು ಸಹ ಮೆಚ್ಚುಗೆ ವ್ಯಕ್ತಪಡಿಸಿದ್ದರು. ಕೋವಿಡ್ ಸಮಯದಲ್ಲಿ ಸೋನು ಸೂದ್ ಕಾರ್ಯ ಮೆಚ್ಚಿ ಜನ ಅವರನ್ನು 'ಮಸೀಹ' (ಅವತಾರ ಪುರುಷ) ಎಂದು ಕರೆದಿದ್ದರು. ಸೋನು ಸೂದ್ ತಮ್ಮ ಈ ಸಾಮಾಜಿಕ ಕಾರ್ಯವನ್ನು ಕೋವಿಡ್ ಬಳಿಕವೂ ಮುಂದುವರೆಸಿದ್ದಾರೆ. ಜುಲೈ 30 ರಂದು ಸೋನು ಸೂದ್ ಹುಟ್ಟುಹಬ್ಬವಿತ್ತು. ಆ ದಿನದಂದು ಜನಮೆಚ್ಚುವ ಘೋಷಣೆಯೊಂದನ್ನು ಅವರು ಮಾಡಿದ್ದಾರೆ. ಸೋನು ಸೂದ್, ಬೃಹತ್ ವೃದ್ಧಾಶ್ರಮ ನಿರ್ಮಾಣ ಮಾಡುವ ಯೋಜನೆ ಹಾಕಿಕೊಂಡಿದ್ದಾರೆ. ತಮ್ಮ ಹುಟ್ಟುಹಬ್ಬದಂದು ಈ ವಿಷಯ ಹಂಚಿಕೊಂಡಿರುವ ಸೋನು ಸೂದ್, ಕನಿಷ್ಟ 500 ಮಂದಿ ವೃದ್ಧರಿಗೆ ಆಶ್ರಯ ನೀಡುವ ಬೃಹತ್ ವೃದ್ಧಾಶ್ರಮವನ್ನು ಸಕಲ ಸೌಲಭ್ಯಗಳೊಟ್ಟಿಗೆ ನಿರ್ಮಾಣ ಮಾಡಲು ಸೋನು ಸೂದ್ ಮುಂದಾಗಿದ್ದಾರೆ. ಸೋನು ಸೂದ್ ನಿರ್ಮಾಣ ಮಾಡಲಿರುವ ವೃದ್ಧಾಶ್ರಮ, ವೃದ್ಧರಿಗೆ ಕೇವಲ ಸೂರು ಒದಗಿಸುವುದು ಮಾತ್ರವೇ ಅಲ್ಲದೆ, ಅವರ ಆರೋಗ್ಯದ ಕಾಳಜಿ ವಹಿಸುವ ವ್ಯವಸ್ಥೆ, ಅಧ್ಯಾತ್ಮ ಮಂದಿರ, ಪಾರ್ಕು, ಮನೊರಂಜನೆ ವಿಭಾಗ ಎಲ್ಲವನ್ನೂ ಸಹ ಒಳಗೊಂಡಿರಲಿದೆ. ವೃದ್ಧರು ಅಂತಿಮ ದಿನಗಳನ್ನು ನೆಮ್ಮದಿಯಿಂದ, ಸಂತೋಷದಿಂದ ಕಳೆಯಲು ಸಕಲ ವ್ಯವಸ್ಥೆಗಳನ್ನು ವೃದ್ಧಾಶ್ರಮದಲ್ಲಿ ಸೋನು ಸೂದ್ ಮಾಡಲಿದ್ದಾರೆ.

# 'ಲೂಸ್ ಮಾದ' ಚಿತ್ರಕ್ಕೆ ಯೋಗಿನೇ ಹೀರೋ



ಕನ್ನಡದ ಅತ್ಯಂತ ಜನಪ್ರಿಯ ಚಿತ್ರಗಳಲ್ಲಿ ಒಂದಾದ 'ದುನಿಯಾ' ಚಿತ್ರದಲ್ಲಿ 'ಲೂಸ್ ಮಾದ' ಪಾತ್ರವನ್ನು ಯೋಗೇಶ್ ಅವರು ಮಾಡಿದ್ದರು. ಆ ಪಾತ್ರಕ್ಕೆ ನೋಡುಗರು ಫಿದಾ ಆದರು ಅಂದಿನಿಂದಲೂ ''ಲೂಸ್ ಮಾದ'' ಯೋಗೇಶ್ ಅಂತಲೇ ಯೋಗಿ ಜನಪ್ರಿಯರಾದರು. ಈಗ 'ಲೂಸ್ ಮಾದ' ಚಿತ್ರದ ಶೀರ್ಷಿಕೆಯಾಗಿದೆ. ಈ ಚಿತ್ರದ ನಾಯಕನಾಗಿ ಯೋಗೇಶ್ ಅವರೇ ಅಭಿನಯಿಸುತ್ತಿದ್ದಾರೆ. ಜಾನಕಿ ಕಂಬೈನ್ಸ್ ಲಾಂಛನದಲ್ಲಿ ಧರ್ಮೇಂದ್ರ ಅವರು ನಿರ್ಮಿಸುತ್ತಿರುವ ಈ ಚಿತ್ರವನ್ನು ರಂಜಿತ್ ಕುಮಾರ್ ಗೌಡ ನಿರ್ದೇಶಿಸುತ್ತಿದ್ದಾರೆ. ಇತ್ತೀಚೆಗೆ ಈ ಚಿತ್ರದ ಮುಹೂರ್ತ ಸಮಾರಂಭ ಬಂಡೆ ಮಹಾಂಕಾಳಿ ದೇವಸ್ಥಾನದಲ್ಲಿ ನೆರವೇರಿತು. ಯೋಗೇಶ್ ಅವರ ತಂದೆ, ನಿರ್ಮಾಪಕ ಟಿ.ಪಿ ಸಿದ್ದರಾಜು ಮೊದಲ ಸನ್ನಿವೇಶಕ್ಕೆ ಆರಂಭ ಫಲಕ ತೋರಿದರು. ಚಿತ್ರದ ನಿರ್ಮಾಪಕ ಧರ್ಮೇಂದ್ರ ಅವರೇ ಕ್ಯಾಮೆರಾ ಚಾಲನೆ ಮಾಡಿದರು. ಉದಯ್ ಶೆಟ್ಟಿ, ಉಮೇಶ್ ಶೆಟ್ಟಿ, ರಘು ಗುಜ್ಜಲ್ ಮುಂತಾದ ಗಣ್ಯರು ಹಾಗೂ ಚಿತ್ರತಂಡದ ಸದಸ್ಯರು ಮುಹೂರ್ತ ಸಮಾರಂಭದಲ್ಲಿ ಉಪಸ್ಥಿತರಿದ್ದರು. ಸಾಹಿತ್ಯ ಯೋಗೇಶ್ ಅವರು ಮುಹೂರ್ತ ಸಮಾರಂಭಕ್ಕೆ ಆಗಮಿಸಿದ್ದರು. ಸಿನಿಮಾ ಮುಹೂರ್ತದ ನಂತರ ಚಿತ್ರತಂಡದ ಸದಸ್ಯರು ಪತ್ರಿಕಾಗೋಷ್ಠಿಯಲ್ಲಿ ಚಿತ್ರದ ಕುರಿತು ಮಾತನಾಡಿದರು. ಈ ವೇಳೆ ನಿರ್ಮಾಪಕ ಧರ್ಮೇಂದ್ರ ಮಾತನಾಡಿ, ನಾನು ಮೂಲತಃ ಮಂಗಳೂರಿನವನು, ವೃತ್ತಿಯಲ್ಲಿ ಕಂಟ್ರ್ಯಾಕ್ಟರ್. ಸಿನಿಮಾ ರಂಗ ನನಗೆ ಹೊಸತು. ಕೆಲ ಸ್ನೇಹಿತರು ಈ ಚಿತ್ರವನ್ನ ನಿರ್ಮಾಣ ಮಾಡಿ ಅಂತ ಹೇಳಿದರು. ನಿರ್ದೇಶಕರು ಹೇಳಿದ ಕಥೆಯೂ ಇಷ್ಟವಾಯಿತು.

# 14 ವರ್ಷಗಳ ನಂತರ ಮೆಸ್ಸಿ ಭಾರತ ಭೇಟಿ



ಸಚಿನ್, ಕೊಹ್ಲಿ ಜೊತೆ ಕ್ರಿಕೆಟ್ ಆಡಲಿರುವ ಫುಟ್ಬಾಲ್ ಲೆಜೆಂಡ್

ಲಿಯೋನೆಲ್ ಮೆಸ್ಸಿ ಅವರು ಡಿಸೆಂಬರ್ 13 ರಿಂದ 15 ರವರೆಗೆ ಭಾರತಕ್ಕೆ ಭೇಟಿ ನೀಡಲಿದ್ದಾರೆ. ಮುಂಬೈ, ಕೋಲ್ಕತ್ತಾ ಮತ್ತು ದೆಹಲಿಗೆ ಭೇಟಿ ನೀಡುವ ಮೆಸ್ಸಿ, ಸಚಿನ್ ತೆಂಡೂಲ್ಕರ್, ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ಅವರೊಂದಿಗೆ ವಾಂಖೆಡೆ ಕ್ರೀಡಾಂಗಣದಲ್ಲಿ ಕ್ರಿಕೆಟ್ ಪಂದ್ಯವನ್ನು ಆಡಲಿದ್ದಾರೆ. ಕೋಲ್ಕತ್ತಾದಲ್ಲಿ ಅವರನ್ನು ಸನ್ಮಾನಿಸಲಾಗುವುದು ಮತ್ತು ಮಕ್ಕಳಿಗಾಗಿ ಫುಟ್ಬಾಲ್ ಕಾರ್ಯಾಗಾರವನ್ನು ಆಯೋಜಿಸಲಾಗುವುದು. 2011 ರ ನಂತರ ಇದು ಮೆಸ್ಸಿಯವರ ಎರಡನೇ ಭಾರತ ಭೇಟಿ. ಅರ್ಜೆಂಟೀನಾದ ಫುಟ್ಬಾಲ್ ಲೆಜೆಂಡ್ ಲಿಯೋನೆಲ್ ಮೆಸ್ಸಿ ಬರೋಬ್ಬರಿ 14 ವರ್ಷಗಳ ನಂತರ ಭಾರತಕ್ಕೆ ಬರುತ್ತಿದ್ದಾರೆ. ಡಿಸೆಂಬರ್ 13 ರಿಂದ 15 ರವರೆಗೆ ಭಾರತದಲ್ಲಿರುವ ಮೆಸ್ಸಿ ಒಟ್ಟು ಮೂರು ಸ್ಥಳಗಳಿಗೆ ಭೇಟಿ ನೀಡಲಿದ್ದಾರೆ. ದೊಡ್ಡ ಸುದ್ದಿಯೆಂದರೆ ಈ ಕಾಲ್ಚೆಂಡಿನ ಚತುರ, ಭಾರತದ ದಿಗ್ಗಜ ಕ್ರಿಕೆಟಿಗರಾದ ಸಚಿನ್ ತೆಂಡೂಲ್ಕರ್, ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ಅವರೊಂದಿಗೆ ಸಹ ಕಾಣಿಸಿಕೊಳ್ಳಲಿದ್ದಾರೆ. ವರದಿಗಳ ಪ್ರಕಾರ, ಮೆಸ್ಸಿ ಈ ಮೂವರು ಲೆಜೆಂಡರಿ ಆಟಗಾರರೊಂದಿಗೆ ಕ್ರಿಕೆಟ್ ಪಂದ್ಯವನ್ನು ಆಡಲಿದ್ದು, ಈ ಪಂದ್ಯವು ವಾಂಖೆಡೆ ಕ್ರೀಡಾಂಗಣದಲ್ಲಿ ನಡೆಯಲಿದೆ ಎಂದು ವರದಿಯಾಗಿದೆ. ಲಿಯೋನೆಲ್ ಮೆಸ್ಸಿ ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ 7 ಆಟಗಾರರ ಕ್ರಿಕೆಟ್ ಪಂದ್ಯವನ್ನು ಆಡಲಿದ್ದಾರೆ.

# ಕರುಣ್ ನಾಯರ್ ಅರ್ಧಶತಕ



224 ರನ್‌ಗಳಿಗೆ ಟೀಂ ಇಂಡಿಯಾ ಆಲೌಟ್

ಓವಲ್ ಟೆಸ್ಟ್ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಟೀಂ ಇಂಡಿಯಾ, ಎರಡನೇ ದಿನದ ಆರಂಭದಲ್ಲಿಯೇ ತನ್ನೆಲ್ಲ ವಿಕೆಟ್ ಕಳೆದುಕೊಂಡು 224 ರನ್‌ಗಳಿಗೆ ಮೊದಲ ಇನ್ನಿಂಗ್ಸ್ ಮುಗಿಸಿದೆ. ಮೊದಲ ದಿನ 204/6 ರನ್‌ಗಳಲ್ಲಿದ್ದ ಭಾರತ, ಎರಡನೇ ದಿನ ಕೇವಲ 5.4 ಓವರ್‌ಗಳಲ್ಲಿ 20 ರನ್‌ಗಳಿಗೆ 4 ವಿಕೆಟ್ ಕಳೆದುಕೊಂಡಿತು.

ಕರುಣ್ ನಾಯರ್ 57 ರನ್ ಗಳಿಸಿದರು. ಇಂಗ್ಲೆಂಡ್ ವೇಗಿ ಗಸ್ ಅಟ್ಕಿನ್ಸನ್ 5 ವಿಕೆಟ್ ಪಡೆದರು. ಓವಲ್ ಟೆಸ್ಟ್ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಟೀಂ ಇಂಡಿಯಾ , ಎರಡನೇ ದಿನದಾಟದ ಮೊದಲ ಸೆಷನ್‌ನಲ್ಲಿ ಕೇವಲ 20 ರನ್‌ಗಳಿಗೆ 4 ವಿಕೆಟ್‌ಗಳನ್ನು ಕಳೆದುಕೊಳ್ಳುವ ಮೂಲಕ 224 ರನ್‌ಗಳಿಗೆ ತನ್ನ ಮೊದಲ ಇನ್ನಿಂಗ್ಸ್ ಮುಗಿಸಿದೆ. 204 ರನ್‌ಗಳಿಗೆ 6 ವಿಕೆಟ್ ಕಳೆದುಕೊಂಡು ಮೊದಲ ದಿನದಾಟವನ್ನು ಮುಗಿಸಿದ್ದ ಟೀಂ ಇಂಡಿಯಾ, ಎರಡನೇ ದಿನದಾಟದಲ್ಲಿ ಕೇವಲ 5.4 ಓವರ್ ಬ್ಯಾಟ್ ಮಾಡಿ 20 ರನ್‌ಗಳಿಗೆ ಎಲ್ಲಾ 4 ವಿಕೆಟ್‌ಗಳನ್ನು ಕಳೆದುಕೊಂಡಿತು. ಭಾರತದ ಪರ ಕರುಣ್ ನಾಯರ್ ಅತ್ಯಧಿಕ 57 ರನ್ ಬಾರಿಸಿದರೆ, ಇಂಗ್ಲೆಂಡ್ ಪರ ವೇಗಿ ಗಸ್ ಅಟ್ಕಿನ್ಸನ್ 5 ವಿಕೆಟ್‌ಗಳ ಗೊಂಚಲು ಪಡೆದರು.

**ಕರುಣ್ ನಾಯರ್ ಅರ್ಧಶತಕ;** ಮೇಲೆ ಹೇಳಿದಂತೆ ಎರಡನೇ ದಿನದಾಟದಲ್ಲಿ ಭಾರತಕ್ಕೆ ಉತ್ತಮ ಆರಂಭ ಸಿಗಲಿಲ್ಲ. ಅರ್ಧ ಗಂಟೆಯೊಳಗೆ ಇಡೀ ತಂಡ ಮೊದಲ ಇನ್ನಿಂಗ್ಸ್‌ನಲ್ಲಿ 224 ರನ್‌ಗಳಿಗೆ ಆಲೌಟ್ ಆಯಿತು. ಮೊದಲ ದಿನದಾಟದಂತ್ಯಕ್ಕೆ ಕರುಣ್ ನಾಯರ್ 98 ಎಸೆತಗಳಲ್ಲಿ 52 ರನ್ ಮತ್ತು ವಾಷಿಂಗ್ಟನ್ ಸುಂದರ್ 45 ಎಸೆತಗಳಲ್ಲಿ 19 ರನ್ ಬಾರಿಸಿ ಅಜೇಯರಾಗಿ ಉಳಿದಿದ್ದರು. ಆದರೆ ಎರಡನೇ ದಿನದಾಟದಲ್ಲಿ ಜೋಶ್ ಟಂಗ್ ಮೊದಲು ಕರುಣ್ ನಾಯರ್ ಅವರನ್ನು ಎಲ್ಬಿಡಬ್ಲ್ಯೂ ಬಲೆಗೆ ಕೆಡವಿದರು. ಅಂತಿಮವಾಗಿ ಕರುಣ್ 109 ಎಸೆತಗಳಲ್ಲಿ ಎಂಟು ಬೌಂಡರಿಗಳ ಸಹಾಯದಿಂದ 57 ರನ್ ಬಾರಿಸಿ ಪೆವಿಲಿಯನ್‌ಗೆ ಮರಳಿದರು.

**7ನೇ ವಿಕೆಟ್‌ಗೆ 65 ರನ್ ಜೊತೆಯಾಟ:** ಇದರ ನಂತರ, ಗಸ್ ಅಟ್ಕಿನ್ಸನ್ ವಾಷಿಂಗ್ಟನ್ ಸುಂದರ್ ಅವರನ್ನು ಬಲಿಪಶುವನ್ನಾಗಿ ಮಾಡಿದರು. ಸುಂದರ್ 55 ಎಸೆತಗಳಲ್ಲಿ 26 ರನ್ ಗಳಿಸಿ ಔಟಾದರು. ಇಬ್ಬರ ನಡುವೆ 7ನೇ ವಿಕೆಟ್‌ಗೆ 65 ರನ್‌ಗಳ ಪಾಲುದಾರಿಕೆ ಇತ್ತು. ಇದರ ನಂತರ, ಬ್ಯಾಟಿಂಗ್‌ಗೆ ಬಂದ ಮೊಹಮ್ಮದ್ ಸಿರಾಜ್ ಮತ್ತು ಪ್ರಸಿದ್ಧ್ ಕೃಷ್ಣ ಖಾತೆ ತೆರೆಯದೆಯೇ ಔಟಾದರು. ಆಕಾಶ್ ದೀಪ್ ಖಾತೆ ತೆರೆಯದೆ ಅಜೇಯರಾಗಿ ಉಳಿದರು. ಇಂಗ್ಲೆಂಡ್ ಪರ, ಗಸ್ ಅಟ್ಕಿನ್ಸನ್ ಐದು ವಿಕೆಟ್‌ಗಳನ್ನು ಪಡೆದರೆ, ಜೋಶ್ ಟಂಗ್ ಮೂರು ವಿಕೆಟ್‌ಗಳನ್ನು ಪಡೆದರು. ಉಳಿದಂತೆ ಕ್ರಿಸ್ ವೋಕ್ಸ್ ಒಂದು ವಿಕೆಟ್ ಪಡೆದರು. ಮೊದಲ ದಿನದಾಟದಲ್ಲಿ ಕೆಎಲ್ ರಾಹುಲ್ 40 ಎಸೆತಗಳನ್ನು ಆಡಿ 14 ರನ್ ಗಳಿಸಿ ಔಟಾದರೆ, ನಾಯಕ ಗಿಲ್ 34 ಎಸೆತಗಳಲ್ಲಿ 21 ರನ್ ಗಳಿಸಿ ರನೌಟ್ ಆದರು.

# ಡಿವಿಲಿಯರ್ಸ್ ಎಸೆದ ಬುಲೆಟ್ ಥ್ರೋ



2025ರ ವಿಶ್ವ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್ ಫೈನಲ್ ಪಂದ್ಯ ದಕ್ಷಿಣ ಆಫ್ರಿಕಾ ಮತ್ತು ಪಾಕಿಸ್ತಾನ ನಡುವೆ ನಡೆಯಲಿದೆ. ದಕ್ಷಿಣ ಆಫ್ರಿಕಾ, ಆಸ್ಟ್ರೇಲಿಯಾವನ್ನು ಒಂದು ರನ್‌ನಿಂದ ರೋಮಾಂಚಕ ಪಂದ್ಯದಲ್ಲಿ ಸೋಲಿಸಿ ಫೈನಲ್‌ಗೆ ಪ್ರವೇಶಿಸಿತು. ಎಬಿ ಡಿವಿಲಿಯರ್ಸ್ ಅವರ ಅದ್ಭುತ ಫೀಲ್ಡಿಂಗ್ ಮತ್ತು ನಿಖರ ಎಸೆತಗಳು ದಕ್ಷಿಣ ಆಫ್ರಿಕಾದ ಗೆಲುವಿಗೆ ಕಾರಣವಾಯಿತು. 2025 ರ ವಿಶ್ವ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್ ನ ಪ್ರಶಸ್ತಿ ಪಂದ್ಯಕ್ಕೆ ವೇದಿಕೆ ಸಜ್ಜಾಗಿದೆ. ಆಗಸ್ಟ್ 2 ರಂದು ಬರ್ಮಿಂಗ್ಹ್ಯಾಮ್‌ನಲ್ಲಿ ನಡೆಯಲಿರುವ ಈ ಅಂತಿಮ ಪಂದ್ಯದಲ್ಲಿ ಪಾಕಿಸ್ತಾನ ಮತ್ತು ದಕ್ಷಿಣ ಆಫ್ರಿಕಾ ಪರಸ್ಪರ ಮುಖಾಮುಖಿಯಾಗಲಿವೆ. ಆಗಸ್ಟ್ 1 ರಂದು ನಡೆದ ಎರಡನೇ ಸೆಮಿಫೈನಲ್ ಪಂದ್ಯದಲ್ಲಿ, 41 ವರ್ಷದ ನಾಯಕ ಎಬಿ ಡಿವಿಲಿಯರ್ಸ್ ಅವರ ಅದ್ಭುತ ಫೀಲ್ಡಿಂಗ್‌ನಿಂದ ದಕ್ಷಿಣ ಆಫ್ರಿಕಾ ಆಸ್ಟ್ರೇಲಿಯಾವನ್ನು ಒಂದು ರನ್‌ನಿಂದ ಸೋಲಿಸಿ ಫೈನಲ್‌ಗೇರುವಲ್ಲಿ ಯಶಸ್ವಿಯಾಯಿತು. ಇತ್ತ ಮೊದಲ ಸೆಮಿಫೈನಲ್ ಪಂದ್ಯ ಭಾರತ ಹಾಗೂ ಪಾಕಿಸ್ತಾನದ ವಿರುದ್ಧ ನಡೆಯಬೇಕಿತ್ತು.

ಆದರೆ ಪಾಕಿಸ್ತಾನದ ವಿರುದ್ಧ ಪಂದ್ಯವನ್ನಾಡಲು ನಿರಾಕರಿಸಿ ಭಾರತ ತಂಡ ಟೂರ್ನಿಯಿಂದ ತನ್ನ ಹೆಸರನ್ನು ಹಿಂಪಡೆದುಕೊಂಡಿತು. ಹೀಗಾಗಿ ಪಾಕಿಸ್ತಾನ ತಂಡ ಸೆಮಿಫೈನಲ್ ಪಂದ್ಯವನ್ನಾಡದೆ ಫೈನಲ್‌ಗೇರಿತು.

**ಕೊನೆಯ ಎಸೆತದಲ್ಲಿ ಸೋತ ಆಸ್ಟ್ರೇಲಿಯಾ:** ಡಬ್ಲ್ಯುಟಿಸಿ 2025ರ ಎರಡನೇ ಸೆಮಿಫೈನಲ್‌ನಲ್ಲಿ ಮೊದಲು ಬ್ಯಾಟ್ ಮಾಡಿದ ದಕ್ಷಿಣ ಆಫ್ರಿಕಾ ಚಾಂಪಿಯನ್ಸ್ 20 ಓವರ್‌ಗಳಲ್ಲಿ 8 ವಿಕೆಟ್‌ಗಳಿಗೆ 186 ರನ್ ಗಳಿಸಿತು. ಗುರಿಯನ್ನು ಬೆನ್ನಟ್ಟಿದ ಆಸ್ಟ್ರೇಲಿಯಾ ಚಾಂಪಿಯನ್ಸ್‌ಗೆ ಕೊನೆಯ ಎಸೆತದಲ್ಲಿ ಮೂರು ರನ್‌ಗಳು ಬೇಕಾಗಿದ್ದವು, ಆದರೆ ನಾಯಕ ಎಬಿ ಡಿವಿಲಿಯರ್ಸ್ ಅವರ ನಿಖರವಾದ ಎಸೆತವು ಆಸೀಸ್ ತಂಡದ ಭರವಸೆಯನ್ನು ಹುಸಿಗೊಳಿಸಿತು.

ತಪ್ಪನ್ನು ಒಪ್ಪಿಕೊಂಡ ಪಂತ್



# ವಿಚ್ಛೇದನದ ಬಗ್ಗೆ ಮನಬಿಚ್ಚಿದ ಯುಜ್ವೇಂದ್ರ ಚಾಹಲ್



ನೃತ್ಯ ನಿರ್ದೇಶಕಿ ಧನಶ್ರೀ ವರ್ಮಾ ಅವರಿಂದ ವಿಚ್ಛೇದನ ಪಡೆದ ನಂತರ ಭಾರತೀಯ ಕ್ರಿಕೆಟಿಗ ಯುಜ್ವೇಂದ್ರ ಚಾಹಲ್ ಮೊದಲ ಬಾರಿಗೆ ತಮ್ಮ ಮಾನಸಿಕ ಆರೋಗ್ಯದ ಬಗ್ಗೆ ಮುಕ್ತವಾಗಿ ಮಾತನಾಡಿದ್ದಾರೆ. ಧನಶ್ರೀಯಿಂದ ವಿಚ್ಛೇದನ ಪಡೆದ ಅವರನ್ನು ಮೋಸಗಾರ ಎಂದೂ ಕರೆದರು. ಆ ಸಮಯದಲ್ಲಿ ನನಗೆ ಆತ್ಮಹತ್ಯೆಯ ಆಲೋಚನೆಗಳು ಬರುತ್ತಿದ್ದವು ಎಂದು ಹೇಳಿದ್ದಾರೆ.

ಭಾರತ ಕ್ರಿಕೆಟ್ ತಂಡದ ಸ್ಟಾರ್ ಸ್ಪಿನ್ನರ್ ಯುಜ್ವೇಂದ್ರ ಚಾಹಲ್ ಕಳೆದ ಕೆಲವು ವರ್ಷಗಳಿಂದ ತಮ್ಮ ವೃತ್ತಿಪರ ಜೀವನಕ್ಕಿಂತ ತಮ್ಮ ವೈಯಕ್ತಿಕ ಜೀವನದ ವಿಚಾರಕ್ಕೆ ಹೆಚ್ಚು ಸುದ್ದಿಯಾದವರು. ಧನಶ್ರೀ ವರ್ಮಾ ಅವರಿಂದ ವಿಚ್ಛೇದನ ಪಡೆದಾಗ ಚಾಹಲ್ ಫುಲ್ ಸೈಲೆಂಟ್ ಆಗಿ ಬಿಟ್ಟಿದ್ದಾರೆ. ಆ ಸಮಯದಲ್ಲಿ, ಚಾಹಲ್ ಸಾಮಾಜಿಕ ಮಾಧ್ಯಮದಲ್ಲಿಯೂ ಸಹ ಸಾಕಷ್ಟು ಟ್ರೋಲ್ ಆಗಿದ್ದರು. ಧನಶ್ರೀ ಅವರಿಂದ ವಿಚ್ಛೇದನ ಪಡೆದ ನಂತರ ಜನರು ಇವರನ್ನು ''ವಂಚಕ'' ಎಂದು ಕರೆದರು. ಇದೀಗ ಚಾಹಲ್ ಇತ್ತೀಚಿನ ಸಂದರ್ಶನದಲ್ಲಿ, ತಮ್ಮ ಮಾನಸಿಕ ಆರೋಗ್ಯದ ಬಗ್ಗೆ ಮಾತನಾಡಿದ್ದಾರೆ ಮತ್ತು ಆ ಸಮಯದಲ್ಲಿ ನಾನು ಆತ್ಮಹತ್ಯೆ ಮಾಡಿಕೊಳ್ಳ ಬೇಕು ಎಂದು ಆಲೋಚಿಸುತ್ತಿದ್ದೆ ಎಂಬ ಆಘಾತಕಾರಿ ವಿಚಾರ ಹೇಳಿದ್ದಾರೆ. ರಾಜ್ ಶಮ್ನಿ ಅವರ ಪಾಡ್‌ಕ್ಯಾಸ್ಟ್‌ನಲ್ಲಿ ತಮ್ಮ ಮನದಾಳದ ಮಾತುಗಳನ್ನು ಆಡಿದ ಚಾಹಲ್, ಧನಶ್ರೀ ವರ್ಮಾ ಅವರಿಂದ ವಿಚ್ಛೇದನದ ನಂತರ ತಮ್ಮನ್ನು ''ವಂಚಕ'' ಎಂದು ತಪ್ಪಾಗಿ ಹಣೆಪಟ್ಟಿ ಕಟ್ಟಲಾಗಿದೆ. ನನ್ನನ್ನು ಮೋಸಗಾರ ಎಂದು ಕರೆಯಲಾಯಿತು, ಆದರೆ ನಾನು ಜೀವನದಲ್ಲಿ ಎಂದಿಗೂ ಮೋಸ ಮಾಡಲಿಲ್ಲ. ನಾನು ಅತ್ಯಂತ ನಿಷ್ಠಾವಂತ ವ್ಯಕ್ತಿ. ನನ್ನಂತಹ ನಿಷ್ಠಾವಂತ ವ್ಯಕ್ತಿಯನ್ನು ನೀವು ಎಲ್ಲಿಯೂ ಕಾಣುವುದಿಲ್ಲ. ನಾನು ನನ್ನೊಂದಿಗಿರುವ ಜನರ ಬಗ್ಗೆ ತುಂಬಾ ಕಾಳಜಿ ವಹಿಸುತ್ತೇನೆ. ನನಗೆ ಇಬ್ಬರು ಸಹೋದರಿಯರಿದ್ದಾರೆ, ಆದ್ದರಿಂದ ಮಹಿಳೆಯರನ್ನು ಹೇಗೆ ಗೌರವಿಸಬೇಕೆಂದು ನನಗೆ ತಿಳಿದಿದೆ. ನನಗೆ ಅತ್ಯಂತ ನೋವುಂಟುಮಾಡುವ ವಿಷಯವೆಂದರೆ ಜನರು ನನ್ನ ಇಡೀ ಕಥೆಯನ್ನು ತಿಳಿಯದೆಯೇ ಅವರಿಗೆ ಅನಿಸಿದ್ದನ್ನ ಬರೆಯುತ್ತಾರೆ ಎಂದು ಹೇಳಿದ್ದಾರೆ. ತಮ್ಮ ವಿಚ್ಛೇದನಕ್ಕೆ ಕಾರಣವನ್ನು ನೀಡಿದ ಚಾಹಲ್, ಒಟ್ಟಿಗೆ ಉತ್ತಮ ಸಮಯ ಕಳೆಯಲು ಸಾಧ್ಯವಾಗದ ಕಾರಣ ಅಂತರ ಹೆಚ್ಚಾಯಿತು ಎಂದು ಹೇಳಿದರು. ಎರಡೂ ಕಡೆಯಿಂದ ರಾಜಿ ಅಗತ್ಯವಾಗಿದ್ದರೂ, ಕೆಲವೊಮ್ಮೆ ಭಿನ್ನಾಭಿಪ್ರಾಯಗಳಿಂದಾಗಿ ಎಲ್ಲವೂ ಹಾಳಾಗುತ್ತದೆ ಎಂದು ಹೇಳಿದರು. ತಾವು ಮತ್ತು ಧನಶ್ರೀ ಇಬ್ಬರೂ ತಮ್ಮ ತಮ್ಮ ವೃತ್ತಿಜೀವನದಲ್ಲಿ ಬ್ಯುಸಿಯಾಗಿದ್ದೇವೆ. ಇದರಿಂದಾಗಿ, ಕಳೆದ ಕೆಲವು ವರ್ಷಗಳಿಂದ ಇಬ್ಬರ ನಡುವಿನ ಉದ್ವಿಗ್ನತೆ ಹೆಚ್ಚಾಗಿದ್ದು, ಅದು ಕ್ರಮೇಣ ಸಂಬಂಧದ ಮೇಲೆ ಪರಿಣಾಮ ಬೀರುತ್ತಿತ್ತು ಎಂದು ಹೇಳಿದರು. ''ನಾನು ನಾಲ್ಕೈದು ತಿಂಗಳುಗಳಿಂದ ತುಂಬಾ ಖಿನ್ನತೆಯಲ್ಲಿದ್ದೆ. ನನಗೆ ತುಂಬಾ ಆತಂಕ ಆಗುತ್ತಿತ್ತು. ನನ್ನ ಕಣ್ಣುಗಳಲ್ಲಿ ಕತ್ತಲೆ ಆವರಿಸುತ್ತಿತ್ತು. ಆ ಸಮಯದಲ್ಲಿ ನನ್ನೊಂದಿಗಿದ್ದ ಕೆಲವೇ ಜನರಿಗೆ ಈ ವಿಷಯಗಳು ತಿಳಿದಿದ್ದವು. ಇದಲ್ಲದೆ, ನಾನು ಈ ವಿಷಯಗಳನ್ನು ಯಾರೊಂದಿಗೂ ಹಂಚಿಕೊಳ್ಳಲಿಲ್ಲ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**